

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಸೆಪ್ಟೆಂಬರ್ 6 ಮಂಗಳವಾರ 2022

ಸಂಪುಟ: 43 | ಸಂಚಿಕೆ: 141 | ಪುಟಗಳು: 12

ದೂರವಾಣಿ: 2496520, 2496521, 2496526, 2496527, 2496528, ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4



ಇಂದು ಮೈಸೂರು ಮೇಯರ್, ಉಪಮೇಯರ್ ಚುನಾವಣೆ

ಸ್ವತಂತ್ರವಾಗಿ ಸೆಣಸಲು ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಸದ್ಯದ ನಿರ್ಧಾರ

ಅಂತಿಮ ಕ್ಷಣದಲ್ಲಿ ನಿಲುವು ಬದಲಾವಣೆ ಸಾಧ್ಯತೆ; ಜೆಡಿಎಸ್ ವಲಯದಲ್ಲಿ 'ಕಮಲ' ಕನವರಿಕೆ

ಮೈಸೂರು, ಸೆ.5(ಆರ್‌ಕೆ, ಎಸ್‌ಬಿಡಿ)– ಮೈಸೂರು ಮಹಾನಗರ ಪಾಲಿಕೆ ಮೇಯರ್ ಹಾಗೂ ಉಪಮೇಯರ್ ಆಯ್ಕೆಗೆ ನಾಳೆ(ಸೆ.6) ಚುನಾವಣೆ ನಡೆಯಲಿದ್ದು, ಸದ್ಯ ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್ ಸ್ವತಂತ್ರವಾಗಿ ಸ್ಪರ್ಧಿಸಲು ನಿರ್ಧರಿಸಿವೆ. ಅಂತಿಮ ಕ್ಷಣದಲ್ಲಿ ನಿಲುವು ಬದಲಾವಣೆ ತಳ್ಳಿ ಹಾಕುವಂತಿಲ್ಲ.

ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್, ಶಾಸಕ ತನ್ವೀರ್ ಸೇಠ್ ನೇತೃತ್ವದಲ್ಲಿ ಭಾನುವಾರ ಖಾಸಗಿ ಹೋಟೆಲ್‌ನಲ್ಲಿ ನಡೆದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಪೊರೇಟರ್‌ಗಳ ಸಭೆಯಲ್ಲಿ ಸ್ವತಂತ್ರ ಸ್ಪರ್ಧೆಗೆ ನಿರ್ಧರಿಸಿದ್ದು, ಇದಕ್ಕೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸಮ್ಮತಿಯೂ ಇದೆ ಎನ್ನಲಾಗಿದೆ. ಹಾಗೆಯೇ ಶಾಸಕ ಸಾ.ರಾ.ಮಹೇಶ್ ನೇತೃತ್ವದಲ್ಲಿ ಜೆಡಿಎಸ್ ಕಾರ್ಪೊರೇಟರ್‌ಗಳ ಸಭೆ ನಡೆದಿದ್ದು, ಮುಖಂಡರು ಹಾಗೂ ಕಾರ್ಪೊರೇಟರ್‌ಗಳ ಅಭಿಪ್ರಾಯ ಸಂಗ್ರಹಿಸಲಾಗಿದೆ. ಮಾತಿನಂತೆ ಮೈತ್ರಿ ಮುಂದುವರಿಕೆ ಸಂಬಂಧ ಬಿಜೆಪಿಯಿಂದ ಯಾವುದೇ ಸಂದೇಶ ಬಾರದ ಹಿನ್ನೆಲೆಯಲ್ಲಿ ಸದ್ಯಕ್ಕೆ ಸ್ವತಂತ್ರವಾಗಿ ಸ್ಪರ್ಧಿಗಿಳಿಯುವ ನಿರ್ಧಾರ ಕೈಗೊಳ್ಳಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ನೇತೃತ್ವದಲ್ಲಿ ಬಿಜೆಪಿ ಸಭೆ ನಡೆಯಬೇಕಿತ್ತಾದರೂ ಅವರು ಅರಸೀಕೆರೆಗೆ ತೆರಳಿದ್ದರಿಂದ ನಾಳೆ(ಸೆ.6) ಬೆಳಗ್ಗೆ 7.30ಕ್ಕೆ ಪಕ್ಷದ ಕಚೇರಿಯಲ್ಲಿ ಸಭೆ ನಡೆಸಲಿದ್ದಾರೆ. ಸದ್ಯಕ್ಕೆ ಚುನಾವಣೆಯಲ್ಲಿ ಬಿಜೆಪಿ ಸ್ವತಂತ್ರ ಸ್ಪರ್ಧೆಗೆ ನಾಯಕರು ಸೂಚನೆ ನೀಡಿದ್ದು, ಅದಕ್ಕೆ ಬದ್ಧವಾಗಿರಬೇಕೆಂದು ಈಗಾಗಲೇ ಕಾರ್ಪೊರೇಟರ್‌ಗಳಿಗೆ ಮಾಹಿತಿ ರವಾನೆಯಾಗಿದೆ ಎಂದು ತಿಳಿದುಬಂದಿದೆ. ಸದ್ಯದ ನಿರ್ಧಾರದಂತೆ ಎಲ್ಲಾ ಪಕ್ಷಗಳೂ ಸ್ವತಂತ್ರವಾಗಿ ಸ್ಪರ್ಧಿಗಿಳಿದರೆ ಕಾಂಗ್ರೆಸ್‌ನಿಂದ ಶಾಂತಕುಮಾರಿ, ಬಿಜೆಪಿಯಿಂದ ಬಿ.ವಿ. ಮಂಜುನಾಥ್ ಹಾಗೂ ಜೆಡಿಎಸ್‌ನಿಂದ ಕೆ.ವಿ. ಶ್ರೀಧರ್ ಮೇಯರ್

▶ 7ನೇ ಪುಟಕ್ಕೆ





ಶಾಂತಕುಮಾರಿ



ಕೆ.ವಿ.ಶ್ರೀಧರ್



ಬಿ.ವಿ.ಮಂಜುನಾಥ್


ಚುನಾವಣೆಗೆ ಸಜ್ಜು

ಮೈಸೂರು ಮಹಾನಗರ ಪಾಲಿಕೆಯ 24ನೇ ಮೇಯರ್ ಸ್ಥಾನ ಸಾಮಾನ್ಯ (ಜನರಲ್) ಹಾಗೂ ಉಪಮೇಯರ್ ಹಿಂದುಳಿದ ವರ್ಗದ ಎ–ಮಹಿಳೆ (BCAW)ಗೆ ಮೀಸಲಾಗಿದೆ. ಮೈಸೂರು ಮಹಾನಗರ ಪಾಲಿಕೆ ಕಚೇರಿಯ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ ಮಂಗಳವಾರ ಮಧ್ಯಾಹ್ನ 12 ಗಂಟೆಗೆ ಚುನಾವಣಾಧಿಕಾರಿ ಹಾಗೂ ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತರು ಮೇಯರ್, ಉಪಮೇಯರ್ ಹಾಗೂ 4 ಸ್ಥಾಯಿ ಸಮಿತಿಗಳಿಗೆ ಚುನಾವಣೆ ನಡೆಸುವರು.

ಸರಳ ವಿಧಾನದಲ್ಲಿ ಆಸ್ತಿ ನೋಂದಣಿ

- ಕಾವೇರಿ–2 ತಂತ್ರಾಂಶದ ಮೂಲಕ ಮನೆಯಲ್ಲೇ ಕುಳಿತು ಆಸ್ತಿ ನೋಂದಣಿಗೆ ದಾಖಲೆ ಸಲ್ಲಿಕೆ; ಬಯಸಿದ ದಿನ ನೋಂದಣಿ
- ಕಚೇರಿಗೆ ಹೋದರೆ 20 ನಿಮಿಷದಲ್ಲಿ ನಿಮ್ಮ ಕೆಲಸ ಕಂಪ್ಲೀಟ್!

- ಮಧ್ಯವರ್ತಿಗಳಿಗೆ ಹಣ ನೀಡಬೇಕಿಲ್ಲ; ಅಧಿಕಾರಿಗಳಿಗೆ ಲಂಚವನ್ನೂ ಕೊಡಬೇಕಿಲ್ಲ
- ನ.1ರಿಂದ ನೂತನ ಜನಸ್ನೇಹಿ ವ್ಯವಸ್ಥೆ ಜಾರಿ



ಬೆಂಗಳೂರು, ಸೆ. 5(ಕೆಎಂಶಿ)–ಆಸ್ತಿ ನೋಂದಣಿಗಾಗಿ ಇನ್ನು ಮುಂದೆ ಅಧಿಕಾರಿಗಳಿಗೆ ಲಂಚ ನೀಡಬೇಕಾಗಿಲ್ಲ, ಮಧ್ಯವರ್ತಿಗಳ ಬಳಿ ಕೈಕಟ್ಟಿ ನಿಲ್ಲುವುದಕ್ಕೆ ರಾಜ್ಯ ಸರ್ಕಾರ ಬ್ರೇಕ್ ಹಾಕಿದೆ.

ರಾಜ್ಯ ಸರ್ಕಾರ ಹೊಸದಾಗಿ ಸಿದ್ಧಪಡಿಸಿರುವ ಕಾವೇರಿ–2 ತಂತ್ರಾಂಶದ ಮೂಲಕ ಗ್ರಾಹಕರು ಮನೆಯಲ್ಲೇ ಕುಳಿತು ಆಸ್ತಿ ನೋಂದಣಿಗೆ ದಾಖಲೆ ಸಹಿತ ಅರ್ಜಿ ಸಲ್ಲಿಸಬೇಕು.

ತಾವು ಇಚ್ಛಿಪಡುವ ದಿನಾಂಕದಂದು ನೋಂದಣಿ ಕಚೇರಿಗೆ ತೆರಳಿ 20 ನಿಮಿಷಗಳಲ್ಲಿ ತಮ್ಮ ಕೆಲಸ ಮುಗಿಸಿ, ಹೊರ ಬರುವಂತಹ ಕಾವೇರಿ–2 ತಂತ್ರಾಂಶಕ್ಕೆ ರಾಜ್ಯ ಸರ್ಕಾರ ಚಾಲನೆ ನೀಡಿದೆ. ಅಷ್ಟೇ ಅಲ್ಲ, ತಾವು ಖರೀದಿ ಮಾಡುವ ಆಸ್ತಿ ಕ್ರಮವಾಗಿದೆಯೇ ಎಂದು ಪರಿಶೀಲಿಸಲು ಸರ್ಕಾರಿ ಸ್ವಾಮ್ಯದ ಪ್ರತ್ಯೇಕ ಕಚೇರಿಯಲ್ಲಿ ಶುಲ್ಕ ಪಾವತಿಸಿ, ಖರೀದಿಸುವ ಆಸ್ತಿಯ ದಾಖಲೆಗಳನ್ನು ಸರ್ಕಾರದಿಂದಲೇ ಪಡೆಯಬಹುದಾಗಿದೆ. ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಕಂದಾಯ ಸಚಿವ ಆರ್.ಅಶೋಕ್, ಆಸ್ತಿ ನೋಂದಣಿಯಲ್ಲಿ ಇನ್ನುಮುಂದೆ



▶ 7ನೇ ಪುಟಕ್ಕೆ

ಮೈಸೂರು ನಗರ, ಸುತ್ತಮುತ್ತಲ ಆಸ್ತಿ ಮಾಲೀಕರು ಬೆಚ್ಚಿಬೀಳುವ ಸಂಗತಿ

ಅಸಲಿ ತಲೆ ಮೇಲೆ ಹೊಡೆದಂತೆ ನಕಲಿ ದಾಖಲೆ ಸೃಷ್ಟಿಸಿ ಕಂಡಕಂಡವರ ಆಸ್ತಿ ಮಾರಾಟ ಮಾಡುತ್ತಿದ್ದ, ಬ್ಯಾಂಕ್‌ಗಳಲ್ಲಿ ಸಾಲ ಪಡೆಯುತ್ತಿದ್ದ

ಭಾರೀ ವಂಚಕರ ಜಾಲ ಬಯಲು: ಮೂವರ ಬಂಧನ

- ಮೈಸೂರು ನಗರ ಪೊಲೀಸರ ಕ್ಷಿಪ್ರ ದಾಳಿ: ಸರ್ವೀಸ್ ಅಪಾರ್ಟ್‌ಮೆಂಟ್‌ನಲ್ಲಿ ನಕಲಿ ದಾಖಲೆ ಸೃಷ್ಟಿಸುತ್ತಿದ್ದವರು ಬಲೆಗೆ
- ವಿವಿಧ ಇಲಾಖೆ, ಅಧಿಕಾರಿಗಳ ಸೀಲ್‌ಗಳು, ನಕಲಿ ಇ–ಸ್ಟ್ಯಾಂಪ್ ಪೇಪರ್, ಲ್ಯಾಪ್‌ಟಾಪ್, ಪ್ರಿಂಟರ್, ಮೊಬೈಲ್ ಜಪ್ತಿ
- ವೃದ್ಧರು, ಅಮಾಯಕರೇ ಇವರ ಟಾರ್ಗೆಟ್; ಮೈಸೂರು ಮೂಲದ ಬೆಂಗಳೂರು ಶಿವಾಜಿನಗರ ಶಾಸಕ ಅರ್ಷದ್ ತಂದೆಗೇ ವಂಚನೆ



ನಕಲಿ ಸೀಲ್‌ಗಳು

ಮೈಸೂರು, ಸೆ.5– ನಕಲಿ ದಾಖಲೆ ಸೃಷ್ಟಿಸಿ ಯಾರದೋ ಆಸ್ತಿಯನ್ನು ಮತ್ಯಾರಿಗೋ ಮಾರಾಟ ಮಾಡುತ್ತಿದ್ದ ಮತ್ತು ಸರ್ಕಾರಿ ಹಾಗೂ ಖಾಸಗಿ ಆಸ್ತಿಗಳಿಗೆ ನಕಲಿ ಮಾಲೀಕರನ್ನು ಸೃಷ್ಟಿಸಿ ಬ್ಯಾಂಕ್‌ನಲ್ಲಿ ಸಾಲ ಪಡೆಯುತ್ತಿದ್ದ ಜಾಲವನ್ನು ಭೇದಿಸಿರುವ ಮೈಸೂರು ನಗರ ಪೊಲೀಸರು ಮೂವರನ್ನು ಬಂಧಿಸಿ, ವಿವಿಧ ಇಲಾಖೆಗಳು ಹಾಗೂ ಅಧಿಕಾರಿಗಳ ಸೀಲ್‌ಗಳು, ನಕಲಿ ಇ–ಸ್ಟ್ಯಾಂಪ್ ಪೇಪರ್‌ಗಳು, ಲ್ಯಾಪ್‌ಟಾಪ್, ಪ್ರಿಂಟರ್ ಹಾಗೂ ಮೊಬೈಲ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಈ ವಂಚಕರು ಶಾಸಕರೊಬ್ಬರ ತಂದೆಯ ಆಸ್ತಿಗೇ ನಕಲಿ ಮಾಲೀಕನನ್ನು ಸೃಷ್ಟಿಸಿ ಮಾರಾಟ ಮಾಡಿದ್ದರು. ಈ ಸಂಬಂಧ ಮೇಟಗಳ್ಳಿ ಠಾಣೆಯಲ್ಲಿ ಕಳೆದ ಜನವರಿಯಲ್ಲಿ ಪ್ರಕರಣ ದಾಖಲಾಗಿದ್ದು, ಮೈಸೂರಿನ ಯಾದವಗಿರಿಯಲ್ಲಿರುವ 80X100 ಅಳತೆಯ ಮುಡಾಗೆ ಸೇರಿದ ನಿವೇಶನದ ಮೇಲೆ ಬ್ಯಾಂಕ್‌ನಲ್ಲಿ ಸಾಲ ಪಡೆಯಲು ಪ್ರಯತ್ನಿಸಿದ್ದು, 2 ವರ್ಷಗಳ ಹಿಂದೆ ಈ ಕುರಿತು ಮುಡಾ ಆಯುಕ್ತರು ಲಕ್ಷ್ಮೀಪುರಂ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು. ಬೆಂಗಳೂರು ಶಿವಾಜಿನಗರ ಶಾಸಕ ಅರ್ಷದ್ ಅವರ ತಂದೆಯ ಆಸ್ತಿಗೆ ಸಂಬಂಧಿಸಿದ ಪ್ರಕರಣವು ತಾಲೂಕು ಕಚೇರಿಯಲ್ಲಿ ಆರ್‌ಟಿಸಿ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿದಾಗ ಬೆಳಕಿಗೆ ಬಂದಿದ್ದು, ಯಾದವಗಿರಿಯ ಮುಡಾ ನಿವೇಶನದ ಪ್ರಕರಣವು ಬ್ಯಾಂಕ್‌ನ ಕಾನೂನು ಸಲಹೆಗಾರರು ದಾಖಲೆ ಪತ್ರಗಳನ್ನು ಪರಿಶೀಲಿಸಿದ

▶ 9ನೇ ಪುಟಕ್ಕೆ



ಆರೋಪಿಗಳಿಂದ ವಶಪಡಿಸಿಕೊಂಡಿರುವ ವಸ್ತುಗಳನ್ನು ಪರಿಶೀಲಿಸುತ್ತಿರುವ ಪೊಲೀಸರು.



ಲ್ಯಾಪ್‌ಟಾಪ್, ಪ್ರಿಂಟರ್, ಮೊಬೈಲ್

ಮುರುಘಾ ಶ್ರೀಗೆ ಮತ್ತೆ ಸೆ.14ರವರೆಗೆ ನ್ಯಾಯಾಂಗ ಬಂಧನ



ಚಿತ್ರದುರ್ಗ, ಸೆ.5–ಮಠದ ಅಪ್ರಾಪ್ತ ಬಾಲಕಿಯರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇರೆಗೆ ಪೋಕ್ಸೋ ಕಾಯ್ದೆಯಡಿ ಬಂಧನಕ್ಕೀಡಾಗಿರುವ ಮುರುಘಾ ಮಠದ ಪೀಠಾಧಿಪತಿ ಶಿವಮೂರ್ತಿ ಶ್ರೀಗಳನ್ನು ನ್ಯಾಯಾಲಯ

▶ 9ನೇ ಪುಟಕ್ಕೆ



ಮಳೆಯಿಂದ ಹಾನಿ

ನಾಳೆ ರಾಜ್ಯಕ್ಕೆ ಕೇಂದ್ರ ತಂಡ

ಬೆಂಗಳೂರು, ಸೆ. 5(ಕೆಎಂಶಿ)– ರಾಜ್ಯದಲ್ಲಿ ಇತ್ತೀಚೆಗೆ ಮಳೆಯಿಂದಾದ ಅನಾಹುತವನ್ನು ಪರಿಶೀಲಿಸಲು ಸೆಪ್ಟೆಂಬರ್ 7 ರಂದು ಕೇಂದ್ರ ತಂಡ ಆಗಮಿಸಲಿದೆ. ಕೇಂದ್ರದ ತಂಡಗಳು, ಅಂದು ಮುಖ್ಯಮಂತ್ರಿಗಳು ಮತ್ತು ಕಂದಾಯ ಸಚಿವರ ಜತೆ ಚರ್ಚಿಸಿದ ನಂತರ ಮಳೆಯಿಂದ ಹಾನಿ ಸಂಭವಿಸಿದ ಜಿಲ್ಲೆಗಳಲ್ಲಿ ಮೂರು ದಿನಗಳ ಕಾಲ ಸಂಚರಿಸಲಿವೆ. ಆಶೀಶ್ ಕುಮಾರ್ ನೇತೃತ್ವದ ತಂಡ ಚಿತ್ರದುರ್ಗ, ಚಿಕ್ಕಮಗಳೂರು ಮತ್ತು ಹಾಸನ ಜಿಲ್ಲೆಗಳಲ್ಲಿ ಸಂಚರಿಸಲಿದ್ದು, ಅಶೋಕ್ ಕುಮಾರ್ ನೇತೃತ್ವದ ತಂಡ ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಸಂಚರಿಸಲಿದೆ. ಇದೇ ರೀತಿ ಮನೋಹರ್ ನೇತೃತ್ವದ ತಂಡ ಬೀದರ್, ಕಲ್ಬುರ್ಗಿ, ಯಾದಗಿರಿ ಜಿಲ್ಲೆಗಳಲ್ಲಿ ಸಂಚರಿಸಿ ಪರಿಸ್ಥಿತಿಯ ಅಧ್ಯಯನ ಮಾಡಲಿದೆ.

ಮಳವಳ್ಳಿ ಬಳಿ ಪಂಪ್‌ಹೌಸ್‌ಗೆ ನುಗ್ಗಿದ ನೀರು

ಬೆಂಗಳೂರಿಗೆ ಸದ್ಯಕ್ಕೆ ಕಾವೇರಿ ನೀರು ಬಂದ್

- ಸ್ಥಳಕ್ಕೆ ಮುಖ್ಯಮಂತ್ರಿ ಬೊಮ್ಮಾಯಿ ದೌಡು; ಅಧಿಕಾರಿಗಳಿಂದ ಮಾಹಿತಿ ಸಂಗ್ರಹ
- ಮಂಗಳವಾರ ಮಧ್ಯಾಹ್ನದ ವೇಳೆಗೆ ನೀರು ತೆರವು ಸಾಧ್ಯತೆ; ನಂತರ ಯಂತ್ರಗಳ ಸುಸ್ಥಿತಿ ಆಧರಿಸಿ ನೀರು ಪೂರೈಕೆ

ಮಂಡ್ಯ, ಸೆ.5– ಕಳೆದ 15 ದಿನಗಳಿಂದ ಜಿಲ್ಲಾದ್ಯಂತ ವ್ಯಾಪಕ ಮಳೆಯಾಗುತ್ತಿದ್ದು, ಭಾನುವಾರ ರಾತ್ರಿ ಸುರಿದ ಭಾರೀ ಮಳೆಯಿಂದ ಜಿಲ್ಲೆಯ ಮಳವಳ್ಳಿ ತಾಲೂಕಿನ ಹಲಗೂರು ಬಳಿಯ ಭೀಮೇಶ್ವರಿ ನದಿಯಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿದ್ದು, ನದಿ ನೀರು ತೊರೆಕಾಡನಹಳ್ಳಿ (ಟಿ.ಕೆ.ಹಳ್ಳಿ) ಯಲ್ಲಿರುವ ಜಲಮಂಡಳಿಯ ಜಲರೇಚಕ ಯಂತ್ರಾಗಾರಕ್ಕೆ (ಪಂಪ್‌ಸ್ಟೇಷನ್) ನುಗ್ಗಿದ ಪರಿಣಾಮ ಬೆಂಗಳೂರಿಗೆ ಕಾವೇರಿ ನೀರು ಕಲ್ಪಿಸುವ ಎರಡು ಪಂಪ್‌ಹೌಸ್ ಸಂಪೂರ್ಣ ಜಲಾವೃತವಾಗಿದೆ.

ರಾಜ್ಯ ರಾಜಧಾನಿ ಬೆಂಗಳೂರಿನಿಂದ 80 ಕಿ.ಮೀ. ದೂರದಲ್ಲಿರುವ ಟಿ.ಕೆ.ಹಳ್ಳಿಯ ಈ ಪಂಪ್‌ಸ್ಟೇಷನ್‌ನಿಂದ ಪ್ರತಿದಿನ ಬೆಂಗಳೂರಿನ ಬಹುತೇಕ ಭಾಗಕ್ಕೆ ಕುಡಿಯುವ ನೀರು ಸರಬರಾಜಾಗುತ್ತಿದೆ. ಎರಡು ಪಂಪ್‌ಹೌಸ್ ಜಲಾವೃತಗೊಂಡ ಹಿನ್ನೆಲೆಯಲ್ಲಿ ರಾಜಧಾನಿ ಬೆಂಗಳೂರಿಗೆ ಕಾವೇರಿ ನೀರು ಸರಬರಾಜಿನಲ್ಲಿ ವ್ಯತ್ಯಯವಾಗಿದೆ.

ಜಲರೇಚಕ ಯಂತ್ರ ಘಟಕದ ಸ್ಟೇಜ್ 4 ಪಂಪ್‌ಹೌಸ್‌ನಲ್ಲಿ 23 ಅಡಿ ನೀರು ತುಂಬಿಕೊಂಡಿದ್ದು, ಈ ಪೈಕಿ 12 ಅಡಿ ನೀರನ್ನು ಹೊರ ತೆಗೆಯಲಾಗಿದೆ. ಉಳಿದ 11 ಅಡಿ ನೀರನ್ನು ಸೋಮವಾರ ರಾತ್ರಿ ಅಥವಾ ಮಂಗಳವಾರ ಬೆಳಗ್ಗೆ ಹೊರ ತೆಗೆಯುವ ಸಾಧ್ಯತೆ ಇದ್ದು, ನಂತರವಷ್ಟೇ ಬೆಂಗಳೂರಿಗೆ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಸ್ಥಳಕ್ಕೆ ಸಿಎಂ ದೌಡು: ಸೋಮವಾರ ಬೆಳಗ್ಗೆಯಿಂದಲೇ

▶ 9ನೇ ಪುಟಕ್ಕೆ



ಮಳೆ ಹಾನಿ ಸಂತ್ರಸ್ತರಿಗೆ ತಕ್ಷಣ ಪರಿಹಾರ ಕಲ್ಪಿಸಿ

ಮೈಸೂರು ಜಿಲ್ಲಾಧಿಕಾರಿಗೆ ಮುಖ್ಯಮಂತ್ರಿ ಸೂಚನೆ

ಬೆಂಗಳೂರು, ಸೆ. 5(ಕೆಎಂಶಿ)– ಕಳೆದೆರಡು ದಿನದಿಂದ ಸುರಿದಿರುವ ಭಾರೀ ಮಳೆಗೆ ಆಸ್ತಿಪಾಸ್ತಿ ಕಳೆದುಕೊಂಡ ಸಂತ್ರಸ್ತರಿಗೆ ತಕ್ಷಣವೇ ಪರಿಹಾರ ನೀಡುವಂತೆ ಮೈಸೂರು ಜಿಲ್ಲಾಧಿಕಾರಿಯವರಿಗೆ ರಾಜ್ಯ ಸರ್ಕಾರ ಸಂದೇಶ ನೀಡಿದೆ.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನಾಳೆ ಒಂದು ದಿನದ ಮೈಸೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಈ ಬೆನ್ನಲ್ಲೇ ಜಿಲ್ಲಾ ಉಸ್ತುವಾರಿ ಸಚಿವರು ನೀಡಿದ ಮಾಹಿತಿ ಆಧರಿಸಿ, ಕಂದಾಯ ಸಚಿವರು ಜಿಲ್ಲಾಧಿಕಾರಿಗಳಿಗೆ ಈ ಆದೇಶ ನೀಡಿರುವುದಲ್ಲದೆ ಡಿಸಿಗಳ ಪಿಡಿ ಖಾತೆಗೆ ಹೆಚ್ಚುವರಿ ಹಣ ಬಿಡುಗಡೆ ಮಾಡಲು ಆದೇಶಿಸಿದ್ದಾರೆ. ಮುಖ್ಯಮಂತ್ರಿಯವರು ನಾಳೆ ಮೈಸೂರಿನಲ್ಲಿ

▶ 9ನೇ ಪುಟಕ್ಕೆ

ಚಾಮರಾಜನಗರ ಜಿಲ್ಲೆಯಲ್ಲಿ ವರುಣನ ಅಟ್ಟಹಾಸ

- ಗೋಡೆ ಕುಸಿದು ವ್ಯಕ್ತಿ ಸಾವು, ಸಿಡಿಲು ಬಡಿದು ನಾಲ್ವರಿಗೆ ಗಾಯ
- ಸೇತುವೆಗಳು ಮುಳುಗಿ ಗ್ರಾಮಗಳ ಸಂಪರ್ಕ ಕಡಿತ; ರೈತರ ಬೆಳೆ ಜಲಾವೃತ
- ಪ್ರವಾಹದಿಂದ ಪಾರಾಗಲು ಮರವೇರಿದ ರೈತ, ಕೊಚ್ಚಿ ಹೋಗುತ್ತಿದ್ದ ಬೈಕ್ ಸವಾರರ ರಕ್ಷಣೆ



ಚಾಮರಾಜನಗರ, ಸೆ.5–ಜಿಲ್ಲೆಯಲ್ಲಿ ಮಳೆಯ ರೌದ್ರಾವತಾರ ಮುಂದುವರೆದಿದ್ದು, ಜಿಲ್ಲೆಯ ಚಿತ್ರಣವೇ ಬದಲಾಗಿದೆ. ಭಾನುವಾರ ಮಧ್ಯರಾತ್ರಿ ಸುರಿದ ಧಾರಾಕಾರ ಮಳೆಗೆ ಮನೆ ಗೋಡೆ ಕುಸಿದು ವ್ಯಕ್ತಿಯೊಬ್ಬರು ಮೃತಪಟ್ಟಿದ್ದಾರೆ. ಗುಂಡ್ಲುಪೇಟೆ ತಾಲೂಕಿನಲ್ಲಿ ಸಿಡಿಲು ಬಡಿದು ಒಂದೇ ಕುಟುಂಬದ ನಾಲ್ವರು ಗಾಯಗೊಂಡಿದ್ದಾರೆ. ಜಿಲ್ಲೆಯ ಹಲವೆಡೆ ಭಾರೀ ಮಳೆಯಿಂದ ಬೆಳೆ ನಾಶವಾಗಿದ್ದರೆ, ಒಳಹರಿವು ಹೆಚ್ಚಳದಿಂದ ಚಾಮರಾಜನಗರ ತಾಲೂಕಿನ ಸುವರ್ಣಾವತಿ ಹಾಗೂ ಚಿಕ್ಕಹೊಳೆ ಜಲಾಶಯಗಳಿಂದ ಅಪಾರ ಪ್ರಮಾಣದಲ್ಲಿ ಹೊರ ನೀರು ಬಿಟ್ಟಿದ್ದು, ಹಲವು ಗ್ರಾಮಗಳು ಜಲಾವೃತಗೊಂಡಿವೆ. ಸಾವಿರಾರು ಎಕರೆ ಫಸಲು ಕೊಚ್ಚಿಹೋಗಿ, ಲಕ್ಷಾಂತರ ರೂ. ಬೆಳೆ ನಷ್ಟವಾಗಿವೆ.

ಗೋಡೆ ಕುಸಿದು ವ್ಯಕ್ತಿ ಸಾವು: ಭಾನುವಾರ ರಾತ್ರಿ 11 ಗಂಟೆಯಿಂದ ಮಧ್ಯರಾತ್ರಿವರೆಗೆ ಜಿಲ್ಲೆಯ ವಿವಿಧೆಡೆ ಭಾರೀ ಮಳೆ ಸುರಿಯಿತು. ಇದರಿಂದ ಚಾಮರಾಜನಗರ ತಾಲೂಕಿನ ದಡದಹಳ್ಳಿ ಗ್ರಾಮದಲ್ಲಿ ಮನೆ ಗೋಡೆ ಕುಸಿದಿದೆ ಪರಿಣಾಮ ಮನೆಯಲ್ಲಿ ಮಲಗಿದ್ದ ಮೂರ್ತಿ (33) ಮೃತಪಟ್ಟಿದ್ದಾರೆ.

▶ 8ನೇ ಪುಟಕ್ಕೆ

ಹೊಮ್ಮದಲ್ಲಿ ಪ್ರವಾಹ; ಭಾರೀ ಅವಾಂತರ

ಚಾಮರಾಜನಗರ: ಭಾನುವಾರ ರಾತ್ರಿಯಿಡೀ ಸುರಿದ ಧಾರಾಕಾರ ಮಳೆಗೆ ತಾಲೂಕಿನ ಸುವರ್ಣಾವತಿ, ಚಿಕ್ಕಹೊಳೆ ಜಲಾಶಯಗಳಿಂದ ಹೊರ ಹರಿವು ಹೆಚ್ಚಿ, ಹೊಮ್ಮ ಗ್ರಾಮದಲ್ಲಿ ಪ್ರವಾಹ ಸೃಷ್ಟಿಯಾಗಿದ್ದು, ಭಾರೀ ಅವಾಂತರ ಸೃಷ್ಟಿಯಾಗಿದೆ. ಪ್ರವಾಹದಿಂದ ರೈತರ ಬೆಳೆ ಸಂಪೂರ್ಣವಾಗಿ ಜಲಾವೃತವಾಗಿವೆ. ಕೆಲಮನೆಗಳಿಗೆ ನೀರು ನುಗ್ಗಿದೆ. ರಸ್ತೆಗಳು ಜಲಾವೃತಗೊಂಡಿದೆ. ಗ್ರಾಮದ ಮಹದೇವನಾಯಕ, ಶಿವಲಿಂಗಮ್ಮ ಅವರ ಜಮೀನುಗಳಲ್ಲಿ ಭಾರೀ ಗಾತ್ರದ ಹೊಂಡ ಸೃಷ್ಟಿಯಾಗಿದೆ. ಮಹದೇವನಾಯಕ ಜಮೀನಿನಲ್ಲಿ ಕೊಳವಿ ಬಾವಿ ಕುಸಿದಿದೆ. ತೆಂಗಿನಮರ, ಅಡಿಕೆ ಬುಡಸಮೇತ ನೆಲಕಚ್ಚಿದೆ. ಅಲ್ಲದೆ ಅರಿಶಿನ, ಟೊಮೊಟೋ, ಬದನೆ ಹಾಗೂ ಇನ್ನಿತರ ತರಕಾರಿ ಬೆಳೆಹಾನಿಯಾಗಿದೆ. ಪ್ರವಾಹದಿಂದ ರಸ್ತೆಗಳು ಹಾಳಾಗಿದ್ದು, ಹೊಮ್ಮದ ಸೇತುವೆ ಸಂಪೂರ್ಣ ಮುಳುಗಡೆಯಾಗಿರುವುದರಿಂದ ಕೆಂಪನಪುರ, ಸಿಂಗನಪುರ, ಸಂತೇಮರಹಳ್ಳಿಗೆ ಸಂಪರ್ಕ ಕಡಿತಗೊಂಡಿದೆ. ಪ್ರವಾಹದ ರಭಸಕ್ಕೆ ಕೆಸ್ತೂರು ಕಾಲುವೆ ಏರಿ, ತಗಡೂರು ರಾಮಚಂದ್ರ ನಾಲೆ ಒಡೆದಿದೆ. ಇದರಿಂದ ಆ ಭಾಗದ ರೈತರ ಜಮೀನುಗಳಿಗೆ ನೀರು ನುಗ್ಗಿದೆ.





ಮೂರ್ತಿ

ಸೆ.17ರಿಂದ 25ರವರೆಗೆ ಮೋದಿ ಯುಗೋತ್ಸವ

ಮನೆ ಮನೆ ಆರೋಗ್ಯ ಸಮೀಕ್ಷಾ ಕಾರ್ಯಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ



ಮೈಸೂರು, ಸೆ.5(ಆರ್‌ಕೆಬಿ)– ಎಲ್ಲರಿಗೂ ಆರೋಗ್ಯ ನೀಡುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ ಜನ್ಮದಿನವಾದ ಸೆ.17ರಿಂದ ಪಂಡಿತ್ ದೀನ್ ದಯಾಳ್ ಉಪಾಧ್ಯಾಯರ ಹುಟ್ಟುಹಬ್ಬವಾದ ಸೆ.25 ರವರೆಗೆ 'ಮೋದಿ ಯುಗೋತ್ಸವ' ಪರಿಕಲ್ಪನೆಯಡಿ 9 ದಿನಗಳ ಕಾಲ ಮನೆ–ಮನೆಗಳಿಗೆ ನೇರವಾಗಿ ವೈದ್ಯಕೀಯ ಸಿಬ್ಬಂದಿ ಹೋಗಿ ನಿವಾಸಿಗಳ ಆರೋಗ್ಯ ಸಮೀಕ್ಷಾ ಕಾರ್ಯ ನಡೆಸಲಿದ್ದಾರೆ. ಆ ಕಾರ್ಯಕ್ರಮಕ್ಕೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಸೋಮವಾರ ಮೈಸೂರಿನ ಚಾಮುಂಡಿಪುರಂ ಪ್ರಾಥಮಿಕ ಆರೋಗ್ಯ ಕೇಂದ್ರ (ಅಕ್ಕಮಣ್ಣಿ ಆಸ್ಪತ್ರೆ) ಆವರಣದಲ್ಲಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೃಷ್ಣರಾಜ ಕ್ಷೇತ್ರದ ಶಾಸಕ ಎಸ್.ಎ.ರಾಮದಾಸ್, ಮಕ್ಕಳ ಜನನವಾದ ದಿನದಿಂದ ಕೊನೆಯವರೆಗೂ ಆರೋಗ್ಯವನ್ನು ಕಾಪಾಡಿಕೊಳ್ಳುವ ಉದ್ದೇಶ ಇಟ್ಟುಕೊಂಡು 9 ದಿನಗಳ ಕಾರ್ಯಕ್ರಮವನ್ನು ಸೆ.17ರಿಂದ ಆರಂಭಿಸಲಾಗುತ್ತಿದೆ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ ಎಂದರು.

ಕೃಷ್ಣರಾಜ ಕ್ಷೇತ್ರದ ಸುಮಾರು 70,000ಕ್ಕೂ ಹೆಚ್ಚು ಮನೆಗಳಿಗೆ ಆರೋಗ್ಯ ಸಮೀಕ್ಷಾ ಕಾರ್ಯವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಯುಷ್ ಇಲಾಖೆ, ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯ, ಸರ್ಕಾರಿ ಯೋಗ ಹಾಗೂ ಪ್ರಾಕೃತಿಕ ಚಿಕಿತ್ಸಾ ಮಹಾ ವಿದ್ಯಾಲಯ, ಗಣಪತಿ ಸಚ್ಚಿದಾನಂದ ಆಶ್ರಮ, ಜೆಎಸ್‌ಎಸ್ ಸಂಸ್ಥೆ ಸಹಯೋಗದೊಂದಿಗೆ ಕ್ಷೇತ್ರದ 8 ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ ಸುಮಾರು 500 ಮಂದಿ ವೈದ್ಯಕೀಯ ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತರು, ಆರೋಗ್ಯ ಕಾರ್ಯಕರ್ತರು ಪ್ರತಿ ಮನೆಗೆ ತೆರಳಿ ಆರೋಗ್ಯ ಸಮೀಕ್ಷೆ ಕೈಗೊಳ್ಳಲಿದ್ದಾರೆ. ಮಧುಮೇಹ, ರಕ್ತದೊತ್ತಡ ಬರದಂತೆ ತಡೆಯಲು ಸೂಕ್ತ ಚಿಕಿತ್ಸೆಗೆ ಕ್ರಮ ಕೈಗೊಳ್ಳಲಿದ್ದಾರೆ. ಹೆಚ್ಚಿನ ಚಿಕಿತ್ಸೆಯ ಅವಶ್ಯಕತೆ ಇದ್ದರೆ ಆಸ್ಪತ್ರೆಗೆ ಸೂಚಿಸುವ ಕಾರ್ಯವು ನಡೆಯಲಿದೆ ಎಂದರು.

2030ಕ್ಕೆ ಬಲಾಢ್ಯ ರಾಷ್ಟ್ರ ನಿರ್ಮಾಣದ ಗುರಿಯನ್ನಿಟ್ಟುಕೊಂಡು ಮಕ್ಕಳು, ಯುವಕರು, ಯುವತಿಯರು ಎಲ್ಲರೂ ಆರೋಗ್ಯ ಕಾಪಾಡಿಕೊಳ್ಳುವ ಸಂಕಲ್ಪ ಹೊಂದಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ, ನಗರಪಾಲಿಕೆ ಸದಸ್ಯ ಬಿ.ವಿ.ಮಂಜುನಾಥ್, ಆಯುಷ್ ಇಲಾಖೆ ಪುಷ್ಪ, ಜಿಲ್ಲಾ ವೈದ್ಯಾಧಿಕಾರಿ ಡಾ.ಕೆ.ಹೆಚ್.ಪ್ರಸಾದ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮಹದೇವಪ್ರಸಾದ್, ತಾಲೂಕು ವೈದ್ಯಾಧಿಕಾರಿ ಡಾ.ರಾಜೇಶ್ವರಿ, ಎಸಿಪಿ ಗಂಗಾಧರ ಸ್ವಾಮಿ, ಗಣಪತಿ ಸಚ್ಚಿದಾನಂದ ಆಶ್ರಮದ ಪ್ರಸಾದ್, ಜೆಎಸ್‌ಎಸ್ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಮಧು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಸಾಹಿತ್ಯದಲ್ಲಿ ವಿಶ್ವ ದಾಖಲೆ ನಿರ್ಮಿಸಿದ ಡಾ.ಬಿ.ನಿರ್ಮಲಾ

ಮೈಸೂರು,ಸೆ.5–ಮೈಸೂರು ಮಹಾರಾಣಿ ವಿಜ್ಞಾನ ಕಾಲೇಜಿನ ನಿವೃತ್ತ ಸಹ ಪ್ರಾಧ್ಯಾಪಕಿ ಹಿಂದಿ ವಿಭಾಗದ ಮುಖ್ಯಸ್ಥೆ ಡಾ.ಬಿ. ನಿರ್ಮಲಾ ಅವರು ಸಾಹಿತ್ಯದಲ್ಲಿ ದಾಖಲೆ ನಿರ್ಮಿಸಿದ್ದಾರೆ. ಅವರ ಕನ್ನಡ ಕವಿತೆ, 'ಯಾವ ಅಸ್ತಿತ್ವವಿಲ್ಲ, ಅಸ್ತಿತ್ವವೇ ಇಲ್ಲ, ಅಸ್ತಿತ್ವವೇ ಇಲ್ಲ' ಮತ್ತು ಹಿಂದಿ ಕವನ ಸೇರಿದಂತೆ 75ನೇ ಅಮೃತೋತ್ಸವ ಅಂಗವಾಗಿ 19 ಭಾರತೀಯ ಭಾಷೆಗಳನ್ನು ಒಳಗೊಂಡಿರುವ ಗರಿಷ್ಠ ಅಂತಾರಾಷ್ಟ್ರೀಯ ಕವನಗಳ ಸಂಗ್ರಹದಲ್ಲಿ ಸೇರಿಸಲಾಗಿದೆ. ಲಂಡನ್‌ನ ಹಾರ್ವರ್ಡ್ ವರ್ಲ್ಡ್ ರೆಕಾರ್ಡ್ಸ್‌ನ ಅಖಂಡ ಭಾರತ್ ಏಕ್ ಯುಗದ್ರುಷ್ಟ ಪುಸ್ತಕ, ಪ್ರಮಾಣ ಪತ್ರ ಪಡೆದಿದ್ದಾರೆ. ದೆಹಲಿಯ ಡಾ.ಶರ್ಮಾ ಮಾರ್ಗದರ್ಶನದಲ್ಲಿ ಈ ಕಾರ್ಯನಿರ್ವಹಿಸಿದ್ದಾರೆ.



ಡಾ.ಬಿ. ನಿರ್ಮಲಾ

ಡಾ.ಬಿ.ನಿರ್ಮಲಾ ಅವರಿಗೆ ಶಿಕ್ಷಣ, ಸಾಹಿತ್ಯ, ಎನ್‌ಎಸ್‌ಎಸ್, ಸಮಾಜ ಸೇವೆ, ಕ್ರೀಡೆ, ಪರಿಸರ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಅವರ ಅಮೂಲ್ಯ ಸೇವೆಗಾಗಿ 1200ಕ್ಕೂ ಹೆಚ್ಚು ಪ್ರಶಸ್ತಿಗಳು ಮತ್ತು ಗೌರವಗಳು, 135 ಪದಕಗಳು ಮತ್ತು 2500ಕ್ಕೂ ಹೆಚ್ಚು ಮೆಚ್ಚುಗೆ ಪ್ರಮಾಣ ಪತ್ರಗಳನ್ನು ಅಂತಾರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದಲ್ಲಿ ನೀಡಲಾಗಿದೆ. ಕನ್ನಡ ಮತ್ತು ಹಿಂದಿ ಭಾಷೆಗಳಲ್ಲಿ 460ಕ್ಕೂ ಹೆಚ್ಚು ಕವನಗಳನ್ನು ಬರೆದಿರುವ ಅವರು ಅಂತಾರಾಷ್ಟ್ರೀಯ ಕವಯಿತ್ರಿ, ಮೆಡಲ್ ನಿರ್ಮಲಾ ಎಂದು ಕರೆಯುತ್ತಾರೆ. ಅವರು ಲೇಖನಗಳು, ಸಣ್ಣ ಕಥೆಗಳು ಇತ್ಯಾದಿಗಳನ್ನು ಬರೆದಿದ್ದಾರೆ. ಅವರ ಜನಪ್ರಿಯ ಕವಿತೆಗಳು ಅಂತಾರಾಷ್ಟ್ರೀಯ ಮತ್ತು ರಾಷ್ಟ್ರ ಮಟ್ಟದಲ್ಲಿ ಪ್ರಕಟವಾಗಿವೆ. ಅವರು ಲೇಟ್ ಶ್ರೀಮತಿ ಮಲ್ಲಮ್ಮ ಜಿ.ಎಂ. ಬಟ್ಟಿಮಲ್ಲಪ್ಪ, ಮಾಜಿ ಆಡಿಟ್ ಮತ್ತು ಅಕೌಂಟ್ಸ್ ನಿಯಂತ್ರಕರು, ಜೆಎಸ್‌ಎಸ್ ಮಹಾವಿದ್ಯಾಪೀಠ ಅವರ ಹಿರಿಯ ಪುತ್ರಿ.

ಮೈಸೂರು ತಹಸೀಲ್ದಾರ್ ಬಿ.ಎನ್.ಗಿರೀಶ್‌ಗೆ ಇಂದು ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ

ಮೈಸೂರು, ಸೆ. 5(ಆರ್‌ಕೆ)– ಮೈಸೂರು ತಾಲೂಕು ತಹಸೀಲ್ದಾರ್ ಬಿ.ಎನ್. ಗಿರೀಶ್ ಅವರಿಗೆ ರಾಜ್ಯ ಮಟ್ಟದ ಸರ್ವೋತ್ತಮ ಪ್ರಶಸ್ತಿ ಲಭಿಸಿದೆ.



ಬಿ.ಎನ್. ಗಿರೀಶ್

ನಾಳೆ (ಸೆ.6) ಬೆಳಗ್ಗೆ 11 ಗಂಟೆಗೆ ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆಯಲಿರುವ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಸಮಾರಂಭದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ 2020–21ನೇ ಸಾಲಿನ ರಾಜ್ಯ ಮಟ್ಟದ ಸರ್ವೋತ್ತಮ ಪ್ರಶಸ್ತಿ ಪ್ರದಾನ ಮಾಡುವರು. ದಾವಣಗೆರೆ ತಾಲೂಕು ತಹಸೀಲ್ದಾರ್ ಆಗಿ ಕೆಲಸ ಮಾಡುತ್ತಿದ್ದಾಗ ಉತ್ತಮ ಕಾರ್ಯವೈಖರಿಯನ್ನು ಪರಿಗಣಿಸಿ ಕಳೆದ ವರ್ಷ ದಾವಣಗೆರೆ ಜಿಲ್ಲಾಧಿಕಾರಿಗಳು ಬಿ.ಎನ್.ಗಿರೀಶ್ ಅವರನ್ನು ರಾಜ್ಯ ಸರ್ವೋತ್ತಮ ಪ್ರಶಸ್ತಿಗೆ ಶಿಫಾರಸ್ಸು ಮಾಡಿದ್ದರು. ಪ್ರಶಸ್ತಿಯು ಫಲಕ, ಪ್ರಮಾಣ ಪತ್ರ ಹಾಗೂ ನಗದು ಪುರಸ್ಕಾರವನ್ನೊಳಗೊಂಡಿದೆ.

ಸೆ.16ರಿಂದ 19ರವರೆಗೆ ಮೈ ರಿಯಾಲ್ಟಿ ಮೆಗಾ ಪ್ರಾಪರ್ಟಿ ಎಕ್ಸ್‌ಪೋ



ಮೈಸೂರು, ಸೆ.5(ಆರ್‌ಕೆಬಿ)– ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾದ ಮೈಸೂರು ಘಟಕ, ಕ್ರೆಡೈ ಇನ್ನಿತರೆ ಸಂಘಟನೆಗಳ ಸಹಯೋಗದಲ್ಲಿ ಸೆಪ್ಟೆಂಬರ್ 16ರಿಂದ 19ರವರೆಗೆ ಮೈಸೂರಿನ ಕಾಸ್ಮೋಪಾಲಿಟನ್ ಕ್ಲಬ್ ಆವರಣದಲ್ಲಿ ಮೆಗಾ ಪ್ರಾಪರ್ಟಿ ಎಕ್ಸ್ ಪೋ ಆಯೋಜಿಸಲಾಗಿದೆ ಎಂದು ಕ್ರೆಡೈ ಮೈಸೂರು ಘಟಕದ ಅಧ್ಯಕ್ಷ ಎನ್.ಎಸ್.ಮುರಳೀಧರ ಸೋಮವಾರ ತಿಳಿಸಿದರು.

ಮೈಸೂರು ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದರಲ್ಲಿ ಸುಮಾರು 36 ಸಾಮಾನ್ಯ ಹಾಗೂ 3 ಪ್ಲಾಟಿನಂ, 4 ಗೋಲ್ಡ್ ಮಳಿಗೆ, 36 ಸಾಮಾನ್ಯ ಮಳಿಗೆಗಳು ಸೇರಿದಂತೆ ಒಟ್ಟು 47 ಮಳಿಗೆಗಳು ಇರಲಿವೆ. ಮೈಸೂರಿನ ಪ್ರತಿಷ್ಠಿತ ಬಿಲ್ಡರ್ಸ್‌ಗಳು, ಡೆವಲಪರ್‌ಗಳು, ಪಾಲ್ಗೊಂಡು ಗ್ರಾಹಕರ ಆಯವ್ಯಯಕ್ಕೆ ತಕ್ಕಂತೆ ಕೈಗೆಟಕುವ ಮನೆ ನಿರ್ಮಾಣ, ಗೃಹಸಾಲ, ಗುಂಪುಮನೆ, ವಿಲ್ಲಾ ಹಾಗೂ ಇತ್ತೀಚಿನ ಯೋಜನೆಗಳ ಮಾಹಿತಿ ನೀಡಲಿದ್ದಾರೆ. ಪ್ರವೇಶ ಶುಲ್ಕ 20 ರೂ.ಗಳಾಗಿವೆ ಎಂದರು. ಮೆಗಾ ಪ್ರಾಪರ್ಟಿ ಎಕ್ಸ್‌ಪೋ ಅಧ್ಯಕ್ಷ ಡಿ.ಶ್ರೀಹರಿ, ಪದಾಧಿಕಾರಿಗಳಾದ ಡಿ.ಶ್ರೀಹರಿ, ಆರ್.ರಘುನಾಥ್, ಹರೀಶ್ ಶೆಣೈ, ರವಿಶಂಕರ್, ಟಿ.ಶ್ರೀನಾಥ್ ಹಾಜರಿದ್ದರು.

ಇನ್ನರ್‌ವ್ಹೀಲ್ ಸಂಸ್ಥೆಯಿಂದ ವಿಶೇಷ ಮಕ್ಕಳೊಂದಿಗೆ ಕಾರ್ಯಕ್ರಮ

ಮೈಸೂರು, ಸೆ.5(ಆರ್‌ಕೆಬಿ)– ಇನ್ನರ್‌ವ್ಹೀಲ್ ಕ್ಲಬ್ ಆಫ್ ಮೈಸೂರು ಗೋಲ್ಡ್ ವತಿ ಯಿಂದ ಸೆ.9ರಂದು ಸಂಸ್ಥೆಯ ಕಾರ್ಯದರ್ಶಿ ಪ್ರೇಮಾ ರವಿ ಅವರ ಪುತ್ರನ ಹುಟ್ಟುಹಬ್ಬದ ಅಂಗವಾಗಿ ಗೋಕುಲಂ ಮಾತೃಮಂಡಳಿ ವಿಶೇಷ ಶಾಲೆ ಮಕ್ಕಳಿಗಾಗಿ ವಿಶೇಷ ಸೇವಾ ಕಾರ್ಯ ಹಮ್ಮಿಕೊಳ್ಳಲಾಗಿದೆ ಎಂದು ಅಧ್ಯಕ್ಷೆ ಉಮಾ ಅನಿಲ್ ತಿಳಿಸಿದರು.



ಮೈಸೂರು ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ ಶಾಲೆ ಸಮೀಪದ ಪಾರ್ವತಿ ಕಲ್ಯಾಣ ಮಂಟಪದಲ್ಲಿ ಕಾರ್ಯಕ್ರಮ ಆರಂಭವಾಗಲಿದೆ. ಶಾಲೆಯ ವಿಶೇಷ ಮಕ್ಕಳನ್ನು ಕರೆತಂದು ಅವರಿಗೆ ಇಷ್ಟವಾದ ತಿಂಡಿ, ಆಟಗಳಲ್ಲಿ ತೊಡಗಿಸಲಾಗುವುದು. ಈ ರೀತಿ ಅಂತಹ ಸುಮಾರು 50 ಮಕ್ಕಳು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು. ಗೋಷ್ಠಿಯಲ್ಲಿ ಕಾರ್ಯದರ್ಶಿ ಪ್ರೇಮಾ ರವಿ, ಮಾಜಿ ಅಧ್ಯಕ್ಷೆ ಪ್ರತಿಭಾ ಉಪಸ್ಥಿತರಿದ್ದರು.

ಸೆ.10, ರಾಗಾರೋಗ್ಯ ಕಾರ್ಯಕ್ರಮ

ಮೈಸೂರು, ಸೆ.5(ಆರ್‌ಕೆಬಿ)– ಜಿಎಸ್‌ಎಸ್ ಈವೆಂಟ್ಸ್ ಹಾಗೂ ಉನ್ನತಿ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಸೆ.10ರಂದು ಸಂಜೆ 5 ಗಂಟೆಗೆ ಮೈಸೂರಿನ ಕಲಾಮಂದಿರದಲ್ಲಿ ಗಾಯಕ ಶ್ರೀಹರ್ಷ ನಡೆಸಿಕೊಡಲಿರುವ ಶಾಸ್ತ್ರೀಯ ಸಂಗೀತ ಆಧರಿಸಿದ 'ರಾಗಾರೋಗ್ಯ' ಎಂಬ ಕಾರ್ಯ ಕ್ರಮ ಆಯೋಜಿಸಲಾಗಿದೆ ಎಂದು ಉನ್ನತಿ ಸಂಸ್ಥೆ ಅಧ್ಯಕ್ಷ ಸುಂದರ್‌ರಾಜ್ ತಿಳಿಸಿದರು.



ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾವ ಆರೋಗ್ಯ ಸಮಸ್ಯೆಗೆ ಯಾವ ರಾಗ ಪರಿಣಾಮಕಾರಿ ಎಂಬ ಅಂಶ ಆಧರಿಸಿದ ಕಾರ್ಯಕ್ರಮ ಇದಾಗಿದೆ. ಆ ರಾಗಗಳಲ್ಲಿ ರಾಗ ಸಂಯೋಜನೆಗೊಂಡಿರುವ ಕೃತಿ, ಕಗ್ಗ, ವಚನ, ಭಾವಗೀತೆ, ದೇವರನಾಮ, ಚಿತ್ರಗೀತೆ, ಜನಪದ ಗೀತೆಗಳನ್ನು ಪ್ರಸ್ತುತಪಡಿಸಲಾಗುವುದು ಎಂದರು. ಈ ವೇಳೆ ಖ್ಯಾತ ಆರೋಗ್ಯ ತಜ್ಞ ಡಾ.ಖಾದರ್ ವಲಿ ಅವರು ಆರೋಗ್ಯ ಸಮಸ್ಯೆಗೆ ಆಹಾರ ಪದ್ಧತಿ ಹಾಗೂ ಸಿರಿಧಾನ್ಯಗಳು ಹೇಗೆ ಸಹಕಾರಿಯಾಗಬಲ್ಲವು ಎಂಬುದನ್ನು ತಿಳಿಸಿಕೊಡಲಿದ್ದಾರೆ ಎಂದರು. ಜಿಎಸ್‌ಎಸ್ ಸಮೂಹ ಸಂಸ್ಥೆಯ ಡಿ.ಶ್ರೀಹರಿ, ರೂಪಶ್ರೀ, ನವೀನ್, ಸರಳಾ ಉಪಸ್ಥಿತರಿದ್ದರು.

ಸೆ.9ಕ್ಕೆ ನಾನ್ ರೌಡಿ ಚಲನಚಿತ್ರ ಬಿಡುಗಡೆ

ಮೈಸೂರು, ಸೆ.5(ಆರ್‌ಕೆಬಿ)– ನಗರದಲ್ಲಿದ್ದ ತನ್ನ ಅಕ್ಕನ ಕರೆ ಮೇರೆಗೆ ಹಳ್ಳಿಯಿಂದ ಆಗಮಿಸಿದ ಬಳಿಕ ತಾನು ರೌಡಿಯಾಗಬೇಕೆಂದು ಹೊರಟ ಯುವಕನ ಕಥೆ ಆಧರಿಸಿದ 'ನಾನ್ ರೌಡಿ' ಚಲನಚಿತ್ರ ಸೆ.9ರಂದು ಬಿಡುಗಡೆಯಾಗುತ್ತದೆ ಎಂದು ಚಿತ್ರದ ನಟ, ನಿರ್ಮಾಪಕ, ನಿರ್ದೇಶಕ ಪ್ರಶಾಂತ್ ಕೆ.ಶೆಟ್ಟಿ ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿರಿಯ ಜಾನಪದ ಗಾಯಕ ಗುರುರಾಜ ಹೊಸಕೋಟೆ ಹಾಡುಗಳಿಗೆ ಸಾಹಿತ್ಯ ಮತ್ತು ಸಂಗೀತ ಸಂಯೋಜನೆ ನೀಡಿದ್ದಾರೆ. ಗ್ರಾಮೀಣ ಹಿನ್ನೆಲೆ, ಬೆಂಗಳೂರಿನ ಪರಿಸ್ಥಿತಿಯ ಕಥೆ ಆಧರಿಸಿದ ಚಲನಚಿತ್ರ ಇದಾಗಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಚಿತ್ರದ ತಂತ್ರಜ್ಞರ ತಂಡದ ಅಣಜಿ ನಾಗರಾಜು, ಫಯಾಜ್ ಖಾನ್, ರಾಜೇಶ್ ಚೌವ್ಹಾಣ್ ಉಪಸ್ಥಿತರಿದ್ದರು.

ಡಿ.ದೇವರಾಜ ಅರಸು ರಸ್ತೆಗೆ ಸ್ಥಳಾಂತರಗೊಂಡ ತುಮಕೂರು ಮರ್ಚೆಂಟ್ಸ್ ಕ್ರೆಡಿಟ್ ಕೋ–ಆಪರೇಟಿವ್ ಕಚೇರಿ ಉದ್ಘಾಟನೆ



ತುಮಕೂರು ಮರ್ಚೆಂಟ್ಸ್ ಕ್ರೆಡಿಟ್ ಕೋ–ಆಪರೇಟಿವ್ ಕೆ.ಆರ್.ಸರ್ಕಲ್ ಶಾಖಾ ಕಚೇರಿಯನ್ನು ಸಣ್ಣ ನೀರಾವರಿ, ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ಸೋಮವಾರ ಉದ್ಘಾಟಿಸಿದರು.

ಮೈಸೂರು, ಸೆ. 5(ಆರ್‌ಕೆ)– ಮೈಸೂರಿನ ಡಿ.ದೇವರಾಜ ಅರಸು ರಸ್ತೆಯ ನೂತನ ಕಟ್ಟಡಕ್ಕೆ ಸ್ಥಳಾಂತರಗೊಂಡಿರುವ ತುಮಕೂರು ಮರ್ಚೆಂಟ್ಸ್ ಕ್ರೆಡಿಟ್ ಕೋ–ಆಪರೇಟಿವ್ (ಟಿಎಂಸಿಸಿ) ಕೆಆರ್. ಸರ್ಕಲ್ ಶಾಖಾ ಕಚೇರಿಯನ್ನು ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ ಸೋಮವಾರ ಉದ್ಘಾಟಿಸಿದರು.

ನೂತನ ಶಾಖಾ ಕಚೇರಿಯಲ್ಲಿ ಗ್ರಾಹಕರ ಅನುಕೂಲಕ್ಕಾಗಿ ಒದಗಿಸಿರುವ ಖಜಾನೆ, ತಂತ್ರಜ್ಞಾನ ಹಾಗೂ ಅತ್ಯಾಧುನಿಕ ಸೌಲಭ್ಯಗಳನ್ನು ವೀಕ್ಷಿಸಿ ಮಾತನಾಡಿದ ಸಚಿವರು, ಸಹಕಾರಿ ಸಂಘಗಳು, ಬ್ಯಾಂಕುಗಳು ಇತ್ತೀಚಿನ ದಿನಗಳಲ್ಲಿ ಸಮರ್ಥವಾಗಿ ಕಾರ್ಯನಿರ್ವಹಿಸುವ ಮೂಲಕ ಸಮಾಜದ ಸಣ್ಣ, ಅತೀ ಸಣ್ಣ ಉದ್ಯಮ, ವ್ಯಾಪಾರ–ವಹಿವಾಟು ನಡೆಸುವವರಿಗೆ ಸಾಲ ಸೌಲಭ್ಯ ನೀಡುತ್ತವೆ. ಅದೇ ರೀತಿ ವಸೂಲಾತಿಯಲ್ಲೂ ಸಾಧನೆ ಮಾಡಿ ಸಬಲವಾಗುತ್ತಿವೆ ಎಂದರು.

ತುಮಕೂರಿನಲ್ಲಿ ಪ್ರಧಾನ ಕಚೇರಿ ಹೊಂದಿರುವ ಈ ಮಲ್ಟಿ ಸ್ಟೇಟ್ ಕೋ–ಆಪರೇಟಿವ್ ಸೊಸೈಟಿಯು ತನ್ನ ಕಾರ್ಯಕ್ಷಮತೆ ಮೂಲಕ ಹಲವು ಕಡೆ ಶಾಖೆಗಳನ್ನು ತೆರೆದು ಕಾರ್ಯಕ್ಷೇತ್ರವನ್ನು ವಿಸ್ತರಿಸಿಕೊಂಡು ಇದೀಗ ಸಾಂಸ್ಕೃತಿಕ ನಗರಿ ಮೈಸೂರಿನ ಕೆಆರ್. ಸರ್ಕಲ್ ಶಾಖಾ ಕಚೇರಿಯನ್ನು ಪ್ರಮುಖ ವಾಣಿಜ್ಯ ಕೇಂದ್ರವಾಗಿರುವ ಡಿ.ದೇವರಾಜ ಅರಸು ರಸ್ತೆಗೆ ಸ್ಥಳಾಂತರಿಸುವ ಮೂಲಕ ಉತ್ತಮ ಸೇವೆಗೆ ಮುಂದಾಗಿರುವುದು ಶ್ಲಾಘನೀಯ ಎಂದು ತಿಳಿಸಿದರು.

ವ್ಯಾಪಾರ, ಉದ್ದಿಮೆ, ಸ್ವಯಂ ವೃತ್ತಿ ಮಾಡುವವರಿಗೆ ಸಾಲ ಸೌಲಭ್ಯ ನೀಡುವ ಮೂಲಕ ಸದಸ್ಯರಿಗೆ ಅನುಕೂಲ ಕಲ್ಪಿಸಿ ಮರ್ಚೆಂಟ್ಸ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಾಭದಾಯಕವಾಗಿ ವ್ಯವಹಾರ ಮಾಡಲಿ, ಶಿಸ್ತುಬದ್ಧ ಹಣಕಾಸು ನಿರ್ವಹಣೆ ಮೂಲಕ ತನ್ನ ಸೇವಾ ವ್ಯಾಪ್ತಿಯನ್ನು ಮತ್ತಷ್ಟು ವಿಸ್ತರಿಸಲಿ ಎಂದು ಸಚಿವರು ಶುಭ ಹಾರೈಸಿದರು. ಬ್ಯಾಂಕಿನ ಅಧ್ಯಕ್ಷ ಡಾ. ಎನ್.ಎಸ್.ಜಯಕುಮಾರ್, ಉಪಾಧ್ಯಕ್ಷ ಟಿ.ಎ. ಶ್ರೀಕರ, ಹಿರಿಯ ಕಿರಾಣಿ ಮರ್ಚೆಂಟ್ಸ್ ಕೆಆರ್. ಗೋವಿಂದರಾಜಶೆಟ್ಟಿ, ಅಧಿಕಾರಿಗಳು, ಸಿಬ್ಬಂದಿ ಹಾಗೂ ಉದ್ದಿಮೆದಾರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



ಮೈಸೂರು ವಿವಿ ಸಂಶೋಧಕರ ಸಂಘದಿಂದ ಆಯೋಜಿಸಿದ್ದ ಸಮಾನತೆಯ 'ಫ್ರೀಡಂ ಕಪ್' ಕ್ರಿಕೆಟ್ ಟೂರ್ನಿ ವಿಜೇತರಾದ ಗಂಗೋತ್ರಿ ಫಿನಿಕ್ಸ್ ತಂಡಕ್ಕೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಟ್ರೋಫಿ, ಬಹುಮಾನ ವಿತರಿಸಿದರು. ಸ್ಟಾರ್ ಕ್ರಿಕೆಟರ್ಸ್ ತಂಡ ರನ್ನರ್ ಅಪ್ ಆಗಿ ಹೊರಹೊಮ್ಮಿತು. ಚೆಲುವರಾಜು, ಅರುಣ್, ಪುನೀತ್, ಫಾರುಖ್, ಗುಣಶೇಖರ್ ಮತ್ತಿತರರಿದ್ದರು.

ಉಚಿತ ಕಣ್ಣಿನ ತಪಾಸಣೆ ಶಿಬಿರ

ಮೈಸೂರು,ಸೆ.5–ಡಾ.ಅಗರವಾಲ್ಸ್ ಕಣ್ಣಿನ ಆಸ್ಪತ್ರೆ ವತಿಯಿಂದ ಪ್ರತಿ ಬುಧವಾರ ಮೈಸೂರಿನ ಹಿರಿಯ ನಾಗರಿಕರಿಗೆ ಉಚಿತ ಕಣ್ಣಿನ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿದೆ. ಮೈಸೂರಿನ ಕುವೆಂಪುನಗರ ಮತ್ತು ಸಯ್ಯಾಜಿ ರಾವ್ ರಸ್ತೆಯ ಆಸ್ಪತ್ರೆಯ ಶಾಖೆಗಳಿಗೆ ಭೇಟಿ ನೀಡಿ ಇದರ ಉಪಯೋಗ ಪಡೆದುಕೊಳ್ಳಬಹುದು.



ಹೆಚ್ಚಿನ ಮಾಹಿತಿಗೆ ಮೊ. 8884477956 ಸಂಪರ್ಕಿಸಬಹುದು.

ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ನೇಮಕಾತಿಗೆ ಅರ್ಜಿ ಆಹ್ವಾನ

ಮೈಸೂರು,ಸೆ.5–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ ವತಿಯಿಂದ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಗ್ರಾಮೀಣ ಪುನರ್ವಸತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕ್ರಮದಡಿಯಲ್ಲಿ ಕಾರ್ಯಕರ್ತರನ್ನು ಗೌರವಧನದ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ಸಮರ್ಥ ವಿಕಲಚೇತನ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದ್ದು, ಸೆ.17ರೊಳಗಾಗಿ ಅರ್ಜಿ ಸಲ್ಲಿಸಲು ತಿಳಿಸಿದೆ. ಮೈಸೂರು ತಾಲೂಕಿನ ದೊಡ್ಡಮಾರಗೌಡನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾಗಿ ಮಾಸಿಕ 6000 ರೂ.ಗಳ ಗೌರವಧನದ ಆಧಾರದ ಮೇಲೆ ಸೇವೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರು, ಹುಣಸೂರು ಮೊ.ಸಂ: 63604 83829 ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು–ಬೆಂಗಳೂರು ದಶಪಥ ಹೆದ್ದಾರಿ ಕಾಮಗಾರಿಯಲ್ಲಿ ಯಾವುದೇ ಹಗರಣ ನಡೆದಿಲ್ಲ

ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ ಸ್ಪಷ್ಟನೆ

ಮೈಸೂರು,ಸೆ.5(ಆರ್‌ಕೆ)–ಮೈಸೂರು–ಬೆಂಗಳೂರು ದಶಪಥ ಹೆದ್ದಾರಿ ಕಾಮಗಾರಿಯಲ್ಲಿ ಯಾವುದೇ ಹಗರಣ ನಡೆದಿಲ್ಲ ಎಂದು ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ ಸ್ಪಷ್ಟಪಡಿಸಿದ್ದಾರೆ.

ಮೈಸೂರಿನ ಡಿ.ದೇವರಾಜ ಅರಸು ರಸ್ತೆಗೆ ಸ್ಥಳಾಂತರಗೊಂಡಿರುವ ತುಮಕೂರು ಮರ್ಚೆಂಟ್ಸ್ ಕ್ರೆಡಿಟ್ ಕೋ–ಆಪರೇಟಿವ್ ನೂತನ ಶಾಖಾ ಕಚೇರಿ ಉದ್ಘಾಟಿಸಿದ ಬಳಿಕ ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದ ಅವರು, ಅತಿಯಾದ ಮಳೆಯಿಂದಾಗಿ ಕೆರೆಗಳು ತುಂಬಿ ಹರಿದ ಪರಿಣಾಮ ಚನ್ನಪಟ್ಟಣ, ರಾಮನಗರ ಬಳಿ ಹೆದ್ದಾರಿ, ತಗ್ಗು ಪ್ರದೇಶಗಳಿಗೆ ನೀರು ತುಂಬಿಕೊಂಡಿತ್ತು. ನಾನೇ ಖುದ್ದು ಭೇಟಿ ನೀಡಿ ಪರಿಶೀಲಿಸಿದ್ದೇನೆ. ತಕ್ಷಣ ಸಮಸ್ಯೆ ಬಗೆಹರಿಸುವಂತೆ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು. ಕಾಮಗಾರಿಯಲ್ಲಿ ಯಾವುದೇ ಹಗರಣ ನಡೆದಿಲ್ಲ. ಕೆರೆ ಏರಿ ಒಡೆದು ಅವಾಂತರವಾಗಿದ್ದು, ಅದರಿಂದ ಸುಮಾರು 40 ಮನೆಗಳಿಗೆ ಹಾನಿಯಾಗಿದೆ. ಎಲ್ಲೆಡೆ ಈ ಬಾರಿ ಅತೀ ಹೆಚ್ಚು ಮಳೆಯಾಗಿರುವುದರಿಂದ ತೊಂದರೆಯಾಗುತ್ತಿದ್ದು, ಅದನ್ನು ಎದುರಿಸಲು ಸರ್ಕಾರ ಸಿದ್ಧವಿದೆ ಎಂದ ಅವರು, ಬೆಂಗಳೂರಲ್ಲೂ ರಾಜಕಾಲುವೆಗಳು ಒತ್ತುವರಿಯಾಗಿರುವುದಲ್ಲದೆ, ಕಾಂಕ್ರಿಟ್ ಕಟ್ಟಡಗಳು ನಿರ್ಮಾಣವಾಗಿರುವುದರಿಂದ ಮಳೆ ನೀರಿನಿಂದ ಅವಾಂತರವಾಗುತ್ತಿದೆ ಎಂದರು.

ಪೊಲೀಸರಿಗೆ ಪೂರ್ಣ ಸ್ವಾತಂತ್ರ: ಮುರುಘಾ ಶ್ರೀಗಳ ಲೈಂಗಿಕ ದೌರ್ಜನ್ಯ ಪ್ರಕರಣ ಕುರಿತಂತೆ, ಈಗಾಗಲೇ ಪೊಲೀಸರು ಕಾನೂನು ರೀತಿಯ ಕ್ರಮ ಕೈಗೊಂಡಿದ್ದಾರೆ. ಅದರಲ್ಲಿ ಸರ್ಕಾರವಾಗಲೀ, ಗೃಹ ಸಚಿವರಾಗಲೀ ತಲೆ ಹಾಕಿಲ್ಲ. ತನಿಖೆ ನಡೆಸಲು ಪೊಲೀಸರಿಗೆ ಫ್ರೀ ಹ್ಯಾಂಡ್ ನೀಡಲಾಗಿದೆ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯೆ ನೀಡಿದರು.

ನಕಲಿ ಕಾರ್ಮಿಕರ ನೋಂದಣಿ ತಪ್ಪಿಸಿ, ನೈಜ ಕಾರ್ಮಿಕರ ರಕ್ಷಿಸಿ

ರಾಜ್ಯ ಕಟ್ಟಡ ಕಾರ್ಮಿಕರ ಕೇಂದ್ರ ಸಂಘ ಮನವಿ




ಮೈಸೂರು,ಸೆ.5(ಆರ್‌ಕೆಬಿ)–ಜಿಲ್ಲೆಯಲ್ಲಿ ಸರ್ಕಾರದ ಅನುಮತಿಯೊಂದಿಗೆ ತೆರೆಯಲಾಗಿರುವ ಸಿಎಸ್‌ಸಿ ಕೇಂದ್ರಗಳು ಹಾಗೂ ಕಾರ್ಮಿಕ ಇಲಾಖೆ ನಿರೀಕ್ಷಕರು ಕಟ್ಟಡ ಕಾರ್ಮಿಕರ ಪಾಲಿಗೆ ಮಾರಕವಾಗಿ ಮಾರ್ಪಟ್ಟಿದ್ದಾರೆ ಎಂದು ಕರ್ನಾಟಕ ರಾಜ್ಯ ಕಟ್ಟಡ ಕಾರ್ಮಿಕರ ಕೇಂದ್ರ ಸಂಘ ಆರೋಪಿಸಿದೆ. ಅಧಿಕ ಹಣ ಗಳಿಸುವ ಉದ್ದೇಶದಿಂದ ಸಿಎಸ್‌ಸಿ ಕೇಂದ್ರಗಳು ಕಟ್ಟಡ ಕಾರ್ಮಿಕರಲ್ಲದ (ನಕಲಿ ಕಾರ್ಮಿಕರನ್ನು) ವರನ್ನು ಹೆಚ್ಚಾಗಿ ನೋಂದಾಯಿಸುತ್ತಿರುವುದು ಗಮನಕ್ಕೆ ಬಂದಿದೆ. ಇದರಿಂದ ನೈಜ ಕಟ್ಟಡ ಕಾರ್ಮಿಕರ ಸವಲತ್ತುಗಳು ನಕಲಿ ಕಾರ್ಮಿಕರ ಪಾಲಾಗುವಂತೆ ಮಾಡಲಾಗುತ್ತಿದೆ. ಇದನ್ನು ತಡೆಗಟ್ಟಲು ಸಿಎಸ್‌ಸಿ ಕೇಂದ್ರಗಳ ಸಭೆ ಕರೆದು ಎಚ್ಚರಿಕೆ ನೀಡುವಂತೆ ಸಂಘದ ರಾಜ್ಯಾಧ್ಯಕ್ಷ ಪಿ. ರಾಜು, ಪ್ರಧಾನ ಕಾರ್ಯದರ್ಶಿ ಕೆ. ಶಿವಕುಮಾರ್ ನೇತೃತ್ವದಲ್ಲಿ ಸೋಮವಾರ ಜಿಲ್ಲಾ ಕಾರ್ಮಿಕ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮೈಸೂರು ಜಿಲ್ಲಾಧ್ಯಕ್ಷ ಕಾಂತರಾಜು, ನಗರಾಧ್ಯಕ್ಷ ಕಂಸಾಳೆ ರವಿ, ಸಂಚಾಲಕರಾದ ಸಿದ್ದಪ್ಪ, ಪುಟ್ಟಮಾದಯ್ಯ ಇನ್ನಿತರರು ಉಪಸ್ಥಿತರಿದ್ದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು, ಸೆ.5– ತುರ್ತು ಕಾರ್ಯ ನಿಮಿತ್ತ ಸೆ.6ರಂದು ಬೆಳಗ್ಗೆ 10ರಿಂದ ಸಂಜೆ 5ರವರೆಗೆ ಜಲಪುರಿ, ಗಾಯತ್ರಿಪುರಂ, ಜ್ಯೋತಿನಗರ, ಉದಯಗಿರಿ, ಕ್ಯಾತಮಾರನಹಳ್ಳಿ, ಶಾಂತಿನಗರ 1 ಮತ್ತು 2ನೇ ಹಂತ, ಗಣೇಶ್‌ನಗರ, ಸತ್ಯನಗರ, ಮಹದೇವಪುರ ರಸ್ತೆ, ಜರ್ಮನ್ ಪ್ರೆಸ್, ಉಸ್ಮಾನಿಯಾ ಬ್ಲಾಕ್, ಗೌಸಿಯಾನಗರ, ರಾಘವೇಂದ್ರನಗರ, ಗಿರಿಯಾಬೋವಿ ಪಾಳ್ಯ, ಯರಗನಹಳ್ಳಿ, ಬನ್ನೂರು ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ನ.ರಾ. ಮೊಹಲ್ಲಾದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

6.09.2022 ಮಂಗಳವಾರ, ಮಳೆ ನಕ್ಷತ್ರ: ಪುಬ್ಬ, 31.08.2022ರಿಂದ 13.09.2022
ಶ್ರೀ ಶುಭಕೃತು ನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಭಾದ್ರಪದ ಮಾಸ, ಶುಕ್ಲ ಪಕ್ಷ,
ತಿಥಿ : ಏಕಾದಶಿ, ನಕ್ಷತ್ರ : ಪೂಷಾ, ರಾಹುಕಾಲ: ಬೆಳಗ್ಗೆ 7.30 ರಿಂದ 9ರವರೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.05 ಚಿಂತನ–ಕೊಳ್ಳೇಗಾಲ ಶರ್ಮಾ, 6.35 ಶ್ರದ್ಧೆಯ ಶಿಲ್ಪ–ಮೈಸೂರು ಸುತ್ತಲಿನ ದೇಗುಲಗಳ ಪರಿಚಯ, ಪ್ರಸ್ತುತಿ– ಡಾ. ಟಿ.ಎಸ್. ಗೋಪಾಲ್,6.40 ಭಾವಗೀತೆ–ಮಂಜುಳಾ ಗುರುರಾಜ್, 6.45 ರೈತರಿಗೆ ಸಲಹೆ, 6.50 ವನಮಹೋತ್ಸವ–ಅರಣ್ಯ ಇಲಾಖೆಯ ಪ್ರಾಯೋಜಿತ ಕಾರ್ಯಕ್ರಮ, 7.15 ಕಾದಂಬರಿ ವಿಹಾರ–ದೂರ ಸರಿದರು ಕಾದಂಬರಿಯ ಪ್ರಸ್ತುತಿ:– ಉಮೇಶ್.ಎಸ್., 9.00 ವೃತ್ತಿ ಮಾರ್ಗದರ್ಶನ–ಆರ್ಕಿಯಾಲಜಿ ಮತ್ತು ಮ್ಯೂಸಿಯಾಲಜಿ ವಿಷಯಗಳಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಡಾ.ಸಿ.ಇ. ಲೋಕೇಶ್ ಅವರೊಂದಿಗೆ ಮಾತುಕತೆ, 10.00 ಗಾನರಸೋತ್ತುಂಗ ಶ್ರೀ ಶ್ಯಾಮಕೃಷ್ಣ–ಶ್ಯಾಮಾಶಾಸ್ತ್ರಿಗಳ ರಚನೆಗಳನ್ನಾಧರಿಸಿದ ಕಾರ್ಯಕ್ರಮ ಸರಣಿ **ಮಧ್ಯಾಹ್ನ:** 12.30 ದೇವರನಾಮ–ಪಿ. ರಮಾ, 12.45 ಸೈಬರ್ ಕ್ರೈಂ ಎಂಬ ಹೊಸ ಸಮಸ್ಯೆ, ಮಾತನಾಡುತ್ತಾರೆ ಡಾ.ರಾಮಕೃಷ್ಣ ಹೆಗಡೆ, 1.20 ಭಾವಗೀತೆ–ರಶ್ಮಿ ವಿ. ರಾವ್, 4.00 ಕಥಾ ಕಾಲಕ್ಷೇಪ 'ಶ್ರೀ ರಾಘವೇಂದ್ರ ವಿಜಯ', ಪ್ರಸ್ತುತಿ– ವಿದ್ವಾನ್ ಹೆಚ್.ಎ. ವಸಂತಲಕ್ಷ್ಮಿ, 6.50 ಕೃಷಿರಂಗ–ಕಿಸಾನ್ ವಾಣಿ, ಜಾನುವಾರು ವಿಮಾ ಯೋಜನೆಯ ಸೌಲಭ್ಯಗಳು–ವಿಷಯವಾಗಿ ಮೈಸೂರು ವಿಭಾಗದ ಪಶುಪಾಲನೆ ಹಾಗೂ ಪಶುವೈದ್ಯಕೀಯ ಸೇವೆಗಳ ಉಪನಿರ್ದೇಶಕರಾದ ಡಾ.ಬಿ.ಎನ್. ಷಡಕ್ಷರಮೂರ್ತಿ ಅವರೊಡನೆ ಸಂದರ್ಶನ, 9.30 ಡಾ.ಆರ್.ಎನ್.ಶ್ರೀಲತಾ – ಹಾಡುಗಾರಿಕೆ, 10.00 ಕಾವ್ಯವಾಚನ, ವಾಚನ– ಎಂ.ವಿ. ಶುಭ, ವ್ಯಾಖ್ಯಾನ– ದಿನಮಣಿ ಶ್ರೀನಿವಾಸಮೂರ್ತಿ

■ **ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ:** ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ 19ನೇ ಚಾತುರ್ಮಾಸ್ಯ ವ್ರತ ದೀಕ್ಷಾ ಮಹೋತ್ಸವ. ಏಕಾದಶಿ, ಬೆಳಗ್ಗೆ 6ರಿಂದ ಶ್ರೀ ಸ್ವಾಮೀಜಿಯವರಿಂದ ಮೌನವ್ರತ ಮತ್ತು ಅಖಂಡ ವಿಷ್ಣು ಸಹಸ್ರನಾಮ ಪಾರಾಯಣ, ಲಕ್ಷ್ಮೀನರಸಿಂಹಸ್ವಾಮಿಗೆ ಲಕ್ಷ ತುಳಸೀ ಅರ್ಚನೆ, ಸ್ಥಳ: ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ.

■ **ಎಸ್‌ಪಿವಿಜಿಎಂಸಿ ಟ್ರಸ್ಟ್:** 61ನೇ ಪಾರಂಪರಿಕ ಸಂಗೀತೋತ್ಸವ. ಸಂಜೆ 5.30ರಿಂದ ಕು.ಧನ್ಯಾ ಮತ್ತು ಶ್ರೀನಿವಾಸ ಫಣಿ ಅವರಿಂದ ಕಂದರ್ಪ ಹರನಿಂದ ಬೆಂದುದು ಕುರಿತು ಕಾವ್ಯವಾಚನ, ಸಂಜೆ 6.45ಕ್ಕೆ ವಿದ್ವಾನ್ ಅಭಿಷೇಕ್ ರಘುರಾಂ ಅವರಿಂದ ಗಾಯನ, ವಿದ್ವಾನ್ ಎಚ್.ಎನ್.ಭಾಸ್ಕರ್–ವಯೋಲಿನ್, ವಿದ್ವಾನ್ ಮನ್ನಾರ್‌ಗುಡಿ ವಾಸುದೇವನ್–ತವಿಲ್, ವಿದ್ವಾನ್ ಅನಂತ ಆರ್.ಕೃಷ್ಣನ್–ಮೃದಂಗ, ಸ್ಥಳ: 8ನೇ ಕ್ರಾಸ್, ವಿವಿ ಮೊಹಲ್ಲಾ.

■ **ಶ್ರೀ ಪುಟ್ಟಸ್ವಾಮಿ ಪ್ರಥಮ ದರ್ಜೆ ಕಾಲೇಜು :** ಪರಿಚಯಾತ್ಮಕ ಕಾರ್ಯಕ್ರಮ, ಉದ್ಘಾಟನೆ : ಕೆಪಿಸಿಎಲ್ ಮುಖ್ಯ ಇಂಜಿನಿಯರ್ ಶಂಕರ್ ದೇವನೂರು, ಅಧ್ಯಕ್ಷತೆ : ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಮುಖ್ಯ ಅತಿಥಿಗಳು : ಕಾರ್ಯದರ್ಶಿ ಪಿ. ವಿಶ್ವನಾಥ್, ಖಜಾಂಚಿ ಶ್ರೀಶೈಲರಾಮಣ್ಣನವರ್, ಕಾಲೇಜು ಪ್ರಿನ್ಸಿಪಾಲ್ ಡಾ. ಎಂ. ಶಿವಲಿಂಗೇಗೌಡ, ಸ್ಥಳ: ಶ್ರೀ ಸಾಹುಕಾರ್ ಚೆನ್ನಯ್ಯ ಸಭಾಂಗಣ, ಬೆಳಗ್ಗೆ 10.30ಕ್ಕೆ.

■ **ಪೀಪಲ್ ಫಾರ್ ಅನಿಮಲ್ ಸಂಸ್ಥೆ :** ಟಾಂಗಾ ಕುದುರೆಗಳಿಗೆ ಉಚಿತ ಆರೋಗ್ಯ ತಪಾಸಣೆ ಮತ್ತು ಔಷಧಿ ವಿತರಣೆ, ಅರಿವು ಮತ್ತು ಜಾಗೃತಿ ಮೂಡಿಸುವ ಕಾರ್ಯಕ್ರಮ, ಸ್ಥಳ: ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಎದುರು, ಬೆಳಗ್ಗೆ 10 ರಿಂದ.

■ **ಮೈರಾ ಸ್ಕೂಲ್ ಆಫ್ ಬ್ಯುಸಿನೆಸ್, ಸೈಬರ್‌ವರ್ಸ್ ಫೌಂಡೇಷನ್:** ಸೈಬರ್‌ವರ್ಸ್ ಲ್ಯಾಬ್, ಕಾಪ್ ಕನೆಕ್ಟ್ ಮತ್ತು ಸೈಬರ್ ಹೈಜೀನ್ ಪ್ರೋಗ್ರಾಂ ಉದ್ಘಾಟನಾ ಸಮಾರಂಭ, ಸೈಬರ್‌ವರ್ಸ್ ಉದ್ಘಾಟನೆ: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸೈಬರ್ ಹೈಜೀನ್ ಪ್ರೋಗ್ರಾಮ್ ಉದ್ಘಾಟನೆ: ಉನ್ನತ ಶಿಕ್ಷಣ ಸಚಿವ ಡಾ. ಅಶ್ವಥ್‌ನಾರಾಯಣ, ಮುಖ್ಯ ಅತಿಥಿಗಳು: ಸಚಿವ ಎಸ್.ಟಿ.ಸೋಮಶೇಖರ್, ಅಧ್ಯಕ್ಷತೆ: ಸೈಬರ್ ವರ್ಸ್ ಫೌಂಡೇಷನ್ ಸಲಹಾ ಮಂಡಳಿ ಅಧ್ಯಕ್ಷ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ವಿಶೇಷ ಅತಿಥಿಗಳು: ಸಂಸದ ಪ್ರತಾಪ್ ಸಿಂಹ, ಶಾಸಕರಾದ ಜಿ.ಟಿ.ದೇವೇಗೌಡ, ಎಲ್.ನಾಗೇಂದ್ರ, ಎಸ್.ಎ.ರಾಮದಾಸ್, ತನ್ವೀರ್ ಸೇಠ್, ಸಾ.ರಾ.ಮಹೇಶ್, ಸ್ಥಳ: ಮೈರಾ ಸ್ಕೂಲ್ ಆಫ್ ಬ್ಯುಸಿನೆಸ್, ಇಲವಾಲ, ಮಧ್ಯಾಹ್ನ 3.30ಕ್ಕೆ.

ಶಿಕ್ಷಕರ ದಿನವೇ ಮಾಜಿ ಶಿಕ್ಷಣ ಸಚಿವ ಪ್ರಭಾಕರ ರಾಣೆ ನಿಧನ



ಕಾರವಾರ, ಸೆ.5– ಮಾಜಿ ಶಿಕ್ಷಣ ಸಚಿವ ಪ್ರಭಾಕರ್ ರಾಣೆ ಅವರು ಸೋಮವಾರ ಮಧ್ಯಾಹ್ನ ನಿಧನರಾಗಿದ್ದಾರೆ. ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಕಳೆದ ತಿಂಗಳು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ನಂತರ ಡಿಸ್ಚಾರ್ಜ್ ಆಗಿದ್ದರು. ಆದರೆ ಸೋಮವಾರ ಮಧ್ಯಾಹ್ನ 1.30ರ ಸುಮಾರಿಗೆ ಕೊನೆಯುಸಿರೆಳೆದಿದ್ದಾರೆ.

1983ರಿಂದ ಮೂರು ಅವಧಿಗೆ ಕಾಂಗ್ರೆಸ್ ಪಕ್ಷದಿಂದ ಶಾಸಕರಾಗಿ ಆಯ್ಕೆಯಾಗಿದ್ದರು. ಕಾರವಾರ–ಜೊಯಿಡಾ ಕ್ಷೇತ್ರದ ಶಾಸಕರಾಗಿದ್ದ ಅವರು 1993ರಲ್ಲಿ ವೀರಪ್ಪ ಮೊಯ್ಲಿ ಸಚಿವ ಸಂಪುಟದಲ್ಲಿ ಶಿಕ್ಷಣ ಮತ್ತು ಸಾಕ್ಷರತೆ ಶಿಕ್ಷಣ ಖಾತೆ ಸಚಿವರಾಗಿ ಕಾರ್ಯ ನಿರ್ವಹಿಸಿದ್ದರು. ಇನ್ನು 1996ರಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿಯಿಂದ ಸ್ಪರ್ಧಿಸಿ ವಸಂತ್ ಅಸ್ನೋಟಿಕರ್ ವಿರುದ್ಧ ಸೋಲು ಅನುಭವಿಸಿದ್ದರು. ನಂತರ ಜೆಡಿಎಸ್ ಸೇರಿ ಅದೃಷ್ಟ ಪರೀಕ್ಷೆಗಿಳಿದಿದ್ದ ಅವರು ಮತ್ತೆ ಸೋಲು ಕಂಡಿದ್ದರಿಂದ ರಾಜಕೀಯದಿಂದ ದೂರ ಸರಿದಿದ್ದರು. ಸಿದ್ಧರದ ಮಲ್ಲಿಕಾರ್ಜುನ ಶಿಕ್ಷಣ ಸಂಸ್ಥೆಯಲ್ಲಿ ದೈಹಿಕ ಶಿಕ್ಷಕರಾಗಿ ಸೇವೆ ಆರಂಭಿಸಿದ್ದರು. ಕಾರವಾರ ಜೊಯಿಡಾ ತಾಲೂಕಿನಲ್ಲಿ ಶಾಲಾ–ಕಾಲೇಜು ಸ್ಥಾಪಿಸಿ ಬಡ ಕುಟುಂಬಗಳ ಮಕ್ಕಳು ವಿದ್ಯಾಭ್ಯಾಸ ಪಡೆಯುವಂತ ಅವಕಾಶ ಸೃಷ್ಟಿಸಿದರು.

ಭಾರತ ಜೋಡಿಸುವುದಿರಲಿ ಒಡೆದ ತಮ್ಮ ಮನೆ ಒಗ್ಗೂಡಿಸಲಿ

ಕಾಂಗ್ರೆಸ್‌ಗೆ ಉಸ್ತುವಾರಿ ಸಚಿವ ಸೋಮಶೇಖರ್ ಟಾಂಗ್

ಮೈಸೂರು,ಸೆ.5(ಎಂಟಿವೈ)– ಕಾಂಗ್ರೆಸ್ ಒಡೆದ ಮನೆಯಾಗಿದೆ. ಮೊದಲು ಅದನ್ನು ಜೋಡಿಸಿಕೊಳ್ಳುವುದು ಒಳ್ಳೆಯದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಟಾಂಗ್ ನೀಡಿದರು



ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಕೈಗೊಂಡಿರುವ ಭಾರತ್ ಜೋಡಿಸಿ ಯಾತ್ರೆಯ ಕುರಿತು ಪ್ರತಿಕ್ರಿಯಿಸಿದರು. ಕಾಂಗ್ರೆಸ್‌ನವರು ಮೊದಲು ಅವರ ಮನೆಯ ಯಾತ್ರೆಯನ್ನು ಸರಿಪಡಿಸುವ ಕೆಲಸ ಮಾಡಬೇಕು ಎಂದರು.

ಸಿದ್ದರಾಮಯ್ಯನವರದ್ದು ಒಂದು ಗುಂಪು, ಪರಮೇಶ್ವರ ಅವರದ್ದೇ ಇನ್ನೊಂದು. ಬಿ.ಕೆ.ಹರಿಪ್ರಸಾದ್ ಅವರದ್ದೇ ಒಂದು ಗುಂಪು. ಖರ್ಗೆಯವರದ್ದೇ ಒಂದು ಗುಂಪು. ಕೆ.ಎಚ್.ಮುನಿಯಪ್ಪ ಅವರದ್ದೇ ಒಂದು ಗುಂಪು. ಹೀಗೆ ನಾನಾ ಗುಂಪುಗಳಾಗಿ ಕಾಂಗ್ರೆಸ್ ಒಡೆದ ಮನೆಯಾಗಿದೆ. ಭಾರತ ಜೋಡೋ ಯಾತ್ರೆ ಮಾಡುವುದಕ್ಕಿಂತ ಮೊದಲು ಅವರ ಮನೆಗಳನ್ನು ಸರಿಪಡಿಸಿಕೊಂಡು ಬಳಿಕ ಈ ಯಾತ್ರೆ ಮಾಡಲಿ ಎಂದು ಕಾಲೆಳೆದರು. ಅಧಿಕ ಮಳೆಯಿಂದ ಜಿಲ್ಲೆಯಲ್ಲಿ ಉಂಟಾಗಿರುವ ಹಾನಿಯ ಕುರಿತು ಕಂದಾಯ ಮಂತ್ರಿಗಳ ಜತೆಗೂ ಮಾತನಾಡಿ, ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಬೇಕು ಎಂದು ಕೇಳಿದ್ದೇನೆ. ಅವರೂ ಒಪ್ಪಿಕೊಂಡಿದ್ದಾರೆ. ಹಾನಿಗೀಡಾಗಿರುವ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಲು ಜಿಲ್ಲಾಧಿಕಾರಿಗೆ ಸೂಚಿಸಲಾಗಿದೆ. ನಂಜನಗೂಡಿಗೆ ಭೇಟಿ ನೀಡಿದ್ದಾರೆ. ಸಂಪೂರ್ಣ ಮಾಹಿತಿ ಸಂಗ್ರಹಿಸಲು ಹೇಳಿದ್ದೇನೆ ಎಂದು ತಿಳಿಸಿದರು.

ಸಂಗೀತ ವಿವಿಯಲ್ಲಿ ಶಿಕ್ಷಕರ ದಿನಾಚರಣೆ



ಮೈಸೂರು, ಸೆ.5– ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯದಲ್ಲಿ ಶಿಕ್ಷಕರ ದಿನಾಚರಣೆ ನಡೆಯಿತು.

ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕುಲಪತಿ ಪ್ರೊ.ನಾಗೇಶ್ ವಿ.ಬೆಟ್ಟಕೋಟೆ, ಪ್ರದರ್ಶಕ ಕಲೆಗಳನ್ನು ಅಧ್ಯಯನ ನಡೆಸುತ್ತಿರುವ ವಿದ್ಯಾರ್ಥಿಗಳು ತಮ್ಮ ಹೆಚ್ಚಿನ ಸಮಯವನ್ನು ಕಲೆಗಾಗಿಯೇ ಮೀಸಲಿಡುವಂತೆ ಅವರು ಸಲಹೆ ನೀಡಿದರು.

ಕಲೆಗಳನ್ನು ಶೈಕ್ಷಣಿಕವಾಗಿ ಅಭ್ಯಾಸ ನಡೆಸುವುದರಿಂದ ಬದುಕಿಗೆ ಬೇಕಾಗುವ ಎಲ್ಲಾ ಆಯಾಮಗಳ ಅನುಭವವಾಗುತ್ತದೆ ಎಂದರು. ಕುಲಸಚಿವ ಪ್ರೊ.ದೇವರಾಜ, ಸಹಾಯಕ ಕುಲಸಚಿವ ಅಶ್ವತ್ಥ್, ಅಧ್ಯಾಪಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ರಾಜಕೀಯ ಪಕ್ಷಗಳಿಗೆ ಧಾರ್ಮಿಕ ಹೆಸರು–ಚಿಹ್ನೆ: ಚುನಾವಣಾ ಆಯೋಗಕ್ಕೆ ಸುಪ್ರೀಂ ನೋಟಿಸ್

ನವದೆಹಲಿ: ರಾಜಕೀಯ ಪಕ್ಷಗಳಿಗೆ ಧಾರ್ಮಿಕ ಹೆಸರು ಮತ್ತು ಚಿಹ್ನೆಗಳನ್ನು ನೀಡಿರುವುದನ್ನು ರದ್ದುಪಡಿಸಲು ಕೋರಿ ಸಲ್ಲಿಸಲಾಗಿರುವ ಮನವಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಸೋಮವಾರ ಕೇಂದ್ರ ಸರ್ಕಾರ ಮತ್ತು ಚುನಾವಣಾ ಆಯೋಗಕ್ಕೆ ನೋಟಿಸ್ ಜಾರಿ ಮಾಡಿದೆ.



ಲಖನೌ ಮೂಲದ ಸೈಯದ್ ವಸೀಂ ರಿಜ್ವಿ ಎಂಬುವರು ಅರ್ಜಿ ಸಲ್ಲಿಸಿದ್ದು, ಜನಪ್ರಾತಿನಿಧ್ಯ (ಆರ್‌ಪಿ) ಕಾಯ್ದೆ ಸೆಕ್ಷನ್ 123ರ ಪ್ರಕಾರ ಮತದಾರರಿಗೆ ಆಮಿಷವೊಡ್ಡಲು ಧರ್ಮವನ್ನು ಬಳಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ಪ್ರತಿಪಾದಿಸಿದ್ದಾರೆ.

ನ್ಯಾಯಮೂರ್ತಿಗಳಾದ ಎಂ.ಆರ್. ಷಾ ಮತ್ತು ಕೃಷ್ಣ ಮುರಾರಿ ಅವರನ್ನೊಳಗೊಂಡ ಪೀಠದ ಅರ್ಜಿದಾರರ ಪರ ವಾದ ಮಂಡಿಸಿದ ಹಿರಿಯ ವಕೀಲ ಗೌರವ್ ಭಾಟಿಯಾ, ಆರ್‌ಪಿ ಕಾಯ್ದೆ ಮತ್ತು ಸಂವಿಧಾನವನ್ನು ಉಲ್ಲಂಘಿಸಿ ರಾಜಕೀಯ ಪಕ್ಷಗಳು ತಮ್ಮ ಪಕ್ಷದ ಹೆಸರು ಮತ್ತು ಬಾವುಟದಲ್ಲಿ ಧಾರ್ಮಿಕ ಅರ್ಥವನ್ನು ಹೊಂದಬಹುದೇ ಎಂದು ನ್ಯಾಯಪೀಠಕ್ಕೆ ಕೇಳಿದರು. ಮಾನ್ಯತೆ ಪಡೆದಿರುವ ಎರಡು ಪಕ್ಷಗಳು ತಮ್ಮ ಹೆಸರಿನಲ್ಲಿ 'ಮುಸ್ಲಿಂ' ಎಂಬ ಪದವನ್ನು ಹೊಂದಿವೆ. ಅಂತೆಯೇ ಕೆಲವು ಪಕ್ಷಗಳು ತಮ್ಮ ಅಧಿಕೃತ ಬಾವುಟಗಳಲ್ಲಿ ಅರ್ಧಚಂದ್ರ ಮತ್ತು ನಕ್ಷತ್ರಗಳನ್ನು ಹೊಂದಿವೆ ಎಂದೂ ನ್ಯಾಯಪೀಠದ ಗಮನಕ್ಕೆ ತಂದರು. ವಾದಗಳನ್ನು ಆಲಿಸಿದ ಬಳಿಕ ನ್ಯಾಯಪೀಠವು ಚುನಾವಣಾ ಆಯೋಗ ಮತ್ತು ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವಾಲಯದ ಕಾರ್ಯದರ್ಶಿಗೆ ಅ. 18ರೊಳಗೆ ಪ್ರತಿಕ್ರಿಯೆ ನೀಡುವಂತೆ ನೋಟಿಸ್ ಜಾರಿಗೊಳಿಸಿತು.



ಮೈಸೂರು ವೀರಶೈವ ಸಜ್ಜನ ಸಂಘದಿಂದ ಮೈಸೂರು ಸ್ಪೋರ್ಟ್ಸ್ ಕ್ಲಬ್‌ನ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ ಎಂ.ಸಿ.ಮಲ್ಲಿಕಾರ್ಜುನ್ ಮತ್ತು ಶ್ರೀಮತಿ ಪವಿತ್ರ ಎಂ.ಸಿ.ಮಲ್ಲಿಕಾರ್ಜುನ್ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಸಂಘದ ಅಧ್ಯಕ್ಷ ಎಸ್.ರಮಾನಂದ, ಕಾರ್ಯದರ್ಶಿ ಪ್ರದೀಪ್, ಸಜ್ಜನ ಎಜುಕೇಷನ್ ಟ್ರಸ್ಟ್‌ನ ಉಪಾಧ್ಯಕ್ಷ ಸಾಗರ್‌ಕುಮಾರ್, ನಿರ್ದೇಶಕರು, ನಾಮ ನಿರ್ದೇಶಕರು, ಸಂಘದ ಸರ್ವ ಸದಸ್ಯರು ಉಪಸ್ಥಿತರಿದ್ದರು.

ಅಶ್ವಗಳ ಆಹಾರಕ್ಕೆ ದರಪಟ್ಟಿ ಆಹ್ವಾನ

ಮೈಸೂರು, ಸೆ.5– ಕೆ.ಎ.ಆರ್.ಪಿ ಮೌಂಟೆಡ್ ಕಂಪನಿ, ಮೈಸೂರು ಘಟಕದಲ್ಲಿನ ಅಶ್ವಗಳಿಗೆ 2022–23ನೇ ಸಾಲಿನ 3ನೇ ತ್ರೈಮಾಸಿಕ ಅವಧಿಗೆ ಅ.1ರಿಂದ ಡಿ.31ರವರೆಗೆ ಅವಶ್ಯವಿರುವ 11 ಬಗೆಯ ಅಶ್ವಗಳ ಆಹಾರ ಮತ್ತಿತರೆ ಪದಾರ್ಥಗಳಾದ ಹುರುಳಿಕಾಳು, ಗೋಧಿತೌಡು, ಡಿ.ಸಿ.ಓಟ್ಸ್, ಭತ್ತದ ಹುಲ್ಲು, ಅಗಸೇಬೀಜ, ಲೂಸನ್, ಕಾಡುಸೌದೆ, ಕುದುರೆಲಾಳ, ಕುದುರೆಲಾಳದ ಮೊಳೆ, ಹರಳುಪ್ಪು, ಇದ್ದಿಲು ಇವುಗಳನ್ನು ಪರಿಮಾಣಕ್ಕನುಗುಣವಾಗಿ ದರಪಟ್ಟಿಗಳ ಮುಖಾಂತರ ಖರೀದಿಸುವ ಸಂಬಂಧ ಇಚ್ಛೆಯುಳ್ಳ ಸಂಸ್ಥೆ ಮತ್ತು ವರ್ತಕರಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಅಶ್ವಗಳ ಆಹಾರ ಮತ್ತಿತರೆ ಪದಾರ್ಥಗಳನ್ನು ಸರಬರಾಜು ಮಾಡಲು ಆಸಕ್ತಿಯುಳ್ಳವರು ಕಮಾಂಡೆಂಟ್ ಕಚೇರಿ, ಕೆ.ಎ.ಆರ್.ಪಿ. ಮೌಂಟೆಡ್ ಕಂಪನಿ, ಲಲಿತ ಮಹಲ್ ರಸ್ತೆ, ಮೈಸೂರು ವಿಳಾಸಕ್ಕೆ ಖುದ್ದಾಗಿ ಭೇಟಿ ನೀಡಬಹುದು ಅಥವಾ ದೂ.ಸಂ: 0821–2418154 ಸಂಪರ್ಕಿಸಬಹುದು. ದರಪಟ್ಟಿಗಳನ್ನು ಸೆ.20ರೊಳಗಾಗಿ ಸಂಜೆ 5.30 ಗಂಟೆಯೊಳಗೆ ಸಲ್ಲಿಸಬಹುದು.

ಎನ್‌ಇಪಿ ಪಠ್ಯಕ್ರಮ ಜಾರಿಯಲ್ಲಿ ಶಿಕ್ಷಕರೇ ನಿರ್ಣಾಯಕ

ರಾಜ್ಯದಲ್ಲಿ ಪ್ರಪ್ರಥಮ ಬಾರಿಗೆ ಎನ್‌ಇಪಿ ಜಾರಿ ಹಿನ್ನೆಲೆ ಉನ್ನತ ಶಿಕ್ಷಣ ಸಚಿವ ಡಾ.ಅಶ್ವತ್ಥನಾರಾಯಣರಿಗೆ ಶಹಬಾಷ್ ಹೇಳಿದ ಸಿಎಂ ಬೊಮ್ಮಾಯಿ

ಬೆಂಗಳೂರು, ಸೆ. 5 (ಕೆಎಂಶಿ)– ಮೂರು ವರ್ಷಗಳ ಪರಿಶ್ರಮದಿಂದ ರೂಪಿಸಿರುವ ಎನ್‌ಇಪಿ ಪಠ್ಯಕ್ರಮವನ್ನು ರಾಜ್ಯದಲ್ಲಿ ಸಂಪೂರ್ಣವಾಗಿ ಜಾರಿಗೊಳಿಸಲು ಶಿಕ್ಷಕರು ನಿರ್ಣಾಯಕ ಪಾತ್ರ ವಹಿಸಬೇಕಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.



ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯು ನಗರದಲ್ಲಿ ಏರ್ಪಡಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕೇಂದ್ರ ಸರಕಾರವು ಎನ್‌ಇಪಿ ಘೋಷಿಸುವುದಕ್ಕೂ ಮೊದಲೇ ಅದಕ್ಕೆ ಸಂಬಂಧಿಸಿದಂತೆ ಕಾರ್ಯಪಡೆ ರಚಿಸಿದ ಕೀರ್ತಿ ಕರ್ನಾಟಕದ್ದು. ಪರಿಣತರು, ವಿಷಯ ತಜ್ಞರು, ಉದ್ಯಮಿಗಳು ಒಂದೆಡೆ ಕೂತು ಪಠ್ಯಗಳನ್ನು ರೂಪಿಸಿದ್ದಾರೆ. ಇದರ ಜಾರಿಯಲ್ಲಿ ನಾವು ದೇಶದಲ್ಲೇ ಪ್ರಥಮ ಸ್ಥಾನದಲ್ಲಿ ಇದ್ದೇವೆ. ಇದರಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಅಶ್ವತ್ಥನಾರಾಯಣ ಅವರ ಪಾತ್ರ ದೊಡ್ಡದಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇಂದು ತಂತ್ರಜ್ಞಾನ, ಜಗತ್ತನ್ನು ಆಳುತ್ತಿದ್ದು, ನಮ್ಮ ಮೌಲ್ಯಗಳು ಕೂಡ ಅದರಿಂದಲೇ ನಿರ್ದೇಶಿತವಾಗುತ್ತಿವೆ. ಬೋಧನೆಯನ್ನು ಬದುಕಿನ ಜತೆ ಬೆಸೆಯುವುದು ಅತ್ಯುತ್ತಮ ವಿಧಾನ ಎಂದು ಅಭಿಪ್ರಾಯಪಟ್ಟರು.

ಮನುಷ್ಯನಲ್ಲಿ ಚಿಂತನಾ ಪ್ರಕ್ರಿಯೆಗೆ ಶಿಸ್ತು ತರುವುದೇ ಶಿಕ್ಷಣ. ಇದರಲ್ಲಿ ಮಕ್ಕಳ ಮುಗ್ಧತೆ ಮತ್ತು ಕುತೂಹಲ ಉಳಿಸಿಕೊಳ್ಳುವುದೇ ಈಗಿರುವ ಸವಾಲು ಎಂದು ಪ್ರತಿಪಾದಿಸಿದರು. ಸ್ವಾಮಿ ವಿವೇಕಾನಂದರು ಇಂದು ತುಂಬಾ ಪ್ರಸ್ತುತರಾಗಿದ್ದಾರೆ. ಶಿಕ್ಷಣವು ತಾರ್ಕಿಕತೆ, ತಾತ್ವಿಕತೆ ಮತ್ತು ನೈತಿಕತೆಗಳನ್ನು ಬೆಸೆಯಬೇಕು ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

ಉನ್ನತ ಶಿಕ್ಷಣ ಸಚಿವ ಡಾ.ಸಿ ಎನ್ ಅಶ್ವತ್ಥನಾರಾಯಣ ಮಾತನಾಡಿ, ಶಿಕ್ಷಣ ಕ್ಷೇತ್ರದಲ್ಲಿ ಹಿಂದೆ ಇದ್ದ ವಿಐಪಿ ಸಂಸ್ಕೃತಿಯನ್ನು ಕೊನೆಗೊಳಿಸಿ, ಪ್ರತಿಭೆಗೆ ಮನ್ನಣೆ ಕೊಡಲಾಗುತ್ತಿದೆ. ವಿ.ವಿ.ಗಳಲ್ಲಿ ಪಾರದರ್ಶಕತೆ ತಂದಿದ್ದು, ಎನ್‌ಇಪಿ ಮೂಲಕ ಸರ್ವಾಂಗೀಣ ಪ್ರಗತಿ ಸಾಧ್ಯವಾಗಲಿದೆ ಎಂದು ಹೇಳಿದರು.

ಶಿಕ್ಷಣದಲ್ಲಿ ವಿದ್ಯಾರ್ಥಿ ಕೇಂದ್ರಿತ ನೀತಿ ಜಾರಿಗೊಳಿಸಲಾಗಿದೆ. ಸರ್ಕಾರಿ ಕಾಲೇಜುಗಳ ಹಾಗೆ ಅನುದಾನಿತ ಕಾಲೇಜುಗಳಿಗೂ ಸ್ಥಳೀಯವಾಗಿ ಶುಲ್ಕ ರೂಪದಲ್ಲಿ ಸಂಗ್ರಹವಾಗುವ ಹಣವನ್ನು ಸಂಪೂರ್ಣವಾಗಿ ಆಯಾ ಕಾಲೇಜುಗಳಿಗೇ ಕೊಡಲಾಗುತ್ತಿದೆ. ಈ ಹಿಂದೆ ಅನುದಾನಿತ ಕಾಲೇಜುಗಳಿಗೆ ಶೇ.50ರಷ್ಟು ಹಣ ಮಾತ್ರ ಬಳಸಲು ಅವಕಾಶವಿತ್ತು ಎಂದು ವಿವರಿಸಿದರು.

ಶಿಕ್ಷಣದ ಅಂತಾರಾಷ್ಟ್ರೀಕರಣ, ಉದ್ಯಮಗಳ ಜತೆ ಸಕ್ರಿಯ ಸಂಬಂಧ, ಜಾಗತಿಕ ಮಟ್ಟದ ಸಂಸ್ಥೆಗಳೊಂದಿಗೆ ಒಡಂಬಡಿಕೆಗಳಿಗೆ ಆದ್ಯತೆ ಕೊಡಲಾಗಿದೆ. ಜತೆಯಲ್ಲಿ ಪ್ರಾಧ್ಯಾಪಕರ ಬಡ್ತಿ ಪ್ರಕ್ರಿಯೆ ಶೀಘ್ರವೇ ಆರಂಭ ಆಗಲಿದೆ ಎಂದು ಸಚಿವರು ಮಾಹಿತಿ ನೀಡಿದರು.

ಹೊಸ ಕಾಲೇಜಿಗೆ ಅನುಮತಿ ಇಲ್ಲ

"ರಾಜ್ಯ ಸರಕಾರವು ಹೊಸ ಕಾಲೇಜುಗಳಿಗೆ ಅನುಮತಿ ಕೊಡುತ್ತಿಲ್ಲ. ಬದಲಿಗೆ ಇರುವ ಕಾಲೇಜುಗಳಲ್ಲಿ ಶಿಕ್ಷಣದ ಗುಣಮಟ್ಟ ಹೆಚ್ಚಿಸುತ್ತಿದೆ. ಜೊತೆಗೆ, ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ವಿಕೇಂದ್ರೀಕರಣ, ಸ್ವಾಯತ್ತತೆ ಮತ್ತು ಸ್ವಾತಂತ್ರ್ಯ ತರಲು ಸದ್ಯದಲ್ಲೇ ಸೂಕ್ತ ಶಾಸನವನ್ನು ತರಲಾಗುತ್ತಿದೆ. ಈ ಪ್ರಕ್ರಿಯೆ ಈಗ ಅಂತಿಮ ಹಂತದಲ್ಲಿದೆ.

–ಡಾ.ಅಶ್ವತ್ಥನಾರಾಯಣ, ಉನ್ನತ ಶಿಕ್ಷಣ ಸಚಿವ

ಡಬಲ್ ಇಂಜಿನ್ ಸರ್ಕಾರದ ಡಬಲ್ ದ್ರೋಹ

ರೈತರ ಪಂಪ್‌ಸೆಟ್‌ಗೆ ಮೀಟರ್ ಅಳವಡಿಕೆ; ಪರಿಶಿಷ್ಟರಿಗೆ ನೀಡುತ್ತಿದ್ದ 75 ಯೂನಿಟ್ ಉಚಿತ ವಿದ್ಯುತ್ ನಿಲುಗಡೆಗೆ ಸಿದ್ದರಾಮಯ್ಯ ಆಕ್ರೋಶ

ಬೆಂಗಳೂರು, ಸೆ. 5 (ಕೆಎಂಶಿ)– ರಾಜ್ಯ ಸರ್ಕಾರ ಕೃಷಿ ಪಂಪ್‌ಸೆಟ್‌ಗಳಿಗೆ ನೀಡುತ್ತಿದ್ದ ಉಚಿತ ವಿದ್ಯುತ್ ಪೂರೈಕೆಯನ್ನು ಕಡಿಮೆ ಮಾಡಿ ಮೀಟರ್ ಅಳವಡಿಸಲು ಹೊರಟಿರುವುದನ್ನು ವಿಧಾನಸಭೆಯ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಖಂಡಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಡತನ ರೇಖೆಗಿಂತ ಕೆಳಗಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದ ಕುಟುಂಬಗಳಿಗೆ ಮಾಸಿಕ 75 ಯೂನಿಟ್‌ಗಳವರೆಗೆ ನೀಡಲಾಗುತ್ತಿದ್ದ ಉಚಿತ ವಿದ್ಯುತ್ ಯೋಜನೆಯನ್ನು ಸ್ಥಗಿತಗೊಳಿಸಿರುವುದನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ವಿದ್ಯುತ್ ಕ್ಷೇತ್ರವನ್ನು ಖಾಸಗಿಯವರಿಗೆ ಅರ್ಪಿಸುವ ಸಲುವಾಗಿ ಕೇಂದ್ರ ಸರ್ಕಾರ ಕಾಯ್ದೆ ತಂದಿದೆ. ಈ ಕಾಯ್ದೆ ಜಾರಿ ಆಗುವ ಮೊದಲೇ ರಾಜ್ಯ ಸರ್ಕಾರ ಪಂಪ್‌ಸೆಟ್‌ಗಳಿಗೆ ನೀಡಲಾಗುತ್ತಿದ್ದ ವಿದ್ಯುತ್ತನ್ನು ನಿಲ್ಲಿಸಿದೆ.

ಹಾಗೆಯೇ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಏಳ್ಗೆ ಬಗ್ಗೆಯೂ ಪುಟಗಟ್ಟಲೆ ಜಾಹೀರಾತು ನೀಡಲಾಗಿತ್ತು. ಆದರೆ, ಬಿಪಿಎಲ್ ಕಾರ್ಡ್ ಹೊಂದಿರುವ ಬಡತನ ರೇಖೆಗಿಂತ ಕೆಳಗಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದ ಕುಟುಂಬಗಳಿಗೆ ಮಾಸಿಕ 75 ಯೂನಿಟ್‌ಗಳವರೆಗೆ ನೀಡಲಾಗುತ್ತಿದ್ದ ಉಚಿತ ವಿದ್ಯುತ್ ಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಲ್ಲಿಸುವಂತೆ ಸೆ.3ರಂದು ಸರ್ಕಾರ ಆದೇಶ ಹೊರಡಿಸಿದೆ. ಈ ಮೂಲಕ ರೈತ ಮತ್ತು ದಲಿತ ಸಮುದಾಯಗಳ ವಿಚಾರದಲ್ಲಿ ಡಬಲ್ ಎಂಜಿನ್ ಸರ್ಕಾರ ಡಬಲ್ ದ್ರೋಹ ಎಸಗಿದೆ. ದೇಶದ ಆಸ್ತಿಯನ್ನು ಖಾಸಗಿಯವರಿಗೆ ಮಾರಾಟ ಮಾಡುವುದೇ ಡಬ್ಬಲ್ ಎಂಜಿನ್ ಸರ್ಕಾರದ ಸಾಧನೆಯಾಗಿಬಿಟ್ಟಿದೆ. ಪ್ರಧಾನಿ ಮೋದಿ ಅವರು ರಾಜ್ಯಕ್ಕೆ ಬಂದು ಜನೋದ್ಧಾರದ ಭಾಷಣ ಮಾಡಿ ಹೋದ ಬೆನ್ನಲ್ಲೇ ಸರ್ಕಾರ ಈ ಎರಡು ಜನಾದ್ರೋಹದ ತೀರ್ಮಾನಗಳನ್ನು ತೆಗೆದುಕೊಳ್ಳುವ ಮೂಲಕ ಪ್ರಧಾನಿ ಮೋದಿ ಅವರ ಭಾಷಣಗಳೆಲ್ಲಾ ಪೂರ್ತಿ ಬೋಗಸ್ ಎನ್ನುವುದನ್ನು ರಾಜ್ಯ ಸರ್ಕಾರ ಒಪ್ಪಿಕೊಂಡಂತಾಗಿದೆ. ಇದಕ್ಕಿಂತ ದೊಡ್ಡ ಜನದ್ರೋಹ ಮತ್ತೊಂದು ಇರಲಾರದು. ರೈತ ಸಮುದಾಯಕ್ಕೆ ಸರ್ಕಾರ ನೀಡುವ ಯಾವುದೇ ಸವಲತ್ತುಗಳು ಮತ್ತು ರಿಯಾಯ್ತಿ–ವಿನಾಯ್ತಿಗಳನ್ನೂ ಉಚಿತ ಎಂದು ಭಾವಿಸಲೇಬಾರದು ಎಂದಿದ್ದಾರೆ.



"ತಕ್ಷಣದಿಂದಲೇ ಸರ್ಕಾರ ತನ್ನ ಜನದ್ರೋಹಿ, ರೈತ ವಿರೋಧಿ ಕೃತ್ಯವನ್ನು ನಿಲ್ಲಿಸಬೇಕು. ಪಂಪ್‌ಸೆಟ್‌ಗಳಿಗೆ ನೀಡಲಾಗುತ್ತಿದ್ದ ಉಚಿತ ವಿದ್ಯುತ್ ವ್ಯವಸ್ಥೆಯನ್ನು ಮೊದಲಿಗಿಂತ ಹೆಚ್ಚು ಸಮರ್ಪಕವಾಗಿ ಜಾರಿಗೊಳಿಸಬೇಕು. ಇಲ್ಲದಿದ್ದರೆ ರೈತರ ಹೊಟ್ಟೆಯ ಸಿಟ್ಟು ನಿಮ್ಮನ್ನು ಸುಡುತ್ತದೆ.

–ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ

ದೆಹಲಿಯ ಐತಿಹಾಸಿಕ ರಾಜ್‌ಪಥ್ ಇನ್ನು ಮುಂದೆ ಕರ್ತವ್ಯಪಥ್



ನವದೆಹಲಿ: ದೆಹಲಿಯ ಐತಿಹಾಸಿಕ 'ರಾಜ್‌ಪಥ್'ಗೆ 'ಕರ್ತವ್ಯಪಥ್' ಎಂದು ಮರುನಾಮಕರಣ ಮಾಡಲು ಸರ್ಕಾರ ತೀರ್ಮಾನಿಸಿದೆ ಎಂದು ಮೂಲಗಳು ತಿಳಿಸಿವೆ. ಇದೇ 7ರಂದು ನ್ಯೂ ಡೆಲ್ಲಿ ಮುನ್ಸಿಪಲ್ ಕೌನ್ಸಿಲ್‌ನ (ಎನ್‌ಡಿಎಂಸಿ) ವಿಶೇಷ ಸಭೆ ನಿಗದಿಯಾಗಿದೆ. ಮರುನಾಮಕರಣದ ಪ್ರಸ್ತಾವನೆಯನ್ನು ಸಭೆಯ ಮುಂದೆ ಇಡಲಾಗುತ್ತದೆ. ಇಂಡಿಯಾ ಗೇಟ್ ಬಳಿಯ ನೇತಾಜಿ ಪ್ರತಿಮೆಯಿಂದ ರಾಷ್ಟ್ರಪತಿ ಭವನದವರೆಗಿನ ಇಡೀ ರಸ್ತೆ 'ಕರ್ತವ್ಯಪಥ್' ಎಂದು ಕರೆಸಿಕೊಳ್ಳಲಿದೆ ಎಂದು ಹೇಳಿವೆ.

ಶಿಕ್ಷಕರು ಮಕ್ಕಳಿಗೆ ಪಂಚತಂತ್ರ ಕಥೆಗಳನ್ನು ಹೇಳಿಕೊಡಬೇಕು

ಮುಂಬೈ: ಶಿಕ್ಷಕರು ಮಕ್ಕಳಿಗೆ ಪಂಚತಂತ್ರ ಕಥೆಗಳನ್ನು ಹೇಳಿಕೊಡಬೇಕು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಶಿಕ್ಷಕರಿಗೆ ಕಿವಿಮಾತು ಹೇಳಿದರು.



ಮುಂಬೈನ ಪೋವಾಯಿಯ ಎಎಂ ನಾಯಿಕ್ ಶಾಲೆ ಉದ್ಘಾಟನೆ ಹಾಗೂ ಶಿಕ್ಷಕರ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು. ನಮ್ಮ ಪ್ರಾಚೀನ ಭಾರತದ ಪಂಚತಂತ್ರ ಕಥೆಗಳು ಮಕ್ಕಳಿಗೆ ಒಳ್ಳೆಯದು ಯಾವುದು, ಕೆಟ್ಟದ್ದು ಯಾವುದು, ಎಂಬುದನ್ನು ಅತ್ಯಂತ ಸೊಗಸಾಗಿ ಬೋಧಿಸುತ್ತವೆ. ಇದರಿಂದ ಮಕ್ಕಳು ನೀತಿವಂತರಾಗುತ್ತಾರೆ ಎಂದು ಶಾ ಹೇಳಿದರು.

ನೂತನ ರಾಷ್ಟ್ರೀಯ ಶಿಕ್ಷಣ ನೀತಿಯೂ ಕೇವಲ ಉದ್ಯೋಗ ನೀಡುವ ಶಿಕ್ಷಣ ನೀಡುವುದಿಲ್ಲ. ಮಕ್ಕಳನ್ನು ದೇಶದ ಉತ್ತಮ ನಾಗರಿಕರನ್ನಾಗಿ ರೂಪಿಸುತ್ತದೆ. ಮಾಜಿ ರಾಷ್ಟ್ರಪತಿ ಎಸ್ ರಾಧಾಕೃಷ್ಣನ್ ಅವರ ವಿಚಾರಧಾರೆಗಳನ್ನು ಎನ್‌ಇಪಿ ಒಳಗೊಂಡಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಹಾರಾಷ್ಟ್ರ ಉಪ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಭಾಗವಹಿಸಿದ್ದರು. ಮಹಾರಾಷ್ಟ್ರದಲ್ಲಿ ಫಡ್ನವೀಸ್ ಆಡಳಿತ ಸುವರ್ಣಯುಗ ಎಂದು ಅಮಿತ್ ಶಾ ಕೊಂಡಾಡಿದರು.

ಜೆಎಸ್‌ಎಸ್ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆ

ಮೈಸೂರು, ಸೆ.5– ನಗರದ ಮೇಟಗಳ್ಳಿಯಲ್ಲಿರುವ ಜೆಎಸ್‌ಎಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಯಿತು.



ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ನಿವೃತ್ತ ಶಿಕ್ಷಕ ಸಿ.ಜಿ. ನಂಜುಂಡಸ್ವಾಮಿ ಮಾತನಾಡಿ, ದೇಶದಲ್ಲಿ 1962 ರಿಂದ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಶಿಕ್ಷಕರಾದವರು ದೇಶದ ಅತ್ಯುತ್ತಮ ಪ್ರಜೆಯಾಗಿರಬೇಕು, ವಿದ್ಯಾರ್ಥಿಗಳ ಉಜ್ವಲ ಬದುಕಿಗೆ ದಾರಿ ತೋರುವ ಶಿಕ್ಷಕರುಗಳಿಗೆ ಯಾವುದೇ ಪಾರಿತೋಷಕಗಳು ಸರಿಸಾಟಿಯಾಗಲಾರದು. ವಿದ್ಯಾರ್ಥಿಗಳು ಶಾಂತಿ ಮತ್ತು ಮೌನವನ್ನು ಅಳವಡಿಸಿಕೊಂಡು ಆಲಸ್ಯವನ್ನು ದೂರ ತಳ್ಳಿ, ಪರಿಶ್ರಮದಿಂದ ಬದುಕನ್ನು ಕಟ್ಟಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕ ಎನ್.ಡಿ.ಸತೀಶ್, ಶಾಲಾ ಮುಖ್ಯೋಪಾಧ್ಯಾಯ ಎನ್.ಪಿ ಸತೀಶ್, ಶಾಲಾ ಶಿಕ್ಷಕರು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮೈಸೂರಲ್ಲಿ ಪತ್ರಿಕಾ ವಿತರಕರ ದಿನಾಚರಣೆ

ಪತ್ರಿಕಾ ವಿತರಕರ ಅಸಂಘಟಿತ ಕಾರ್ಮಿಕರೆಂದು ಪರಿಗಣಿಸಿ



ವಿಶ್ವ ಪತ್ರಿಕಾ ವಿತರಕರ ದಿನಾಚರಣೆ ಅಂಗವಾಗಿ ಪತ್ರಿಕಾ ವಿತರಕರಾದ ಹೋಮದೇವ್, ಹರೀಶ್, ಜವರಪ್ಪ, ಮಂಜುನಾಥ್, ಚಂದ್ರಶೇಖರ್ ಜೈದೇವ್, ಪಾರ್ಶ್ವನಾಥ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು.



ಮೈಸೂರು ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದಿಂದ ವಿಶ್ವ ಪತ್ರಿಕಾ ವಿತರಕರ ದಿನವನ್ನು ಕೇಕ್ ಕತ್ತರಿಸಿ ಸಿಹಿ ಹಂಚುವ ಮೂಲಕ ಭಾನುವಾರ ಆಚರಿಸಲಾಯಿತು.

ಮೈಸೂರು, ಸೆ.5(ಎಸ್‌ಬಿಡಿ)– ಪತ್ರಿಕಾ ವಿತರಕರನ್ನು ಅಸಂಘಟಿತ ಕಾರ್ಮಿಕರೆಂದು ಪರಿಗಣಿಸಿ ಸರ್ಕಾರ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಮಾಜಿ ಮೇಯರ್ ಸಂದೇಶ್‌ಸ್ವಾಮಿ ಹೇಳಿದರು.

ಮೈಸೂರಿನ ಅಗ್ರಹಾರ ವೃತ್ತದಲ್ಲಿ ವಿಶ್ವ ಪತ್ರಿಕಾ ವಿತರಕರ ದಿನಾಚರಣೆ ಅಂಗವಾಗಿ ಭಾನುವಾರ ಕೆಎಂಪಿಕೆ ಚಾರಿಟಬಲ್ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ 40 ವರ್ಷಗಳಿಂದ ಮನೆ ಮನೆಗೆ ತೆರಳಿ ಪತ್ರಿಕಾ ವಿತರಣೆ ಮಾಡುತ್ತಿರುವ ಸೇನಾನಿಗಳಿಗೆ ಅಭಿನಂದನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಜಗತ್ತು ಎಷ್ಟೇ ಆಧುನಿಕತೆಯನ್ನು ಮೈಗೂಡಿಸಿಕೊಂಡರೂ ಪತ್ರಿಕೆಗಳನ್ನು ಓದುವ ಹವ್ಯಾಸವನ್ನು ಮಾತ್ರ ಯಾರೂ ಬಿಡುವುದಿಲ್ಲ. ವರದಿಗಾರ ಸುದ್ದಿ ಬರೆಯಬಹುದು, ಪತ್ರಿಕಾಲಯದಲ್ಲಿ ಅದನ್ನು ಪ್ರಕಟಿಸಬಹುದು. ಆದರೆ ಅಚ್ಚಾದ ಪತ್ರಿಕೆಯನ್ನು ಮನೆ ಮನೆಗೆ ತಲುಪಿಸುವ ಮಹತ್ಕಾರ್ಯ ಮಾಡುವುದು ಪತ್ರಿಕಾ ವಿತರಕರು. ಇವರು ಕಾರ್ಯ ನಿರ್ವಹಣೆಯಿಂದ ಇದರ ಹಿಂದಿನ ಎಲ್ಲಾ ಕಾರ್ಯಗಳಿಗೂ ಮಹತ್ವ ಸಿಗುತ್ತದೆ. ಬೇಸಿಗೆ, ಚಳಿ, ಮಳೆ ಯಾವುದಕ್ಕೂ ಜಗ್ಗದೆ ಪ್ರತಿನಿತ್ಯ ಬೆಳಗ್ಗೆ ಹಾಗೂ ಸಂಜೆ ಪತ್ರಿಕೆಗಳನ್ನು ವಿತರಿಸುತ್ತಾರೆ. ಪತ್ರಿಕಾ ವಿತರಕರನ್ನು ಗೌರವದಿಂದ ಕಾಣಬೇಕು. ಇವರನ್ನು ಸರ್ಕಾರ ಅಸಂಘಟಿತ ಕಾರ್ಮಿಕರೆಂದು ಪರಿಗಣಿಸಿ, ಅಗತ್ಯ ಸವಲತ್ತುಗಳನ್ನು ಕಲ್ಪಿಸಬೇಕು. ವರ್ಷವಿಡೀ ಎಂತಹ ಸಂದರ್ಭದಲ್ಲೂ ಕೆಲಸ ಮಾಡುವ ಪತ್ರಿಕಾ ವಿತರಕರಿಗೆ ವಿಶೇಷ ಭತ್ಯೆ, ಅವರ ಮಕ್ಕಳ ಶಿಕ್ಷಣಕ್ಕೆ ನೆರವು ನೀಡುವ ಮೂಲಕ ಜೀವನ ಭದ್ರತೆ ಕಲ್ಪಿಸಬೇಕೆಂದು ಆಗ್ರಹಿಸಿದರು.

ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಮಾತನಾಡಿ, ಪತ್ರಿಕಾ ವಿತರಕರಾಗಿದ್ದ ಅಬ್ದುಲ್ ಕಲಾಂ ಅವರು ರಾಷ್ಟ್ರಪತಿಯಾಗಿ ದೇಶದ ಘನತೆ ಹೆಚ್ಚಿಸಿದರು. ಪತ್ರಿಕಾ ವಿತರಕರು ಮಳೆಗಾಲದಲ್ಲಿ ತೀವ್ರ ತೊಂದರೆ ಅನುಭವಿಸುತ್ತಾರೆ. ಪತ್ರಿಕೆಗಳ ಬಂಡಲ್‌ಗಳನ್ನು ಸಾಗಿಸಿ ಮನೆ ಮನೆಗೆ ಪತ್ರಿಕೆ ವಿತರಿಸುವುದು ಸುಲಭ ಸಾಧ್ಯವಲ್ಲ. ಮಳೆಯಲ್ಲಿ ಪತ್ರಿಕೆ ಹಾಳಾಗುವುದರ ಜೊತೆಗೆ ವಿತರಕರ ಆರೋಗ್ಯವೂ ಹದಗೆಡುತ್ತದೆ. ಮೈಸೂರು ನಗರ ಸೇರಿದಂತೆ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ವಿತರಕರು ಪತ್ರಿಕೆ ವಿತರಣೆಗೆ ಸೂಕ್ತ, ಸುರಕ್ಷಿತ ಹಾಗೂ ಶಾಶ್ವತ ಜಾಗ ಕಲ್ಪಿಸಿಕೊಡಬೇಕಿದೆ. ಮೈಸೂರಿನ ವಸ್ತುಪ್ರದರ್ಶನ ಆವರಣ, ಪುರಭವನ ಇನ್ನಿತರ ಯಾವುದಾದರೂ ಸ್ಥಳದಲ್ಲಿ ಪತ್ರಿಕಾ ವಿತರಕರಿಗೆ ಶಾಶ್ವತ ಸ್ಥಳಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಪಾಲಿಕೆ ಕ್ರಮ ವಹಿಸಬೇಕು. ಸರ್ಕಾರ ಪತ್ರಿಕಾ ವಿತರಕರಿಗೆ ರಾಜ್ಯ ಮಟ್ಟದ ಪ್ರಶಸ್ತಿ ನೀಡುವ ಮೂಲಕ ಅವರ ಸೇವೆಯನ್ನು ಗೌರವಿಸಬೇಕು ಎಂದರು.

ಸುಜೀವ್ ಫೌಂಡೇಶನ್ ಅಧ್ಯಕ್ಷ ರಾಜರಾಂ ಮಾತ ನಾಡಿ, ಪತ್ರಿಕಾ ವಿತರಕರಿಗೆ ಗುರುತಿನ ಚೀಟಿ ನೀಡು ವುದು ಒಳ್ಳೆಯದು. ನಮ್ಮ ಸಂಸ್ಥೆ ವತಿಯಿಂದ ಮುಂದಿನ ದಿನಗಳಲ್ಲಿ ಪತ್ರಿಕಾ ವಿತರಕರಿಗೆ ಜೀವ ವಿಮೆ, ಅಗತ್ಯ ಬ್ಯಾಗ್, ಜರ್ಕಿನ್ ಇನ್ನಿತರ ವಸ್ತುಗಳನ್ನು ನೀಡುವುದಾಗಿ ಭರವಸೆ ನೀಡಿದರು.

ಈ ವೇಳೆ ಪತ್ರಿಕಾ ವಿತರಕರಾದ ಹೋಮದೇವ್, ಹರೀಶ್, ಜವರಪ್ಪ, ಮಂಜುನಾಥ್, ಚಂದ್ರಶೇಖರ್ ಜೈದೇವ್, ಪಾರ್ಶ್ವನಾಥ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು. ಇಳೈ ಆಳ್ವಾರ್ ಸ್ವಾಮೀಜಿ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಮೈಸೂರು ಜಿಲ್ಲಾ ಪತ್ರಿಕಾ ಪ್ರತಿನಿಧಿಗಳ ಸಂಘದ ಪ್ರಧಾನ ಕಾರ್ಯದರ್ಶಿಯೂ ಆದ ಮೈಸೂರು ಜಿಲ್ಲಾ ಒಕ್ಕಲಿಗರ ಸಂಘದ ನಿರ್ದೇಶಕ ಎ.ರವಿ, ಮುಡಾ ಸದಸ್ಯ ನವೀನ್ ಕುಮಾರ್, ಕೆ.ಆರ್.ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಸುರೇಶ್ ಗೋಲ್ಡ್, ಚರಣ್‌ರಾಜ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ವಿನಯ್ ಕಣಗಾಲ್, ಸುಚೇಂದ್ರ, ದುರ್ಗಾಪ್ರಸಾದ್ ಮತ್ತಿತರರು ಹಾಜರಿದ್ದರು.



ಮೈಸೂರು ನಗರ ಪತ್ರಿಕಾ ವಿತರಕರ ಸಂಘದಿಂದ 4 ದಶಕದಿಂದ ಪತ್ರಿಕಾ ವಿತರಕರಾಗಿರುವ ಸಿ.ಕೆ.ರಘುಪತಿ ಅವರನ್ನು ಸಂಘದ ಅಧ್ಯಕ್ಷ ಬಿ.ಸುರೇಶ್ ಅಭಿನಂದಿಸಿದರು. ಈ ವೇಳೆ 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ಪ್ರಸರಣ ವಿಭಾಗದ ಮುಖ್ಯಸ್ಥ ಟಿ.ಎಸ್.ಗೋಪಿನಾಥ್, 'ಕನ್ನಡಪ್ರಭ' ಪ್ರಸರಣ ಹಿರಿಯ ವ್ಯವಸ್ಥಾಪಕ ಎಚ್.ಎನ್.ಗಣೇಶ್, ಸಂತೋಷ್, ವೇಣುಗೋಪಾಲ್, ಬಾಬು, ಸುಮನ್, ಗೋವಿಂದ, ಮಂಜು, ಕೃಷ್ಣ, ಕಿರಣ್ ಮತ್ತಿತರರು ಉಪಸ್ಥಿತರಿದ್ದರು.

ನಕ್ಕರೆ ಅದೇ ಸ್ವರ್ಗ

ಆತ : "ನನ್ನ ಹೆಂಡತಿ ತುಂಬಾ ಆಶಾವಾದಿ"
ಈತ : "ಹೌದಾ! ಒಂದು ಉದಾಹರಣೆ ಕೊಡು"
ಆತ : "ಮುಂದಿನ ಜನ್ಮದಲ್ಲಿ ಒಳ್ಳೇ ಗಂಡನನ್ನು ಕರುಣಿಸು ದೇವರೇ ಅಂತಾ ಅವಳು ಈಗ್ಲಿಂದಾನೆ ಉಪವಾಸ, ವ್ರತ, ಪೂಜೆ, ಪುನಸ್ಕಾರದಲ್ಲಿ ತೊಡಗಿದ್ದಾಳೆ"

ಮೈಸೂರು ಮಿತ್ರ

ಮಂಗಳವಾರ, 6 ಸೆಪ್ಟೆಂಬರ್ 2022

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ. ಗೋವಿಂದೇಗೌಡ *M.A.*

ಅಮೃತವಾಹಿನಿ

ಒಂದು ಹೊಗಳಿಕೆ ಮಾತಿನಿಂದ ಮತ್ತಷ್ಟು ದಿನ ಬದುಕಲು ಶಕ್ತಿ ಬರುತ್ತದೆ.
– ಮಾರ್ಕ್ ಟ್ವೇನ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು

ಹುಲಿ ಬಡವಾದರೆ ಹುಲ್ಲು ಮೇಯುವುದೇ?

ನಿಮ್ಮ ಪತ್ರಗಳು

ಉತ್ತಮ ಶಿಕ್ಷಕ ಪ್ರಶಸ್ತಿಯ ಮಾನದಂಡವೇನು?

ಮಾನ್ಯರೆ,

ಪ್ರಾಥಮಿಕ ಶಾಲೆಯ ಇಪ್ಪತ್ತು ಹಾಗೂ ಪ್ರೌಢಶಾಲೆಯ ಹನ್ನೊಂದು ಮಂದಿ ಶಿಕ್ಷಕರಿಗೆ ಈ ಬಾರಿಯ ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ. ಪ್ರತಿವರ್ಷ ಶಿಕ್ಷಕರ ದಿನಾಚರಣೆಯ ಸಂದರ್ಭದಲ್ಲಿ ತಮ್ಮ ದುಡಿಮೆಯುದ್ದಕ್ಕೂ ಮಕ್ಕಳ ಹಾಗೂ ಶಾಲೆಯ ಶ್ರೇಯೋಭಿವೃದ್ಧಿಗೆ ಶ್ರಮಿಸಿದ ಶಿಕ್ಷಕರಿಗೆ ತಾಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಉತ್ತಮ ಶಿಕ್ಷಕ ಪ್ರಶಸ್ತಿಯನ್ನು ನೀಡಿ ಗೌರವಿಸುವುದು ಇಲಾಖೆಯ ಸಂಪ್ರದಾಯ. ಈ ರೀತಿಯ ಪ್ರಶಸ್ತಿಗಳು ಶಿಕ್ಷಕರ ಸಾಮರ್ಥ್ಯಕ್ಕೆ ಸಂದ ಗೌರವವಾಗಿದ್ದು ಇದರಿಂದ ಶಿಕ್ಷಕರ ಕಾರ್ಯದಕ್ಷತೆ ಹಾಗೂ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದಂತಾಗುತ್ತದೆ.

ಆದರೆ ಬೇಸರದ ಸಂಗತಿಯೆಂದರೆ ಪ್ರಸ್ತುತ ಶಿಕ್ಷಕರು ತಾವು ಪಡೆಯುವ ಪ್ರಶಸ್ತಿಗೆ ತಾವೇ ಅರ್ಜಿ ಸಲ್ಲಿಸಬೇಕಾದ ಅನಿವಾರ್ಯತೆ ಇದೆ. ಇದು ತಪ್ಪಬೇಕು. ಸ್ವಾಭಿಮಾನಿಯಾಗಿರುವ ಶಿಕ್ಷಕನು ತಾನೇ ಅರ್ಜಿ ಹಾಕಿ ತನಗೆ ಪ್ರಶಸ್ತಿ ಕೊಡಿ ಅಂತ ಕೇಳುವುದು ತರವಲ್ಲ. ಇಲಾಖೆಯ ಈ ಕ್ರಮ ಸಾಧುವಲ್ಲ. ಏಕೆಂದರೆ ಶಿಕ್ಷಕ ತನ್ನ ವೃತ್ತಿ ಬದುಕಿನಲ್ಲಿ ರೂಢಿಸಿಕೊಂಡು ಬಂದ ಪ್ರಾಮಾಣಿಕತೆ, ನಿಷ್ಠೆ ಹಾಗೂ ಕಾರ್ಯದಕ್ಷತೆಯನ್ನು ಶಿಕ್ಷಣ ಇಲಾಖೆಯೇ ಗುರುತಿಸಿ ಪ್ರಶಸ್ತಿ ನೀಡಿದರೆ ಉತ್ತಮ ಶಿಕ್ಷಕ ಪ್ರಶಸ್ತಿಯ ಮೌಲ್ಯ ಮತ್ತಷ್ಟು ಹೆಚ್ಚುತ್ತದೆ. ಅಲ್ಲದೇ ಎಷ್ಟೋ ಜನ ಶಿಕ್ಷಕರು ತಮಗೆ ಪ್ರಶಸ್ತಿ ಪಡೆಯಲು ಅರ್ಹತೆ ಇಲ್ಲದಿದ್ದರೂ ಉತ್ತಮ ಶಿಕ್ಷಕ ಪ್ರಶಸ್ತಿಗೆ ಅರ್ಜಿ ಸಲ್ಲಿಸಿ, ತಮಗೆ ಗೊತ್ತಿರುವ ಪ್ರಭಾವಿ ರಾಜಕಾರಣಿಗಳಿಂದ ಅಧಿಕಾರಿಗಳ ಮೇಲೆ ಒತ್ತಡ ಹಾಕಿ ಪ್ರಶಸ್ತಿ ಪಡೆಯುತ್ತಿರುವುದು ದುರ್ದೈವದ ಸಂಗತಿಯಾಗಿದೆ. ಇದರಿಂದ ನಿಷ್ಠಾವಂತ ಪ್ರಾಮಾಣಿಕ ಶಿಕ್ಷಕರಿಗೆ ಅನ್ಯಾಯವಾಗುತ್ತಿದ್ದು, ಯೋಗ್ಯರಲ್ಲದವರು ಕೂಡ ಪ್ರಶಸ್ತಿಗೆ ಪೈಪೋಟಿ ನಡೆಸುತ್ತಿರುವುದರಿಂದ ಪ್ರಶಸ್ತಿಯ ಮೌಲ್ಯವು ಕೂಡ ಅಪವಿತ್ರವಾಗುತ್ತಿದೆ. ಹೀಗಾಗಿ ಸರ್ಕಾರ ಇನ್ಮುಂದೆಯಾದರೂ ಪ್ರಸ್ತುತ ಇರುವ ಶಿಕ್ಷಕ ಪ್ರಶಸ್ತಿಯ ಆಯ್ಕೆಯ ಮಾನದಂಡವನ್ನು ಬದಲಿಸಿ ಸಭ್ಯ ಪ್ರಾಮಾಣಿಕ ಹಾಗೂ ಯೋಗ್ಯ ಶಿಕ್ಷಕರನ್ನಷ್ಟೇ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆ ಮಾಡಲಿ.

–ಹರಳಹಳ್ಳಿಪುಟ್ಟರಾಜು, ಪಾಂಡವಪುರ.

ನ್ಯಾಯಾಂಗದ ಘನತೆಯನ್ನು ಎತ್ತಿ ಹಿಡಿದ ನಡೆ

ಮಾನ್ಯರೆ,


ಇತ್ತೀಚೆಗೆ ಪೋಕ್ಸೋ ಕಾಯಿದೆ ಅಡಿ ಬಂಧನಕ್ಕೆ ಒಳಗಾಗಿ ವಿಚಾರಣೆ ಎದುರಿಸುತ್ತಿರುವ ಚಿತ್ರದುರ್ಗದ ಮುರುಘಾ ಮಠದ ಪೀಠಾಧ್ಯಕ್ಷರಾದ ಡಾ.ಮುರುಘಾ ಶರಣರ ಬಂಧನ ಹಾಗೂ ಅನಂತರದ ಬೆಳವಣಿಗೆಗಳ ಬಗ್ಗೆ ಮಾಧ್ಯಮಗಳಲ್ಲಿ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ನಾನಾ ರೀತಿಯ ಅಭಿಪ್ರಾಯಗಳು ಹಾಗೂ ಟೀಕೆ ಟಿಪ್ಪಣಿಗಳು ಹರಿದು ಬರುತ್ತಿವೆ. ಇದರ ಬಗ್ಗೆ ಕಾನೂನು ತನ್ನದೇ ಆದ ಕ್ರಮ ತೆಗೆದುಕೊಳ್ಳಲಿದೆ. ಈ ಪ್ರಕರಣದ ವಿಚಾರಣೆಯನ್ನು ನಡೆಸುತ್ತಿರುವ ಪೊಲೀಸರ ಮೇಲೆ ಸಾಕಷ್ಟು ಒತ್ತಡ ಮತ್ತು ರಾಜಕೀಯ ಪ್ರಭಾವ ಬರಬಹುದು. ಈ ಪ್ರಕರಣದ ವಿಚಾರಣೆ ನಡೆಸುತ್ತಿರುವ ಚಿತ್ರದುರ್ಗ ಎರಡನೆಯ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಕೋಮಲ ಅವರು ಅತ್ಯಂತ ನ್ಯಾಯಬದ್ಧ ಹಾಗೂ ಕಾನೂನಿನ ನಿಯಮಗಳಿಗೆ ಅನುಗುಣವಾಗಿ ವಿಚಾರಣೆ ನಡೆಸುತ್ತಿರುವುದು ಸ್ವಾಗತಾರ್ಹವಾಗಿದ್ದು, ನ್ಯಾಯಾಂಗದ ಘನತೆಯನ್ನು ಹೆಚ್ಚಿಸುವ ಕ್ರಮವಾಗಿದೆ. ಶ್ರೀಗಳ ಜಾಮೀನು ಅರ್ಜಿ ಸ್ವೀಕರಿಸಲು ಒಪ್ಪದ ನ್ಯಾಯಾಧೀಶರು ಶ್ರೀಗಳನ್ನು ಸೆಪ್ಟೆಂಬರ್ 5 ರವರೆಗೆ ಪೊಲೀಸರ ವಶಕ್ಕೆ ಒಪ್ಪಿಸಿ ಆದೇಶ ಮಾಡಿದ್ದಲ್ಲದೇ, ಜಾಮೀನು ಅರ್ಜಿಯನ್ನು ಪೊಲೀಸ್ ಕಸ್ಟಡಿ ಮುಗಿದ ನಂತರ, ಕೋರ್ಟಿನಲ್ಲಿ ಸಲ್ಲಿಸುವಂತೆ ಶ್ರೀಗಳ ಪರ ವಕೀಲರಿಗೆ ಸೂಚಿಸಿದರು.

ಶ್ರೀಗಳನ್ನು ಪೊಲೀಸರು ಆಸ್ಪತ್ರೆಗೆ ದಾಖಲಿಸಿದ ಬಗ್ಗೆ ಕೆರಳಿದ ನ್ಯಾಯಾಧೀಶರು, ನ್ಯಾಯಾಂಗ ಬಂಧನದಲ್ಲಿರುವ ಆರೋಪಿಯನ್ನು ತಮಗೆ ತಿಳಿಸದೇ ಹೇಗೆ ಆಸ್ಪತ್ರೆಗೆ ದಾಖಲಿಸಿದ್ದೀರಿ ಎಂದು ಪೊಲೀಸರನ್ನು ಪ್ರಶ್ನಿಸಿ, ಆರೋಪಿಯನ್ನು ತಕ್ಷಣ ತಮ್ಮಮುಂದೆ ಹಾಜರುಪಡಿಸಲು ಪೊಲೀಸರಿಗೆ ನಿರ್ದೇಶನ ನೀಡಿರುವುದು ಅವರ ಕರ್ತವ್ಯ ಬದ್ಧತೆ ಹಾಗೂ ನಿಷ್ಪಕ್ಷಪಾತ ನಡೆಗೆ ಹಿಡಿದ ಕನ್ನಡಿಯಾಗಿದೆ.

ಗೌರವಾನ್ವಿತ ಶ್ರೀಗಳ ಬಗ್ಗೆ ಅಪಾರ ಗೌರವವಿದೆ. ಆರೋಪಗಳು ನ್ಯಾಯಾಲಯದಲ್ಲಿ ರುಜುವಾತು ಆಗುವವರೆಗೆ ಅವರು ಅಪರಾಧಿಯಲ್ಲ, ಕೇವಲ ಆರೋಪಿ ಮಾತ್ರ. ಆದರೆ ದೇಶದ ಕಾನೂನು ಕಟ್ಟಲೆಗಳು ಪ್ರತಿಯೊಬ್ಬರಿಗೂ ಒಂದೇ ಆಗಿರಬೇಕು. ನ್ಯಾಯಾಂಗದ ಈ ಮೂಲ ತತ್ವವನ್ನು ಎತ್ತಿ ಹಿಡಿದು ನ್ಯಾಯಾಂಗದ ಘನತೆಯನ್ನು ಹೆಚ್ಚಿಸಿರುವ ನ್ಯಾಯಾಧೀಶರಾದ ಕೋಮಲ ಅವರಿಗೆ ಧನ್ಯವಾದಗಳು.

–ಡಾ.ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ಹಾರ್ಡ್ವಿಕ್ ಶಾಲೆಗೆ ದಸರಾ ದೀಪಾಲಂಕಾರ ಮಾಡಲಿ



ಮಾನ್ಯರೆ,

ಮೈಸೂರಿನ ಹಲವಾರು ಪಾರಂಪರಿಕ ಕಟ್ಟಡಗಳಲ್ಲಿ ಝಾನ್ಸಿ ರಾಣಿ ಲಕ್ಷ್ಮೀಬಾಯಿ ಮುಖ್ಯರಸ್ತೆಯಲ್ಲಿರುವ ಸುಪ್ರಸಿದ್ಧ ಒಂದೂವರೆ ಶತಮಾನ (168ವರ್ಷ)ಕಂಡಿರುವ ಹಾರ್ಡ್ವಿಕ್ ಪ್ರೌಢಶಾಲೆಯು ಒಂದು. ಚೌಕಾಕಾರ ಆವರಣದ ಈ ಕಟ್ಟಡ ನಿರಾಭರಣ ಸುಂದರ ಪಾರಂಪರಿಕ ಪ್ರತೀಕ. ಮದ್ರಾಸ್ ತಾರಸಿಯ ಮೂರು ಅಂತಸ್ತುಗಳ ಈ ಕಟ್ಟಡಕ್ಕೆ ಕಮಾನಿನ ದ್ವಾರ ಸ್ವಾಗತಿಸುತ್ತದೆ. ಈ ಬಾರಿಯ ದಸರಾ ದೀಪಾಲಂಕಾರದಲ್ಲಿ ಈ ಶಾಲೆಗೆ ದೀಪಾಲಂಕಾರ ವ್ಯವಸ್ಥೆ ಮಾಡುವುದರ ಮೂಲಕ ಈ ಶಾಲೆಯ ಅಂದವನ್ನು ಇನ್ನಷ್ಟು ಹೆಚ್ಚಿಸಬೇಕೆಂದು ಈ ಶಾಲೆಯ ಲಕ್ಷಾಂತರ ಹಳೆಯ ವಿದ್ಯಾರ್ಥಿಗಳ ಪರವಾಗಿ ಮನವಿ.

–ಅಹಲ್ಯ ಸಿ.ನಾ.ಚಂದ್ರ, ಜನತಾ ನಗರ ಮೈಸೂರು


ದೇವರಾಜ ಅರಸು, ಸಂತೇಪೇಟೆ ರಸ್ತೆ ಶೀಘ್ರ ದುರಸ್ತಿಗೊಳಿಸಿ

ಮಾನ್ಯರೆ,

ಮೈಸೂರು ನಗರದ ಹೃದಯ ಭಾಗವಾದ ದೇವರಾಜ ಅರಸು ರಸ್ತೆ ಹಾಗೂ ಸಂತೇಪೇಟೆಗೆ ಹೋಗುವ ರಸ್ತೆ ಕೂಡುವ ಸ್ಥಳ ಸುಮಾರು ಎಂಟು ತಿಂಗಳಿಂದ ನಡೆಯುತ್ತಿರುವ ಯುಜಿಡಿ ಪೈಪ್ ಅಳವಡಿಸುವ ಕಾಮಗಾರಿಯಿಂದ ಮಳೆ ನೀರು ನಿಂತು ಕೆರೆಯಂತಾಗಿದೆ. ದಯಮಾಡಿ ಸಂಬಂಧಪಟ್ಟವರು ತಕ್ಷಣ ದುರಸ್ತಿ ಮಾಡಿ ವಾಹನ ಸಂಚಾರ ಸುಗಮವಾಗುವಂತೆ ಮಾಡಿಕೊಡಬೇಕೆಂದು ವರ್ತಕರು ಹಾಗೂ ಸಾರ್ವಜನಿಕರು ಮನವಿ ಮಾಡಿದ್ದಾರೆ.

– ವರ್ತಕರು, ಡಿ. ದೇವರಾಜ ಅರಸು ರಸ್ತೆ.

ಪರಿಶುದ್ಧ 'ವಿದ್ಯೆ' ನೆಲೆ ಬೇಕಿದೆ; ಹೊಸ ವಿಶ್ವವಿದ್ಯಾಲಯಗಳಲ್ಲ...





–ಚಿದ್ರೂಪ ಅಂತಃಕರಣ.

ಮನೆ ಮನೆಗೂ ವಿಶ್ವವಿದ್ಯಾಲಯಗಳನ್ನು ಹತ್ತಿರವಾಗಿಸಿ ಶಿಕ್ಷಣ ನೀಡಬೇಕೆಂದು ಸರ್ಕಾರ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ನಿಟ್ಟಿನಲ್ಲಿ ಪ್ರತಿ ವಿಶ್ವವಿದ್ಯಾನಿಲಯಕ್ಕೆ ಎರಡು ಕೋಟಿಯ ಯೋಜನೆಯನ್ನು ವ್ಯಕ್ತಪಡಿಸಿದೆ. ವಿಶ್ವವಿದ್ಯಾಲಯಗಳು ಅದರದ್ದೇ ಆದ ಮಹತ್ತರವಾದ ಸ್ವರೂಪವನ್ನು ಹೊಂದಿವೆ ಎಂಬುದನ್ನು ಸರ್ಕಾರ ಮೊದಲು ಆಲೋಚಿಸಿ ತದನಂದರ ಯೋಜನೆಗಳನ್ನು ಕಾರ್ಯರೂಪಕ್ಕೆ ತರಬೇಕೋ ಬೇಡವೋ ಎಂದು ನಿರ್ಧರಿಸುವುದು ಒಳಿತು. ಎರಡು ಕೋಟಿ ಯೋಜನೆಯಲ್ಲಿ ಒಂದು ವಿಶ್ವವಿದ್ಯಾಲಯವನ್ನು ಸ್ಥಾಪಿಸುವುದು ಅಸಾಧ್ಯ. ಶತಮಾನೋತ್ಸವ ತುಂಬಿದ ಮತ್ತು 'ಎ' ಗ್ರೇಡ್ ತಲುಪಿದ ವಿಶ್ವವಿದ್ಯಾಲಯಗಳಲ್ಲೇ ವಿದ್ವತ್ ಬೋಧಕ ಪರಿವಾರದ ಕೊರತೆಯಲ್ಲಿ ಶಿಕ್ಷಣವು ದಿನೇ ದಿನೆ ನೆಲಕಚ್ಚುತ್ತಿದೆ. ಅಲ್ಲಿನ ಬೋಧಕ ಮತ್ತು ಬೋಧಕೇತರರಿಗೆ ಸರಿಯಾದ ಸಮಯಕ್ಕೆ ಸಂಬಳ ನೀಡಲಾಗದೆ ವಿಳಂಬ ಚಟುವಟಿಕೆಗಳು ಹೆಚ್ಚಾಗಿವೆ. ಪೂರ್ಣ ಕಾಲಿಕ ಉದ್ಯೋಗಿಗಳಿಗಿಂತ ಅರೆಕಾಲಿಕ ಉದ್ಯೋಗಿಗಳೇ ಜೇನುನೊಣಗಳಂತೆ ತುಂಬಿದ್ದಾರೆ.

ವಿಶ್ವವಿದ್ಯಾಲಯಗಳ ಅಧ್ಯಯನ ವಿಭಾಗಗಳಲ್ಲಿ ಮತ್ತು ಅದರ ಜ್ಞಾನ ಶಾಖೆಗಳ ಅಧ್ಯಯನ ವಿಭಾಗಗಳಲ್ಲಿ ಈಗಾಗಲೇ ವಿದ್ಯಾರ್ಥಿಗಳ ಪ್ರವೇಶಾತಿ ಕಡಿಮೆಗೊಂಡು ಕೆಲವು ಅಧ್ಯಯನ ವಿಭಾಗಗಳು ಕೆಲಸವಿಲ್ಲದೆ ಕಾಲಕಳೆಯುತ್ತಿವೆ. ಇನ್ನು ಈ ಚದುರಿದ ವಿದ್ಯಾರ್ಥಿ ಸಮುದಾಯಗಳನ್ನು ಈಗಿರುವ ವಿಶ್ವವಿದ್ಯಾಲಯಗಳತ್ತ ಸೆಳೆಯುವಲ್ಲಿ ಹರಸಾಹಸವೇ ನಡೆಯುತ್ತಿದೆ. ಹೀಗಿರುವಾಗ ಹೊಸದಾಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿ ಕೆಲಸವಿಲ್ಲದೆ ಖಾಲಿ ಹರಟೆ ಹೊಡೆಯುವ ಸ್ಥಿತಿಗೆ ಹೋಗುವುದು ಎಷ್ಟು ಸರಿ.

ಈ ಕೊರತೆಗಳಲ್ಲೇ ನಲುಗುತ್ತಿರುವ ಕೆಲವು ವಿಶ್ವವಿದ್ಯಾಲಯಗಳು ಭ್ರಷ್ಟಾಚಾರದ ಹಾದಿ ಹಿಡಿದು ಹಣಕ್ಕಾಗಿ ಸರ್ಟಿಫಿಕೇಟ್‌ಗಳನ್ನು ಮಾರಿಕೊಂಡ ಉದಾಹರಣೆಗಳೂ ಬಹಳಷ್ಟಿದೆ. ಈ ನಡುವೆ 'ರಾಜಕೀಯ'ದ ವೈರಸ್ ವಿಶ್ವ ವಿದ್ಯಾಲಯಗಳನ್ನು ಹೊಕ್ಕಿ ವಿದ್ಯಾರ್ಥಿಗಳ ಮನಸ್ಥಿತಿಗಳನ್ನು ಕೆಡಿಸಿ ರಾಜಕೀಯ ದಾಳವಾಗಿ ಬಳಸಿಕೊಳ್ಳುತ್ತಿರುವುದು ಸದ್ದಿಲ್ಲದೇ ನಡೆಯುತ್ತಿದೆ. ಯಾವಾಗ ರಾಜಕೀಯ ಶಕ್ತಿಗಳು ವಿಶ್ವವಿದ್ಯಾಲಯದ ಆಡಳಿತದಲ್ಲಿ ಕೈ ಹಾಕಿದವೋ ಅಲ್ಲಿಂದ ವಿಶ್ವವಿದ್ಯಾಲಯಗಳ ಶೈಕ್ಷಣಿಕ ಮಟ್ಟ ಕುಸಿದಿದೆ. ಇನ್ನು ಕುಲಪತಿಗಳ ಸ್ಥಿತಿಯೇ ಹೇಳತೀರದು; ಅವರು ವಕೀಲಿ ಬಾಜಿಯಲ್ಲಿ ಮಂತ್ರಿ ಮಹೋದಯರ ಎದುರಿಗೆ ಹಲ್ಲುಗಿಂಜುತ್ತ, ಅವರು ಹೇಳಿದ್ದಕ್ಕೆ ತಲೆಯಾಡಿಸುತ್ತ ಕೆಲಸ ಮಾಡುವ ಸ್ಥಿತಿ ನಿರ್ಮಾಣವಾಗಿದೆ. ಬೆನ್ನೆಲುಬಿಲ್ಲದ ಕುಲಪತಿಗಳು, ವಿದ್ವತ್ತಿಲ್ಲದ ಜ್ಞಾನ ಶಾಖೆಗಳು, ದಿಕ್ಕು ದೆಸೆಯಿಲ್ಲದ ವಿದ್ಯಾರ್ಥಿ ಸಮುದಾಯ ಹೇಗೆ ಸಮಾಜಮುಖಿಯಾಗಲು ಸಾಧ್ಯ. ವಿಶ್ವವಿದ್ಯಾಲಯದಲ್ಲಿ ಸ್ವಾಯತ್ತತೆ ಇಲ್ಲದೇ ಹೋದರೆ ಅದರ ಅಸ್ತಿತ್ವದಲ್ಲಿ ಅರ್ಥವೇ ಇಲ್ಲ. ಈಗ ಆರಂಭವಾಗಿರುವ ವಿಶ್ವವಿದ್ಯಾಲಯಗಳು ವಿದ್ಯೆಯ ಮಹತ್ವವನ್ನು ಇನ್ನಷ್ಟು ತಳಕಾಣಿಸುವ ಕೆಲಸ ಮಾಡಬಹುದೇ ಹೊರತು ವಿದ್ಯೆಯ ಶ್ರೇಷ್ಠತೆಯನ್ನು, ಸಮಾಜಮುಖಿಯನ್ನು, "ಸರ್ವೇ ಜನಾ ಸುಖಿನಾ ಭವತು" ಎಂಬ ಧ್ಯೇಯವನ್ನು ಎತ್ತಿಹಿಡಿಯುತ್ತವೆ ಎಂಬುದಕ್ಕೆ ಯಾವ ಭರವಸೆಯೂ ಇಲ್ಲ.

> ಕೇವಲ ಸರ್ಕಾರಿ ಶಾಲೆಗಳನ್ನೇ ಉಳಿಸಿಕೊಳ್ಳದ ಸರ್ಕಾರ ವಿಶ್ವವಿದ್ಯಾಲಯಗಳನ್ನು ಉಳಿಸಿಕೊಳ್ಳುತ್ತದೆ ಎನ್ನುವುದರಲ್ಲಿ ಸಾರ್ವಜನಿಕರಿಗೆ ಯಾವುದೇ ಭರವಸೆಯಿಲ್ಲ. ಸ್ಥಾಪನೆಯಾಗಲಿರುವ ವಿಶ್ವವಿದ್ಯಾಲಯಗಳು ಮೂಲ ಸೌಕರ್ಯಗಳ ಕೊರತೆಯಿಂದಲೇ ನರಳುತ್ತವೆ. ದಿಢೀರನೇ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಹುನ್ನಾರ ಏನಿರಬಹುದೆಂದು ವರ್ತಮಾನದ ಗ್ರಹಿಕೆ ಉಳ್ಳವರಿಗೆ ಸರಿಯಾಗಿ ತಿಳಿದಿದೆ. ಸರ್ಕಾರದ ಕೆಲವು ಇಲಾಖೆಗಳ ನೇಮಕಾತಿಯಲ್ಲಾದ ಭ್ರಷ್ಟಾಚಾರ ಸದ್ಯದ ಜ್ವಲಂತ ಉದಾಹರಣೆಯೆಂದರೆ ತಪ್ಪಾಗಲಾರದು. ಈಗ ಈ ಪೈಕಿ ಸ್ಥಾಪಿಸಲು ಹೊರಟಿರುವ ವಿಶ್ವವಿದ್ಯಾಲಯಗಳ ಉದ್ಯೋಗಗಳ ಆಯ್ಕೆಯಲ್ಲೂ ಭ್ರಷ್ಟಾಚಾರ ಜರುಗುತ್ತದೆ ಎಂಬುವುದೇ ಸತ್ಯ.

ಕೇವಲ ಸರ್ಕಾರಿ ಶಾಲೆಗಳನ್ನೇ ಉಳಿಸಿಕೊಳ್ಳದ ಸರ್ಕಾರ ವಿಶ್ವವಿದ್ಯಾಲಯಗಳನ್ನು ಉಳಿಸಿಕೊಳ್ಳುತ್ತದೆ ಎನ್ನುವುದರಲ್ಲಿ ಸಾರ್ವಜನಿಕರಿಗೆ ಯಾವುದೇ ಭರವಸೆಯಿಲ್ಲ. ಸ್ಥಾಪನೆಯಾಗಲಿರುವ ವಿಶ್ವವಿದ್ಯಾಲಯಗಳು ಮೂಲ ಸೌಕರ್ಯಗಳ ಕೊರತೆಯಿಂದಲೇ ನರಳುತ್ತವೆ. ದಿಢೀರನೇ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಹುನ್ನಾರ ಏನಿರಬಹುದೆಂದು ವರ್ತಮಾನದ ಗ್ರಹಿಕೆ ಉಳ್ಳವರಿಗೆ ಸರಿಯಾಗಿ ತಿಳಿದಿದೆ. ಸರ್ಕಾರದ ಕೆಲವು ಇಲಾಖೆಗಳ ನೇಮಕಾತಿಯಲ್ಲಾದ ಭ್ರಷ್ಟಾಚಾರ ಸದ್ಯದ ಜ್ವಲಂತ ಉದಾಹರಣೆಯೆಂದರೆ ತಪ್ಪಾಗಲಾರದು. ಈಗ ಈ ಪೈಕಿ ಸ್ಥಾಪಿಸಲು ಹೊರಟಿರುವ ವಿಶ್ವವಿದ್ಯಾಲಯಗಳ ಉದ್ಯೋಗಗಳ ಆಯ್ಕೆಯಲ್ಲೂ ಭ್ರಷ್ಟಾಚಾರ ಜರುಗುತ್ತದೆ ಎಂಬುವುದೇ ಸತ್ಯ. ಹಲವು ಒಳಿತಿನ ಯೋಜನೆಗಳು ಸರ್ಕಾರದಿಂದ ಸಾಲು ಸಾಲಾಗಿ ಬರುತ್ತಿವೆಯಾದರೂ ಅದರಲ್ಲಿ ಭಾಗಷಃ ಹೆಚ್ಚಿನ ಋಣಾತ್ಮಕ ಪ್ರತಿಫಲಗಳೇ ಸಿಕ್ಕಿವೆ. ಈ ಮಾದರಿಯಲ್ಲಿ ವಿಶ್ವವಿದ್ಯಾಲಯಗಳು ಸ್ಥಾಪನೆಯಾಗಿ ಕಾರ್ಯರೂಪಕ್ಕೆ ಬಂದಂತಹ ಕೆಲವೇ ವರ್ಷಗಳಲ್ಲಿ ದಿವಾಳಿತನವನ್ನು ಹೊಂದಿದರೆ ಆಶ್ಚರ್ಯವಿಲ್ಲ.

ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳಿಗೆ ಒಂದು ಕಿವಿ ಮಾತು; ರಾಜಕೀಯವಾಗಿ ಬೆಳೆಯಲು ವಿಶ್ವವಿದ್ಯಾಲಯಗಳು ವೇದಿಕೆಗಳಲ್ಲ. ವಿಜ್ಞಾನಿಯಾಗಿ, ತತ್ವಜ್ಞಾನಿಯಾಗಿ, ರಾಜಕೀಯ ತಿಳಿವಳಿಕೆವುಳ್ಳವನಾಗಿ, ಸಾಹಿತಿಯಾಗಿ, ಉತ್ತಮ ಬೋಧಕನಾಗಿ ಹಾಗೂ ಯಾವುದೇ ಜ್ಞಾನವನ್ನು ಹೊಂದಿದರೂ ಅದರಲ್ಲಿ ಕೊನೆಯ ಪಕ್ಷ, ಶಿಕ್ಷಣದ ಮೂಲ ಉದ್ದೇಶ ಒಬ್ಬ ಮನುಷ್ಯನಾಗಿ ಬದುಕಲಷ್ಟೇ ಎಂಬುದನ್ನು ಅರಿಯಬೇಕು. ಅದನ್ನು ಬಿಟ್ಟು ಧರ್ಮಾಂಧರಾಗಿ, ಜಾತೀಭೂತಗಳಾಗಿ, ರಾಜಕೀಯ ದಾಳಗಳಾಗಿ ಗುಂಪುಗಳನ್ನು ಕಟ್ಟಿಕೊಂಡು ವಿದ್ಯಾರ್ಥಿ ಸಂಘಗಳ ಹೆಸರಿನಲ್ಲಿ ಸಂಘರ್ಷಗಳಲ್ಲಿ ಮುಖಾಮುಖಿ ಬೀಳುವುದಕ್ಕಲ್ಲ. ವಿಶ್ವವಿದ್ಯಾಲಯಗಳಲ್ಲಿ ಲೇಖನಿ ಮತ್ತು ಪುಸ್ತಕಗಳು ಸದ್ದು ಮಾಡಬೇಕೇ ವಿನಃ ಕತ್ತಿ ಗುರಾಣಿಗಳಲ್ಲ, ಜಾತಿ ಧ್ವಜಗಳಲ್ಲ, ಪಕ್ಷದ ಧ್ವಜಗಳಲ್ಲ, ರಾಜಕೀಯ ಘೋಷಣೆಗಳಲ್ಲ, ನೀವೂ ಏನೇ ಶೈಕ್ಷಣಿಕ ಚಟುವಟಿಕೆಗಳ ಹೊರತಾಗಿ ಪಾಲ್ಗೊಂಡರೂ ಅದು ವಿಶ್ವವಿದ್ಯಾಲಯಗಳಿಂದ ಹೊರಬಂದ ಮೇಲೆ ಎಂಬುದು ತಿಳಿದಿರಬೇಕು. ಆದರೆ ಈ ತಿಳಿವಳಿಕೆಗಳೇ ಇಲ್ಲದ ವಿದ್ಯಾರ್ಥಿಗಳು ವಿಶ್ವವಿದ್ಯಾಲಯಗಳಲ್ಲಿ ತಯಾರಾಗುತ್ತಿದ್ದಾರೆ. ವಿದ್ಯೆ ಕಲಿಯಲಿರುವ ಸ್ಥಳ ಮೋಜು ಮನರಂಜನೆಯ ತಾಣವಾಗಿ ಬದಲಾಗಿದೆ. ನೈತಿಕತೆಯ ಸಮಾಧಿಯ ಮೇಲೆ ಭವಿಷ್ಯ ಕಾಣಲೊರಟಿರುವ ವಿದ್ಯಾರ್ಥಿ ಸಮುದಾಯದ ಪರಿಸ್ಥಿತಿಯಲ್ಲಿ ವಿಶ್ವವಿದ್ಯಾಲಯಗಳ ಸ್ವರೂಪ ರೋಗಗ್ರಸ್ತವಾಗಿದೆ ಎಂಬುದೇ ವಾಸ್ತವಾಂಶ.

ಹೊಸ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಮುನ್ನ ಈ ರೋಗಗ್ರಸ್ತ ವಿಶ್ವವಿದ್ಯಾಲಯಗಳ ಸುಧಾರಣೆಗೆ ಸರ್ಕಾರ ಸಹಕಾರವಾಗಲಿ. ಇರುವ ವಿಶ್ವವಿದ್ಯಾಲಯಗಳಿಗೇ ಮೊದಲು ವಿದ್ವತ್ಪೂರ್ಣ ಬೋಧಕರನ್ನು ನೇಮಕಗೊಳಿಸಲು ಯೋಜಿಸಲಿ. ಸೂಕ್ತ ಪರೀಕ್ಷೆಗಳನ್ನು ನಡೆಸುವ ಮೂಲಕ ಅರೆಕಾಲಿಕ ಉದ್ಯೋಗಗಳನ್ನು ಕಡಿಮೆಗೊಳಿಸಿ, ಪೂರ್ಣಕಾಲಿಕ ಉದ್ಯೋಗಿಗಳನ್ನು ನೇಮಿಸಲು ಮಾರ್ಗದರ್ಶಿಸಲಿ. ಈಗಿರುವ ಉದ್ಯೋಗಿಗಳಿಗೇ ಸರಿಯಾದ ಸಮಯಕ್ಕೆ ವೇತನ ದೊರಕಿಸಿಕೊಟ್ಟು ಕಾರ್ಯ ಚಟುವಟಿಕೆಗಳೆಲ್ಲವೂ ಕ್ರಿಯಾಶೀಲ ವಾಗುವಂತೆ ಆರ್ಥಿಕ ಬೆಂಬಲವಾಗಲಿ. ಅದನ್ನು ಬಿಟ್ಟು ಸದ್ಯದ ಪರಿಸ್ಥಿತಿಯಲ್ಲಿ ವಿಶ್ವವಿದ್ಯಾಲಯಗಳ ಸ್ಥಾಪನೆ ಒಳಿತಲ್ಲ.



-ಮಂಜುನಾಥ ಬಿ.ಆರ್.
ದೂರವಾಣಿ ಸಂಖ್ಯೆ:– 8884684726
manjunathabr709@gmail.com.

ಆಹಾರವೇ ಔಷಧವಾದರೆ ಹೇಗೆ...!?



> ಆರೋಗ್ಯವನ್ನು ಕಾಪಾಡಿಕೊಳ್ಳಬೇಕಾದ್ದು ಪ್ರತಿಯೊಬ್ಬ ವ್ಯಕ್ತಿಯ ಆದ್ಯ ಕರ್ತವ್ಯ. ರೋಗಕ್ಕೆ ಚಿಕಿತ್ಸೆ ಪಡೆಯುವುದಕ್ಕಿಂತ ರೋಗ ಬಾರದಂತೆ ತಡೆಯುವುದು ಜಾಣತನ. ಅದೇ ರೀತಿ ಕೆಲವು ಕಾಯಿಲೆಗಳನ್ನು ಹೊರತು ಪಡಿಸಿ ಬಹುತೇಕ ಕಾಯಿಲೆಗಳಿಗೆ ನಾವು ತಿನ್ನುವ ಆಹಾರ ಹಾಗೂ ಜೀವನ ಶೈಲಿಯೇ ಮುಖ್ಯವಾಗಿದೆ. ಊಟ ಬಲ್ಲವನಿಗೆ ರೋಗವಿಲ್ಲ ಎಂಬ ಮಾತನ್ನು ನಾವು ಮರೆಯಬಾರದು.

ಎಲ್ಲಾ ವೃತ್ತಿಗಳಿಗಿಂತ ವೈದ್ಯಕೀಯ ವೃತ್ತಿ ಹೆಚ್ಚು ಮಹತ್ವಪೂರ್ಣವಾಗಿದೆ. ಏಕೆಂದರೆ ಅನಾರೋಗ್ಯ ಪೀಡಿತ ವ್ಯಕ್ತಿಯ ಆರೋಗ್ಯ ಸುಧಾರಣೆ ಹಾಗೂ ಕೆಲವೊಮ್ಮೆ ಸಾವಿನ ಅಂಚು ತಲುಪುವ ವ್ಯಕ್ತಿಯನ್ನು ಕೂಡ ಬದುಕಿಸಬಹುದಾದ ಚೈತನ್ಯ ವೈದ್ಯರದ್ದಾಗಿದೆ. ಆದ್ದರಿಂದಲೇ 'ವೈದ್ಯೋ ನಾರಾಯಣೋ ಹರಿ' ಎಂದು ಹೇಳಲಾಗುತ್ತದೆ. ಅಂದರೆ ವೈದ್ಯರು ನಾರಾಯಣನ ಸ್ವರೂಪವೆಂದು ಭಾವಿಸಲಾಗಿದೆ. ಆದರೆ ದಿನೇ ದಿನೆ ವೈದ್ಯಕೀಯ ವೃತ್ತಿ ವಾಣಿಜ್ಯೀಕರಣಗೊಳ್ಳುತ್ತಿರುವುದರಿಂದ ಹಾಗೂ ಕೆಲವು ವೈದ್ಯರು ದುರಾಸೆ ಪೀಡಿತರಾಗಿ ರೋಗಿಗಳನ್ನು ಹುರಿದು ಮುಕ್ಕುತ್ತಿರುವುದರಿಂದ ವೈದ್ಯರ ಬಗ್ಗೆ ಸಹಾ ಜನರಲ್ಲಿ ಸದ್ಭಾವನೆ ಕ್ರಮೇಣ ಮರೆಯಾಗುತ್ತಿರುವುದನ್ನು ಕಾಣಬಹುದಾಗಿದೆ.

ಕೆಲವು ವೈದ್ಯರು ತಮ್ಮ ವೃತ್ತಿಯನ್ನು ಹಣ ಮಾಡುವ ದಂಧೆಯನ್ನಾಗಿ ಪರಿವರ್ತಿಸುತ್ತಿರುವುದು ನೋವಿನ ಸಂಗತಿ. ಆದಾಗ್ಯೂ ಬಹುತೇಕ ವೈದ್ಯರು ತಮ್ಮ ಸೇವಾಪರತೆ ಹಾಗೂ ವೃತ್ತಿ ಧರ್ಮಕ್ಕೆ ಚ್ಯುತಿ ಬಾರದಂತೆ ಕಾರ್ಯ ನಿರ್ವಹಿಸುವ ಮೂಲಕ ತಮ್ಮ ವೃತ್ತಿಯ ಘನತೆಯನ್ನು ಎತ್ತಿ ಹಿಡಿಯುತ್ತಿರುವುದು ಸಂತಸದ ಸಂಗತಿ

ಕಳೆದ ಸುಮಾರು ಮೂರು ವರ್ಷಗಳ ಕಾಲದಿಂದ ಇಡೀ ವಿಶ್ವವನ್ನೇ ಭೀಕರವಾಗಿ ಕಾಡುತ್ತಿರುವ ಕೊರೊನಾ ಸೋಂಕು ಸಂಪೂರ್ಣವಾಗಿ ಮರೆಯಾಗಿಲ್ಲವಾಗಿದ್ದರೂ, ನಿಯಂತ್ರಣದಲ್ಲಿರುವುದು ಖುಷಿ ಪಡುವ ಸಂಗತಿ. ಹಾಗೆಯೇ ಕೊರೊನಾ ಲಸಿಕೆ ವಿತರಣೆಯಲ್ಲಿ ನಮ್ಮ ದೇಶ ದಾಖಲೆ ಮಾಡಿರುವುದು ಸಂತಸದ ಸಂಗತಿ. ನಾಲ್ಕನೇ ಅಲೆ ಆಗ ಬರುತ್ತದೆ ಈಗ ಬರುತ್ತದೆ ಎಂದು ಹೇಳಲಾಗುತ್ತಿದ್ದರೂ ಸದ್ಯ ನಮ್ಮ ದೇಶದಲ್ಲಿ ಇನ್ನೂ ಕಾಣಿಸಿಕೊಂಡಿಲ್ಲ. ಜನರು, ತಮ್ಮ ಜಾಗ್ರತೆಯಲ್ಲಿ ತಾವಿದ್ದು, ಕೊರೊನಾಗೆ ಸಂಬಂಧ ಪಟ್ಟ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸುವುದು ಒಳ್ಳೆಯದು. ಕೊರೊನಾ ಪೀಡಿತ ರೋಗಿಗಳಿಗೆ ತಮ್ಮ ಪ್ರಾಣದ ಹಂಗನ್ನು ತೊರೆದು ಸೇವೆ ಸಲ್ಲಿಸುತ್ತಿರುವ ಸಂದರ್ಭಗಳಲ್ಲಿ ಸೋಂಕಿಗೆ ಒಳಗಾಗಿ ಮೃತಪಟ್ಟ ವೈದ್ಯರು ಹಾಗೂ ನರ್ಸಿಂಗ್ ಸೇರಿದಂತೆ ಇನ್ನಿತರ ವೈದ್ಯಕೀಯ ಸಿಬ್ಬಂದಿಗಳ ಸೇವೆ ನಿಜಕ್ಕೂ ಅವಿಸ್ಮರಣೀಯ.

ತಮ್ಮ ವೈಯಕ್ತಿಕ ತಾಪತ್ರಯಗಳನ್ನು ಬದಿಗೆ ಸರಿಸಿ; ಗ್ರಾಮೀಣ ಪ್ರದೇಶಗಳಲ್ಲಿ ರೋಗಿಗಳಿಗೆ ಉಚಿತ ಪರೀಕ್ಷೆ ಹಾಗೂ ಚಿಕಿತ್ಸೆ ನೀಡುವ ಅದೆಷ್ಟೋ ವೈದ್ಯರು ಕಾಣಸಿಗುತ್ತಾರೆ. ಮೈಸೂರಿನ ವೈದ್ಯ ದಿವಂಗತ ಡಾ. ಸತೀಶ್ ರೈ ಬಡವರ ಬಂಧುವಾಗಿದ್ದರು. ಬಡವರಿಗೆ ಅವರು ಸಾಂಕೇತಿಕವಾಗಿ ಎರಡು ರೂಪಾಯಿ ತೆಗೆದುಕೊಂಡು ಉಚಿತ ಚಿಕಿತ್ಸೆ ನೀಡುತ್ತಿದ್ದರು. ಅವರನ್ನು ಎರಡು ರೂಪಾಯಿ ಡಾಕ್ಟರ್ ಎಂದೇ ಕರೆಯಲಾಗುತ್ತಿತ್ತು. ಮಂಡ್ಯ ಜಿಲ್ಲೆಯ ಶಂಕರೇಗೌಡರು ಎಂಬ ವೈದ್ಯ ಕೂಡ ಅತ್ಯಂತ ಕಡಿಮೆ ವೆಚ್ಚದಲ್ಲಿ ಅಂದರೆ ಐದು ರೂಪಾಯಿಗಳ ಅತ್ಯಲ್ಪ ಕಡಿಮೆ ಶುಲ್ಕವನ್ನು ಸಾಂಕೇತಿಕವಾಗಿ ಪಡೆದು ರೋಗಿಗಳಿಗೆ ಸಲಹೆ ಮತ್ತು ಚಿಕಿತ್ಸೆ ನೀಡುತ್ತಿದ್ದರು. ಅವರನ್ನು ಐದು ರೂಪಾಯಿ ಡಾಕ್ಟರ್ ಎಂದೇ ಕರೆಯಲಾಗುತ್ತದೆ, ಇತ್ತೀಚೆಗೆ ಅವರೇ ಹೃದಯಾಘಾತಕ್ಕೆ ಒಳಗಾಗಿದ್ದರು. ಈಗ ಚೇತರಿಸಿಕೊಂಡು ತಮ್ಮ ಕಾಯಕ ಮುಂದುವರೆಸಿದ್ದಾರೆ. ಈ ರೀತಿಯ ಸೇವಾ ಮನೋಭಾವ ಹೊಂದಿರುವ ವೈದ್ಯರು ದೇಶದ ಉದ್ದಗಲಕ್ಕೂ ಅಲ್ಲಲ್ಲಿ ಕಂಡು ಬರುತ್ತಾರೆ. ವೃತ್ತಿಪರ ವೈದ್ಯರ ಜೊತೆ ಜೊತೆಗೆ ಕೆಲವು ನಾಟಿ ವೈದ್ಯರು ಕೂಡ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆ. ಆದರೆ ಇವರ ಮಧ್ಯೆ ನಕಲಿ ವೈದ್ಯರೂ ಕೂಡ ಸೇವಾ ನಿರತರಾಗಿದ್ದು ಇಂತಹ ನಕಲಿ ವೈದ್ಯರಿಂದ ರೋಗಿಗಳು ದೂರವಿರುವುದು ಒಳ್ಳೆಯದು. ಇದರ ಜೊತೆ ಜೊತೆಗೆ, ಸ್ವಯಂ ವೈದ್ಯ ಮಾಡಿಕೊಳ್ಳುವ ಹಲವಾರು ಜನರನ್ನು ನಾವು ಕಾಣುತ್ತೇವೆ. ಸ್ವಯಂ ವೈದ್ಯಕ್ಕಿಂತ ಅಪಾಯಕಾರಿ ಯಾವುದೂ ಇಲ್ಲವೆಂದು ಹೇಳಬಹುದು. ಸ್ವಯಂ ವೈದ್ಯ ಹೀಗೆ ಬಂದು ಹಾಗೇ ಹೋಗುವ ಸಣ್ಣಪುಟ್ಟ ರೋಗಗಳಿಗೆ ಸರಿಯೆನಿಸಬಹುದು. ಆದರೆ ಗಂಭೀರ ಸ್ವರೂಪದ ಹಾಗೂ ಮಾರಣಾಂತಿಕ ರೋಗಗಳಿಗೂ ಇದನ್ನೇ ಅನುಸರಿಸಿದರೆ ಅಪಾಯ ಕಟ್ಟಿಟ್ಟಬುತ್ತಿ. ಕೆಲವರು ಮೆಡಿಕಲ್ ಷಾಪ್‌ಗಳಿಗೆ ಹೋಗಿ ತಮಗೆ ಇಷ್ಟ ಬಂದ ರೀತಿಯ ಅಥವಾ ಹಿಂದೆ ಯಾವಾಗಲೋ ವೈದ್ಯರು ಸೂಚಿಸಿದ್ದ ಹಳೆಯ ಔಷಧಗಳನ್ನು ಪಡೆಯುವುದು ಸರ್ವೇ ಸಾಮಾನ್ಯವಾಗಿದೆ. ಔಷಧಿ ಅಂಗಡಿಯವರು ವೈದ್ಯರ ಸಲಹಾ ಚೀಟಿ ಇಲ್ಲದೇ ಕೆಲವು ಔಷಧಿಗಳನ್ನು ನೀಡಬಾರದು. ಇದನ್ನು ಕೆಲವು ಪ್ರಮುಖ ವೈದ್ಯಕೀಯ ಕಂಪನಿಯವರು ಪಾಲಿಸುತ್ತಿರುವುದು ಸಮಾಧಾನಕರ ಅಂಶ. ಆದರೆ ಇಲ್ಲಿ ಗಮನಿಸಬೇಕಾದ ಬಹು ಮುಖ್ಯ ಅಂಶ ಎಂದರೆ ಓರ್ವ ನೋಂದಾಯಿತ ಹಾಗೂ ಪರಿಣಿತ ವೈದ್ಯರು, ರೋಗಿಯನ್ನು ಪರೀಕ್ಷಿಸಿದ್ದಾರೆಯೇ ಎಂಬುದು. ಕೆಲವು ಸಂದರ್ಭಗಳಲ್ಲಿ ಆಸ್ಪತ್ರೆಗಳಿಗೆ ಹಾಗೂ ಖಾಸಗಿ ಕ್ಲಿನಿಕ್‌ಗಳಿಗೆ ಭೇಟಿ ನೀಡುವುದು ಕಷ್ಟವೆನ್ನಿಸಬಹುದು. ಇದಕ್ಕೆಲ್ಲಾ ಪರಿಹಾರ ಇದ್ದೇ ಇರುತ್ತದೆ. ಆದರೆ, ದುರಂತದ ವಿಚಾರ ಎಂದರೆ, ಎಷ್ಟೋ ರೋಗಿಗಳು ತಾವು ವೈದ್ಯರಿಗಿಂತ ಹೆಚ್ಚಿಗೆ ತಿಳಿದುಕೊಂಡಿದ್ದೇವೆ ಎಂಬ ಬಿಲ್ಡಪ್ ಕೊಡುತ್ತಾರೆ.

ಕೆಲವರು ಇಂಟರ್‌ನೆಟ್‌ನಲ್ಲಿ ಗೂಗಲ್ ಸರ್ಚ್‌ಗೆ ಹೋಗಿ ಅದರಲ್ಲಿ ಸೂಚಿಸುವ ವೈದ್ಯಕೀಯ ಸಲಹೆಯನ್ನು ಅನುಸರಿಸುವುದನ್ನು ಕಾಣಬಹುದು. ಹೀಗೆಲ್ಲಾ ಮಾಡುವುದಾದರೇ ವೈದ್ಯರು ಮತ್ತು ಆಸ್ಪತ್ರೆಗಳು ಇರುವುದಾದರೂ ಏತಕ್ಕೆ?

ಮನುಷ್ಯನ ಜೀವನ ಶೈಲಿ ಬದಲಾಗುತ್ತಿರುವಂತೆಯೇ ಹೊಸ ಹೊಸ ಕಾಯಿಲೆಗಳು ಹುಟ್ಟಿಕೊಳ್ಳುತ್ತಿವೆ. ನಾವು ಎಷ್ಟರ ಮಟ್ಟಿಗೆ ತಿನ್ನುವ ಆಹಾರಗಳಲ್ಲಿ ಶಿಸ್ತನ್ನು ಪಾಲಿಸುತ್ತೇವೆಯೋ ಅಷ್ಟರಮಟ್ಟಿಗೆ ನಮ್ಮ ಆರೋಗ್ಯ ಚೆನ್ನಾಗಿರುತ್ತದೆ. ಇತ್ತೀಚಿನ ವರ್ಷಗಳಲ್ಲಿ, ಮಕ್ಕಳು, ಯುವಕರು ಸೇರಿದಂತೆ ಅನೇಕರು ಫಾಸ್ಟ್‌ಫುಡ್ ಮತ್ತು ಜಂಕ್‌ಫುಡ್‌ಗಳಿಗೆ ಮಾರುಹೋಗುತ್ತಿದ್ದಾರೆ. ನಮ್ಮ ಆರೋಗ್ಯ ಕೆಡಲು ಇದು ಸಹ ಒಂದು ಕಾರಣವೆಂದು ಹೇಳಬಹುದು. ಗ್ರಾಮೀಣ ಭಾಗದ ಜನರು ಮೌಢ್ಯಕ್ಕೆ ಶರಣಾಗಿ ಅಸಂಪ್ರದಾಯಿಕ ಚಿಕಿತ್ಸೆಗೆ ಶರಣಾಗಿ ತಮ್ಮ ಆರೋಗ್ಯವನ್ನು ಮತ್ತಷ್ಟು ಹಾಳು ಮಾಡಿಕೊಳ್ಳುತ್ತಿರುವುದನ್ನು ಸಹ ಕಾಣಬಹುದು. ಹೃದ್ರೋಗ; ಕ್ಯಾನ್ಸರ್ ಮುಂತಾದ ಭೀಕರ ಕಾಯಿಲೆಗಳಿಗೆ ಲಕ್ಷಾಂತರ ರೂಪಾಯಿ ಖರ್ಚು ಮಾಡಬೇಕಾಗುತ್ತದೆ. ಆದರೆ ಕೇಂದ್ರ ಸರ್ಕಾರ ಹಾಗೂ ಕೆಲವು ರಾಜ್ಯ ಸರ್ಕಾರಗಳು ಹಲವಾರು ಮಹತ್ವಪೂರ್ಣ ಆರೋಗ್ಯ ವಿಮೆ ಯೋಜನೆಗಳ ಮೂಲಕ ಇಂತಹ ಕಾಯಿಲೆಗಳ ಚಿಕಿತ್ಸಾ ವೆಚ್ಚವನ್ನು ಸಾಕಷ್ಟು ಕಡಿಮೆ ಮಾಡಿದೆ. ಕೇಂದ್ರ ಸರ್ಕಾರ ಕೆಲವು ವರ್ಷಗಳ ಹಿಂದೆ ಆರಂಭಿಸಿರುವ ಜನೌಷಧ ಅಂಗಡಿಗಳಲ್ಲಿ ರೋಗಿಗಳಿಗೆ ಕಡಿಮೆ ದರದಲ್ಲಿ ಔಷಧ ನೀಡಲಾಗುತ್ತಿರುವುದು ಸಮಾಧಾನಕರ ಸಂಗತಿ.

ಆರೋಗ್ಯ ಕ್ಷೇತ್ರದಲ್ಲಿ ಇಂದು ಕ್ರಾಂತಿಕಾರಕ ಬದಲಾವಣೆಗಳಾಗುತ್ತಿದ್ದು ವಿಶ್ವ ಆರೋಗ್ಯ ಸಂಸ್ಥೆಯ ಅನೇಕ ಅಂಗ ಸಂಸ್ಥೆಗಳ ಪ್ರಾಯೋಜಕತ್ವ ದಲ್ಲಿ ಅನೇಕ ದೇಶಗಳಲ್ಲಿ ವೈವಿಧ್ಯಮಯ ಆರೋಗ್ಯ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ. ಆರೋಗ್ಯ ವನ್ನು ಕಾಪಾಡಿಕೊಳ್ಳಬೇಕಾದ್ದು ಪ್ರತಿಯೊಬ್ಬ ವ್ಯಕ್ತಿಯ ಆದ್ಯ ಕರ್ತವ್ಯ ರೋಗಕ್ಕೆ ಚಿಕಿತ್ಸೆ ಪಡೆಯುವುದಕ್ಕಿಂತ ರೋಗ ಬಾರದಂತೆ ತಡೆಯುವುದು ಜಾಣತನ. ಅದೇ ರೀತಿ ಕೆಲವು ಕಾಯಿಲೆಗಳನ್ನು ಹೊರತುಪಡಿಸಿ ಬಹುತೇಕ ಕಾಯಿಲೆಗಳಿಗೆ ನಾವು ತಿನ್ನುವ ಆಹಾರ ಹಾಗೂ ಜೀವನ ಶೈಲಿಯೇ ಮುಖ್ಯವಾಗಿದೆ. ಊಟ ಬಲ್ಲವನಿಗೆ ರೋಗವಿಲ್ಲ ಎಂಬ ಮಾತನ್ನು ನಾವು ಮರೆಯಬಾರದು.



– ಡಾ.ಕೆ.ವಿ.ವಾಸು,
ವಕೀಲರು ಮತ್ತು ನೋಟರಿ,
ಮೊ: 9341731661

62 ವರ್ಷಗಳ ಹಿಂದೆ ಕಳವಾಗಿದ್ದ ನಟರಾಜ ಮೂರ್ತಿ ಪತ್ತೆ!



ಚೆನ್ನೈ, ಸೆ.5– ತಮಿಳುನಾಡಿನ ದೇವಸ್ಥಾನವೊಂದರಿಂದ 62 ವರ್ಷಗಳ ಹಿಂದೆ ಕಳವು ಮಾಡಲಾಗಿದ್ದ ನಟರಾಜ ಮೂರ್ತಿ ಇದೀಗ ನ್ಯೂಯಾರ್ಕ್‌ನಲ್ಲಿ ಇರುವುದು ಪತ್ತೆಯಾಗಿದೆ. ಸಿಐಡಿ ಮೂರ್ತಿ ಘಟಕ ಈ ಮೂರ್ತಿಯ ಇರುವಿಕೆಯನ್ನು ಪತ್ತೆ ಮಾಡಿದೆ.

ತಮಿಳುನಾಡಿನ ತಂಜಾವೂರು ಜಿಲ್ಲೆಯ 2000 ವರ್ಷಗಳ ಹಿಂದಿನ ಅರುಳ್ ಮಿಗು ವೇದಪುರೀಶ್ವರ ದೇವಸ್ಥಾನದಿಂದ 62 ವರ್ಷಗಳ ಹಿಂದೆ ಈ ನಟರಾಜ ಮೂರ್ತಿಯನ್ನು ಕಳವು ಮಾಡಲಾಗಿತ್ತು. ಸೆ. 1ರಂದು ಗ್ರಾಮಸ್ಥರೊಬ್ಬರು ನೀಡಿದ್ದ ದೂರಿನ ಮೇರೆಗೆ ಸಿಐಡಿ ಐಡಲ್ ವಿಂಗ್ ತನಿಖೆ ನಡೆಸಿದಾಗ ದೇವಸ್ಥಾನದಲ್ಲಿ ಸದ್ಯ ಇರುವ ಮೂರ್ತಿ ನಕಲಿ ಎಂಬುದು ತಿಳಿದು ಬಂದಿತ್ತು ಆಗ ಅಸಲಿ ಮೂರ್ತಿ ಕಳುವಾಗಿದೆ ಎಂಬುದು ಗಮನಕ್ಕೆ ಬಂದು, ಈ ಕುರಿತು ಪುದುಚೇರಿಯ ಇಂಡೋ–ಫ್ರೆಂಚ್ ಇನ್‌ಸ್ಟಿಟ್ಯೂಟ್‌ನಿಂದ ಮೂರ್ತಿಯ ಮೂಲಚಿತ್ರ ವನ್ನು ಪಡೆದು ಹೆಚ್ಚಿನ ತನಿಖೆ ನಡೆಸಿದಾಗ ಅಸಲಿ ಮೂರ್ತಿ ನ್ಯೂಯಾರ್ಕ್‌ನ ಏಷ್ಯಾ ಸೊಸೈಟಿ ಮ್ಯೂಸಿಯಮ್‌ನಲ್ಲಿ ಇರುವುದು ತಿಳಿದುಬಂದಿತ್ತು.

ಮ್ಯೂಸಿಯಮ್‌ನ ವೆಬ್‌ಸೈಟ್ ಮೂಲಕ ಪರಿಣತರು ಮೂರ್ತಿಯನ್ನು ಪರಿಶೀಲಿಸಿದ್ದು, ಅದು ಅಸಲಿ ಎಂಬುದು ಸ್ಪಷ್ಟಪಡಿಸಿದ್ದಾರೆ. ಯುನೆಸ್ಕೊ ಒಪ್ಪಂದದ ಪ್ರಕಾರ ಆ ಮೂರ್ತಿಯನ್ನು ಮರಳಿ ಅದೇ ದೇವಸ್ಥಾನಕ್ಕೆ ತರುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಹಣ ಅಕ್ರಮ ವರ್ಗಾವಣೆ ಪ್ರಕರಣ: ಸೆ.19ರವರೆಗೆ ಸಂಜಯ್ ರಾವತ್‌ಗೆ ಜೈಲೇ ಗತಿ



ಮುಂಬೈ, ಸೆ.5– ಇಲ್ಲಿನ ವಿಶೇಷ ನ್ಯಾಯಾಲಯವು ರಾಜ್ಯಸಭಾ ಸದಸ್ಯ ಮತ್ತು ಶಿವಸೇನೆ ನಾಯಕ ಸಂಜಯ್ ರಾವತ್ ಅವರ ನ್ಯಾಯಾಂಗ ಬಂಧನವನ್ನು ಸೆಪ್ಟೆಂಬರ್ 19 ರವರೆಗೆ ವಿಸ್ತರಿಸಿದೆ. ಪತ್ರಾ ಚಾಲ್ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ಇಡಿ)ದಿಂದ ಬಂಧನಕ್ಕೊಳಗಾಗಿರುವ ಅವರಿಗೆ ಜೈಲೇ ಗತಿ ಎನ್ನುವಂತಾಗಿದೆ.

ಸಂಜಯ್ ರಾವತ್ ಅವರು ಇನ್ನೂ ಜಾಮೀನು ಅರ್ಜಿ ಸಲ್ಲಿಸಿಲ್ಲ ಎಂದು ಅವರ ಪರ ವಕೀಲರು ಸೋಮವಾರ ನ್ಯಾಯಾಲಯಕ್ಕೆ ತಿಳಿಸಿದರು. ಸಂಜಯ್ ರಾವತ್ ಅವರ ನ್ಯಾಯಾಂಗ ಬಂಧನವನ್ನು ವಿಸ್ತರಿಸುವಂತೆ ಕೋರಿ ಇ.ಡಿ ಈ ಹಿಂದೆ ಮನವಿ ಸಲ್ಲಿಸಿತ್ತು ಸಂಸತ್ತಿನ ಕೆಲವು ನಮೂನೆಗಳಿಗೆ ಸಹಿ ಹಾಕಲು ಮತ್ತು ನ್ಯಾಯಾಲಯ ಹಾಗೂ ಇ.ಡಿಗೆ ಅದರ ಪ್ರತಿಯನ್ನು ಒದಗಿಸಲು ನ್ಯಾಯಾಲಯವು ಸಂಜಯ್ ರಾವತ್ ಅವರಿಗೆ ಅವಕಾಶ ನೀಡಿದೆ.

ಸಂಜಯ್ ರಾವತ್ ಅವರ ಕುಟುಂಬ ಇಂದು ನ್ಯಾಯಾಲಯಕ್ಕೆ ಹಾಜರಾಗಿತ್ತು. 1,034 ಕೋಟಿ ರೂಪಾಯಿ ಪತ್ರಾ ಚಾಲ್ ಭೂ ಹಗರಣ ಪ್ರಕರಣದಲ್ಲಿ ಆರು ಗಂಟೆಗಳ ವಿಚಾರಣೆಯ ನಂತರ ಸಂಜಯ್ ರಾವುತ್ ಅವರನ್ನು ಆಗಸ್ಟ್ 1 ರಂದು ಇ.ಡಿ ಬಂಧಿಸಿತ್ತು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮಳೆಯ ಆರ್ಭಟಕ್ಕೆ ಚಾಮುಂಡೇಶ್ವರಿ ಕ್ಷೇತ್ರದ ಹಲವು ಗ್ರಾಮಗಳು ತತ್ತರ: ಶಾಸಕ ಜಿ.ಟಿ.ದೇವೇಗೌಡರಿಂದ ಪರಿಶೀಲನೆ, ಪರಿಹಾರದ ಭರವಸೆ

●ಕೆರೆ ಕೋಡಿ ಬಿದ್ದು ಕೊಚ್ಚಿ ಹೋದ ರಸ್ತೆಗಳು ●ಸಾವಿರಾರು ಕೋಳಿಗಳ ಮಾರಣಹೋಮ ●ಅಪಾರ ಬೆಳೆ ನಷ್ಟ ●ನಾಲೆ ಒತ್ತುವರಿ ಆರೋಪ





ಸ್ಥಳದಲ್ಲೇ ಸರ್ಕಾರದ ಗಮನಕ್ಕೆ

ಗ್ರಾಮಸ್ಥರ ದೂರನ್ನು ಗಂಭೀರವಾಗಿ ಪರಿಗಣಿಸಿದ ಶಾಸಕ ಜಿ.ಟಿ.ದೇವೇಗೌಡರು ಸ್ಥಳದಲ್ಲೇ ಸಣ್ಣ ನೀರಾವರಿ ಇಲಾಖೆ ಕಾರ್ಯದರ್ಶಿ ಮೃತ್ಯುಂಜಯ ಅವರಿಗೆ ಕರೆ ಮಾಡಿ ಮಾತನಾಡಿದರು. ಅಪಾರ ಮಳೆಯಿಂದ ಬೊಮ್ಮೇನಹಳ್ಳಿ ಕೆರೆ, ಹುಯಿಲಾಳು ಕೆರೆ, ಜಟ್ಟಿಹುಂಡಿ ಕೆರೆ, ಚಿಕ್ಕೆರೆ, ಸಾಹುಕಾರಹುಂಡಿ ಕೆರೆ ತುಂಬಿ ಕೋಡಿ ಬಿದ್ದಿವೆ. ಆದರೆ ನಾಲೆಯಲ್ಲಿ ನೀರು ಹರಿಯಲು ಸಾಧ್ಯವಾಗದ ಕಾರಣ ಅಕ್ಕಪಕ್ಕದ ಜಮೀನುಗಳಿಗೆ ನುಗ್ಗಿ ಸಾವಿರಾರು ಎಕರೆಯಷ್ಟು ಬೆಳೆ ನಷ್ಟವಾಗಿದೆ. ರಸ್ತೆಗಳು ಕೊಚ್ಚಿಕೊಂಡು ಹೋಗಿ ಗ್ರಾಮಗಳ ನಡುವಿನ ಸಂಪರ್ಕವೇ ಕಡಿತಗೊಂಡಿದೆ. ನಮ್ಮ ಕ್ಷೇತ್ರದಲ್ಲಿ ಭಾರೀ ಅವಾಂತರವೇ ಸೃಷ್ಟಿಯಾಗಿದೆ. ಜನ ಭಾರೀ ತೊಂದರೆಗೀಡಾಗಿದ್ದಾರೆ. ನಾಲೆ ಒತ್ತುವಾರಿಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹಾಗಾಗಿ ಕೂಡಲೇ ತಮ್ಮ ಇಲಾಖೆಯಿಂದ ಒಂದು ವಿಶೇಷ ತಂಡ ರಚಿಸಿ ಪರಿಶೀಲನೆಗೆ ನಿಯೋಜಿಸಬೇಕು. ತಕ್ಷಣವೇ ನಾಲೆಗಳ ಹೂಳು ತೆಗೆಸುವುದು, ಕೆರೆಗಳ ತೂಬುಗಳ ದುರಸ್ತಿ, ಸೇತುವೆಗಳ ನಿರ್ಮಾಣ ಇನ್ನಿತರ ಕಾಮಗಾರಿಗಳನ್ನು ತುರ್ತಾಗಿ ನಡೆಸುವಂತೆ ಸೂಚಿಸಬೇಕೆಂದು ಮನವಿ ಮಾಡಿದರು.



ಕೊಚ್ಚಿ ಹೋದ ರಸ್ತೆಗಳು

ಭಾರೀ ಮಳೆಯಿಂದ ಹುಯಿಲಾಳು ಕೆರೆ ತುಂಬಿ ಕೋಡಿ ಒಡೆದು ಮಾಣಿಕ್ಯಪುರ ಹಾಗೂ ಕೆ.ಹೆಮ್ಮನಹಳ್ಳಿ ರಸ್ತೆ ಕೊಚ್ಚಿ ಹೋಗಿರುವ ಪರಿಣಾಮ 2 ಗ್ರಾಮಗಳ ನಡುವಿನ ಸಂಪರ್ಕ ಕಡಿತಗೊಂಡಿದೆ. ಅಲ್ಲದೆ ಮೂಗನಹುಂಡಿ ಕೆರೆ ತುಂಬಿ ಕೋಡಿ ಬಿದ್ದು ಮೂಗನಹುಂಡಿ ಮತ್ತು ತಿಬ್ಬಯ್ಯನಹುಂಡಿ ರಸ್ತೆ ಸಂಪರ್ಕ ಕಡಿತಗೊಂಡು ಜನ ಪರಿತಪಿಸುವಂತಾಗಿದೆ.

5 ಲಕ್ಷದ ಚೆಕ್ ವಿತರಣೆ



ಮಳೆಯಿಂದ ರಸ್ತೆಗಳು ಕೊಚ್ಚಿ ಹೋಗಿರುವುದು, ಕೋಳಿಗಳು ಬಲಿಯಾಗಿರುವುದು, ಅಪಾರ ಪ್ರಮಾಣದ ಬೆಳೆ ನಷ್ಟವಾಗಿರುವುದು, ಮನೆಗಳಿಗೆ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿರುವ ಎಲ್ಲಾ ಸ್ಥಳಗಳಿಗೂ ಭೇಟಿ ನೀಡಿ ಪರಿಶೀಲನೆ ನಡೆಸಿದ ಜಿ.ಟಿ.ದೇವೇಗೌಡರು, ಇದರ ನಡುವೆ ಇತ್ತೀಚೆಗೆ ಮಳೆ ನೀರಿನ ರಭಸಕ್ಕೆ ಕೊಚ್ಚಿ ಹೋಗಿ ಪ್ರಾಣ ಕಳೆದುಕೊಂಡ ಮಾವಿನಹಳ್ಳಿ ಮಹೇಶ್ ಮನೆಗೆ ಭೇಟಿ ನೀಡಿದ್ದರು. ಈ ವೇಳೆ ಮಹೇಶ್ ಪತ್ನಿ ರಾಜಮ್ಮ ಅವರಿಗೆ 5 ಲಕ್ಷ ರೂ. ಪರಿಹಾರದ ಚೆಕ್ ವಿತರಿಸಿದರು. ಮೈಸೂರು ತಾಪಂ ಇಓ ಗಿರೀಶ್, ಎಇಇ ಮಮತಾ, ಉಪ ತಹಸೀಲ್ದಾರ್‌ಗಳಾದ ಕುಬೇರ್, ಮಂಜುನಾಥ್, ರಾಜಸ್ವ ನಿರೀಕ್ಷಕರಾದ ಶಿವಕುಮಾರ್, ಲೋಹಿತ್ ಮತ್ತಿತರರು ಹಾಜರಿದ್ದರು.



ಮೈಸೂರು, ಸೆ.5(ಎಸ್‌ಬಿಡಿ)– ಮೈಸೂರಿನಲ್ಲಿ ಭಾನುವಾರ ರಾತ್ರಿಯಿಡೀ ಸುರಿದ ಭಾರೀ ಮಳೆಯಿಂದಾಗಿ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಅಪಾರ ಹಾನಿಯುಂಟಾಗಿದೆ.

ಮಳೆ ಆರ್ಭಟದಿಂದಾಗಿ ಕೆರೆಗಳ ಕೋಡಿ ಒಡೆದು ರಸ್ತೆಗಳು ಕೊಚ್ಚಿ ಹೋಗಿರುವುದಲ್ಲದೆ ಸಾವಿರಾರು ಕೋಳಿಗಳ ಮಾರಣಹೋಮವೇ ನಡೆದು ಹೋಗಿದೆ. ಜಮೀನುಗಳಿಗೆ ನೀರು ನುಗ್ಗಿ ಅಪಾರ ಪ್ರಮಾಣದ ಬೆಳೆ ನಾಶವಾಗಿದೆ. ರಸ್ತೆಗಳೆಲ್ಲಾ ರಾಡಿಯಾಗಿ ಸಂಚಾರವೂ ಕಷ್ಟಸಾಧ್ಯವಾಗಿದೆ. ಹಲವು ಗ್ರಾಮಗಳ ಜನಜೀವನ ಅಸ್ತವ್ಯಸ್ತವಾಗಿದೆ. ಮಳೆ ಅವಾಂತರದ ಬಗ್ಗೆ ತಿಳಿಯುತ್ತಿದ್ದಂತೆ ಶಾಸಕ ಜಿ.ಟಿ.ದೇವೇಗೌಡರು ಅಧಿಕಾರಿಗಳೊಂದಿಗೆ ದೌಡಾಯಿಸಿ ಪರಿಶೀಲನೆ ನಡೆಸಿದರಲ್ಲದೆ, ನಷ್ಟವಾದವರಿಗೆ ಪರಿಹಾರದ ಭರವಸೆ ನೀಡಿದ್ದಾರೆ.

ಸಾವಿರಾರು ಕೋಳಿಗಳ ಮಾರಣ ಹೋಮ: ಮಾಣಿಕ್ಯಪುರ–ಕೆ.ಹೆಮ್ಮನಹಳ್ಳಿ ರಸ್ತೆ ಪಕ್ಕದಲ್ಲಿರುವ ಪುಟ್ಟಸ್ವಾಮಿ ಅವರ ಮನೆಗೆ ನೀರು ನುಗ್ಗಿ ಗೃಹೋಪಯೋಗಿ ವಸ್ತುಗಳು ಹಾಗೂ ಆಹಾರ ಧಾನ್ಯಗಳು ಹಾಳಾಗಿವೆ. ಅಲ್ಲದೆ ಅವರು ಸಾಕಿದ್ದ ಸಾವಿರಾರು ನಾಟಿ ಕೋಳಿಗಳು ಸತ್ತಿವೆ. ಹಾಗೆಯೇ ಕೆ.ಹೆಮ್ಮನಹಳ್ಳಿಯ ಚಿಕ್ಕೆರೆ ಹಿಂಭಾಗದಲ್ಲಿ ಗಂಗಾಧರ್ ಅವರಿಗೆ ಸೇರಿದ ಕೋಳಿ ಫಾರಂಗೆ ನೀರು ನುಗ್ಗಿ ಸುಮಾರು 4 ಸಾವಿರ ಕೋಳಿಗಳು ಬಲಿಯಾಗಿವೆ. ಇಬ್ಬರಿಗೂ ಸರ್ಕಾರದಿಂದ ಸೂಕ್ತ ಪರಿಹಾರ ಕೊಡಿಸುವುದಾಗಿ ಶಾಸಕ ಜಿ.ಟಿ.ದೇವೇಗೌಡರು ಭರವಸೆ ನೀಡಿದ್ದಾರೆ.

ಅಪಾರ ಪ್ರಮಾಣ ಬೆಳೆ ಹಾನಿ: ಸಾಹುಕಾರಹುಂಡಿ ಕೆರೆಯಿಂದ ಜಮೀನುಗಳಿಗೆ ನೀರು ನುಗ್ಗಿದ ಪರಿಣಾಮ ಅಪಾರ ಪ್ರಮಾಣದ ಬೆಳೆ ನಷ್ಟವಾಗಿದೆ. ನೀರಿನ ರಭಸಕ್ಕೆ ಬೆಳೆ ಕೊಚ್ಚಿ ಹೋಗಿದೆ. ಹುಯಿಲಾಳು ಕೆರೆ ಹಾಗೂ ಮೂಗನಹುಂಡಿ ಕೆರೆ ಕೋಡಿಯಿಂದ ರಸ್ತೆ ತುಂಡಾದ ಜಾಗದಲ್ಲೂ ಜಮೀನುಗಳಿಗೆ ನೀರು ನುಗ್ಗಿ ಬೆಳೆ ನಷ್ಟವಾಗಿದೆ. ಸಾಲ ಮಾಡಿ ಬಿತ್ತನೆ ಮಾಡಿ, ಗೊಬ್ಬರ ಹಾಕಿ ಬೆವರ ಹರಿಸಿ ಬೆಳೆದಿದ್ದೆಲ್ಲವೂ ನೀರು ಪಾಲಾಗಿದೆ.

ಒತ್ತುವರಿ ಆರೋಪ: ಕೆ.ಹೆಮ್ಮನಹಳ್ಳಿ ಗ್ರಾಮ ವ್ಯಾಪ್ತಿಯಲ್ಲಿ ಕೆಲವು ಬಡಾವಣೆ ನಿರ್ಮಿಸಲಾಗಿದ್ದು, ಆ ವೇಳೆ ಪೂರ್ಣಯ್ಯ ನಾಲೆಯನ್ನು ಒತ್ತುವರಿ ಮಾಡಿ ಕೊಳ್ಳಲಾಗಿದೆ. ಪರಿಣಾಮ ಕೆರೆ ಕೋಡಿ ನೀರು ನಾಲೆಯಲ್ಲಿ ಹರಿಯಲಾಗದೆ ಅಕ್ಕಪಕ್ಕದ ಜಮೀನುಗಳಿಗೆ ನುಗ್ಗುತ್ತಿದೆ. ವರ್ಷವಿಡೀ ಕಷ್ಟಪಟ್ಟು ಬೆಳೆದು ಕೊನೆಗೆ ನಷ್ಟ ಅನುಭವಿಸುವಂತಾಗಿದೆ. ಬಡಾವಣೆ ನಿರ್ಮಿಸುವಾಗಲೇ ಒತ್ತುವರಿ ಬಗ್ಗೆ ಅಧಿಕಾರಿಗಳ ಗಮನಕ್ಕೆ ತಂದರೂ ಕ್ರಮ ಕೈಗೊಳ್ಳದೆ ನಿರ್ಲಕ್ಷಿಸಿದರು ಎಂದು ಸಾರ್ವಜನಿಕರು ಶಾಸಕ ಬಳಿ ಅವಲತ್ತುಕೊಂಡರು.





ಮೈಸೂರು ನಗರದಲ್ಲೂ ಭಾರೀ ಅವಾಂತರ

ಮೈಸೂರು, ಸೆ.5(ಎಂಕೆ)– ನಗರದೆಲ್ಲೆಡೆ ಭಾನುವಾರ ರಾತ್ರಿ ಸುರಿದ ಧಾರಾಕಾರ ಮಳೆಗೆ 5ಕ್ಕೂ ಹೆಚ್ಚು ಮರಗಳು ಧರೆಗುರುಳಿದ್ದು, ಹಲವು ಮನೆಗಳಿಗೆ ನೀರು ನುಗ್ಗಿದೆ.

ರಾತ್ರಿಯಿಡೀ ಸುರಿದ ಮಳೆಯಿಂದಾಗಿ ಚಾಮುಂಡಿ ಬೆಟ್ಟದ ಮಾರ್ಗದಲ್ಲಿನ ತಾವರೆಕಟ್ಟೆ ಬಳಿ, ಬೋಗಾದಿ ಮುಖ್ಯ ರಸ್ತೆ, ಶಾರದಾದೇವಿ ನಗರದ ಕ್ಲಬ್ ರಸ್ತೆ, ವಿಜಯನಗರ, ಕಾಳಿದಾಸ ರಸ್ತೆ ಸೇರಿದಂತೆ ಹಲವೆಡೆ 5ಕ್ಕೂ ಹೆಚ್ಚು ಮರಗಳು ಬುಡಸಮೇತ ನೆರಕ್ಕುರುಳಿವೆ. ಸ್ಥಳಕ್ಕೆ ಭೇಟಿ ನೀಡಿದ ಪಾಲಿಕೆ ಅಭಯ ತಂಡದ ಸಿಬ್ಬಂದಿ ಉರುಳಿ ಬಿದ್ದಿದ್ದ ಮರಗಳನ್ನು ತೆರವುಗೊಳಿಸಿದರು. ಅಲ್ಲದೆ ಕನಕಗಿರಿ, ಐಶ್ವರ್ಯನಗರ, ಆನಂದನಗರ, ಜನತಾನಗರ, ಮಧುವನ ಸೇರಿದಂತೆ ತಗ್ಗು ಪ್ರದೇಶಗಳಲ್ಲಿರುವ ಮನೆಗಳಿಗೆ ನೀರು ನುಗ್ಗಿದ್ದು, ನಿವಾಸಿಗಳು ಪರದಾಡುವಂತಾಗಿದೆ.



ಮಳೆ ನೀರಿನ ಜೊತೆಗೆ ಒಳಚರಂಡಿ ನೀರು ಸಹ ಮನೆಗಳಿಗೆ ನುಗ್ಗಿದ್ದು, ರಾತ್ರಿಯಿಡೀ ನಿದ್ದೆ ಇಲ್ಲದೆ ಪರದಾಡುವಂತೆ ಮಾಡಿದೆ.

ಪ್ರಾಚ್ಯ ವಸ್ತು ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ಗುತ್ತಿಗೆದಾರರ ಸಂಘ ಉದ್ಘಾಟನೆ



ಮೈಸೂರು,ಸೆ.5–ದಸರಾ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿರುವ ಕರ್ನಾಟಕ ರಾಜ್ಯ ಪ್ರಾಚ್ಯ ವಸ್ತು ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ಗುತ್ತಿಗೆದಾರರ ಸಂಘವನ್ನು ಇಲಾಖೆ ಅಧಿಕಾರಿಗಳಾದ ವೇದಾವತಿ ಮತ್ತು ಮಂಜುಳಾ ಸೋಮವಾರ ಉದ್ಘಾಟಿಸಿದರು. ಬಳಿಕ ಮಾತನಾಡಿದ ಮಂಜುಳಾ, ಗುತ್ತಿಗೆದಾರರು ಹಾಗೂ ಅಧಿಕಾರಿಗಳ ನಡುವೆ ಸಮನ್ವಯತೆ ಸಾಧಿಸುವ ನಿಟ್ಟಿನಲ್ಲಿ ಪ್ರಥಮ ಬಾರಿಗೆ ಸಂಘ ಸ್ಥಾಪಿಸಿರುವುದು ಶ್ಲಾಘನೀಯ. ಇಬ್ಬರು ಪರಸ್ಪರ ಸಹಕಾರದಿಂದ ನಿರ್ವಹಿಸಿದರೆ ಯಾವ ಕಾರ್ಯವನ್ನು ಬೇಕಾದರೂ ಸಾಧಿಸಬಹುದು ಎಂದು ಶುಭ ಕೋರಿದರು.

ಸಂಘದ ಅಧ್ಯಕ್ಷ ಟಿ.ಎಸ್.ರಾಮಚಂದ್ರ ಮಾತನಾಡಿ, ದಕ್ಷ ಅಧಿಕಾರಿಗಳೇ ಹೆಚ್ಚಾಗಿ ಇಲ್ಲಿ ಕರ್ತವ್ಯ ನಿರ್ವಹಿಸಿದ್ದಾರೆ. ಗುತ್ತಿಗೆದಾರರು ಸಹ ಇಲಾಖೆ ಗೌರವ ಉಳಿಸಿ–ಬೆಳೆಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕೆಂದು ಸಲಹೆ ನೀಡಿದರು. ಗೌರವ ಅಧ್ಯಕ್ಷ ಅನಂತರಾಜು, ಉಪಾಧ್ಯಕ್ಷ ಟಿ.ಎನ್.ಶ್ರೀನಿವಾಸ್, ಧರ್ಮೇಂದ್ರ ಜಾಧವ್, ಪ್ರಧಾನ ಕಾರ್ಯದರ್ಶಿ ಸಿ.ಎಸ್.ಪ್ರೇಮಚಂದ್ರ, ಸಹ ಕಾರ್ಯದರ್ಶಿ ವೀರಯ್ಯ ಹಿರೇಮಠ್, ಖಜಾಂಚಿ ಕುಶಾಲ್ ಕುಮಾರ್, ನಿರ್ದೇಶಕ ಎಂ.ಡಿ.ಫಾಹಿ ಮುದ್ದೀನ್, ಸುಧೀರ್‌ಕುಮಾರ್, ದೇವೇಂದ್ರ, ಬಸವಲಿಂಗಪ್ಪ ಎಸ್.ಶೆಟ್ಟರ್, ಆರ್.ಗೋಪಾಲ್ ಇನ್ನಿತರರಿದ್ದರು.

ಕೆಪಿಟಿಸಿಎಲ್ ಅಕ್ರಮ: ಪ್ರಶ್ನೆಪತ್ರಿಕೆ ಮುದ್ರಿಸಲು ಲ್ಯಾಪ್‌ಟಾಪ್ ಕೊಟ್ಟವನೂ ಜೈಲಿಗೆ

ಬೆಳಗಾವಿ, ಸೆ.5– ಸ್ಮಾರ್ಟ್‌ವಾಚ್ ಬಳಸಿ ಕೆಪಿಟಿಸಿಎಲ್ ಪರೀಕ್ಷೆ ಬರೆದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಬಗೆದಷ್ಟೂ ಅಕ್ರಮ ಹೊರಬರುತ್ತಿದೆ. ಅಕ್ರಮದಲ್ಲಿ ಭಾಗಿಯಾಗಿರುವ ಮತ್ತಿಬ್ಬರನ್ನು ಬೆಳಗಾವಿ ಜಿಲ್ಲಾ ಪೊಲೀಸರು ಸೋಮವಾರ ಬಂಧಿಸಿದ್ದು, ಬಂಧನಕ್ಕೆ ಒಳಗಾದ ಆರೋಪಿಗಳ ಸಂಖ್ಯೆ 15ಕ್ಕೆ ಏರಿದೆ.

ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಹನಗಂಡಿ ನಿವಾಸಿ ಬೀರಪ್ಪ ಲಕ್ಷ್ಮಣ ಹನಗಂಡಿ (24) ಹಾಗೂ ಗೋಕಾಕ ತಾಲೂಕಿನ ಅರಭಾವಿಯ ನಿವಾಸಿ ಶಿವಾನಂದ ದುಂಡಪ್ಪ ಹಳ್ಳೂರ ಬಂಧಿತರು. ಬಂಧಿತರಿಂದ ಅಕ್ರಮಕ್ಕೆ ಬಳಸಿದ 6 ಮೊಬೈಲ್ ಫೋನ್, ಲ್ಯಾಪ್‌ಟಾಪ್ ಹಾಗೂ ಎಲೆಕ್ಟ್ರಾನಿಕ್ ಡಿವೈಸ್‌ಗಳನ್ನು ಜಪ್ತಿ ಮಾಡಿಕೊಂಡಿದ್ದಾರೆ. ಬೀರಪ್ಪ ಹನಗಂಡು ಎಂಬಾತ ಪರೀಕ್ಷೆಯಲ್ಲಿ ಅಕ್ರಮ ಎಸಗಲು ಪ್ರಶ್ನೆ ಪತ್ರಿಕೆಗಳ ಮುದ್ರಣಕ್ಕಾಗಿ ಲ್ಯಾಪ್‌ಟಾಪ್ ಹಾಗೂ ಸ್ಮಾರ್ಟ್‌ವಾಚ್ ಖರೀದಿಸಿ ಇನ್ನಿತರ ಆರೋಪಿಗಳಿಗೆ ತಂದು ಕೊಟ್ಟಿದ್ದನು. ಇನ್ನು ಶಿವಾನಂದ ಹಳ್ಳೂರ ಸ್ಮಾರ್ಟ್‌ವಾಚ್‌ಗಳಿಗೆ ಕನೆಕ್ಟ್ ಮಾಡುವ ಎಲೆಕ್ಟ್ರಾನಿಕ್ ಡಿವೈಸ್ ಸಮೇತ ಪರೀಕ್ಷೆಗೆ ಹಾಜರಾಗಿದ್ದ ಎನ್ನಲಾಗಿದೆ. ಬೀರಪ್ಪನಿಂದ ಲ್ಯಾಪ್‌ಟಾಪ್ ಹಾಗೂ ಒಂದು ಮೊಬೈಲ್ ಫೋನ್ ಮತ್ತು ಶಿವಾನಂದ ಹಳ್ಳೂರನಿಂದ 5 ಮೊಬೈಲ್ ಫೋನ್ ಹಾಗೂ ಎಲೆಕ್ಟ್ರಾನಿಕ್ ಡಿವೈಸ್ ಜಪ್ತಿ ಮಾಡಲಾಗಿದೆ. ಬಂಧಿತರನ್ನು ನ್ಯಾಯಾಲಯಕ್ಕೆ ಒಪ್ಪಿಸಲಾಗಿದ್ದು, ತನಿಖೆ ಮುಂದುವರಿದಿದೆ ಎಂದು ಬೆಳಗಾವಿ ಜಿಲ್ಲಾ ಪೊಲೀಸರು ತಿಳಿಸಿದ್ದಾರೆ.

ರಹಸ್ಯ ಕಾರ್ಯಾಚರಣೆಯ ವಿಡಿಯೊ ಬಿಡುಗಡೆ ಮಾಡಿದ ಬಿಜೆಪಿ

ದೆಹಲಿ ಸರ್ಕಾರದ ಅಬಕಾರಿ ನೀತಿಯಲ್ಲಿ ಭ್ರಷ್ಟಾಚಾರ ಬಯಲು



ನವದೆಹಲಿ: ದೆಹಲಿ ಸರ್ಕಾರದ ಅಬಕಾರಿ ನೀತಿಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿರುವ ಬಿಜೆಪಿ, ಇದಕ್ಕೆ ಸಂಬಂಧಿಸಿದ ರಹಸ್ಯ ಕಾರ್ಯಾಚರಣೆಯ ವಿಡಿಯೊವೊಂದನ್ನು ಸೋಮವಾರ ಬಿಡುಗಡೆ ಮಾಡಿದೆ. ಆ ಮೂಲಕ ಆಮ್ ಆದ್ಮಿ ಪಕ್ಷದ (ಎಎಪಿ) ಮೇಲೆ ದಾಳಿ ಮುಂದುವರಿಸಿದೆ. ಅಬಕಾರಿ ಹಗರಣದ ಆರೋಪಿಯಾಗಿರುವ ಸನ್ನಿ ಮರ್ವಾಹ್ ಅವರ ತಂದೆ ಕುಲ್ವಿಂದರ್ ಮರ್ವಾಹ್ ಅವರು ಅಬಕಾರಿ ಪರವಾನಗಿ ಪಡೆಯಲು ಕಮಿಷನ್ ನೀಡಿದ್ದಾಗಿ ವಿಡಿಯೊದಲ್ಲಿ ಒಪ್ಪಿಕೊಂಡಿದ್ದಾರೆ. ಹೀಗಾಗಿ ಮನೀಷ್ ಸಿಸೋಡಿಯಾ ಅವರನ್ನು ಉಪ ಮುಖ್ಯಮಂತ್ರಿ ಸ್ಥಾನದಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿದೆ.

ಬಿಜೆಪಿ ವಕ್ತಾರ ಸಂಬಿತ್ ಪಾತ್ರಾ, ಬಿಜೆಪಿ ದೆಹಲಿ ಘಟಕದ ಅಧ್ಯಕ್ಷ ಅದೇಶ್ ಗುಪ್ತಾ ಮತ್ತು ಸಂಸದ ಮನೋಜ್ ತಿವಾರಿ ಅವರು ಸೋಮವಾರ ಜಂಟಿ ಸುದ್ದಿಗೋಷ್ಠಿ ನಡೆಸಿ ವಿಡಿಯೊ ಬಿಡುಗಡೆ ಮಾಡಿದರು. ಶೇ.80ರಷ್ಟು ಆದಾಯವು ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್, ಸಿಸೋಡಿಯಾ ಹಾಗೂ ಅವರ ಸ್ನೇಹಿತರಿಗೆ ಸೇರುತ್ತದೆ. ಪರವಾನಗಿ ಪಡೆಯುವವರು ಮೊದಲು ಶೇ.80ರಷ್ಟು ಕಮಿಷನ್ ಕೊಟ್ಟುಬಿಡಬೇಕು. ಶೇ.20ರಷ್ಟು ಸರಕನ್ನು ಎಷ್ಟು ಬೆಲೆಗೆ ಬೇಕಾದರೂ ಮಾರಾಟ ಮಾಡಿಕೊಳ್ಳಬಹುದು ಎಂದು ಮರ್ವಾಹ್ ಅವರು ವಿಡಿಯೊದಲ್ಲಿ ಹೇಳಿದ್ದಾರೆ. ಇದು ಕೇಜ್ರಿವಾಲ್ ಅವರ ನೀತಿಯೇ? ಎಂದು ಪಾತ್ರಾ ಪ್ರಶ್ನಿಸಿದ್ದಾರೆ.

> ಅಬಕಾರಿ ನೀತಿಯಲ್ಲಿ ಭ್ರಷ್ಟಾಚಾರ ನಡೆದಿರುವುದನ್ನು ಬಯಲಿಗೆಳೆಯಲು ಬಿಜೆಪಿ ರಹಸ್ಯ ಕಾರ್ಯಾಚರಣೆ ನಡೆಸಲು ಮುಂದಾಗಿರುವುದು ಹಾಸ್ಯಾಸ್ಪದ. ಪ್ರಕರಣದಲ್ಲಿ ಸಿಬಿಐ ನನಗೆ ಕ್ಲೀನ್ ಚಿಟ್ ನೀಡಿದೆ.
> –ಮನೀಷ್ ಸಿಸೋಡಿಯಾ, ದೆಹಲಿ ಡಿಸಿಎಂ


ವಿಡಿಯೊದಲ್ಲಿ ಕುಲ್ವಿಂದರ್ ಅವರು ಹಗರಣದ ಎಳೆ ಎಳೆಯನ್ನೂ ಬಿಚ್ಚಿಟ್ಟಿದ್ದಾರೆ. ದೆಹಲಿ ಸರ್ಕಾರವು ಕಪ್ಪು ಪಟ್ಟಿಯಲ್ಲಿರುವ ಕಂಪನಿಗಳಿಗೂ ಪರವಾನಗಿ ನೀಡಿರುವುದು ವಿಡಿಯೊದಿಂದ ಬಹಿರಂಗವಾಗಿದೆ. ಈ ನೀತಿಯ ಮೂಲಕ ಬಿಳಿ ಹಣವನ್ನು ಕಪ್ಪು ಹಣವನ್ನಾಗಿ ಪರಿವರ್ತಿಸಿ ಅದನ್ನು ಕೇಜ್ರಿವಾಲ್ ಹಾಗೂ ಸಿಸೋಡಿಯಾಗೆ ರವಾನಿಸಲಾಗಿದೆ? ಎಂದು ಆರೋಪಿಸಿದ್ದಾರೆ.

ನೂತನ ಅಬಕಾರಿ ನೀತಿ ಬಗ್ಗೆ ನಾವು ಕೇಜ್ರಿವಾಲ್ ಅವರಿಗೆ ಐದು ಪ್ರಶ್ನೆಗಳನ್ನು ಕೇಳಿದ್ದೆವು. ಆ ಪ್ರಶ್ನೆಗಳಿಗೆ ಇನ್ನೂ ಉತ್ತರ ದೊರೆತಿಲ್ಲ. ಹೀಗಾಗಿ ರಹಸ್ಯ ಕಾರ್ಯಾಚರಣೆ ಮೂಲಕ ಅವರ ಬಣ್ಣ ಬಯಲು ಮಾಡಲು ಮುಂದಾಗಿದ್ದೇವೆ ಎಂದಿದ್ದಾರೆ.

ಕೊಡಗಿನ ಬ್ರಿಜೇಶ್ ಕಾಳಪ್ಪ ಎಎಪಿ ಸೇರ್ಪಡೆ

ಬೆಂಗಳೂರು, ಸೆ.5– ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ ಹಾಗೂ ಸುಪ್ರೀಂ ಕೋರ್ಟ್ ಹಿರಿಯ ವಕೀಲ ಬ್ರಿಜೇಶ್ ಕಾಳಪ್ಪ ಅವರು ಆಮ್ ಆದ್ಮಿ ಪಾರ್ಟಿಗೆ ಸೋಮವಾರ ಸೇರ್ಪಡೆಯಾದರು.

ಬೆಂಗಳೂರಿನ ಹೋಟೆಲ್ ಪರಾಗ್‌ನಲ್ಲಿ ನಡೆದ ಪಕ್ಷ ಸೇರ್ಪಡೆ ಸಮಾರಂಭದಲ್ಲಿ ಎಎಪಿಯ ಕರ್ನಾಟಕ ಉಸ್ತುವಾರಿ ದಿಲೀಪ್ ಪಾಂಡೆರವರು ಬ್ರಿಜೇಶ್ ಕಾಳಪ್ಪ ಅವರನ್ನು ಪಕ್ಷಕ್ಕೆ ಬರಮಾಡಿಕೊಂಡರು. ಪಕ್ಷ ಸೇರಿ ಮಾತನಾಡಿದ ಬ್ರಿಜೇಶ್ ಕಾಳಪ್ಪ, ದೆಹಲಿಯಲ್ಲಿ ಅರವಿಂದ್ ಕೇಜ್ರಿವಾಲ್ ನೇತೃತ್ವದ ಎಎಪಿ ಸರ್ಕಾರವು ಹೊಸಹೊಸ ಜನಪರ ಯೋಜನೆಗಳನ್ನು ನಿರಂತರವಾಗಿ ಜಾರಿಗೆ ತರುತ್ತಿದೆ. ಗುಣಮಟ್ಟ ಆಡಳಿತ ಹೇಗಿರುತ್ತದೆ ಎಂಬುದನ್ನು ದೇಶಕ್ಕೆ ತೋರಿಸಿಕೊಡುತ್ತಿದೆ. ಜನಸಾಮಾನ್ಯರ ಬಗ್ಗೆ ಕಿಂಚಿತ್ತೂ ಕಾಳಜಿಯಿಲ್ಲದೇ ದುರಾಡಳಿತ ನೀಡುತ್ತಿರುವ ಬಿಜೆಪಿಗೆ ಸಡ್ಡು ಹೊಡೆಯುವ ಸಾಮರ್ಥ್ಯವು ಆಮ್ ಆದ್ಮಿ ಪಾರ್ಟಿಗಿದೆ.



ಮುಂಬರುವ ವಿವಿಧ ಚುನಾವಣೆಗಳಲ್ಲಿ ಎಎಪಿ ಜಯಗಳಿಸಿ ಅಧಿಕಾರ ಹಿಡಿದರೆ ಮಾತ್ರ ದೇಶದ ಭವಿಷ್ಯ ಬಲಗೊಳ್ಳಲಿದೆ ಎಂದರು.

ಬ್ರಿಜೇಶ್ ಕಾಳಪ್ಪ ಅವರನ್ನು ಸ್ವಾಗತಿಸಿ ಮಾತನಾಡಿದ ಪಕ್ಷದ ರಾಜ್ಯಾಧ್ಯಕ್ಷ ಪೃಥ್ವಿ ರೆಡ್ಡಿ, ದೇಶದಲ್ಲಿ ಉತ್ತಮ ಬದಲಾವಣೆ ತರಬೇಕೆಂಬ ಹಂಬಲವಿರುವ ನಾಯಕರಲ್ಲಿ ಬ್ರಿಜೇಶ್ ಕಾಳಪ್ಪ ಒಬ್ಬರು. ರಾಜಕೀಯ ಹಾಗೂ ಆಡಳಿತದಲ್ಲಿ ಆಮ್ ಆದ್ಮಿ ಪಾರ್ಟಿಯು ಬದಲಾವಣೆ ತಂದಿರುವುದನ್ನು ಮನಗಂಡು ಅವರು ಪಕ್ಷಕ್ಕೆ ಸೇರ್ಪಡೆಯಾಗುತ್ತಿದ್ದಾರೆ. ಜನಪರ ಕಾಳಜಿಯಿರುವವರಿಗೆ ಹಾಗೂ ದೇಶದ ಭವಿಷ್ಯಕ್ಕಾಗಿ ದುಡಿಯುವ ಹಂಬಲ ಇರುವವರಿಗೆ ಎಎಪಿಯು ಉತ್ತಮ ವೇದಿಕೆಯಾಗಿದ್ದು, ಇದನ್ನು ಇನ್ನಷ್ಟು ನಾಯಕರು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಎಎಪಿಯ ಸತ್ಯ–ನಿಷ್ಠೆಯ ರಾಜಕಾರಣ ಹಾಗೂ ಕೊಟ್ಟ ಮಾತಿಗೆ ತಪ್ಪದಿರುವ ಗುಣವು ಒಳ್ಳೆಯ ಮನಸ್ಸುಗಳನ್ನು ಆಕರ್ಷಿಸುತ್ತಿದೆ ಎಂದು ಪೃಥ್ವಿ ರೆಡ್ಡಿ ಹೇಳಿದರು. ಎಎಪಿ ರಾಜ್ಯ ಉಪಾಧ್ಯಕ್ಷ ಭಾಸ್ಕರ್ ರಾವ್, ಪಕ್ಷದ ರಾಜ್ಯ ಪ್ರಚಾರ ಸಮಿತಿಯ ಅಧ್ಯಕ್ಷ ಮುಖ್ಯಮಂತ್ರಿ ಚಂದ್ರು, ಮಾಜಿ ಹಿರಿಯ ಕೆಎಎಸ್ ಅಧಿಕಾರಿ ಹಾಗೂ ಪಕ್ಷದ ಮಾಧ್ಯಮ ವಕ್ತಾರ ಕೆ. ಮಥಾಯಿ, ಪಕ್ಷದ ಮುಖಂಡರಾದ ಮೋಹನ್ ದಾಸರಿ, ಸಂಚಿತ್ ಸಹವಾನಿ, ಜಗದೀಶ್ ವಿ ಸದಂ, ಕುಶಲಸ್ವಾಮಿ, ಚನ್ನಪ್ಪಗೌಡ ನಲ್ಲೂರು, ಸುರೇಶ್ ರಾಥೋಡ್, ದರ್ಶನ್ ಜೈನ್ ಮತ್ತಿತರ ನಾಯಕರು, ಕಾರ್ಯಕರ್ತರು ಹಾಗೂ ಬ್ರಿಜೇಶ್ ಕಾಳಪ್ಪ ಅವರ ಅನೇಕ ಬೆಂಬಲಿಗರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



ಮೈಸೂರು ಕೆ.ಜಿ.ಕೊಪ್ಪಲಿನಲ್ಲಿ ಕನ್ನೇಗೌಡರ ಟೈಗರ್ ವತಿಯಿಂದ 14 ಅಡಿ ಬೃಹತ್ ಗಣಪತಿ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗಿತ್ತು. ಪ್ರತಿನಿತ್ಯ ವಿಶೇಷ ಪೂಜೆ ಸಲ್ಲಿಸಲಾಗುತ್ತಿತ್ತು. ಸಾವಿರಾರು ಜನ ಪ್ರತೀ ದಿನ ವಿಶೇಷ ಪೂಜೆ ಸಲ್ಲಿಸುತ್ತಾ ಬಂದಿದ್ದರು. ಸೋಮವಾರ ಈ ಗಣೇಶನ ಮೂರ್ತಿ ಪ್ರಮುಖ ರಸ್ತೆಗಳಲ್ಲಿ ಅದ್ದೂರಿ ಮೆರವಣಿಗೆ ನಡೆಸಿದ ನಂತರ ವಿಸರ್ಜಿಸಲಾಯಿತು.

ಸಕ್ಕರೆ ನಾಡಲ್ಲಿ ಗುರುವಿನ ಗುಣಗಾನ

ಸಕ್ಕರೆ ನಾಡು ಮಂಡ್ಯ ಜಿಲ್ಲಾದ್ಯಂತ ಸೋಮವಾರ ಶಿಕ್ಷಕರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಎಲ್ಲೆಡೆ ವಿದ್ಯಾರ್ಥಿಗಳು ತಮ್ಮ ನೆಚ್ಚಿನ ಗುರುಗಳಿಗೆ ಸಿಹಿ ಹಂಚಿ, ಶುಭ ಕೋರಿ ಗುರುವಿನ ಗುಣಗಾನ ಮಾಡಿದರು.



ಮಂಡ್ಯದ ಪಿಇಎಸ್ ಕಾನೂನು ಕಾಲೇಜಿನಲ್ಲಿ ಕೇಕ್ ಕತ್ತರಿಸುವ ಮೂಲಕ ಶಿಕ್ಷಕರ ದಿನವನ್ನು ಸಂಭ್ರಮದಿಂದ ಆಚರಿಸಲಾಯಿತು. ಈ ವೇಳೆ ಕಾಲೇಜಿನ ಪ್ರಾಂಶುಪಾಲ ಜೆ.ಯೋಗೇಶ್, ಪ್ರಾಧ್ಯಾಪಕರಾದ ಕೆ.ಎಸ್.ಜಯಕುಮಾರ್, ಯಮುನಾವತಿ, ಸುಭಾಷ್, ಪ್ರಮೋದ್, ಗ್ರಂಥಪಾಲಕ ಕೇಶವಮೂರ್ತಿ ಸೇರಿದಂತೆ ಕಾಲೇಜಿನ ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು.

ಶಿಕ್ಷಕರು ಪ್ರತಿಭಾವಂತರ ನಿರ್ಮಾತೃ

ಭಾರತೀನಗರ: ವಿದ್ಯಾರ್ಥಿಗಳನ್ನು ಪ್ರತಿಭಾವಂತರನ್ನಾಗಿ ಮಾಡುವ ಶಕ್ತಿ ಶಿಕ್ಷಕರಿಗೆ ಮಾತ್ರ ಇದೆ ಎಂದು ವಿಧಾನಪರಿಷತ್ ಸದಸ್ಯ ಮಧು ಜಿ.ಮಾದೇಗೌಡ ಹೇಳಿದರು.

ಇಲ್ಲಿನ ಭಾರತೀ ವಿದ್ಯಾಸಂಸ್ಥೆಯ ಕುವೆಂಪು ಸಭಾಂಗಣದಲ್ಲಿ ಸೋಮವಾರ ಭಾರತೀ ಶಿಕ್ಷಣ ಮಹಾವಿದ್ಯಾನಿಲಯ ಮತ್ತು ಬಿಇಟಿ ಅಂಗಸಂಸ್ಥೆಗಳ ಆಶ್ರಯದಲ್ಲಿ ನಡೆದ ಶಿಕ್ಷಕರ ದಿನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಿಗೆ ಸೂಕ್ತ ಮಾರ್ಗದರ್ಶನ ನೀಡಿ ಉತ್ತಮ ಪ್ರಜೆಗಳನ್ನಾಗಿಸಿ ದೇಶಕ್ಕೆ ಕೊಡುವ ಶಕ್ತಿ ಶಿಕ್ಷಕರಿಗೆ ಮಾತ್ರ ಇದೆ. ಶಿಕ್ಷಕರು ಉತ್ತಮ ವಿದ್ಯಾರ್ಥಿಗಳನ್ನು ತಯಾರಿಸುವಂತಹ ಕಾರ್ಖಾನೆ ಇದ್ದ ಹಾಗೆ. ಹಾಗಾಗಿ ವಿದ್ಯಾರ್ಥಿಯ ಪರಿಪೂರ್ಣ ವ್ಯಕ್ತಿತ್ವ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಮುಖ್ಯವಾಗಿದೆ ಎಂದರು.

ಅಭಿನಂದನೆ ಸ್ವೀಕರಿಸಿದ ಮೈಸೂರು ಮಹಾರಾಜ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಡಾ.ರೇಖಾ ಜಾದವ್ ಮಾತನಾಡಿ, ಜಿ.ಮಾದೇಗೌಡರು ಕಟ್ಟಿದಂತಹ ಸಂಸ್ಥೆಯಲ್ಲಿ ಅಭಿನಂದನೆ ಸ್ವೀಕರಿಸಿದ್ದು, ನೋಬಲ್ ಪ್ರಶಸ್ತಿ ಸಿಕ್ಕಿದಂತಾಗಿದೆ ಎಂದು ಸಂತಸಪಟ್ಟರು. ನನ್ನ ವಿದ್ಯಾಭ್ಯಾಸ ಜೀವನದಲ್ಲಿ ಕಷ್ಟಪಟ್ಟು ಮೇಲೆ ಬಂದಿದ್ದೇನೆ. ಶಿಕ್ಷಣ ಪಡೆಯಬೇಕಾದರೆ ಕಷ್ಟಪಡಬೇಕು. ಮುಂದೆ ಒಳ್ಳೆಯ ಜೀವನವನ್ನು ರೂಪಿಸಿಕೊಳ್ಳಬಹುದು ಎಂದರು.

ವೇದಿಕೆಯಲ್ಲಿ ಬೆಂಗಳೂರಿನ ಜ್ಯೋತಿ ನಿವಾಸ ಕಾಲೇಜಿನ ನಿವೃತ್ತ ಪ್ರಾಧ್ಯಾಪಕಿ ಡಾ.ಎಸ್.ಪ್ರಭಾವತಿ ನಂಜಯ್ಯ, ಭಾರತೀಎಜುಕೇಷನ್ ಟ್ರಸ್ಟ್‌ನ ಕಾರ್ಯದರ್ಶಿ ಬಿ.ಎಂ.ನಂಜೇಗೌಡ, ಮೈಸೂರು ರೀಜನಲ್ ಇನ್‌ಸ್ಟಿಟ್ಯೂಟ್ ಆಫ್ ಎಜುಕೇಷನ್ ಪ್ರೊ.ಸಿ.ಟಿ. ವೆಂಕಟೇಶ್ ಮೂರ್ತಿ, ಟ್ರಸ್ಟಿಗಳು ಹಾಗೂ ಎಲ್ಲಾ ಅಂಗಸಂಸ್ಥೆಯ ಮುಖ್ಯಸ್ಥರು ಉಪಸ್ಥಿತರಿದ್ದರು.



ತಂದೆ-ತಾಯಿಯಂತೆ ಶಿಕ್ಷಕರನ್ನೂ ಗೌರವಿಸಿ

ಶಿಕ್ಷಕರ ದಿನಾಚರಣೆಯಲ್ಲಿ ಶಾಸಕ ಎಂ.ಶ್ರೀನಿವಾಸ್ ಸಲಹೆ



ಮಂಡ್ಯ,ಸೆ.5– ತಂದೆ-ತಾಯಿಯನ್ನು ಹೇಗೆ ಗೌರವಿಸುತ್ತೀವೋ ಹಾಗೆಯೇ ಪ್ರತಿಯೊಬ್ಬರು ಶಿಕ್ಷಕರನ್ನೂ ಗೌರವಿಸಬೇಕು ಎಂದು ಶಾಸಕ ಎಂ.ಶ್ರೀನಿವಾಸ್ ಸಲಹೆ ನೀಡಿದರು.

ಭಾರತ ರತ್ನ ಡಾ.ಎಸ್.ರಾಧಾಕೃಷ್ಣನ್ ಅವರ ಜನ್ಮದಿನದ ಅಂಗವಾಗಿ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಸೋಮವಾರ ನಡೆದ ಶಿಕ್ಷಕರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರತಿಯೊಬ್ಬರ ಜೀವನದಲ್ಲಿ ತಂದೆ-ತಾಯಿಯಂತೆ ಶಿಕ್ಷಕರು ಮುಖ್ಯ. ನಮಗೆ ಶಿಕ್ಷಣ, ವಿನಯತೆ, ಸಮಾಜದಲ್ಲಿ ಬದುಕುವ ರೀತಿ- ನೀತಿ ಹೇಳಿಕೊಡುವ ಗುರುವು ಸಹ ತಂದೆ- ತಾಯಿಯ ಸಮಾನ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ಹೆಚ್.ಎಲ್.ನಾಗರಾಜು ಮಾತನಾಡಿ, ಶಿಕ್ಷಕರಿಲ್ಲದೇ ಯಾರು ಕೂಡ ವ್ಯಕ್ತಿತ್ವನ್ನು ರೂಪಿಸಿಕೊಳ್ಳಲು ಸಾಧ್ಯವಿಲ್ಲ. ವಿದ್ಯಾರ್ಥಿಗಳನ್ನು ದೇಶದ ಆಸ್ತಿಯನ್ನಾಗಿ ಪರಿವರ್ತಿಸಲು ಶಿಕ್ಷಕರು ಸ್ಥಾನಮಾನವನ್ನು ವೃದ್ಧಿಸಿಕೊಳ್ಳಬೇಕು. ಹಿಂದಿನ ಕಾಲದಿಂದಲೂ ಅತ್ಯಂತ ಶ್ರೇಷ್ಠವಾದ ಕರ್ತವ್ಯ ಅಂದರೆ ಶಿಕ್ಷಕರ ವೃತ್ತಿ ಎಂದು ತಿಳಿಸಿದರು.

ಈ ವೇಳೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ನಿವೃತ್ತ ಶಿಕ್ಷಕರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯ ಮಧು ಜಿ.ಮಾದೇಗೌಡ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಕೆ.ಶ್ರೀನಿವಾಸ್, ರೆಡ್‌ಕ್ರಾಸ್ ಉಪಾಧ್ಯಕ್ಷೆ ಮೀರಾ ಶಿವಲಿಂಗಯ್ಯ, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನಿರ್ದೇಶಕ ಎಂ.ಶಿವಮಾದಪ್ಪ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಎಸ್.ಟಿ. ಜವರೇಗೌಡ, ಉತ್ತರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಕೆಟಿ.ಸೌಭಾಗ್ಯ ಹಾಗೂ ದಕ್ಷಿಣ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಟಿ.ಚಂದ್ರಕಾಂತ ಸೇರಿದಂತೆ ಇನ್ನಿತರರಿದ್ದರು.

ಪಾಂಡವಪುರದಲ್ಲಿ ಮಾದರಿ ಶಿಕ್ಷಕರ ಭವನ ನಿರ್ಮಾಣ

ಪಾಂಡವಪುರ: ಪಟ್ಟಣದಲ್ಲಿ ರಾಜ್ಯಕ್ಕೆ ಮಾದರಿಯಾದ ಶಿಕ್ಷಕರ ಭವನ ನಿರ್ಮಾಣ ಮಾಡಲಾಗುವುದು ಎಂದು ಶಾಸಕ ಸಿ.ಎಸ್.ಪುಟ್ಟರಾಜು ಅವರು ಭರವಸೆ ನೀಡಿದರು.

ಪಟ್ಟಣದ ಟಿಎಪಿಸಿಎಂಎಸ್ ರೈತ ಸಭಾಂಗಣದಲ್ಲಿ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪಟ್ಟಣದಲ್ಲಿ ಶಿಕ್ಷಕರ ಭವನ ಅಭಿವೃದ್ಧಿಪಡಿಸಬೇಕು ಎನ್ನುವುದು ಶಿಕ್ಷಕರ ಬಹುದಿನದ ಬೇಡಿಕೆಯಾಗಿದೆ. ಶಿಕ್ಷಕರ ಭವನ ನಿರ್ಮಾಣ ಮಾಡುವುದು ನನ್ನ ಕನಸಾಗಿದ್ದು, ಪಾಂಡವಪುರದಲ್ಲಿ ರಾಜ್ಯಕ್ಕೆ ಮಾದರಿಯಾದ ಶಿಕ್ಷಕರ ಭವನವನ್ನು ನಿರ್ಮಾಣ ಮಾಡಿಕೊಡಲಾಗುವುದು ಎಂದು ಭರವಸೆ ನೀಡಿದರು.

ಸಾಹಿತಿ ಪಿ.ಕೆ.ರಾಜಶೇಖರ್ ಮಾತನಾಡಿದರು. ಇದೇ ವೇಳೆ ನಿವೃತ್ತ ಶಿಕ್ಷಕರನ್ನು ಅಭಿನಂದಿಸಲಾಯಿತು. ಸಮಾರಂಭದಲ್ಲಿ ಪುರಸಭೆ ಅಧ್ಯಕ್ಷೆ ಅರ್ಚನಾ ಚಂದ್ರು, ತಹಸೀಲ್ದಾರ್ ಎಸ್.ಎಲ್.ನಯನಾ, ಇಓ ಲೋಕೇಶ್‌ಮೂರ್ತಿ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಎಂ.ಸಿ.ಯಶವಂತ್ ಕುಮಾರ್, ಟಿಎಪಿಸಿಎಂಎಸ್ ಅಧ್ಯಕ್ಷ ಡಿ.ಶ್ರೀನಿವಾಸ್, ಕಿಯೋನಿಕ್ಸ್ ನಿರ್ದೇಶಕ ಮಂಜುನಾಥ್, ಬಿಇಓ ಜಿ.ಎ.ಲೋಕೇಶ್, ಬಿಆರ್‌ಸಿ ಪ್ರಕಾಶ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಂಜುನಾಥ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವೆಂಕಟೇಶ್, ರಂಗಸ್ವಾಮಿ, ಎಸ್.ಬಸವರಾಜು, ಕೆ.ಎನ್.ಪ್ರಕಾಶ್, ಎಲ್.ಎಸ್.ಕೇಶವಮೂರ್ತಿ, ಪಿ.ಮಂಜುನಾಥ್, ರಾಮಕೃಷ್ಣೇಗೌಡ, ಆರ್.ಸಿ.ನಾಗೇಗೌಡ, ಎಲ್.ಜೆ.ಶಂಕರ್, ಎಂ.ಡಿ.ಮರಿಸ್ವಾಮಿಗೌಡ, ಸಿ.ಎನ್.ಶಿವಕುಮಾರ, ಸಿ.ಮಹೇಶ್, ಎ.ಮಂಜುನಾಥ್, ಹೆಚ್.ಆರ್.ಸುರೇಂದ್ರ ಕುಮಾರ್, ಎಂ.ಕೆ.ವಿಜಯಕುಮಾರ್, ಧರ್ಮೇಗೌಡ, ಹೆಚ್.ಎನ್.ಸೋಮಶೇಖರ್, ಎಸ್.ಸಿದ್ದಪ್ಪ, ಹೆಚ್.ಆರ್.ಲತಾ, ಎಸ್.ಸಿ.ಬಸವರಾಜು ಹಾಜರಿದ್ದರು.



ಕೆ.ಶೆಟ್ಟಿಹಳ್ಳಿಯಲ್ಲಿ ಗಣಪನಿಗೆ ವಿಶೇಷ ಪೂಜೆ



ಶ್ರೀರಂಗಪಟ್ಟಣ ತಾಲೂಕಿನ ಕೆ.ಶೆಟ್ಟಿಹಳ್ಳಿ ಗ್ರಾಮದಲ್ಲಿನ ಸ್ವಾಮಿ ವಿವೇಕಾನಂದ ವೃತ್ತದ ಬಳಿ ಸ್ವಾಮಿ ವಿವೇಕಾನಂದ ಯುವಕರ ಸಂಘ, ಸಪ್ತಋಿ ಗ್ರಾಮಾಭಿವೃದ್ಧಿ ಸೇವಾ ಸಮಿತಿ(ರಿ) ಹಾಗೂ ಸಪ್ತಋಿ ಸೇವಾ ಸಮಿತಿಯಿಂದ ಗೌರಿ-ಗಣೇಶ ಮೂರ್ತಿ ಪ್ರತಿಷ್ಠಾಪಿಸಲಾಗಿದ್ದು, ಸೋಮವಾರ ಗಣೇಶ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಿ, ಭಕ್ತರಿಗೆ ಅನ್ನ ಸಂತರ್ಪಣೆ ನೆರವೇರಿಸಲಾಯಿತು.

ಪಶ್ಚಿಮವಾಹಿನಿ- ಕೆಆರ್‌ಎಸ್ ರಸ್ತೆ ಕಾಮಗಾರಿಗೆ ತಾಂತ್ರಿಕ ಅನುಮೋದನೆಗೆ ಆಗ್ರಹ

ಶ್ರೀರಂಗಪಟ್ಟಣ, ಸೆ.5– ಪಶ್ಚಿಮವಾಹಿನಿಯಿಂದ ಕೆಆರ್‌ಎಸ್‌ವರೆಗೆ ಹದಗೆಟ್ಟಿರುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಇನ್ನೆರಡು ದಿನದಲ್ಲಿ ತಾಂತ್ರಿಕ ಅನುಮೋದನೆ ನೀಡದಿದ್ದರೆ ಪಂಪ್‌ಹೌಸ್ ಬಳಿ ನಾನು ಧರಣಿ ನಡೆಸುತ್ತೇನೆ ಎಂದು ಶಾಸಕ ರವೀಂದ್ರ ಶ್ರೀಕಂಠಯ್ಯ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಶ್ರೀರಂಗನಾಥ ಕಲ್ಯಾಣ ಮಂಟಪದಲ್ಲಿ ಸೋಮವಾರ ಶ್ರೀರಂಗಪಟ್ಟಣ ದಸರಾ 2022ರ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಬಾರಿಯ ದಸರಾವನ್ನು ಮನಸ್ಸಿನಲ್ಲಿ ಇಟ್ಟುಕೊಂಡು ತುಂಬಾ ಶ್ರಮಪಟ್ಟು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರ ಬಳಿ ಮುಖ್ಯಮಂತ್ರಿಗಳಿಗೆ ಒತ್ತಡ ಹಾಕಿಸಿ ಸುಮಾರು 10 ಕೋಟಿ ರೂ. ಅನುದಾನ



ವನ್ನು ಪಶ್ಚಿಮವಾಹಿನಿ-ಕೆಆರ್‌ಎಸ್ ರಸ್ತೆ ಅಭಿವೃದ್ಧಿ ಕಾಮಗಾರಿಗಾಗಿ ಬಿಡುಗಡೆ ಮಾಡಿಸಲಾಗಿತ್ತು. ಆದರೆ, ಪಿಡಬ್ಲ್ಯೂಡಿ ಹಿರಿಯ ಅಧಿಕಾರಿಗಳು ತಾಂತ್ರಿಕವಾಗಿ ಅಂತಿಮ ಅನುಮೋದನೆ ನೀಡಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸುತ್ತಿಲ್ಲ. ಹಾಗಾಗಿ ಇನ್ನೆರಡು ದಿನಗಳಲ್ಲಿ ಆ ರಸ್ತೆ ಕಾಮಗಾರಿ ಪ್ರಾರಂಭಿಸದಿದ್ದರೆ ನಾನು ಧರಣಿ ನಡೆಸುತ್ತೇನೆ ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಕಿರಂಗೂರಿನ ಬನ್ನಿಮಂಟಪದಿಂದ ರಂಗನಾಥಸ್ವಾಮಿ ಆವರಣದವರೆಗೆ ಎಂದಿನಂದೆ ಆನೆಗಳಿಂದ ನಾಡದೇವತೆ ಚಾಮುಂಡೇಶ್ವರಿ ದೇವಿಯ ಮೂರ್ತಿ ಹೊತ್ತ ಆನೆಗಳು ಜಂಬೂಸವಾರಿಯಲ್ಲಿ ಪಾಲ್ಗೊಳ್ಳಲಿದ್ದು, ಈ ಬಾರಿ ಮತಷ್ಟು ವಿಶೇಷವಾಗಿ ಜಂಬೂಸವಾರಿ ಆನೆಗಳನ್ನು ಅಲಂಕರಿಸಲಾಗುವುದು. ಇನ್ನೆರಡು ದಿನಗಳಲ್ಲಿ ಎಷ್ಟು ದಿನ ಶ್ರೀರಂಗಪಟ್ಟಣ ದಸರಾ ನಡೆಯುವುದು ಹಾಗೂ ಯಾರು ಉದ್ಘಾಟಿಸಲಿದ್ದಾರೆ ಎಂಬೆಲ್ಲಾ ಮಾಹಿತಿ ನೀಡಲಾಗುವುದು ಎಂದರು.

ಉಪವಿಭಾಗಾಧಿಕಾರಿ ಬಿ.ಸಿ ಶಿವಾನಂದ ಮೂರ್ತಿ ಮಾತನಾಡಿ, ದಸರಾ ಪೂರ್ವಭಾವಿ ಸಭೆಯಲ್ಲಿ ವಿವಿಧ ಸಂಘ, ಸಂಸ್ಥೆಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಂದ ಸಲಹೆ ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಮೇಲಧಿಕಾರಿಗಳ ಜೊತೆ ಚರ್ಚಿಸಿ ಕಾರ್ಯಕ್ರಮ ರೂಪಿಸಲಾಗುವುದು ಎಂದರು.

ಸಭೆಯಲ್ಲಿ ಗ್ರೇಡ್-2 ತಹಸೀಲ್ದಾರ್ ರೇಖಾ, ಡಿವೈಎಸ್‌ಪಿ ಸಂದೇಶ್‌ಕುಮಾರ್, ಜ್ಯೋತಿಷಿ ಡಾ.ಭಾನುಪ್ರಕಾಶ್, ರಂಗನಾಥಸ್ವಾಮಿ ಪ್ರಧಾನ ಅರ್ಚಕ ವಿಜಯ ಸಾರಥಿ, ತಾಲೂಕು ವೈದ್ಯಾಧಿಕಾರಿ ಡಾ.ಎನ್.ಕೆ.ವೆಂಕಟೇಶ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಜೆ.ಶ್ರೀನಿವಾಸ್ ಹಾಜರಿದ್ದರು.

ಸುಮಲತಾರಿಗೆ ರವೀಂದ್ರ ಶ್ರೀಕಂಠಯ್ಯ ಟಾಂಗ್

ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ವಸತಿ ಸಚಿವರಾಗಿದ್ದ ದಿವಂಗತ ಅಂಬರೀಶ್ ಅವರು ಏಕೆ ಸಚಿವ ಸ್ಥಾನ ಕಳೆದುಕೊಂಡರು ಎಂಬುದನ್ನು ಅಂಬರೀಶ್ ಹಿತೈಷಿಗಳಿಂದ ಸಂಸದೆ ಸುಮಲತಾ ಅವರು ತಿಳಿದುಕೊಂಡು ಜೆಡಿಎಸ್ ಶಾಸಕರ ಮೇಲೆ ಮಾಡುತ್ತಿರುವ ಶೇ.40ರಷ್ಟು ಕಮಿಷನ್ ಆರೋಪದ ಬಗ್ಗೆ ಮಾತನಾಡಲಿ ಎಂದು ಸುಮಲತಾ ಅವರಿಗೆ ಶಾಸಕ ರವೀಂದ್ರ ಶ್ರೀಕಂಠಯ್ಯ ಟಾಂಗ್ ನೀಡಿದರು.

ಬೂತ್ ಮಟ್ಟದಲ್ಲಿ ಕಾಂಗ್ರೆಸ್ ಸಾಧನೆಗಳ ಬಗ್ಗೆ ಜಾಗೃತಿ ಮೂಡಿಸಿ

ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಕರೆ



ತಿ.ನರಸೀಪುರ, ಸೆ.5– ಯುವ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಪದಾಧಿಕಾರಿಗಳು ಬೂತ್ ಮಟ್ಟದಲ್ಲಿ ಕಾಂಗ್ರೆಸ್ ಸಾಧನೆಗಳ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಶಾಸಕ ಯತೀಂದ್ರ ಸಿದ್ದರಾಮಯ್ಯ ಕರೆ ನೀಡಿದರು.

ಪಟ್ಟಣದ ಕಬಿನಿ ಅತಿಥಿ ಗೃಹದಲ್ಲಿ ಮೈಸೂರು ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಸಮಿತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಯುವ ಕಾಂಗ್ರೆಸ್ ಘಟಕಕ್ಕೆ ಆಯ್ಕೆಯಾದ ಪದಾಧಿಕಾರಿಗಳಿಗೆ ಆದೇಶ ಪತ್ರ ವಿತರಿಸಿ ಅವರು ಮಾತನಾಡಿದರು. ಬೂತ್ ಮಟ್ಟದ ಯುವ ಕಾರ್ಯಕರ್ತರಿಗೆ ಕಾಂಗ್ರೆಸ್ ಪಕ್ಷದ 75 ವರ್ಷಗಳ ಸಾಧನೆ, ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾಗಿ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟ ಬಗ್ಗೆ ಮತ್ತು ದೇಶಕ್ಕೆ ಕಾಂಗ್ರೆಸ್ ಕೊಡುಗೆ ಬಗ್ಗೆ ಸ್ಪಷ್ಟ ಮಾಹಿತಿ ನೀಡಬೇಕಿದೆ ಎಂದರು.

ಭಾರತ್ ಜೋಡೋ ಯಾತ್ರೆ: ರಾಹುಲ್ ಗಾಂಧಿ ಭಾರತ್ ಜೋಡೋ ಕಾರ್ಯಕ್ರಮಕ್ಕಾಗಿ ಸೆ.30ಕ್ಕೆ ಮೈಸೂರಿಗೆ ಭೇಟಿ ನೀಡಲಿದ್ದಾರೆ ಎಂದು ಮಾಹಿತಿ ನೀಡಿದ ಯತೀಂದ್ರ, ಈ ವೇಳೆ ವರುಣಾ ಕ್ಷೇತ್ರಕ್ಕೂ ಭೇಟಿ ನೀಡಲಿದ್ದಾರೆ. ಗುಂಡ್ಲುಪೇಟೆ ತಾಲೂಕಿನ ಬೇಗೂರಿನಿಂದ ವರುಣಾ ಕ್ಷೇತ್ರದ ತಾಂಡವಪುರದವರೆಗೂ ಪಾದಯಾತ್ರೆ ಮಾಡಲಿದ್ದು, ಅವರನ್ನು ಸ್ವಾಗತಿಸಲು ಹೆಚ್ಚಿನ ಕಾರ್ಯಕರ್ತರು ಆಗಮಿಸುವಂತೆ ಕರೆ ನೀಡಿದರು.

ಭಾರತ್ ಜೋಡೋ ಯಾವುದೇ ಪಕ್ಷದ ಕಾರ್ಯಕ್ರಮವಲ್ಲ. ಬದಲಿಗೆ ದೇಶ ಉಳಿಸಬೇಕೆಂಬ ಉದ್ದೇಶದಿಂದ ಯಾತ್ರೆ ಮಾಡಲಾಗುತ್ತಿದೆ. ದೇಶದಲ್ಲಿ ಬಿಜೆಪಿ ಪಕ್ಷ ಅಧಿಕಾರಕ್ಕೆ ಬಂದ ಮೇಲೆ ಸಾಮರಸ್ಯ ಇಲ್ಲದಂತಾಗಿದೆ. ಕೆಲವೇ ಧರ್ಮದವರನ್ನು ಟಾರ್ಗೆಟ್ ಮಾಡಿ ತೊಂದರೆ ಕೊಡುವ ಕೆಲಸವಾಗುತ್ತಿದೆ. ಧರ್ಮ-ಧರ್ಮಗಳ ನಡುವೆ ಸಂಘರ್ಷ, ದ್ವೇಷ ಉಂಟು ಮಾಡುವ ಕೆಲಸವನ್ನು ಬಿಜೆಪಿ ಮಾಡುತ್ತಾ ಬಂದಿದೆ. ಹಾಗಾಗಿ ಬಿಜೆಪಿ ಪಕ್ಷದಿಂದ ಅನ್ಯಾಯಕ್ಕೊಳಗಾಗಿರುವವರನ್ನು ಒಂದು ಮಾಡಬೇಕೆನ್ನುವುದು ಕಾರ್ಯಕ್ರಮದ ಉದ್ದೇಶ ಎಂದರು.

ಸೌಮ್ಯಲತಾ ವರ್ಗಾವಣೆಗೆ ದೂರು: ಸಾರ್ವಜನಿಕ ಕೆಲಸಗಳನ್ನು ಸದಸ್ಯರ ಗಮನಕ್ಕೆ ತರದೆ ಸ್ವಯಂ ನಿರ್ಧಾರ ತೆಗೆದುಕೊಂಡು ಸದಸ್ಯರಿಗೆ ಅಗೌರವ ತೋರುತ್ತಿರುವ ಕಿರಗಸೂರು ಪಿಡಿಓ ಸೌಮ್ಯಲತಾರನ್ನು ವರ್ಗಾವಣೆ ಮಾಡುವಂತೆ ಗ್ರಾಪಂನ 12 ಮಂದಿ ಸದಸ್ಯರು ಶಾಸಕರಿಗೆ ಮೌಖಿಕ ದೂರು ಸಲ್ಲಿಸಿದರು.

ಈ ವೇಳೆ ವರುಣಾ ಬ್ಲಾಕ್ ಜಿಲ್ಲಾಧ್ಯಕ್ಷ ಡೊನಾಲ್ಡ್ ಎಫ್.ನಿರ್ಮಾಣಿಕ್, ಪುರಸಭಾಧ್ಯಕ್ಷ ಎಸ್.ಮದನ್‌ರಾಜ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮುದ್ದೇಗೌಡ, ತಾಲೂಕು ಯುವ ಕಾಂಗ್ರೆಸ್ ಅಧ್ಯಕ್ಷ ಲಿಂಗರಾಜು, ಸ್ಥಾಯಿ ಸಮಿತಿ ಅಧ್ಯಕ್ಷ ಅಹಮದ್ ಸೈಯದ್, ಮಾಜಿ ಅಧ್ಯಕ್ಷ ಸೋಮು, ಪುರಸಭಾ ಸದಸ್ಯರಾದ ನಂಜುಂಡಸ್ವಾಮಿ, ಪ್ರಕಾಶ್, ನಾಗರಾಜ, ಜಿಪಂ ಮಾಜಿ ಸದಸ್ಯ ಮಹದೇವ, ತಾಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ಗ್ರಾಪಂ ಮಾಜಿ ಅಧ್ಯಕ್ಷ ಮಹೇಶ್, ಗ್ರಾಪಂ ಮಾಜಿ ಉಪಾಧ್ಯಕ್ಷೆ ಚಂದ್ರಮ್ಮ, ಮೃಗಾಲಯ ಪ್ರಾಧಿಕಾರದ ಮಾಜಿ ನಿರ್ದೇಶಕ ಅಮ್ಜದ್ ಖಾನ್, ಗುತ್ತಿಗೆದಾರ ನಾಗರಾಜು, ಬಸವರಾಜು, ಏಳುಮಲೆ ಮಂಜು, ರಮೇಶ್ ಮತ್ತಿತರರಿದ್ದರು.

ಮಿರ್ಲೆ ಗ್ರಾಮ ಪಂಚಾಯಿತಿಗೆ ನೇತ್ರಾ ಅಧ್ಯಕ್ಷೆ



ಭೇರ್ಯ, ಸೆ.5– ಮಿರ್ಲೆ ಗ್ರಾಮ ಪಂಚಾಯತಿ ಅಧ್ಯಕ್ಷೆಯಾಗಿ ನೇತ್ರಾ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷೆ ಗೀತಾ ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ನೇತ್ರಾ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಪಶು ಸಂಗೋಪನೆ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಮಂಜುನಾಥ್ ಘೋಷಿಸಿದರು.

ನೂತನ ಅಧ್ಯಕ್ಷೆ ನೇತ್ರಾ ಮಾತನಾಡಿ, ಅಧ್ಯಕ್ಷೆಯಾಗಿ ಆಯ್ಕೆಯಾಗಲು ಕಾರಣರಾದ ನಮ್ಮ ನಾಯಕ ಶಾಸಕ ಸಾ.ರಾ. ಮಹೇಶ್ ಹಾಗೂ ಎಲ್ಲಾ ಸದಸ್ಯರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಮಿರ್ಲೆ ಗ್ರಾಪಂ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಶ್ರಮಿಸುವುದಾಗಿ ತಿಳಿಸಿದರು.

ಈ ವೇಳೆ ಪಿಡಿಓ ಚಂದ್ರಶೇಖರ್, ಮಾಜಿ ಅಧ್ಯಕ್ಷೆ ಗೀತಾ, ಉಪಾಧ್ಯಕ್ಷ ಅಣ್ಣಯ್ಯ, ಸದಸ್ಯರಾದ ಎಂ.ಎಸ್.ಸಿಂಧು, ಮೀನಾಕ್ಷಿ, ಮಂಜುಳ, ಸಣ್ಣನಿಂಗಮ್ಮ, ಶರಾವತಿ, ಮಂಗಳ, ಹೆಚ್.ಎಸ್.ರೂಪ, ಬಲರಾಮು, ಹರೀಶ, ಜಬಿವುಲ್ಲಾ ಖಾನ್, ಬಾಬು, ರಂಗಸ್ವಾಮಿ, ಸುಶೀಲ, ಅರುಣಕುಮಾರ್, ಸಾಲಿಗ್ರಾಮ ತಾಲೂಕು ಜೆಡಿಎಸ್ ಅಧ್ಯಕ್ಷ ರಾಜಣ್ಣ, ಪ್ರಧಾನ ಕಾರ್ಯದರ್ಶಿ ಧನಂಜಯ, ಉಪಾಧ್ಯಕ್ಷ ತುಕರಾಂ, ತಾಪಂ ಮಾಜಿ ಸದಸ್ಯ ಮಂಜುನಾಥ್, ಗ್ರಾಪಂ ಮಾಜಿ ಅಧ್ಯಕ್ಷ ಮಹದೇವ್, ಮುಖಂಡರಾದ ರಘು, ಲಾಲೂಸಾಬ್, ರಾಧಕೃಷ್ಣ, ಸಂದೀಪ್ ಸೇರಿದಂತೆ ಇತರರಿದ್ದರು.

ಸಾಲಬಾಧೆ ತಾಳಲಾರದೆ ರೈತ ಆತ್ಮಹತ್ಯೆ



ಹನಗೋಡು, ಸೆ.5– ಸಾಲಬಾಧೆ ತಾಳಲಾರದೇ ರೈತರೊಬ್ಬರು ವಿಷಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಇಲ್ಲಿನ ಹಬ್ಬನಕುಪ್ಪೆ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಅನಿಲ್(30) ಆತ್ಮಹತ್ಯೆ ಮಾಡಿಕೊಂಡವರು. ಈತ ಕೃಷಿಗಾಗಿ ಚಿಲ್ಕುಂದ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ 5 ಲಕ್ಷ ರೂ., ಕರ್ನಾಟಕ ಬ್ಯಾಂಕ್‌ನಲ್ಲಿ ಚಿನ್ನ ಅಡವಿಟ್ಟು 2 ಲಕ್ಷ ರೂ. ಸಾಲ ಪಡೆದಿದ್ದರು. ಮಾಡಿದ ಸಾಲ ತೀರಿಸಲಾಗದೇ ಮನನೊಂದಿದ್ದ ಅನಿಲ್ ವಿಷಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದರು. ತಕ್ಷಣ ಅವರನ್ನು ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು ಆದರೆ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ. ಈ ಸಂಬಂಧ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಾಗವಾಲ ಕೆರೆ ಕೋಡಿ ಬಿದ್ದು ವಸತಿ ಪ್ರದೇಶ, ಕೃಷಿ ಭೂಮಿ ಜಲಾವೃತ

ನಾಲೆ ಒತ್ತುವರಿಂಯೇ ಈ ಅವಾಂತರಕ್ಕೆ ಕಾರಣ: ಹುಯಿಲಾಳು ರಾಮಸ್ವಾಮಿ ಆರೋಪ





ಮೈಸೂರು, ಸೆ.5– ಭಾನುವಾರ ಸುರಿದ ಮಳೆಗೆ ಮೈಸೂರು ತಾಲೂಕು ನಾಗವಾಲ ಕೆರೆ ಕೋಡಿ ಬಿದ್ದು ವಸತಿ ಹಾಗೂ ಕೃಷಿ ಭೂಮಿಗೆ ನೀರು ನುಗ್ಗಿ ಅಪಾರ ನಷ್ಟ ಉಂಟಾಗಿದೆ. ಅಲ್ಲದೇ ಕೋಳಿ ಫಾರಂ ಜಲಾವೃತಗೊಂಡು ಸುಮಾರು 3 ಸಾವಿರ ಕೋಳಿಗಳು ಸಾವನ್ನಪ್ಪಿವೆ. ಕೆರೆ ಮತ್ತು ಪೂರ್ಣಯ್ಯ ನಾಲೆ ಒತ್ತುವರಿಯಿಂದಾಗಿ ಈ ಅನಾಹುತ ಸಂಭವಿಸಿದೆ ಎಂದು ನಾಗವಾಲ ಗ್ರಾಪಂನ ಮಾಜಿ ಸದಸ್ಯ ಹುಯಿಲಾಳು ರಾಮಸ್ವಾಮಿ ಆರೋಪಿಸಿದ್ದಾರೆ.

ನಾಗವಾಲ ಕೆರೆ ಕೋಡಿ ನೀರು ಹರಿದು ಬೊಮ್ಮೇನಹಳ್ಳಿ, ಹುಯಿಲಾಳು, ಸಾಹುಕಾರ ಹುಂಡಿ, ಜಟ್ಟಿಹುಂಡಿ ಕೆರೆಗಳು ಕೋಡಿ ಬಿದ್ದ ಪರಿಣಾಮ ಜಮೀನುಗಳು ಜಲಾವೃತಗೊಂಡು ಅಪಾರ ಪ್ರಮಾಣದ ಬೆಳೆ ನಷ್ಟವಾಗಿದೆ. ಸುವರ್ಣಾ ಲೇಔಟ್ ಜಲಾವೃತವಾಗಿದ್ದು, ಅಲ್ಲಿನ ನಾಗರಿಕರು ಸಂಕಷ್ಟಕ್ಕೀಡಾಗಿದ್ದಾರೆ. ಚಾಮುಂಡೇಶ್ವರಿ ದೇವಾಲಯ ನೀರಿನಿಂದ ಆವೃತವಾಗಿದೆ. ಹುಯಿಲಾಳು ಗ್ರಾಮದ ಜಯಮ್ಮ, ಪುಟ್ಟಮ್ಮ, ಶಿವಣ್ಣ ಮುಂತಾದವರ ಮನೆಗಳಿಗೆ ನೀರು ನುಗ್ಗಿದ ಪರಿಣಾಮ ಮನೆಗಳಲ್ಲಿನ ಆಹಾರ ಪದಾರ್ಥಗಳು ಸೇರಿ ಎಲ್ಲವೂ ನೀರು ಪಾಲಾಗಿದೆ. ಕೆರೆ ಮತ್ತು ಪೂರ್ಣಯ್ಯ ನಾಲೆ ಒತ್ತುವರಿಯಾಗಿರುವುದೇ ಈ ಅನಾಹುತಕ್ಕೆ ಕಾರಣ. ಈ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಂಡಿಲ್ಲ. ತಕ್ಷಣ ಜಿಲ್ಲಾಡಳಿತ ಎಚ್ಚೆತ್ತುಕೊಂಡು ಖಾಸಗಿ ಬಡಾವಣೆಯವರು ಮಾಡಿಕೊಂಡಿರುವ ಒತ್ತುವರಿ ತೆರವುಗೊಳಿಸಬೇಕು 2850 ಕೋಳಿಗಳು ನಷ್ಟವಾಗಿರುವ ಕೋಳಿ ಫಾರಂ ಮಾಲೀಕರಿಗೆ ಹಾಗೂ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಪರಿಹಾರ ನೀಡಬೇಕೆಂದು ಆಗ್ರಹಿಸಿದ್ದಾರೆ.

ಧರ್ಮಸ್ಥಳ ಸಂಸ್ಥೆಯಿಂದ ಮಹಿಳಾ ಸಬಲೀಕರಣಕ್ಕೆ ಒತ್ತು

ಬಿಡಗಲಿನ ಪಡುವಲು ವಿರಕ್ತ ಮಠಾಧ್ಯಕ್ಷ ಮಹದೇವಸ್ವಾಮೀಜಿ



ಹೆಚ್.ಡಿ.ಕೋಟೆ, ಸೆ.5– ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಹಿಳಾ ಸಬಲೀಕರಣಕ್ಕೆ ಹೆಚ್ಚು ಒತ್ತು ನೀಡುತ್ತಿದೆ ಎಂದು ಬಿಡಗಲಿನ ಪಡುವಲು ವಿರಕ್ತ ಮಠಾಧ್ಯಕ್ಷ ಮಹದೇವಸ್ವಾಮೀಜಿ ತಿಳಿಸಿದರು.

ತಾಲೂಕಿನ ಕೋಳಗಾಲ ಗ್ರಾಮದ ಮಕ್ಕಳಾಟಿಕೆ ಮಹದೇಶ್ವರಸ್ವಾಮಿ ದೇವಾಲಯದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮತ್ತು ಪ್ರಗತಿ ಬಂಧು ಸ್ವಸಹಾಯ ಸಂಘಗಳ ಒಕ್ಕೂಟದಿಂದ ಆಯೋಜಿಸಿದ್ದ ಸಾಮೂಹಿಕ ಸತ್ಯನಾರಾಯಣ ಪೂಜೆ ಉದ್ದೇಶಿಸಿ ಮಾತನಾಡಿದರು.

ಮಾನವೀಯ ಮೌಲ್ಯಗಳನ್ನು ಮನುಷ್ಯನಲ್ಲಿ ಸಾಕಾರಗೊಳಿಸುತ್ತಿರುವ ಸಂಸ್ಥೆಯಾಗಿಯೂ ಸಹ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಾರ್ಯನಿರ್ವಹಿಸುತ್ತಿದೆ. ಅಲ್ಲದೇ ಮದ್ಯವರ್ಜನ ಶಿಬಿರಗಳನ್ನು ಆಯೋಜಿಸಿ, ಶಿಬಿರ ಮುಗಿದ ನಂತರವೂ ಸಹ ಶಿಬಿರಾರ್ಥಿಗಳ ಚಲನ-ವಲನಗಳನ್ನು ಗಮನಿಸುತ್ತಾ ಮತ್ತೆ ಮದ್ಯದ ದಾಸರಾಗದಂತೆ ನೋಡಿಕೊಳ್ಳುತ್ತಿರುವುದು ಸಹ ಮೆಚ್ಚುವಂತಹ ಕಾರ್ಯ ಎಂದರು. ಅದೇ ರೀತಿ ಯೋಜನೆಯಿಂದ ಹತ್ತು ಹಲವು ಕಾರ್ಯಗಳ ಪ್ರಯೋಜನವನ್ನು ರಾಜ್ಯದ ಜನತೆ ಪಡೆಯುತ್ತಿದ್ದಾರೆ. ಅಲ್ಲದೇ ಮಹಿಳೆಯರು ಆರ್ಥಿಕ ಸಹಾಯ ಪಡೆದು ವೃತ್ತಿ ಆರಂಭಿಸಿ ಆರ್ಥಿಕವಾಗಿ ಸದೃಢರಾಗುತ್ತಿದ್ದಾರೆ ಎಂದರು.

ಯೋಜನೆ ಪ್ರಾದೇಶಿಕ ನಿರ್ದೇಶಕ ಜಯರಾಮ್ ನೆಲ್ಲಿತಾಯ್ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಗ್ರಾಮೀಣ ಪ್ರದೇಶದ ಮಹಿಳೆಯರ ಸಬಲೀಕರಣ ಮಾಡುವುದರೊಂದಿಗೆ ಅನೇಕ ಯೋಜನೆಗಳ ಮೂಲಕ ಗ್ರಾಮೀಣಾಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ. ಧಾರ್ಮಿಕ ಕಾರ್ಯಗಳಲ್ಲಿ ಪ್ರತಿಯೊಬ್ಬರೂ ಭಾಗವಹಿಸಬೇಕು ಎಂಬ ಭಾವನೆಯೊಂದಿಗೆ ಸಾಮೂಹಿಕ ಸತ್ಯನಾರಾಯಣ ಪೂಜೆ, ಗಣಪತಿ ಹೋಮ, ಮೃತ್ಯುಂಜಯ ಹೋಮ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ವೀರೇಂದ್ರ ಹೆಗ್ಗಡೆಯವರು ಹಮ್ಮಿಕೊಂಡಿದ್ದು ಅದರಂತೆ ಯಶಸ್ವಿಯೂ ಆಗಿದೆ ಎಂದರು.

ಇದೇ ವೇಳೆ ಇಬ್ಬರು ವಿಶೇಷಚೇತನರಿಗೆ ವೀಲ್‌ಚೇರ್, 3 ಮಂದಿಗೆ ಊರುಗೋಲು, 3 ಮಂದಿಗೆ ನೀರಿನ ಹಾಸಿಗೆ ನೀಡಲಾಯಿತು. ಈ ವೇಳೆ ಬಿಜೆಪಿ ಮುಖಂಡ ಡಾ. ಹೆಚ್.ವಿ.ಕೃಷ್ಣಸ್ವಾಮಿ, ಜಿಲ್ಲಾ ಯೋಜನಾಧಿಕಾರಿ ಎಂ.ಲಕ್ಷ್ಮಣ, ತಾಲೂಕು ಯೋಜನಾಧಿಕಾರಿ ಎಂ.ಶಶಿಧರ್, ದೇವಾಲಯ ಸಮಿತಿ ಅಧ್ಯಕ್ಷ ನಾಗರಾಜು, ಪೂಜಾ ಸಮಿತಿ ಅಧ್ಯಕ್ಷ ಎನ್.ಎಸ್. ಪ್ರಕಾಶ್, ಉಪಾಧ್ಯಕ್ಷ ಪಿ.ಎಸ್.ಮಂಜುನಾಥ್, ಮುಖಂಡರಾದ ಶಿವರಾಮೇಗೌಡ, ಮಾಯಿಗೌಡ, ಮುರಳಿಗೌಡ, ಕೆ.ಎಸ್.ಫಣಿ ಕುಮಾರ ಅರಸ್, ಶಿವು ರಾಜೇಶ್, ರಾಜು, ನಾಗನಾಯಕ, ಪರಮೇಶ್, ಸೋಮ ಶೇಖರ್, ವಿರಾಜ್, ಗೋಪಾಲಯ್ಯ, ಹನುಮಂತ ನಾಯಕ, ಶಿವಣ್ಣ ಚಿನ್ನಸ್ವಾಮಿ, ನಾಗರಾಜು, ಶುಶೀಲ, ಸುಧಾ, ನಾಗಮ್ಮ, ದೇವಿರಮ್ಮ, ವಲಯ ಮೇಲ್ವಿಚಾರಕಿ ಮಂಜುಳಾ ಇದ್ದರು.



ಹುಣಸೂರು ತಾಲೂಕಿನ ಗಾವಡಗೆರೆ ಹೋಬಳಿ ಮಂಚಬಾಯನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 23 ವರ್ಷ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತರಾದ ಶಿಕ್ಷಕಿ ಗೀತಾ ಅವರನ್ನು ಶಾಲೆಯ ಹಳೆ ವಿದ್ಯಾರ್ಥಿಗಳು ಸನ್ಮಾನಿಸಿ, ಬೀಳ್ಕೊಟ್ಟರು. ಈ ವೇಳೆ ಶಿಕ್ಷಣ ಇಲಾಖೆಯ ಇಸಿಓ ಕೇಶವಮೂರ್ತಿ, ಶಿಕ್ಷಣ ಸಂಯೋಜಕ ಹರೀಶ್, ಎಸ್‌ಡಿಎಂಸಿ ಅಧ್ಯಕ್ಷ ನಟರಾಜು, ಪ್ರಭಾರಿ ಮುಖ್ಯ ಶಿಕ್ಷಕಿ ಸುಧಾಮಣಿ, ಗ್ರಾಪಂ ಮಾಜಿ ಸದಸ್ಯ ಮರಿಕಾಳನಾಯಕ, ರೈತ ಸಂಘದ ಅಧ್ಯಕ್ಷ ಮಂಜು, ಮುಖಂಡ ಮಂಚನಾಯಕ, ಜಾಬಗೆರೆ ಶಾಲೆ ಮುಖ್ಯ ಶಿಕ್ಷಕ ಸುರೇಶ್, ಸಹ ಶಿಕ್ಷಕರಾದ ಮಂಜುನಾಥ್, ಈಶ್ವರ್, ಚಿನ್ಮಯಿ, ದೈಹಿಕ ಶಿಕ್ಷಣ ಶಿಕ್ಷಕ ಮಂಜು, ಅತಿಥಿ ಶಿಕ್ಷಕರಾದ ನೇತ್ರಾವತಿ, ರಂಜಿತಾ, ಎಸ್‌ಡಿಎಂಸಿ ಸದಸ್ಯರು, ಗ್ರಾಮಸ್ಥರು, ಬಿಸಿಯೂಟ ಅಡುಗೆ ಸಿಬ್ಬಂದಿ, ಹಿರಿಯ ಹಳೇ ವಿದ್ಯಾರ್ಥಿಗಳಾದ ಅರುಣ, ಹೇಮಂತ್, ರವಿನಾಯಕ, ದಿಲೀಪ್, ವಸಂತ, ಜಯಶೀಲ, ಶಾಲಾ ವಿದ್ಯಾರ್ಥಿಗಳು ಇತರರಿದ್ದರು.

ಶ್ರೀನಿವಾಸ್ ನಿಧನ



ಹೆಚ್.ಡಿ.ಕೋಟೆ, ಸೆ.5– ತಾಲೂಕಿನ ಬೀಚಪುರ ಗ್ರಾಮದ ನಿವಾಸಿ ಪುಟ್ಟಸಿದ್ದಮ್ಮ ಅವರ ಪುತ್ರ ಶ್ರೀನಿವಾಸ್(45) ಭಾನುವಾರ ನಿಧನರಾದರು. ಮೃತರು ತಾಯಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸೋಮವಾರ ನಂಜನಗೂಡಿನ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬ ವರ್ಗ ತಿಳಿಸಿದೆ.

ಒಂದನೇ ಪುಟದಿಂದ

ಆಸ್ತಿ ನೋಂದಣಿ

ಮಧ್ಯವರ್ತಿಗಳನ್ನು ತಪ್ಪಿಸಿ, ಯಾರಿಗೂ ಲಂಚ ನೀಡದೇ ಸರಳವಾಗಿ ನೋಂದಣಿ ಮಾಡಿಕೊಳ್ಳುವ ಹೊಸ ವ್ಯವಸ್ಥೆ ನವೆಂಬರ್ 1 ರಿಂದ ರಾಜ್ಯಾದ್ಯಂತ ಜಾರಿಗೊಳ್ಳಲಿದೆ ಎಂದರು. ಸರ್ಕಾರದ ಈ ನಿರ್ಧಾರದಿಂದ ಇಲಾಖೆಗಿರುವ ಭ್ರಷ್ಟಾಚಾರವನ್ನು ತೊಲಗಿಸಿ, ಗ್ರಾಹಕರು ಅಲೆದಾಡಿ, ದಿನಗಟ್ಟಲೇ ಕಾಯುವ ವ್ಯವಸ್ಥೆಗೆ ಕೊನೆ ಹಾಡುವುದಲ್ಲದೆ, ದಾಖಲೆಗಳ ನೈಜತೆಗೆ ಇನ್ನು ಮುಂದೆ ಸರ್ಕಾರವೇ ಹೊಣೆಯಾಗಿರುತ್ತದೆ ಎಂದು ವಿವರಿಸಿದರು. ಆಸ್ತಿನೋಂದಣಿಗಾಗಿ ರಾಜ್ಯಾದ್ಯಂತ ಜನರ ಅಲೆದಾಟ ನಡೆಯುತ್ತಲೇ ಇದ್ದು, ಇದನ್ನು ತಪ್ಪಿಸಲು ಕಾವೇರಿ–2 ಕಾರ್ಯಕ್ರಮ ಜಾರಿಗೊಳಿಸುವುದಾಗಿ ನುಡಿದರು. ಇದರಡಿ ಇನ್ನು ಮುಂದೆ ಆಸ್ತಿ ನೋಂದಣಿ ಮಾಡಿಸಲು ಜನ ಉಪನೋಂದಣಾಧಿಕಾರಿಗಳ ಕಚೇರಿಗೆ ಅಲೆದಾಡ ಬೇಕಿಲ್ಲ.ಬದಲಿಗೆ ಮನೆಯಲ್ಲಿ ಕುಳಿತೇ ಆನ್‌ಲೈನ್ ಮೂಲಕ ನೋಂದಣಿ ಪ್ರಕ್ರಿಯೆಗೆ ಅರ್ಜಿ ಸಲ್ಲಿಸಬಹುದು. ಅರ್ಜಿಯ ಜತೆ ದಾಖಲೆ ಸಲ್ಲಿಸಿದರೆ ಉಪನೋಂದಣಾಧಿಕಾರಿಗಳು ಅದನ್ನು ಪರಿಶೀಲಿಸುತ್ತಾರೆ. ಅದರಲ್ಲಿ ಏನಾದರೂ ಕೊರತೆ ಇದ್ದರೆ,ತಪ್ಪಿದ್ದರೆ ಅರ್ಜಿದಾರರಿಗೆ ತಿಳಿಸುತ್ತಾರೆ. ತದನಂತರ ಸದರಿ ದಾಖಲೆ ಪತ್ರದ ನೋಂದಣಿಗೆ ಸಮಯಾವಕಾಶವನ್ನು ನಿಗದಿಗೊಳಿಸಲಾಗುತ್ತದೆ.ಹೀಗೆ ನಿಗದಿ ಮಾಡಿದ ಸಮಯಕ್ಕೆ ಸರಿಯಾಗಿ ಅರ್ಜಿದಾರರು ಹೋದರೆ ಅವರ ಹೆಬ್ಬೆಟ್ಟು ಗುರುತು ಮತ್ತು ಸಹಿ ಪಡೆದು ನೋಂದಣಿ ಪ್ರಕ್ರಿಯೆಯನ್ನು 20 ನಿಮಿಷಗಳಲ್ಲಿ ಪೂರ್ಣಗೊಳಿಸ ಲಾಗುತ್ತದೆ. ನೋಂದಣಿಯ ನಂತರ ಅದರ ಪ್ರತಿಯನ್ನು ಪಡೆಯಲೂ ಅರ್ಜಿದಾರರು ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ಕಾಯಬೇಕಿಲ್ಲ.ಬದಲಿಗೆ ಆಸ್ತಿ ನೋಂದಣಿ ಪ್ರಕ್ರಿಯೆ ಪೂರ್ಣಗೊಂಡ ತಕ್ಷಣ ಅರ್ಜಿದಾರರ ಡಿ.ಜಿ. ಲಾಕರ್‌ಗೆ ಅದರ ಪ್ರತಿ ರವಾನೆಯಾಗುತ್ತದೆ. ಡಿ.ಜಿ.ಲಾಕರ್ ಸುರಕ್ಷಿತವಾಗಿರುವುದರಿಂದ ಈ ನೋಂದಣಿ ದಾಖಲೆಯನ್ನು ಬೇರೆಯವರು ಪಡೆಯಲು ಸಾಧ್ಯವಾಗುವುದಿಲ್ಲ ಎಂದು ಅವರು ಹೇಳಿದರು.

ಕಾವೇರಿ–2 ತಂತ್ರಾಂಶವು ಇಲಾಖೆಯ ಬೇರೆ ಬೇರೆ ತಂತ್ರಾಂಶಗಳೊಂದಿಗೆ ಸಂವಹನ ನಡೆಸುವ ಸಾಮರ್ಥ್ಯ ಇರುವುದರಿಂದ ನೋಂದಣಿಗೆ ನಾಗರಿಕರಿಂದ ಪಡೆಯುವ ದಾಖಲೆಗಳನ್ನು ಮಿತಿಗೊಳಿಸಬಹುದಾಗಿದೆ. ಆಸ್ತಿ ನೋಂದಣಿಯಲ್ಲಿ ನಾಗರಿಕರಿಗೆ ಆಗುವ ಅಕ್ರಮ ಮತ್ತು ವಂಚನೆಯನ್ನು ಇದರಿಂದ ತಡೆಯಬಹುದಾಗಿದೆ ಎಂದರು.

ಈ ತಂತ್ರಾಂಶವು ಅಡೆತಡೆ ರಹಿತವಾದ ಸುಗಮ–ಸರಳ, ತಾಂತ್ರಿಕ ದೋಷರಹಿತ ನೋಂದಣಿ ಪ್ರಕ್ರಿಯೆಯನ್ನೊಳಗೊಂಡಿದೆ. ಇನ್ನು ಮುಂದೆ ಸರ್ವರ್ ಡೌನ್ ಎನ್ನುವ ಮಾತೇ ಇರುವುದಿಲ್ಲ. ಕೇಂದ್ರೀಯ ಸರ್ವರ್ ಹೊರತುಪಡಿಸಿ, ಯಾವುದೇ ಸ್ಥಳೀಯ ಸರ್ವರ್‌ಗಳು ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು. ತಂತ್ರಾಂಶಗಳನ್ನು ಸಿಡಿಯಲ್ಲಿ ಸಂಗ್ರಹಿಸುವ ಹಳೆ ಪದ್ಧತಿಯನ್ನು ಕೈಬಿಡಲಾಗಿದೆ. ಇದು ರಾಜ್ಯ ದತ್ತಾಂಶ ಕೇಂದ್ರದಲ್ಲಿ ಸಂಗ್ರಹಣೆಯಾಗಿರುವುದರಿಂದ ಇದರ ವೆಚ್ಚವೂ ಕಡಿಮೆಯಾಗುತ್ತದೆ. ಈ ಮಧ್ಯೆ ಮನೆ, ಕಟ್ಟಡ, ನಿವೇಶನ ಮತ್ತು ಭೂಮಿಯ ಖರೀದಿಯಲ್ಲಿ ಯಾರೂ ಮೋಸ ಹೋಗದಂತೆ ತಡೆಯಲು ಸರ್ಕಾರವೇ ಏಜೆನ್ಸಿಗಳನ್ನು ಪ್ರಾರಂಭಿಸಲಿದ್ದು ಇದರ ರೂಪುರೇಷೆಗಳು ಸಿದ್ಧವಾಗುತ್ತಿವೆ ಎಂದರು. ಸಂಬಂಧಿತ ಆಸ್ತಿಯ ಖರೀದಿಯಲ್ಲಿ ಯಾವುದಾದರೂ ಸಮಸ್ಯೆ ಇದೆಯೇ ಅಥವಾ ಸಮಸ್ಯೆ ಇಲ್ಲವೇ ಎಂಬುದನ್ನು ಸರ್ಕಾರದ ಏಜೆನ್ಸಿಯೇ ಪರಿಶೀಲಿಸಿ ಹಸಿರು ನಿಶಾನೆ ನೀಡುತ್ತದೆ.ಆ ಮೂಲಕ ಒಂದೇ ನಿವೇಶನ ಮತ್ತು ಆಸ್ತಿಯನ್ನು ಹಲವು ಕಡೆ ಮಾರುವುದರಿಂದ ಹಿಡಿದು ಹಲವು ಬಗೆಯಲ್ಲಿ ವಂಚಿಸುವ ಜಾಲದಿಂದ ಜನ ಬಚಾವಾಗುತ್ತಾರೆ ಎಂದರು. ಸರ್ಕಾರದ ಏಜೆನ್ಸಿಗೆ ನಿಗದಿತ ಶುಲ್ಕ ಪಾವತಿಸಿ, ಗ್ರಾಹಕರು ತಾವು ಖರೀದಿಸುವ ಆಸ್ತಿಯ ದಾಖಲೆಗಳನ್ನು ಸರ್ಕಾರದಿಂದಲೇ ಪಡೆದು, ಆನಂತರ ನೋಂದಣಿ ಮಾಡಿಸಿಕೊಳ್ಳಬಹುದು. ನವೆಂಬರ್ 1 ರಿಂದ ಹೊಸ ತಂತ್ರಾಂಶ ಕಂದಾಯ ಇಲಾಖೆಯ ಇತರ ತಂತ್ರಾಂಶಗಳಿಗೆ ಸಂಪರ್ಕವಿರುತ್ತದೆ. ಒಂದು ಆಸ್ತಿಯ ಬಗ್ಗೆ ಎಲ್ಲಿಯಾದರೂ, ಮೋಸ, ವಂಚನೆ ಮಾಡಲು ಮುಂದಾದರೆ, ತಕ್ಷಣವೇ ಅದರ ಆಸ್ತಿಯ ವಾರಸುದಾರರ ಪೂರ್ಣ ಮಾಹಿತಿ ನೀಡುತ್ತದೆ. ಇಂತಹ ಸನ್ನಿವೇಶದಲ್ಲಿ ನೋಂದಣಾಧಿಕಾರಿಗಳು ಸಂಬಂಧಪಟ್ಟ ಆಸ್ತಿಯನ್ನು ನೋಂದಾಯಿಸಲು ಮುಂದಾದ ಗ್ರಾಹಕರಿಗೆ ಪೂರ್ಣ ಚಿತ್ರಣವನ್ನು ನೀಡಲಿದ್ದಾರೆ. ಆಸ್ತಿ ನೋಂದಣಿ ಮಾಡಿಸಲು ಶೇಕಡಾ ಹತ್ತರಷ್ಟು ರಿಯಾಯ್ತಿ ನೀಡಿದ ಪರಿಣಾಮವಾಗಿ ಸರ್ಕಾರದ ಆದಾಯ ಹೆಚ್ಚಿದ್ದು ಕಳೆದ ಮೂರು ತಿಂಗಳಲ್ಲಿ 6700 ಕೋಟಿ ರೂಪಾಯಿಗಳಿಗೂ ಅಧಿಕ ಹಣ ಸಂಗ್ರಹವಾಗಿದೆ.

ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಸದ್ಯದ ನಿರ್ಧಾರ


ಅಭ್ಯರ್ಥಿಯಾಗಿ ಕಣಕ್ಕಿಳಿಯುವುದು ಬಹುತೇಕ ಖಚಿತ ಎನ್ನಲಾಗಿದೆ.

ಕಣದಲ್ಲಿ ಏನಾದರೂ ಆಗಬಹುದು: ಜೆಡಿಎಸ್ ವಿರುದ್ಧ ಕಿಡಿಕಾರುತ್ತಿರುವ ಕಾಂಗ್ರೆಸ್ ಈ ಬಾರಿ ಮೈತ್ರಿಗೆ ಜೋತುಬೀಳದೆ ಸ್ವತಂತ್ರವಾಗಿ ಸ್ಪರ್ಧಿಸುವ ದೃಢ ನಿರ್ಧಾರಕ್ಕೆ ಬಂದಿದೆ. ಅವಕಾಶ ಸಿಕ್ಕರೆ ಆಡಳಿತ ನಡೆಸುವುದು ಇಲ್ಲವೇ ಪ್ರತಿಪಕ್ಷದಲ್ಲಿ ಕೂರುವ ಮೂಲಕ ಬದ್ಧತೆ ಕಾಯ್ದುಕೊಳ್ಳುವ ನಿಲುವು ಹೊಂದಿದೆ. ಈ ನಡುವೆ ಬಿಎಸ್‌ಪಿ ಸದಸ್ಯೆ ಪಲ್ಲವಿ ಬೇಗಂ ಹಾಗೂ ಜೆಡಿಎಸ್‌ನಲ್ಲಿ ಗುರುತಿಸಿಕೊಂಡಿರುವ ಮತ್ತೋರ್ವ ಸದಸ್ಯನ ಬೆಂಬಲ ಪಡೆಯುವ ನಿಟ್ಟಿನಲ್ಲೂ ಅವಿರತ ಪ್ರಯತ್ನ ನಡೆಸಿದೆ. ಈವರೆಗೆ ಬಿಜೆಪಿಯಿಂದ ಯಾವುದೇ ಸಂದೇಶ ಬಾರದಿದ್ದರೂ ಜೆಡಿಎಸ್ ಪಾಳಯದಲ್ಲಿ ಮಾತ್ರ ವಿಶ್ವಾಸ ಅಚಲವಾಗಿದೆ. ಅಂತಿಮ ಕ್ಷಣದಲ್ಲಾದರೂ ಬಿಜೆಪಿ ಬೆಂಬಲಿಸಲಿದೆ ಎನ್ನುವ ನಂಬಿಕೆಯೊಂದಿಗೆ ಜೆಡಿಎಸ್ ಕಾದು ಕುಳಿತಿದೆ. ಒಂದು ವೇಳೆ ಮಾತಿನಂತೆ ನಡೆಯದೆ ಬಿಜೆಪಿ ತನ್ನ ಅಭ್ಯರ್ಥಿಯನ್ನು ಕಣಕ್ಕಿಳಿಸಿದರೆ ತಕ್ಕ ಉತ್ತರ ನೀಡುವ ನಿಟ್ಟಿನಲ್ಲೂ ತಂತ್ರ ರೂಪಿಸಿಕೊಂಡಿದೆ. ಸಂಖ್ಯಾಬಲದಲ್ಲಿ ಕಾಂಗ್ರೆಸ್‌ಗಿಂತ ಒಂದು ಮತ ಹೆಚ್ಚಿರುವ ಬಿಜೆಪಿಯೂ ಮತ್ತೆ ಅಧಿಕಾರ ಹಿಡಿಯಲು ಹವಣಿಸುತ್ತಿದೆ. ಇಷ್ಟೆಲ್ಲಾ ಬೆಳವಣಿಗೆಯಾದರೂ ಅಂತಿಮ ಕ್ಷಣದಲ್ಲಿ ಬಿಜೆಪಿ ನಿಲುವು ಬದಲಿಸಿ ಜೆಡಿಎಸ್‌ಗೆ ಬೆಂಬಲ ನೀಡಬಹುದು. ತಪ್ಪಿದರೆ ಬಿಜೆಪಿಗೆ ಹೊಡೆತ ನೀಡಲು ಜೆಡಿಎಸ್, ಕಾಂಗ್ರೆಸ್‌ಗೆ ಬೆಂಬಲಿಸಬಹುದು. ಇಲ್ಲವೇ ಪಕ್ಷೇತರರ ಬೆಂಬಲದೊಂದಿಗೆ ಕಾಂಗ್ರೆಸ್ ಅಧಿಕಾರ ಹಿಡಿಯಬಹುದು. ಒಟ್ಟಾರೆ ಚುನಾವಣಾ ಅಖಾಡದಲ್ಲಿ ಏನು ಬೇಕಾದರೂ ಆಗಬಹುದು.

ಸದ್ಯದ ಬಲಾಬಲ: ಅಧಿಕೃತವಾಗಿ ಮೈಸೂರು ಮಹಾನಗರ ಪಾಲಿಕೆಯಲ್ಲಿನ 65 ವಾರ್ಡ್‌ಗಳ ಪೈಕಿ ಬಿಜೆಪಿಯ 22, ಕಾಂಗ್ರೆಸ್‌ನ 20, ಜೆಡಿಎಸ್‌ನಿಂದ 17, ಬಿಎಸ್‌ಪಿಯ 1 ಹಾಗೂ ಐವರು ಸ್ವತಂತ್ರವಾಗಿ ಪಾಲಿಕೆ ಸದಸ್ಯರಾಗಿ ಆಯ್ಕೆಯಾಗಿದ್ದಾರೆ.


ಜೊತೆಗೆ ಬಿಜೆಪಿಗೆ ಓರ್ವ ಸದಸ್ಯ, ಇಬ್ಬರು ಶಾಸಕರು ಹಾಗೂ ಓರ್ವ ವಿಧಾನ ಪರಿಷತ್ ಸದಸ್ಯ ಸೇರಿ ಒಟ್ಟು 26 ಮಂದಿ ಮೇಯರ್, ಉಪಮೇಯರ್ ಚುನಾವಣೆಗೆ ಮತ ಚಲಾಯಿಸುವ ಅವಕಾಶ ಹೊಂದಿದ್ದಾರೆ. ಕಾಂಗ್ರೆಸ್‌ನಿಂದ ಓರ್ವ ಶಾಸಕ, ಮೂವರು ವಿಧಾನಪರಿಷತ್ ಸದಸ್ಯರು ಸೇರಿ 24 ಮಂದಿ, ಜೆಡಿಎಸ್‌ನಿಂದ ಓರ್ವ ಶಾಸಕ, ಇಬ್ಬರು ವಿಧಾನ ಪರಿಷತ್ ಸದಸ್ಯರು ಸೇರಿ ಒಟ್ಟು 20 ಮಂದಿ ಮತದಾನ ಮಾಡಲು ಹಕ್ಕುಳ್ಳವರಾಗಿದ್ದಾರೆ. ಆದರೆ ಬಿಎಸ್‌ಪಿ ಹಾಗೂ ಸ್ವತಂತ್ರವಾಗಿ ಆಯ್ಕೆಯಾಗಿರುವ 6 ಮಂದಿ ನಗರ ಪಾಲಿಕೆ ಸದಸ್ಯರು, ಆಯಾಯ ವಿದ್ಯಮಾನಗಳಿಂದ ಪಕ್ಷಗಳಲ್ಲಿ ಗುರ್ತಿಸಿಕೊಂಡಿರುವುದರಿಂದ ಪ್ರಸ್ತುತ ಬಿಜೆಪಿ 27, ಕಾಂಗ್ರೆಸ್ 26 ಹಾಗೂ ಜೆಡಿಎಸ್ 23 ಸದಸ್ಯ ಬಲ ಹೊಂದಿದೆ. ಇಂದು ರಾತ್ರಿ ನಡೆಯಲಿರುವ ರಾಜಕೀಯ ಅಂತಿಮ ವಿದ್ಯಮಾನಗಳಿಂದ ಅವರು ಯಾರಿಗೆ ಬೆಂಬಲಿಸುವರೆಂಬುದು ನಿರ್ಧಾರವಾಗಲಿದೆ. ಪಾಲಿಕೆ ಅಧಿಕಾರ ಹಿಡಿಯಲು ಯಾವುದೇ ಪಕ್ಷಕ್ಕೂ ಸಂಖ್ಯಾಬಲವಿಲ್ಲ. ಹೊಂದಾಣಿಕೆ ಮಾಡಿಕೊಂಡರಷ್ಟೇ ಎರಡು ಪಕ್ಷಗಳು ಆಡಳಿತದ ಚುಕ್ಕಾಣಿ ಹಿಡಿಯಬಹುದಾಗಿದೆ. ಕಳೆದ ಬಾರಿ ಬಿಜೆಪಿಗೆ ಜೆಡಿಎಸ್ ಪರೋಕ್ಷ ಬೆಂಬಲ ನೀಡಿದ ಕಾರಣ ಸುನಂದಾ ಪಾಲನೇತ್ರ ಅವರು ಮೇಯರ್ ಆಗಿ ಆಯ್ಕೆಯಾಗಲು ಸಾಧ್ಯವಾಗಿತ್ತು.

ಜೆಡಿಎಸ್‌ನೊಂದಿಗೆ ಮೈತ್ರಿ ವರಿಷ್ಠರ ತೀರ್ಮಾನ



ಮೈಸೂರು ಮೇಯರ್ ಚುನಾವಣೆಯಲ್ಲಿ ಜೆಡಿಎಸ್‌ನೊಂದಿಗೆ ಮೈತ್ರಿ ವಿಚಾರವಾಗಿ ಪಕ್ಷದ ವರಿಷ್ಠರು ತೀರ್ಮಾನ ಕೈಗೊಳ್ಳುತ್ತಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್ ತಿಳಿಸಿದ್ದಾರೆ. ಕಳೆದ ಬಾರಿ ಮೈತ್ರಿ ಮಾಡಿಕೊಳ್ಳುವಂತೆ ಸೂಚಿಸಿದ್ದರು. ಕಳೆದ ಬಾರಿಯ ವಿಚಾರ ಅಲ್ಲಿಗೇ ಮುಗಿಯಿತು. ಈ ಬಾರಿ ಪ್ರತ್ಯೇಕವಾಗಿ ಸ್ಪರ್ಧಿಸುವಂತೆ ಸೂಚಿಸಲಾಗಿದೆ. ಆದರೂ ವರಿಷ್ಠರು ಅಂತಿಮವಾಗಿ ನೀಡುವ ಸೂಚನೆಯನ್ನು ಪಾಲಿಸುತ್ತೇವೆ. ಸಾ.ರಾ. ಮಹೇಶ್ ಅವರು ನನಗೆ ಫೋನ್ ಮಾಡಿದ್ದರು. ಅವರಿಗೂ ಕೂಡ ಇದೇ ವಿಚಾರವನ್ನು ತಿಳಿಸಿದ್ದೇನೆ ಎಂದು ಹೇಳುವ ಮೂಲಕ ಪ್ರತ್ಯೇಕವಾಗಿ ಸ್ಪರ್ಧಿಸುವ ಬಿಜೆಪಿಯ ನಿಲುವು ಅಂತಿಮ ಕ್ಷಣದಲ್ಲಿ ಬದಲಾಗಲೂಬಹುದು ಎಂಬುದನ್ನು ಪರೋಕ್ಷವಾಗಿ ತಿಳಿಸಿದರು. ಸಂಸದ ಪ್ರತಾಪ್ ಸಿಂಹ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯಿಸಿ, ಮೇಯರ್ ಚುನಾವಣೆಯಲ್ಲಿ ಬಿಜೆಪಿ ಪ್ರತ್ಯೇಕವಾಗಿ ಸ್ಪರ್ಧಿಸುವುದು ಎಂದು ಸದ್ಯಕ್ಕೆ ತೀರ್ಮಾನವಾಗಿದೆ ಎಂದು ತಿಳಿಸಿದರು. ಮುಂದಕ್ಕೆ ತೀರ್ಮಾನ ಬದಲಾಗಬಹುದೇ ಎಂಬ ಪ್ರಶ್ನೆಗೆ ಉತ್ತರಿಸಲು ನಿರಾಕರಿಸಿದರು.

ಕಾಂಗ್ರೆಸ್ ಪ್ರತ್ಯೇಕವಾಗಿ ಸ್ಪರ್ಧೆ



ಮೇಯರ್ ಚುನಾವಣೆಯಲ್ಲಿ ಕಾಂಗ್ರೆಸ್ ಯಾರೊಂದಿಗೂ ಮೈತ್ರಿ ಮಾಡಿಕೊಳ್ಳದೇ ಪ್ರತ್ಯೇಕವಾಗಿ ಸ್ಪರ್ಧಿಸಲಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಧ್ರುವನಾರಾಯಣ ತಿಳಿಸಿದ್ದಾರೆ. ಪಾಲಿಕೆಯಲ್ಲಿ 22 ಸದಸ್ಯರು, ಓರ್ವ ಶಾಸಕರು, ಮೂವರು ವಿಧಾನ ಪರಿಷತ್ ಸದಸ್ಯರು ಸೇರಿದಂತೆ 26 ಮತಗಳನ್ನು ಕಾಂಗ್ರೆಸ್ ಹೊಂದಿದೆ ಎಂದರು. ಮೈತ್ರಿ ಬಗ್ಗೆ ಜೆಡಿಎಸ್ ಜೊತೆ ನಾವು ಮಾತನಾಡಿಲ್ಲ, ಮುಂದೆ ಮಾತನಾಡುವುದೂ ಇಲ್ಲ. ಅವರು ಕೂಡ ನಮ್ಮೊಂದಿಗೆ ಮಾತನಾಡಿಲ್ಲ. ಪ್ರತ್ಯೇಕವಾಗಿ ಸ್ಪರ್ಧಿಸುವುದು ಎಂಬ ಸ್ಪಷ್ಟ ನಿಲುವನ್ನು ಹೊಂದಿದೆ. ಆದರೆ, ಜೆಡಿಎಸ್‌ನದು ಅವಕಾಶವಾದಿ ರಾಜಕಾರಣ ಎಂದರು. ನಮ್ಮ ಮತ್ತು ಅವರ ನಡುವೆ ಮೈಸೂರು ನಗರಪಾಲಿಕೆಗೆ ಸಂಬಂಧಿಸಿದಂತೆ ಉತ್ತಮವಾದ ಒಪ್ಪಂದ ಆಗಿತ್ತು. ಅದರಂತೆ ಅವರು ಕಳೆದ ಬಾರಿ ನಮಗೆ ಮೇಯರ್ ಸ್ಥಾನ ಬಿಟ್ಟುಕೊಡಬೇಕಾಗಿತ್ತು. ಆದರೆ ಅವರು ಮಾಡಿದ್ದೇ ಬೇರೆ. ಈಗಲೂ ಕೂಡ ಕಾಂಗ್ರೆಸ್ ಜೊತೆ ಮೈತ್ರಿ ಇಲ್ಲ ಎಂದು ಮೊದಲು ಹೇಳಿಕೆ ನೀಡಿದ್ದು ಸಾ.ರಾ. ಮಹೇಶ್. ಇಂದು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿಯವರು ಮೈಸೂರು ನಗರಪಾಲಿಕೆ ಬಗ್ಗೆ ಮುಖ್ಯಮಂತ್ರಿಗಳ ಜೊತೆ ಮಾತನಾಡಿರುವುದಾಗಿ ಹೇಳಿಕೆ ನೀಡಿದ್ದಾರೆ. ಜಾತ್ಯತೀತ ಜನತಾ ದಳದಲ್ಲಿ ಜಾತ್ಯಾತೀತವನ್ನು ಉಳಿಸಿಕೊಂಡಿಲ್ಲ ಎಂದರು.

ಲಿಜ್ ಟ್ರಸ್ ಬ್ರಿಟನ್ ನೂತನ ಪ್ರಧಾನಿ

ಭಾರತೀಯ ಮೂಲದ ರಿಷಿ ಸುನಕ್‌ಗೆ ಸೋಲು



ಲಂಡನ್, ಸೆ5– ಬ್ರಿಟನ್ ಪ್ರಧಾನಿ ಹುದ್ದೆಗಾಗಿ ನಡೆದ ಚುನಾವಣೆಯಲ್ಲಿ ಭಾರತ ಮೂಲದ ರಿಷಿ ಸುನಕ್‌ಗೆ ಸೋಲು ಎದುರಾಗಿದ್ದು, ಕನ್ಸರ್ವೇಟಿವ್ ಪಕ್ಷದ ನಾಯಕತ್ವದ ಸ್ಪರ್ಧೆಯಲ್ಲಿ ಯುಕೆ ವಿದೇಶಾಂಗ ಕಾರ್ಯದರ್ಶಿ ಲಿಜ್ ಟ್ರಸ್ ಜಯಭೇರಿ ಬಾರಿಸಿದ್ದಾರೆ.

ಯುಕೆ ವಿದೇಶಾಂಗ ಕಾರ್ಯದರ್ಶಿ ಲಿಜ್ ಟ್ರಸ್ ಅವರು ಹೊಸ ಬ್ರಿಟಿಷ್ ಪ್ರಧಾನಿಯಾಗಲು ಕನ್ಸರ್ವೇಟಿವ್ ಪಕ್ಷದ ನಾಯಕತ್ವದ ಸ್ಪರ್ಧೆಯಲ್ಲಿ ಭಾರತೀಯ ಮೂಲದ ಮಾಜಿ ಚಾನ್ಸೆಲರ್ ರಿಷಿ ಸುನಕ್ ಅವರನ್ನು ಸೋಲಿಸಿದ್ದಾರೆ ಎಂದು ಪಕ್ಷವು ಸೋಮವಾರ ಘೋಷಿಸಿದೆ.

ಆ ಮೂಲಕ ಕಳೆದೊಂದು ತಿಂಗಳಿನಿಂದ ಬ್ರಿಟನ್‌ನಲ್ಲಿ ನಡೆದ ಪೊಲಿಟಿಕಲ್ ಹೈ ಡ್ರಾಮಾಗೆ ಕೊನೆಗೂ ತೆರೆ ಬಿದ್ದಂತಾಗಿದೆ. ಸರ್ ಗ್ರಹಾಂ ಬ್ರಾಡಿ – 1922 ರ ಬ್ಯಾಕ್ ಬೆಂಚ್ ಟೋರಿ ಸಂಸದರ ಸಮಿತಿಯ ಅಧ್ಯಕ್ಷರು ಮತ್ತು ನಾಯಕತ್ವದ ಚುನಾವಣೆಯ ರಿಟರ್ನಿಂಗ್ ಆಫೀಸರ್ –10 ಡೌನಿಂಗ್ ಸ್ಟ್ರೀಟ್‌ನಲ್ಲಿ ಉನ್ನತ ಹುದ್ದೆಗಾಗಿ ನಡೆದ ಸ್ಪರ್ಧೆಯಲ್ಲಿ 47 ವರ್ಷ ವಯಸ್ಸಿನ ಟ್ರಸ್ ವಿಜೇತರೆಂದು ಘೋಷಿಸಲಾಗಿದೆ.

ಪ್ರಮುಖವಾಗಿ ಇನ್ಫೋಸಿಸ್ ನಾರಾಯಣ ಮೂರ್ತಿ ಅಳಿಯ ರಿಷಿ ಸುನಕ್ ಹಾಗೂ ಲಿಜ್ ಟ್ರಸ್ ನಡುವೆ ತೀವ್ರ ಸ್ಪರ್ಧೆ ಏರ್ಪಟ್ಟಿತ್ತು. ಅಂತಿಮವಾಗಿ ಲಿಜ್ ಟ್ರಸ್ ಅತೀ ಹೆಚ್ಚಿನ ಮತಗಳ ಮೂಲಕ ಕನ್ಸರ್ವೇ ಟೀವ್ ಪಾರ್ಟಿ ನಾಯಕಿಯಾಗಿ ಆಯ್ಕೆಯಾಗಿದ್ದಾರೆ.

ಈ ಅಭಿಯಾನದಲ್ಲಿ ನನಗೆ ಮತ ನೀಡಿದ ಎಲ್ಲರಿಗೂ ಧನ್ಯವಾದಗಳು. ಕನ್ಸರ್ವೇಟಿವ್ ಪಕ್ಷದ ಬೆಂಬಲಿಗರು ಒಂದೇ ಕುಟುಂಬಕ್ಕೆ ಸೇರಿದವರೆಂದು ನಾನು ಈ ಹಿಂದೆಯೇ ಹೇಳಿದ್ದೇನೆ. ನಾವು ಈಗ ಹೊಸ ಪ್ರಧಾನಿ ಲಿಜ್ ಟ್ರಸ್ ಅವರ ಹಿಂದೆ ಒಂದಾಗಿ ಸಾಗಬೇಕಿದೆ. ಕಷ್ಟದ ಸಮಯದಲ್ಲಿ ಅವರು ದೇಶವನ್ನು ಮುನ್ನಡೆಸುತ್ತಿದ್ದಾರೆ.

– ರಿಷಿ ಸುನಕ್,



ಇದೀಗ ಲಿಜ್ ಟ್ರಸ್ ಬ್ರಿಟನ್ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಲಿದ್ದಾರೆ.

ಬ್ರಿಟನ್ ಪ್ರಧಾನಿ ಯಾರಾಗ ಬೇಕು ಎಂದು ಕಳೆದ ಒಂದು ತಿಂಗಳಿನಿಂದ ಮತದಾನ ಪ್ರಕ್ರಿಯೆ ನಡೆದಿತ್ತು. ಇದರಲ್ಲಿ ಲಿಜ್ ಟ್ರಸ್ 82 ಸಾವಿರಕ್ಕೂ ಹೆಚ್ಚು ಮತಗಳನ್ನು ಪಡೆದಿದ್ದರೆ, ರಿಷಿ ಸುನಕ್ 62 ಸಾವಿರಕ್ಕೂ ಹೆಚ್ಚು ಮತಗಳನ್ನು ಪಡೆದಿದ್ದಾರೆ. ಈ ಮೂಲಕ ಲಿಜ್ ಟ್ರಸ್ ಬ್ರಿಟನ್ ನೂತನ ಪ್ರಧಾನಿಯಾಗಿ ಆಯ್ಕೆಯಾಗಿದ್ದಾರೆ.



ಬ್ರಿಟನ್‌ನ ಮುಂದಿನ ಪ್ರಧಾನಿಯಾಗಿ ಆಯ್ಕೆಯಾಗಿದ್ದಕ್ಕೆ ತಮಗೆ ಅಭಿನಂದನೆಗಳು. ನಿಮ್ಮ ನಾಯಕತ್ವದಲ್ಲಿ ಭಾರತ–ಯುಕೆ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ಮತ್ತಷ್ಟು ಬಲಗೊಳ್ಳಲಿದೆ ಎಂಬ ವಿಶ್ವಾಸವಿದೆ. ನಿಮ್ಮ ಹೊಸ ಪಾತ್ರ ಮತ್ತು ಜವಾಬ್ದಾರಿಗಳಿಗೆ ಶುಭ ಹಾರೈಸುತ್ತೇನೆ.

- ಪ್ರಧಾನಿ ಮೋದಿ ಟ್ವೀಟ್

ಇಬ್ಬರು ಮಹಿಳೆಯರ ಸಂಭಾಷಣೆಯಲ್ಲಿ ಹೆಸರು ಕೇಳಿ ಬಂದ ಆರೋಪ

ನೇಗಿನಾಳ ಬಸವಸಿದ್ಧಲಿಂಗ ಸ್ವಾಮೀಜಿ ಆತ್ಮಹತ್ಯೆ



ಬೆಳಗಾವಿ, ಸೆ.5– ಬಸವ ತತ್ವ ಪ್ರತಿಪಾದಕ, ಅನುಯಾಯಿ ನೇಗಿನಹಾಳ ಶ್ರೀ ಗುರು ಮಡಿವಾಳೇಶ್ವರ ಮಠದ ಬಸವ ಸಿದ್ದಲಿಂಗ ಸ್ವಾಮೀಜಿ ನೇಣಿಗೆ ಶರಣಾಗಿದ್ದಾರೆ. ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ನೇಗಿನಹಾಳ ಗ್ರಾಮದ ಶ್ರೀಗುರು ಮಡಿವಾಳೇಶ್ವರ ಮಠದ ಬಸವಸಿದ್ಧಲಿಂಗ ಸ್ವಾಮೀಜಿ ಅವರು ನೇಣು ಬಿಗಿದು ಆತ್ಮಹತ್ಯೆಗೆ ಶರಣಾಗಿದ್ದಾರೆ.

ಮಠದ ಆವರಣ ಕೊಠಡಿಯಲ್ಲೇ ಸ್ವಾಮೀಜಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಬೆಳಗ್ಗೆ ಭಕ್ತರು ಗಮನಿಸಿದಾಗ ಘಟನೆ ಬೆಳಕಿಗೆ ಬಂದಿದೆ. ಭಾನುವಾರ ರಾತ್ರಿ ಮಠದ ತಮ್ಮ ಕೊಠಡಿಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಘಟನೆಗೆ ನಿಖರವಾದ ಕಾರಣ ತಿಳಿದು ಬಂದಿಲ್ಲ. ಆದರೆ, ಮುರುಘಾ ಶ್ರೀಗಳ ಪ್ರಕರಣದ ಬಗ್ಗೆ ಇಬ್ಬರು ಮಹಿಳೆಯರು ಮಾತನಾಡಿದ್ದಾರೆ ಎನ್ನಲಾದ ಆಡಿಯೋವೊಂದು ಭಾನುವಾರ ವೈರಲ್ ಆಗಿದೆ. ಅದರಲ್ಲಿ ಮಹಿಳೆಯರು ನೇಗಿನಹಾಳ ಸ್ವಾಮೀಜಿ ಹೆಸರನ್ನು ಸಹ ಉಲ್ಲೇಖಿಸಿ ಹೆಣ್ಣು ಮಕ್ಕಳೊಂದಿಗೆ ಅನೈತಿಕ ಸಂಪರ್ಕ ಹೊಂದಿದ್ದಾರೆಂದು ಮಾತನಾಡಿದ್ದರು ಎಂದು ಹೇಳಲಾಗಿದೆ.

ರಾಜ್ಯದ ಹಲವು ಮಠಾಧೀಶರು ಮಹಿಳೆಯರನ್ನು ಲೈಂಗಿಕವಾಗಿ ಬಳಸಿಕೊಳ್ಳುತ್ತಿದ್ದಾರೆ ಎಂದು ಓರ್ವ ಮಹಿಳೆ ಸಂಭಾಷಣೆಯಲ್ಲಿ ಆರೋಪಿಸುತ್ತಾರೆ. ಆ ಸಂಭಾಷಣೆಯ ನಡುವೆ ಬಸವಸಿದ್ಧಲಿಂಗ ಸ್ವಾಮಿಯವರ ಹೆಸರನ್ನು ಮಹಿಳೆ ಉಲ್ಲೇಖಿಸುತ್ತಾಳೆ. ಇದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆದ ಕಾರಣದಿಂದಲೇ ಶ್ರೀಗಳು ಆತ್ಮಹತ್ಯೆ ಮಾಡಿಕೊಂಡಿರಬಹುದು ಎನ್ನಲಾಗಿದೆ.

ನಾನು ತಪ್ಪು ಮಾಡಿಲ್ಲ...

ಆತ್ಮಹತ್ಯೆಗೂ ಮುನ್ನ ಡೆತ್‌ನೋಟ್ ಬರೆದಿರುವ ಸ್ವಾಮೀಜಿ, ನಾನು ಯಾವುದೇ ತಪ್ಪು ಮಾಡಿಲ್ಲ, ನನ್ನ ಸಾವಿಗೆ ನಾನೇ ಕಾರಣ. ಯಾರನ್ನೂ ವಿಚಾರಣೆಗೆ ಒಳಪಡಿಸ ಬೇಡಿ. ಈ ಲೋಕದ ಗೊಡವೆ ಸಾಕು, ಹಡೆದ ತಾಯಿ ನನ್ನ ಕ್ಷಮಿಸು, ಮಠದ ಭಕ್ತರು ನನ್ನನ್ನು ಕ್ಷಮಿಸಿ. ನನ್ನ ನಡೆ ಮಡಿವಾಳೇಶ್ವರ ಕಡೆಗೆ. ಮಠದ ಕಮಿಟಿ, ಭಕ್ತರು ಮಠವನ್ನು ಮುನ್ನಡೆಸಿಕೊಂಡು ಹೋಗಿ ಎಂದು ಉಲ್ಲೇಖಿಸಿದ್ದಾರೆ.

ಕ್ಯಾಂಪಸ್ ಫ್ರಂಟ್ ಆಫ್ ಇಂಡಿಯಾ: ಗೌರಿ ಲಂಕೇಶ್ ಸ್ಮರಣೆ



ಮೈಸೂರು, ಸೆ.5(ಎಂಕೆ)– ಕ್ಯಾಂಪಸ್ ಫ್ರಂಟ್ ಆಫ್ ಇಂಡಿಯಾ ಮೈಸೂರು ಜಿಲ್ಲಾ ಸಮಿತಿ ವತಿಯಿಂದ ಮೊಂಬತ್ತಿ ಬೆಳಗಿಸಿ, ಮೌನಾಚರಣೆ ಮೂಲಕ ಪತ್ರಕರ್ತೆ ಗೌರಿ ಲಂಕೇಶ್ ಅವರನ್ನು ಸ್ಮರಿಸಲಾಯಿತು.

ನಗರದ ಟೌನ್‌ಹಾಲ್ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಎದುರು ಜಮಾವಣೆಗೊಂಡ ಕಾರ್ಯಕರ್ತರು, ಗೌರಿ ಲಂಕೇಶ್ ಅವರನ್ನು ಹತ್ಯೆಗೈಯುವ ಮೂಲಕ ಭಯೋತ್ಪಾದನೆ ಬಿಂಬಿಸಲಾಗಿದೆ ಎಂದು ದೂರಿದರಲ್ಲದೆ ಗೌರಿ ಲಂಕೇಶ್ ನಮ್ಮ ನಡುವೆ ಇಲ್ಲದಿದ್ದರೂ ಅವರ ವಿಚಾರ ಸಿದ್ಧಾಂತಗಳು ಉಳಿದುಕೊಂಡಿವೆ ಎಂದರು. ಕ್ಯಾಂಪಸ್ ಫ್ರಂಟ್ ಆಫ್ ಇಂಡಿಯಾ ಜಿಲ್ಲಾ ಉಪಾಧ್ಯಕ್ಷೆ ಸಮಿನ ಕೌಸರ್, ಅಮೀನ್, ಇಸ್ಮಾಯಿಲ್ ರಾಯಣ್, ಹಾಝಿಕ್, ಫಾಜ್ಹಲ್ ಮತ್ತಿತರರಿದ್ದರು.



ಮೈಸೂರು ವಿಶ್ವವಿದ್ಯಾನಿಲಯದ ಸ್ಪೋರ್ಟ್ಸ್ ಪೆವಿಲಿಯನ್‌ನಲ್ಲಿ ಇತ್ತೀಚೆಗೆ ನಡೆದ ಮೈಸೂರು ವಿಶ್ವವಿದ್ಯಾನಿಲಯದ ಅಂತರ ವಲಯ ಅಂತರ ಕಾಲೇಜುಗಳ ಪುರುಷರ ಕ್ರೀಡಾಕೂಟದಲ್ಲಿ ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನ ವಿದ್ಯಾರ್ಥಿಗಳು ಥ್ರೋಬಾಲ್ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾರೆ. ವಿಜೇತ ವಿದ್ಯಾರ್ಥಿಗಳನ್ನು ಕಾಲೇಜಿನ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯ, ಪ್ರಾಂಶುಪಾಲರಾದ ಪ್ರೊ. ಎಂ.ಪಿ. ವಿಜಯೇಂದ್ರಕುಮಾರ್, ದೈಹಿಕ ಶಿಕ್ಷಣ ನಿರ್ದೇಶಕ ಎಂ. ಕಾರ್ತಿಕ್ ಅಭಿನಂದಿಸಿದ್ದಾರೆ.

ರಾಜೇಂದ್ರ ಶ್ರೀಗಳ ಜಯಂತಿ; ಶಿಕ್ಷಕರ ದಿನಾಚರಣೆ



ಸುತ್ತೂರು, ಸೆ.5(ಎಸ್‌ಪಿಎನ್)– ನಂಜನಗೂಡು ತಾಲೂಕಿನ ಸುತ್ತೂರು ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ವತಿಯಿಂದ ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರ 107ನೇ ಜಯಂತಿ ಹಾಗೂ ಶಿಕ್ಷಕರ ದಿನಾಚರಣೆಯನ್ನು ಸೋಮವಾರ ಆಚರಿಸಲಾಯಿತು.

ನಿವೃತ್ತ ಅಭಿಯಂತರ ಗುರುಕಾರ್ ಪುಟ್ಟಬುದ್ಧಿ ಅವರು, ಡಾ.ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರಿಗೆ ನುಡಿನಮನ ಸಲ್ಲಿಸುತ್ತ, ಶ್ರೀಗಳ ಜೀವಿತಾವಧಿಯ ಅನುಭವಗಳನ್ನು ವಿವರಿಸಿದರಲ್ಲದೆ, ಶ್ರೀಗಳು ಬಡವರ ಪರವಾಗಿ ಅಳವಡಿಸಿಕೊಂಡಿದ್ದ ಹೃದಯವಂತಿಕೆ, ಸರಳತೆ, ಕಾರ್ಯಕ್ಷಮತೆ ಕುರಿತು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮೈಸೂರಿನ ನಿವೃತ್ತ ಮುಖ್ಯ ಅಭಿಯಂತರ ಎಂ.ಸಿ. ಶಶಿಧರ್ ಮಾತನಾಡಿ, ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು, ಜಗತ್ತಿನ ಶ್ರೇಷ್ಠ ತತ್ತ್ವಜ್ಞಾನಿ ಮತ್ತು ದಾರ್ಶನಿಕರಾಗಿ ಭಾರತದ ಸಂಸ್ಕೃತಿ ಮತ್ತು ಧರ್ಮವನ್ನು ಜಗತ್ತಿಗೆ ಪರಿಚಯಿಸಿದವರು. ಅವರ ಜೀವನವೇ ನಮಗೆಲ್ಲ ದೊಡ್ಡ ಪಾಠವಾಗಿದೆ. ಭಾರತದ ಶಿಕ್ಷಕರೊಬ್ಬರು ಮೊದಲನೇ ಉಪ ರಾಷ್ಟ್ರಪತಿಯಾಗಿ, ಎರಡನೇ ರಾಷ್ಟ್ರಪತಿಯಾಗಿ ನೇಮಕಗೊಂಡು, ದೇಶ ಕಟ್ಟುವಲ್ಲಿ ಶಿಕ್ಷಕ ಪಾತ್ರವನ್ನು ಕಾರ್ಯರೂಪಕ್ಕೆ ತಂದಿದ್ದರು ಎಂದರು.

ಸಂಸ್ಥೆಯ ವತಿಯಿಂದ ಶಿಕ್ಷಕರ ದಿನಾಚರಣೆ ಅಂಗವಾಗಿ ಶಾಲಾ ಮುಖ್ಯ ಶಿಕ್ಷಕರು ಹಾಗೂ ಇತರೆ ಶಿಕ್ಷಕರಿಗೆ ಆಯೋಜಿಸಿದ್ದ ಭಕ್ತಿಗೀತೆ, ಭಾವಗೀತೆ ಸ್ಪರ್ಧೆ ಹಾಗೂ ವಿವಿಧ ಕ್ರೀಡಾಕೂಟಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಇದೇ ಸಂದರ್ಭದಲ್ಲಿ ಕಳೆದ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಯಡಹಳ್ಳಿ ಎಂ.ಸುಷ್ಮಿತಾ ಅವರಿಗೆ ಚಾಮರಾಜನಗರದ ದೀನಬಂಧು ಟ್ರಸ್ಟ್ ವತಿಯಿಂದ ನಗದು ಪುರಸ್ಕಾರ ನೀಡಲಾಯಿತು.

ಈ ವೇಳೆ ಬರಡನಪುರ ಮಹಂತೇಶ್ವರ ಮಠದ ಶ್ರೀ ಪರಶಿವಮೂರ್ತಿ ಸ್ವಾಮೀಜಿ, ಸುತ್ತೂರು ಜೆಎಸ್‌ಎಸ್ ಸಂಸ್ಥೆಗಳ ಆಡಳಿತಾಧಿಕಾರಿ ಎಸ್.ಪಿ. ಉದಯಶಂಕರ್, ಜೆಎಸ್‌ಎಸ್ ಡಿ.ಇಲ್.ಇಡಿ. ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಎಂ. ರಾಜಶೇಖರ್, ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಸಂಸ್ಥೆಗಳ ಮುಖ್ಯಸ್ಥ ಜಿ.ಎಲ್. ತ್ರಿಪುರಾಂತಕ, ಸಂಪತ್ತು, ವೀರಭದ್ರಯ್ಯ, ಡಾ. ಹೆಚ್.ಎಂ. ಮಹೇಶ್, ಎಸ್.ಶಿವಸ್ವಾಮಿ, ಜಿ. ಶಿವಮಲ್ಲು, ಸಿ.ಪಿ. ನಿರ್ಮಲ, ಜಿ.ಎಂ. ಷಡಕ್ಷರಿ, ಮಹದೇವಪ್ರಸಾದ್, ಸುಶೀಲ, ಎಂ. ಷಡಕ್ಷರಿ, ಸುನಂದ ಭೂಪಾಲಿ ಉಪಸ್ಥಿತರಿದ್ದರು.



ಕಾವೇರಿ ಕರಕುಶಲ ನಿಗಮದ ವ್ಯವಸ್ಥಾಪಕ ಜಿ.ಪುಟ್ಟಸ್ವಾಮಿ ಅವರನ್ನು ಶಾಸಕ ಎಲ್.ನಾಗೇಂದ್ರ ಸನ್ಮಾನಿಸಿ, ಆತ್ಮೀಯವಾಗಿ ಬೀಳ್ಕೊಟ್ಟರು. ಕರಕುಶಲ ನಗರದ ಬಹುಕಲಾ ಸಂಕೀರ್ಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಾರ್ಪೋರೇಟರ್ ರಮೇಶ್, ಮಾಜಿ ಕಾರ್ಪೋರೇಟರ್ ದೇವರಾಜು, ಕಾವೇರಿ ಮಾರಾಟ ಮಳಿಗೆ ವ್ಯವಸ್ಥಾಪಕ ಟಿ.ಲಕ್ಷ್ಮಣ್, ಸಹಾಯಕ ನಿರ್ದೇಶಕ ಸುನೀಲ್ ಕುಮಾರ್, ಕೆಹೆಚ್‌ಎಡಬ್ಲ್ಯೂಎ ರಾಜ್ಯಾಧ್ಯಕ್ಷ ಅಶೋಕ್‌ಕುಮಾರ್, ಕಾರ್ಯದರ್ಶಿ ಮುರುಗೇಶ್, ಕಾವೇರಿ ಕರಕುಶಲ ಕೆಲಸಗಾರರ ಸಹಕಾರ ಸಂಘದ ಮಾಜಿ ಅಧ್ಯಕ್ಷ ಟಿ.ಶಶಿಧರ್, ಆರ್.ರವಿಕುಮಾರ್, ಮಧುಸೂದನ್, ಎನ್.ಕುಮಾರ್, ಎಸ್.ಸುರೇಶ್, ಮಂಗಳಗೌರಮ್ಮ, ನಾಗಮ್ಮ ಇನ್ನಿತರರಿದ್ದರು.

ತಾತಯ್ಯನವರ 178ನೇ ಜಯಂತ್ಯುತ್ಸವ: ಗೌರವ ಸಮರ್ಪಣೆ

ಮೈಸೂರು, ಸೆ5– ಮೈಸೂರಿನ ತಾತಯ್ಯ ಉದ್ಯಾನವನದಲ್ಲಿ ನಗರಪಾಲಿಕೆ ಹಾಗೂ ತಾತಯ್ಯ ಅಭಿಮಾನಿ ಬಳಗದ ವತಿಯಿಂದ ಎಂ.ವೆಂಕಟಕೃಷ್ಣಯ್ಯ (ತಾತಯ್ಯ) ಅವರ 178ನೇ ಜಯಂತ್ಯುತ್ಸವ ಆಚರಿಸಲಾಯಿತು.

ತಾತಯ್ಯ ಅವರ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಿದ ಪ್ರಭಾರ ಮೇಯರ್ ಸುನಂದಾ ಪಾಲನೇತ್ರ ಮಾತನಾಡಿ, ಎಂ.ವೆಂಕಟಕೃಷ್ಣಯ್ಯನವರ (ತಾತಯ್ಯ) ಆದರ್ಶ ಜೀವನ ಇಂದಿನ ಯುವಕರಿಗೆ ದಾರಿದೀಪ. ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ ಹಾಗೂ ಪತ್ರಿಕಾ ರಂಗದಲ್ಲಿ ಇವರ ಕೊಡುಗೆ ಅಪಾರ. ಹೊರಗಿನಿಂದ ಮೈಸೂರಿಗೆ ವಿದ್ಯಾಭ್ಯಾಸಕ್ಕೆಂದು ಬಂದವರಿಗೆ ತೊಂದರೆಯಾಗಬಾರದೆಂದು ಉಚಿತವಾಗಿ ಅನಾಥಾಲಯವನ್ನು ಸ್ಥಾಪಿಸಿ, ಸಾವಿರಾರು ಜನರ ಬದುಕಿಗೆ ಬೆಳಕಾಗಿದ್ದಾರೆ. ತಾತಯ್ಯ ಅವರ ಸಮಾಜ ಸೇವಾ ಕಾರ್ಯಗಳನ್ನು ಪ್ರತಿಯೊಬ್ಬರು ಮುಂದುವರೆಸಿಕೊಂಡು ಹೋಗಬೇಕು ಎಂದರು.

ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್ ಮಾತನಾಡಿದರು.ತಾತಯ್ಯ ಅಭಿಮಾನಿ ಬಳಗದ ಗೌರವ ಅಧ್ಯಕ್ಷ ಎಸ್.ಸುಂದರೇಶ್, ರವೀಂದ್ರ ರಂಗನಾಥ್, ಶ್ರೀಧರ್ ಮೂರ್ತಿ, ಉಪನ್ಯಾಸಕ ರಾಜೇಂದ್ರಪ್ರಸಾದ್ ಹೊನ್ನಲಗೆರೆ, ವೆಂಕಟೇಶ್, ನಗರಪಾಲಿಕೆ ಹೊನ್ನೇಶ್, ನಾಗರಾಜು, ನೀಲಮ್ಮ ಮತ್ತಿತರರು ಉಪಸ್ಥಿತರಿದ್ದರು.



ವಾರ್ಷಿಕ ಮಹಾಸಭೆ

ಮೈಸೂರು, ಸೆ. 5– ಮೈಸೂರಿನ ಜಯನಗರದಲ್ಲಿರುವ ಕೌಸ್ತುಭ ವಿವಿಧೋದ್ದೇಶ ಸಹಕಾರಿ ಸಂಘದ 2021–22ನೇ ಸಾಲಿನ ಸರ್ವ ಸದಸ್ಯರ ಸಭೆ ಸೆ. 24 ರಂದು ಬೆಳಗ್ಗೆ 10.30 ರಿಂದ 1 ರವರೆಗೆ ಜೆಎಲ್‌ಬಿ ರಸ್ತೆಯಲ್ಲಿರುವ ಮಾಧವ ಶೆಣೈ ಹಾಲ್‌ನಲ್ಲಿ ಅಧ್ಯಕ್ಷ ಜಿ.ವಿ. ಕೃಷ್ಣ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ.

ಚಾ.ನಗರದ ನೆರೆಪೀಡಿತ ಪ್ರದೇಶಗಳಿಗೆ ಜಿಲ್ಲಾಧಿಕಾರಿ ಭೇಟಿ, ಪರಿಶೀಲನೆ



ಚಾಮರಾಜನಗರ, ಸೆ.5–ಮಳೆ ಹಾಗೂ ತಾಲೂಕಿನ ಅವಳಿ ಜಲಾಶಯಗಳಿಂದ ನೀರಿನ ಹೊರ ಹರಿವು ಹೆಚ್ಚಳದಿಂದ ಹಾನಿಗೀಡಾಗಿರುವ ವಿವಿಧ ಗ್ರಾಮಗಳಿಗೆ ಜಿಲ್ಲಾಧಿಕಾರಿ ಚಾರುಲತಾ ಸೋಮಲ್ ಅವರಿಂದು ಭೇಟಿ ನೀಡಿ ಪರಿಶೀಲಿಸಿದರು.

ಮಳೆ ಹಾಗೂ ಜಲಾಶಯಗಳ ನೀರಿನ ಹರಿವಿನಿಂದ ಉಂಟಾಗಿರುವ ಪರಿಸ್ಥಿತಿಯ ಮಾಹಿತಿ ಪಡೆದುಕೊಂಡಿರುವ ಜಿಲ್ಲಾ ಉಸ್ತುವಾರಿ ಸಚಿವ ವಿ.ಸೋಮಣ್ಣ ಅವರು ಜಲಾವೃತವಾಗಿರುವ ಗ್ರಾಮಗಳು ಹಾಗೂ ಇನ್ನಿತರ ಭಾಗಗಳಲ್ಲಿ ಪರಿಹಾರ ಕಾರ್ಯಾಚರಣೆ ಕೈಗೊಳ್ಳುವಂತೆ ನೀಡಿರುವ ಸೂಚನೆ ಮೇರೆಗೆ ಜಿಲ್ಲಾಧಿಕಾರಿ ಕಾರ್ಯಾಚರಣೆ ನಡೆಸಿದರು.

ಜಿಲ್ಲಾಧಿಕಾರಿ ಚಾರುಲತಾ ಸೋಮಲ್ ಮೊದಲು ಸುವರ್ಣಾವತಿ ಹಾಗೂ ಚಿಕ್ಕಹೊಳೆ ಜಲಾಶಯಕ್ಕೆ ತೆರಳಿ ಪರಿಶೀಲಿಸಿದರು. ನೀರಿನ ಒಳ ಹರಿವು ಹಾಗೂ ಹೊರ ಹರಿವಿನ ಪ್ರಮಾಣದ ಬಗ್ಗೆ ನೀರಾವರಿ ಇಲಾಖೆ ಅಧಿಕಾರಿಗಳಿಂದ ವಿವರ ಪಡೆದುಕೊಂಡರಲ್ಲದೆ, ಮುಂಜಾಗ್ರತಾ ಕ್ರಮವಾಗಿ ಕಾಲಕಾಲಕ್ಕೆ ತಕ್ಷಣವೇ ಮಾಹಿತಿ ಒದಗಿಸುವಂತೆ ತಾಕೀತು ಮಾಡಿದರು.

ಬಳಿಕ ಜಲಾಶಯಗಳ ನೀರು ನುಗ್ಗಿದ್ದ ಹರದನಹಳ್ಳಿಯ ಗ್ರಾಮ ಪಂಚಾಯಿತಿ ಕಚೇರಿ, ಅಂಚೆ ಕಚೇರಿ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಗೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದರು. ನೀರು ತೆರವುಗೊಳಿಸುವ ಕಾರ್ಯ ತ್ವರಿತಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಕೆಲವು ಮನೆಗಳು ಜಲಾವೃತವಾಗಿದ್ದ ಹಿನ್ನೆಲೆಯಲ್ಲಿ ಕಾಳಜಿ ಕೇಂದ್ರ ತೆರೆದು ಸೌಲಭ್ಯ ಕಲ್ಪಿಸಲು ತಹಶೀಲ್ದಾರ್, ಕಂದಾಯ ನಿರೀಕ್ಷಕರಿಗೆ ನಿರ್ದೇಶನ ನೀಡಿದರಲ್ಲದೆ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ನಿರ್ವಹಣೆಯಿಂದ ಕೆಲವೆಡೆ ಜಲಾವೃತವಾಗಿರುವ ಬಗ್ಗೆ ಮಾಹಿತಿ ಪಡೆದರು.

ಕೋಡಿಮೋಳೆ ಗ್ರಾಮದಲ್ಲಿ ಜನರ ಅಹವಾಲು ಆಲಿಸಿದರು. ಅಲ್ಲದೆ ಕಾಳಜಿ ಕೇಂದ್ರದಲ್ಲಿ ಸೌಕರ್ಯ ಕೊರತೆಯಾಗದಂತೆ ನಿಗಾ ವಹಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಾಗವಳ್ಳಿ ಗ್ರಾಮಕ್ಕೂ ಭೇಟಿ ನೀಡಿ ಪರಿಶೀಲಿಸಿದ ಜಿಲ್ಲಾಧಿಕಾರಿ, ಅಲ್ಲಿನ ಸೇತುವೆ ಇನ್ನಿತರ ಪ್ರದೇಶಗಳನ್ನು ವೀಕ್ಷಿಸಿದರು. ಜ್ಯೋತಿಗೌಡನಪುರ ಹಾಗೂ ಇನ್ನಿತರ ಭಾಗಗಳಿಗೂ ಭೇಟಿ ನೀಡಿ ಪರಿಶೀಲಿಸಿದರು. ತಹಸೀಲ್ದಾರ್ ಬಸವರಾಜು, ಕಾವೇರಿ ನೀರಾವರಿ ನಿಗಮದ ಇಇ ಮಂಜುನಾಥ್, ಎಇ ಮಹದೇವಸ್ವಾಮಿ, ಕಂದಾಯ ಇಲಾಖೆ ಅಧಿಕಾರಿಗಳು, ಆಯಾ ಭಾಗದ ಪಿಡಿಓಗಳಿದ್ದರು.

ಮೈಸೂರು ಮಿತ್ರ ಮಂಗಳವಾರ 6 ಸೆಪ್ಟೆಂಬರ್ 2022

ಮಡಿಕೇರಿ ದಸರಾ ಅದ್ದೂರಿ ಆಚರಣೆಗೆ ನಿರ್ಧಾರ



ಮಡಿಕೇರಿ,ಸೆ.5– ಐತಿಹಾಸಿಕ ಹಿನ್ನೆಲೆ ಹೊಂದಿರುವ ಮಡಿಕೇರಿ ದಸರಾವನ್ನು ಈ ಬಾರಿ ಅತ್ಯಂತ ಅದ್ದೂರಿಯಾಗಿ ಆಚರಿಸಲು ದಸರಾ ಸಮಿತಿ ನಿರ್ಧರಿಸಿದೆ. ದಶಮಂಟಪಗಳಿಗೆ ತಲಾ 3.30 ಲಕ್ಷ ರೂ. ಹಾಗೂ 4 ಶಕ್ತಿ ದೇವತೆಗಳ ಕರಗಗಳಿಗೆ ತಲಾ 2 ಲಕ್ಷ ರೂ. ಅನುದಾನ ನೀಡಲಾಗುತ್ತದೆ ಎಂದು ದಸರಾ ಸಮಿತಿ ಕಾರ್ಯಾಧ್ಯಕ್ಷ ಕೆ.ಎಸ್. ರಮೇಶ್ ಘೋಷಿಸಿದ್ದಾರೆ.

ನಗರದ ಕಾವೇರಿ ಕಲಾಕ್ಷೇತ್ರದಲ್ಲಿ ನಗರ ದಸರಾ ಸಮಿತಿ ಅಧ್ಯಕ್ಷೆಯೂ ಆಗಿರುವ ನಗರಸಭಾಧ್ಯಕ್ಷೆ ಅನಿತಾ ಪೂವಯ್ಯ ಅಧ್ಯಕ್ಷತೆಯಲ್ಲಿ ಜರುಗಿದ ದಸರಾ ಆಚರಣೆಯ ಪೂರ್ವಭಾವಿ ಸಮಿತಿ ಸಭೆಯಲ್ಲಿ ದಸರಾ ಸಮಿತಿ ಕಾರ್ಯಾಧ್ಯಕ್ಷ ಕೆ.ಎಸ್.ರಮೇಶ್ ಈ ಬಾರಿಯ ದಸರಾ ಸಂಬಂಧಿತ ಅನುದಾನ ಹಂಚಿಕೆಯ ಯೋಜನೆ ಪ್ರಕಟಿಸಿದರು.

ಈ ಬಾರಿ ಸರ್ಕಾರದಿಂದ 1 ಕೋಟಿ ರು. ಅನುದಾನ ಮಡಿಕೇರಿ ದಸರಾ ಆಚರಣೆಗೆ ಶಾಸಕರ ಪ್ರಯತ್ನದಿಂದ ಮಂಜೂರಾಗಿದ್ದು ಈ ಪೈಕಿ 18 ಲಕ್ಷ ರೂ. ಜಿ.ಎಸ್.ಟಿ.ಗೆ ಸಂದಾಯವಾಗಲಿದೆ. ಈ ಬಾರಿ ದಶಮಂಟಪ ಹಾಗೂ ಕರಗಗಳಿಗೆ ಒಟ್ಟು 41 ಲಕ್ಷ ರೂ. ಅಂದರೆ 82 ಲಕ್ಷ ರೂ. ಅನುದಾನವನ್ನು ನೀಡಲಾಗುತ್ತದೆ ಎಂದು ಕೆ.ಎಸ್.ರಮೇಶ್ ಮಾಹಿತಿ ನೀಡಿದರು.

ಅನುದಾನ ಹಂಚಿಕೆ: ನವ ದಿನಗಳ ಕಾಲ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಲು ಸಭೆಯಲ್ಲಿ ನಿರ್ಧರಿಸಲಾಯಿತು. ಅದರಂತೆ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ 13 ಲಕ್ಷ ರೂ. ಮೀಸಲಿಡಲಾಗಿದ್ದು ಇದರಲ್ಲಿ ಮಕ್ಕಳ ದಸರಾ, ಮಹಿಳಾ ದಸರಾ, ಜಾನಪದ ದಸರಾ, ಯುವದಸರಾ ಸೇರಿದಂತೆ 9 ದಿನಗಳ ಕಾಲ ವೈವಿಧ್ಯಮಯ ಕಾರ್ಯಕ್ರಮ ಆಯೋಜಿಸಲಾಗುತ್ತದೆ. ಗಾಂಧಿ ಮೈದಾನದಲ್ಲಿ ಈಗಾಗಲೇ 75 ಲಕ್ಷ ರೂ. ವೆಚ್ಚದಲ್ಲಿ ಸುಸಜ್ಜಿತ ಗ್ಯಾಲರಿ ಸಿದ್ಧಗೊಳ್ಳುತ್ತಿದ್ದು, ಈ ಬಾರಿಯ ದಸರಾಕ್ಕೆ ವೇದಿಕೆ, ನಗರ ದೀಪಾಲಂಕಾರ ಮತ್ತು ಇತರ ಸೌಲಭ್ಯಗಳಿಗಾಗಿ 17 ಲಕ್ಷ ರೂ. ಮೀಸಲಿಡಲಾಗಿದೆ. ಕವಿಗೋಷ್ಠಿಗೆ 50 ಸಾವಿರ ರೂ., ದಶಮಂಟಪಗಳ ಸೇರಿದಂತೆ ಇತರ ಬಹುಮಾನಕ್ಕಾಗಿ 5 ಲಕ್ಷ ರೂ. ಪೂಜೆ ಮತ್ತು ಇತರ ವೆಚ್ಚಗಳಿಗಾಗಿ 2.80 ಲಕ್ಷ ರೂ, ದಶಮಂಟಪ, ಕರಗ ಪೂಜೆ ವೆಚ್ಚಕ್ಕಾಗಿ 20 ಸಾವಿರ ರೂ. ಸೇರಿದಂತೆ 41 ಲಕ್ಷ ರೂ. ಮೀಸಲಿಡಲಾಗಿದೆ ಎಂದೂ ಕೆ.ಎಸ್.ರಮೇಶ್ ಸಭೆಗೆ ಮಾಹಿತಿ ನೀಡಿದರು. ಈ ಬಾರಿ ವಿಜೃಂಭಣೆಯಿಂದ ಮಡಿಕೇರಿ ದಸರಾವನ್ನು ಮೈಸೂರು ದಸರಾ ನೆನಪಿಸುವಂತೆ ಆಚರಿಸಲಾಗುತ್ತದೆ. ಇದಕ್ಕೆ ಸರ್ವರೂ ಸಹಕಾರ ನೀಡುವಂತೆ ರಮೇಶ್ ಮನವಿ ಮಾಡಿದರು.

ದಸರಾ ಸಮಿತಿ ಅಧ್ಯಕ್ಷೆ ಅನಿತಾ ಪೂವಯ್ಯ ಮಾತನಾಡಿ, ಎರಡು ವರ್ಷಗಳ ಬಳಿಕ ಮತ್ತೆ ವಿಜೃಂಭಣೆಯಿಂದ ಜನೋತ್ಸವ ದಸರಾ ಆಚರಿಸಲಾಗುತ್ತದೆ. ಮಡಿಕೇರಿ ರಸ್ತೆಗಳ ದುರಸ್ತಿ ಕಾರ್ಯ ಸೇರಿದಂತೆ ಕೆಲವೊಂದು ಅಗತ್ಯ ಕಾರ್ಯಗಳನ್ನು ದಸರಾಕ್ಕೆ ಮುನ್ನ ಪೂರೈಸಲಾಗುತ್ತದೆ ಎಂದು ಭರವಸೆ ನೀಡಿದರು.

ದಸರಾ ಸಮಿತಿ ವಿಶೇಷ ಆಹ್ವಾನಿತರಾದ ಟಿ.ಪಿ.ರಮೇಶ್ ಮಾತನಾಡಿ, ದಸರಾ ಆಚರಣೆಗೆ ವ್ಯವಸ್ಥಿತವಾದ ಕ್ರಿಯಾಯೋಜನೆ ಸಿದ್ಧಪಡಿಸಿಕೊಳ್ಳಿ ಎಂದು ಸಲಹೆ ನೀಡಿದರಲ್ಲದೇ ಯಾವುದೇ ಲೋಪವಾಗದಂತೆ ಕಾರ್ಯಕ್ರಮ ಆಯೋಜಿಸುವಂತೆ ಸಲಹೆ ನೀಡಿದರು.

ವಿಶೇಷ ಆಹ್ವಾನಿತರಾದ ಜಿ.ರಾಜೇಂದ್ರ ಮಾತನಾಡಿ, ಮಳೆ ಬರಬಹುದಾದ ಸಾಧ್ಯತೆ ಹಿನ್ನೆಲೆಯಲ್ಲಿ ಎಲ್ಲಾ ಸಿದ್ಧತೆಗಳೊಂದಿಗೆ ಗಾಂಧಿ ಮೈದಾನದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಿ. ಉತ್ತಮ ಕಾರ್ಯಕ್ರಮಗಳಿಗೆ ಆದ್ಯತೆ ನೀಡಿ ಎಂದು ಸಲಹೆ ನೀಡಿದರು.

ಸಭೆಯಲ್ಲಿ ದಸರಾ ಸಮಿತಿ ಪ್ರಧಾನ ಕಾರ್ಯದರ್ಶಿ ರಾಜೇಶ್ ಯಲ್ಲಪ್ಪ, ನಗರಸಭೆ ಪೌರಾಯುಕ್ತ ವಿಜಯ್, ಉಪಾಧ್ಯಕ್ಷೆ ಸವಿತಾ ರಾಕೇಶ್, ದಶಮಂಟಪ ಸಮಿತಿ ಅಧ್ಯಕ್ಷ ಮನುಮಂಜುನಾಥ್, ದಸರಾ ಸಮಿತಿ ಖಜಾಂಜಿ ಶ್ವೇತಾ, ನಗರಸಭಾ ಸದಸ್ಯರಾದ ಮಹೇಶ್ ಜೈನಿ, ಉಮೇಶ್ ಸುಬ್ರಮಣಿ, ಸಬಿತ, ಸತೀಶ್ ಪೈ, ಎಸ್.ಜಿ.ಸುಬ್ರಮಣಿ ಸೇರಿದಂತೆ ಪ್ರಮುಖರು ಹಾಜರಿದ್ದರು.

ಸಭೆಯಲ್ಲಿ ದಶಮಂಟಪ, ಕರಗಗಳಿಗೆ ಹೆಚ್ಚಿನ ಅನುದಾನ ನೀಡಬೇಕೆಂದು ದಶಮಂಟಪ ಸಮಿತಿ ಪದಾಧಿಕಾರಿಗಳು ಒತ್ತಾಯಿಸಿದ ಘಟನೆಯೂ ನಡೆಯಿತು. ದಸರಾ ಸಮಿತಿ ಕಾರ್ಯಾಧ್ಯಕ್ಷರು ಪ್ರಕಟಿಸಿದ 3.30 ಲಕ್ಷ ರೂ. ಅನುದಾನ ಮಂಟಪಗಳ ಅಲಂಕಾರಕ್ಕೆ ಏನೇನೂ ಸಾಲದು. ಹೆಚ್ಚಿನ ಅನುದಾನ ನೀಡಲೇಬೇಕೆಂಬ ಒತ್ತಾಯ ಕೇಳಿಬಂತು. ಈ ಸಂದರ್ಭ ಕೆ.ಎಸ್.ರಮೇಶ್, ಅನಿತಾಪೂವಯ್ಯ ಹೆಚ್ಚಿನ ಅನುದಾನಕ್ಕಾಗಿ ಪ್ರಯತ್ನಿಸೋಣ ಎಂಬ ಭರವಸೆ ನೀಡಿದ ಬಳಿಕ ಸಭೆ ಶಾಂತವಾಯಿತು.

ಸಭೆಗೂ ಮುನ್ನ ಬೆಳಗೆ ಪೇಟೆ ಶ್ರೀರಾಮ ಮಂದಿರದಲ್ಲಿ ಸಾಂಪ್ರದಾಯಿಕವಾಗಿ ಪೂಜೆ ಸಲ್ಲಿಸುವ ಮೂಲಕ ಮಡಿಕೇರಿ ದಸರಾ ಸಿದ್ಧತೆಗಳಿಗೆ ಚಾಲನೆ ನೀಡಲಾಯಿತು.

ವಿದ್ಯಾರ್ಥಿಗಳನ್ನು ಸತ್ಪ್ರಜೆಯಾಗಿ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ತರವಾದದ್ದು



ಮಡಿಕೇರಿ, ಸೆ.5– ವಿದ್ಯಾರ್ಥಿಗಳನ್ನು ಸತ್ಪ್ರಜೆಗಳನ್ನಾಗಿ ರೂಪಿಸುವಲ್ಲಿ ಶಿಕ್ಷಕರಲ್ಲಿ ದೊಡ್ಡ ಪಾತ್ರವಿದೆ ಎಂದು ಶಾಸಕರಾದ ಕೆ.ಜಿ.ಬೋಪಯ್ಯ ಮತ್ತು ಎಂ.ಪಿ.ಅಪ್ಪಚ್ಚು ರಂಜನ್ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕ್ರಿಸ್ಟಲ್ ಕೋರ್ಟ್ ಸಭಾಂಗಣದಲ್ಲಿ ಸೋಮವಾರ ನಡೆದ ಶಿಕ್ಷಕರ ದಿನಾಚರಣೆ ಮತ್ತು ಜಿಲ್ಲಾ ಅತ್ಯುತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಶಾಸಕ ಕೆ.ಜಿ.ಬೋಪಯ್ಯ ಮಾತನಾಡಿ, ಶಿಕ್ಷಕರು ಎಂದರೆ ಗುರುಗಳು, ಗುರು ಬ್ರಹ್ಮ–ಗುರುವಿಷ್ಣು–ಗುರುದೇವೋ ಮಹೇಶ್ವರ ಎಂಬಂತೆ ವಿದ್ಯಾರ್ಥಿಗಳನ್ನು ಒಳ್ಳೆಯ ಪ್ರಜೆಗಳಾಗಿ ರೂಪಿಸುವಲ್ಲಿ ಶಿಕ್ಷಕರಲ್ಲಿ ಹೆಚ್ಚಿನ ಹೊಣೆಗಾರಿಕೆ ಇದೆ. ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಕರ ಮಾತೇ ವೇದ ವಾಕ್ಯವಾಗಿರುತ್ತದೆ. ಆದ್ದರಿಂದ ಸಮಾಜದ ಬೆಳವಣಿಗೆಗೆ ಶಿಕ್ಷಕರ ಪಾತ್ರ ಮಹತ್ತರವಾಗಿದೆ ಎಂದು ನುಡಿದರು.

ಅನೇಕ ಸರ್ಕಾರಿ ಶಾಲೆಗಳನ್ನು ಪಬ್ಲಿಕ್ ಶಾಲೆಗಳನ್ನಾಗಿ ಆರಂಭಿಸಲಾಗಿದೆ ಶಿಕ್ಷಣ ಮೂಲಭೂತ ಹಕ್ಕಾಗಿದ್ದು, ಪದವಿವರೆಗೂ ಎಲ್ಲರಿಗೂ ಶಿಕ್ಷಣ ನೀಡಲು ಸರ್ಕಾರ ಬದ್ಧವಾಗಿದೆ ಎಂದು ಬೋಪಯ್ಯ ಹೇಳಿದರು. ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಕಾಲ ಮಿತಿಯಲ್ಲಿ ವೇತನ ಪಾವತಿಸಬೇಕು. ಯಾವುದೇ ಕಾರಣಕ್ಕೂ ವಿಳಂಬವಾಗದಂತೆ ನೋಡಿಕೊಳ್ಳುವುದು ಆಡಳಿತ ವ್ಯವಸ್ಥೆಯ ಜವಾಬ್ದಾರಿಯಾಗಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅಪ್ಪಚ್ಚುರಂಜನ್, ಪ್ರತೀ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸುಸಜ್ಜಿತ ಶಾಲೆ ಆರಂಭಿಸುವ ನಿಟ್ಟಿನಲ್ಲಿ ಈ ಹಿಂದೆ ಸರ್ಕಾರಕ್ಕೆ ಮನವಿ ಮಾಡಲಾಗಿತ್ತು, ಆ ನಿಟ್ಟಿನಲ್ಲಿ ಗ್ರಾಪಂ ಮಟ್ಟದಲ್ಲಿಯೂ ಸಹ ಸುಸಜ್ಜಿತ ಶಾಲೆ ನಿರ್ಮಿಸಲು ಸರ್ಕಾರ ಒತ್ತು ನೀಡಿದೆ ಎಂದರು.

ಕೊಡಗು ಜಿಲ್ಲೆಯಲ್ಲಿ ಶಾಲೆಗಳ ನಿರ್ಮಾಣಕ್ಕೆ ದಾನದ ರೂಪದಲ್ಲಿ ಜಾಗ ನೀಡಲಾಗಿತ್ತು, ಅದನ್ನು ಉಳಿಸಿಕೊಳ್ಳುವಂತಾಗಬೇಕು ಎಂದು ಇದೇ ಸಂದರ್ಭದಲ್ಲಿ ಅವರು ಸಲಹೆ ಮಾಡಿದರು.

ಆಧುನಿಕ ಜಗತ್ತಿನಲ್ಲಿ ಇಂಗ್ಲಿಷ್ ಭಾಷೆಯ ಜ್ಞಾನ ಅತ್ಯಗತ್ಯ, ಆ ನಿಟ್ಟಿನಲ್ಲಿ ಪ್ರಾಥಮಿಕ ಹಂತದಲ್ಲಿಯೇ ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಭಾಷೆ ಕಲಿಸಲು ಮುಂದಾಗಲಾಗಿದೆ ಎಂದರು.

ಕರ್ನಾಟಕ ಜೀವ ವೈವಿಧ್ಯ ಮಂಡಳಿ ಅಧ್ಯಕ್ಷರಾದ ನಾಪಂಡ ರವಿಕಾಳಪ್ಪ ಮಾತನಾಡಿ, ರಾಷ್ಟ್ರದ ಅಭಿವೃದ್ಧಿಗೆ ಶಿಕ್ಷಕರ ಕೊಡುಗೆ ಅಪಾರವಾಗಿದೆ. ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಒಳ್ಳೆಯ ವಿದ್ಯಾಭ್ಯಾಸ ನೀಡಿದ್ದಲ್ಲಿ ಸದಾ ಸ್ಮರಿಸಿಕೊಳ್ಳುತ್ತಾರೆ ಎಂದರು.

ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಮಾತನಾಡಿ, ನನ್ನ ತಂದೆಯವರು ಶಿಕ್ಷಕರಾಗಿದ್ದು, ಶಿಕ್ಷಕರ ಮೇಲೆ ಅತಿಯಾದ ಪ್ರೀತಿ ಗೌರವ ಅಭಿಮಾನ ಇದೆ ಎಂದರು.

ಜಿಲ್ಲೆಯಲ್ಲಿ 'ಗುರುಭವನ' ನಿರ್ಮಾಣಕ್ಕೆ ಬೇಕಾದ ಜಾಗವನ್ನು ಒದಗಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತದಿಂದ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದರು.

ಜಿಪಂ ಸಿಇಓ ಭಂವರ್ ಸಿಂಗ್ ಮೀನಾ ಅವರು ಮಾತನಾಡಿ, ಈ ಬಾರಿ ಫಲಿತಾಂಶದಲ್ಲಿ ಜಿಲ್ಲೆಯೂ ಉತ್ತಮ ಸಾಧನೆ ಮಾಡಿದೆ. ಇದರಲ್ಲಿ ಶಿಕ್ಷಕರ ಪರಿಶ್ರಮವೂ ಇದೆ ಎಂಬುದನ್ನು ಮರೆಯುವಂತಿಲ್ಲ, ಮುಂದಿನ ದಿನಗಳಲ್ಲಿ ಇನ್ನಷ್ಟು ಹೆಚ್ಚಿನ ಫಲಿತಾಂಶ ಪಡೆದು ಅಗ್ರ ಐದರಲ್ಲಿ ಬರುವಂತಾಗಲಿ ಎಂದು ಆಶಿಸಿದರು.

ಜಿಲ್ಲಾ ಎಸ್ಪಿ ಎಂ.ಎ.ಅಯ್ಯಪ್ಪ ಮಾತನಾಡಿ, ಹುದ್ದೆಯಲ್ಲಿ ಶ್ರೇಷ್ಠವಾದ ಹುದ್ದೆ ಎಂದರೆ ಅದು ಶಿಕ್ಷಕರ ಹುದ್ದೆಯಾಗಿದೆ. ಪ್ರತಿಯೊಬ್ಬರು ವೈದ್ಯ, ಸೈನಿಕ, ಎಂಜಿನಿಯರ್, ಐಪಿಎಸ್ ಅಧಿಕಾರಿ ಹೀಗೆ ಹಲವಾರು ಹುದ್ದೆಗಳನ್ನು ಚರ್ಚಿಸುತ್ತಾರೆ ಆದರೆ ಈ ಎಲ್ಲಾ ಗುರಿಯನ್ನು ತಲುಪಬೇಕಾದರೆ ನಮ್ಮ ಹಿಂದೆ ನಿಂತು ಬೆನ್ನು ತಟ್ಟಿ ಗುರಿ ತಲುಪಿಸುವ ಕೆಲಸ ಶಿಕ್ಷರ ಕೈಯಲ್ಲಿದೆ.

ಸರ್ವಪಳ್ಳಿ ರಾಧಾಕೃಷ್ಣ ಅವರ ಭಾವಚಿತ್ರಕ್ಕೆ ಗಣ್ಯರು ಪುಷ್ಪಾರ್ಚನೆ ಮಾಡಿ ಗೌರವ ನಮನ ಸಲ್ಲಿಸಿದರು. ಜಿಲ್ಲಾ ಮಟ್ಟದಲ್ಲಿ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪಡೆದವರಿಗೆ ಶಾಲು, ಫಲ ತಾಂಬೂಲ, ಪದಕ ನೀಡಿ ಗಣ್ಯರು ಅಭಿನಂದಿಸಿದರು.

ಹಾಗೆಯೇ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ನಿವೃತ್ತಿ ಹೊಂದಿದ ಶಿಕ್ಷಕರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಶಾಸಕ ಎಸ್.ಎಲ್. ಭೋಜೇಗೌಡ ಅವರು ಶಿಕ್ಷಕರ ದಿನಾಚರಣೆ ಮಹತ್ವವನ್ನು ಪತ್ರದ ಮೂಲಕ ಕಳುಹಿಸಲಾಗಿದ್ದ ಸಂದೇಶದ ಪತ್ರವನ್ನು ಓದಿದರು.

ಟ್ರ್ಯಾಕ್ಟರ್‌ನ ಟ್ರೈಲರ್ ಕದ್ದಿದ್ದ ಖದೀಮ ಬಂಧನ



ವಿರಾಜಪೇಟೆ, ಸೆ.5– ಮುಖ್ಯ ರಸ್ತೆ ಬದಿಯಲ್ಲಿ ನಿಲ್ಲಿಸಿದ್ದ ಟ್ರ್ಯಾಕ್ಟರ್‌ನ ಹಿಂಬದಿಯ ಟ್ರೈಲರನ್ನು ಕಳವು ಮಾಡಿ ಮಾರಾಟ ಮಾಡಿದ್ದ ಆರೋಪಿಯನ್ನು ವಿರಾಜಪೇಟೆ ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿ, ನ್ಯಾಯಾಲಯಕ್ಕೆ ಒಪ್ಪಿಸಿದ್ದಾರೆ.

ವಿರಾಜಪೇಟೆ ಸಮೀಪದ ಕಾವಾಡಿ ಗ್ರಾಮದ ಚಪ್ಪಂಡ ಉತ್ತಯ್ಯ (ಹರೀಶ್) ಎಂಬುವರು ತಮ್ಮ ಟ್ರ್ಯಾಕ್ಟರ್‌ನ ಟ್ರೈಲರನ್ನು ರಸ್ತೆ ಬದಿ ನಿಲ್ಲಿಸಿ ಮನೆಗೆ ಹೋಗಿದ್ದರು. ನಂತರ ಬಂದು ನೋಡಿದಾಗ ನಿಲ್ಲಿಸಿದ್ದ ಟ್ರೈಲರ್ ಕಾಣೆಯಾಗಿತ್ತು. ಈ ಸಂಬಂಧ ವಿರಾಜಪೇಟೆ ಗ್ರಾಮಾಂತರ ಠಾಣೆಗೆ ದೂರು ನೀಡಿದ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸಿದ ಠಾಣಾಧಿಕಾರಿ ರವಿಕುಮಾರ್ ಸಂಶಯದ ಮೇಲೆ ಮಗ್ಗುಲ ಗ್ರಾಮದ ಹೆಚ್.ಕೆ.ಸುಬ್ರಮಣಿಯನ್ನು ವಿಚಾರಣೆಗೆ ಒಳಪಡಿಸಿದಾಗ ಎರಡು ಮಂದಿ ಸೇರಿ ಕಳವು ಮಾಡಿ ಹೊದ್ದೂರು ಗ್ರಾಮದ ವ್ಯಕ್ತಿಯೊಬ್ಬರಿಗೆ ಮಾರಾಟ ಮಾಡಿರುವುದಾಗಿ ತನಿಖೆ ವೇಳೆ ಒಪ್ಪಿಕೊಂಡಿದ್ದಾನೆ. ಈ ಸಂಬಂಧ ಆರೋಪಿ ಸುಬ್ರಮಣಿಯನ್ನು ನ್ಯಾಯಾಧೀಶರ ಮುಂದೆ ಹಾಜರು ಪಡಿಸಲಾಗಿದ್ದು, ಮತ್ತೊಬ್ಬ ಆರೋಪಿ ತಲೆ ಮರೆಸಿಕೊಂಡಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಡಿವೈಎಸ್‌ಪಿ ನಿರಂಜನ್ ರಾಜೇ ಅರಸ್ ಅವರ ನಿರ್ದೇಶನದಂತೆ, ಸರ್ಕಲ್ ಇನ್ಸ್‌ಪೆಕ್ಟರ್ ಶಿವರುದ್ರ ಅವರ ಮಾರ್ಗದರ್ಶನದಲ್ಲಿ ಗ್ರಾಮಾಂತರ ಠಾಣಾಧಿಕಾರಿ ರವಿಕುಮಾರ್, ಸಿಬ್ಬಂದಿಗಳಾದ ಮೂರ್ತಿ, ಸಣ್ಣಸ್ವಾಮಿ ಇತರರು ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ಎಲ್‌ಐಸಿ ಪ್ರತಿನಿಧಿಗಳ ಪ್ರತಿಭಟನೆ



ಸೋಮವಾರಪೇಟೆ, ಸೆ.5–ಅಖಿಲ ಭಾರತೀಯ ಜೀವ ವಿಮಾ ಪ್ರತಿನಿಧಿಗಳ ಒಕ್ಕೂಟದ ವತಿಯಿಂದ ಇಲ್ಲಿನ ಜೀವ ವಿಮಾ ನಿಗಮದ ಕಚೇರಿ ಎದುರು ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಸೋಮವಾರ ಕಪ್ಪುಪಟ್ಟಿ ಧರಿಸಿ ಪ್ರತಿಭಟನೆ ನಡೆಸಿದರು.

ಪಾಲಿಸಿದಾರರ ಬೋನಸ್ ಹೆಚ್ಚಿಸಬೇಕು, ಪಾಲಿಸಿದಾರರಿಗೆ ಸರಿಯಾದ ಸೇವೆ ಒದಗಿಸಬೇಕು, ಪಾಲಿಸಿದಾರರ ಸಾಲದ ಮೇಲಿನ ಬಡ್ಡಿಯನ್ನು ಕಡಿಮೆ ಮಾಡಬೇಕು, ಪಾಲಿಸಿಗಳ ಮೇಲಿನ ಜಿಎಸ್‌ಟಿ ತೆಗೆದುಹಾಕಬೇಕು, ಪ್ರತಿನಿಧಿಗಳಿಗೆ ಗುಂಪು ವಿಮೆ ಜಾರಿಗೊಳಿಸಬೇಕು, 5 ವರ್ಷ ಮೇಲ್ಪಟ್ಟ ಪಾಲಿಸಿಗಳ ನವೀಕರಣ ಸೇರಿದಂತೆ 25 ಬೇಡಿಕೆಗಳನ್ನು ಈಡೇರಿಸಬೇಕೆಂದು ಪ್ರತಿಭಟನೆ ನಡೆಸಲಾಗುತ್ತಿದೆ.

ಈ ಸಂದರ್ಭ ಪ್ರತಿನಿಧಿಗಳ ಸಂಘದ ಅಧ್ಯಕ್ಷ ತಿಲಕ್ ಬಾಬು ಮಾತನಾಡಿ, ಕಳೆದ ಹಲವು ವರ್ಷಗಳಿಂದ ನಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸುತ್ತಿದ್ದೇವೆ. ಆದರೂ ಇಲ್ಲಿಯವರೆಗೆ ಯಾವುದೇ ಬೇಡಿಕೆ ಈಡೇರಲಿಲ್ಲ. ಈ ನಿಟ್ಟಿನಲ್ಲಿ ಸೆ. 1 ರಿಂದ 7ರ ವರೆಗೆ ಪ್ರತಿ ದಿನ ಒಂದು ಗಂಟೆ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುತ್ತಿದೆ. ನಾವು ಈಗ ಯಾವುದೇ ನೂತನ ಪಾಲಿಸಿಗಳನ್ನು ಮಾಡುತ್ತಿಲ್ಲ. ಇದರೊಂದಿಗೆ ಪಾಲಿಸಿದಾರರಿಗೆ ಯಾವುದೇ ರೀತಿಯ ಸೇವೆಗಳನ್ನು ನೀಡುತ್ತಿಲ್ಲ. ಕೂಡಲೇ ನಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಂಘದ ಗೌರವಾಧ್ಯಕ್ಷ ಬಿ.ಎಸ್.ಸತೀಶ್, ಉಪಾಧ್ಯಕ್ಷ ಸೋಮಶೇಖರ್, ಪ್ರಧಾನ ಕಾರ್ಯದರ್ಶಿ ತ್ಯಾಗರಾಜು, ಸಂಘಟನಾ ಕಾರ್ಯದರ್ಶಿ ಕೆ.ಎಸ್. ಕುಶಾಲಪ್ಪ, ಉಪ ಕಾರ್ಯದರ್ಶಿ ಎಂ.ಬಿ. ಸಮೀವುಲ್ಲ, ಖಜಾಂಚಿ ಶ್ರೀನಿವಾಸ್, ಸಹ ಖಜಾಂಚಿ ಮುರಳಿ, ಸದಸ್ಯರಾದ ಬಿ.ಜಿ. ಆನಂದ, ವಿಶ್ವ ಸುಜಾತ, ಹೇಮಂತ್, ಸವಿತ ರಾಣಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಜೆಡಿಎಸ್ ತೊರೆದ ಜಿಲ್ಲಾ ಕಾರ್ಯಾಧ್ಯಕ್ಷ ಮತೀನ್



ವಿರಾಜಪೇಟೆ, ಸೆ.5– ಜೆಡಿಎಸ್ ಜಿಲ್ಲಾ ಕಾರ್ಯಾಧ್ಯಕ್ಷ ಎಸ್.ಹೆಚ್.ಮತೀನ್ ಪಕ್ಷಕ್ಕೆ ರಾಜೀನಾಮೆ ನೀಡಿರುವುದಾಗಿ ತಿಳಿಸಿದ್ದಾರೆ. ಸುಮಾರು 26 ವರ್ಷಗಳಿಂದ ಜೆಡಿಎಸ್ ಏಳಿಗೆಗೆ ದುಡಿದಿದ್ದೇನೆ. ವಿರಾಜಪೇಟೆ ಪುರಸಭೆ ಚುನಾವಣೆಯಲ್ಲಿ 3 ಬಾರಿ ಸ್ಪರ್ಧಿಸಿ ಜೆಡಿಎಸ್ ಸದಸ್ಯನಾಗಿ ಸೇವೆ ಸಲ್ಲಿಸಿದ್ದೇನೆ. ಆದರೂ ಪಕ್ಷ ಅಧಿಕಾರದಲ್ಲಿದ್ದಾಗಲೂ ಅಲ್ಪಸಂಖ್ಯಾತರಿಗೆ ಯಾವುದೇ ಸ್ಥಾನ–ಮಾನ ನೀಡದೆ ಇತ್ತೀಚೆಗೆ ಬಂದವರಿಗೆ ಮಣೆ ಹಾಕುತ್ತಿರುವುದನ್ನು ಕಂಡು ಮನನೊಂದು ಜೆಡಿಎಸ್ ಪಕ್ಷಕ್ಕೆ ರಾಜೀನಾಮೆ ನೀಡಿರುವುದಾಗಿ ಮತೀನ್ ಹೇಳಿದರು.

ಇಂದು ವಿದ್ಯುತ್ ವ್ಯತ್ಯಯ

ಮಡಿಕೇರಿ, ಸೆ.5– ಶ್ರೀಮಂಗಲ ಮತ್ತು ವಿರಾಜಪೇಟೆಯಲ್ಲಿ ತುರ್ತು ನಿರ್ವಹಣೆ ಕಾಮಗಾರಿ ಕೈಗೊಳ್ಳ ಬೇಕಿರುವುದರಿಂದ ಸೆ.6ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆವರೆಗೆ ವಿದ್ಯುತ್ ಸರಬರಾಜು ಸ್ಥಗಿತಗೊಳಿಸಲಾಗುವುದು.

ಶ್ರೀಮಂಗಲದ ಕೆಆರ್, ಟೀ ಎಸ್ಟೇಟ್, ಬಿರುನಾಣಿ, ಬಾಡಗರಕೇರಿ, ತೆರಾಲು, ಪರಕಟಕೇರಿ, ಸುತ್ತಮುತ್ತಲ ಪ್ರದೇಶಗಳಲ್ಲಿ ಹಾಗೂ ವಿರಾಜಪೇಟೆ ಗಾಂಧಿನಗರ, ಸುಭಾಷ್‌ನಗರ, ಮಟನ್ ಮಾರುಕಟ್ಟೆ ವಿಜಯನಗರ, ಚೌಕಿ, ಖಾಸಗಿ ಬಸ್ ನಿಲ್ದಾಣ ಹಾಗೂ ಸುತ್ತ ಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸಹಕರಿಸುವಂತೆ ಸೆಸ್ಕ್ ಕಾರ್ಯನಿರ್ವಾಹಕ ಇಂಜಿನಿಯರ್ ಕೋರಿದ್ದಾರೆ.

ಒಂದನೇ ಪುಟದಿಂದ

ಚಾಮರಾಜನಗರ ಜಿಲ್ಲೆಯಲ್ಲಿ ವರುಣನ ಅಟ್ಟಹಾಸ

● ಗೋಡೆ ಕುಸಿದು ವ್ಯಕ್ತಿ ಸಾವು, ಸಿಡಿಲು ಬಡಿದು ನಾಲ್ವರಿಗೆ ಗಾಯ ● ಸೇತುವೆಗಳು ಮುಳುಗಿ ಗ್ರಾಮಗಳ ಸಂಪರ್ಕ ಕಡಿತ; ರೈತರ ಬೆಳೆ ಜಲಾವೃತ ● ಪ್ರವಾಹದಿಂದ ಪಾರಾಗಲು ಮರವೇರಿದ ರೈತ, ಕೊಚ್ಚಿ ಹೋಗುತ್ತಿದ್ದ ಬೈಕ್ ಸವಾರರ ರಕ್ಷಣೆ



ಗೋಡೆ ಕುಸಿದು ವ್ಯಕ್ತಿ ಸಾವು: ಚಾಮರಾಜನಗರ ತಾಲೂಕಿನ ದಡದಹಳ್ಳಿ ಗ್ರಾಮದಲ್ಲಿ ಮನೆಯೊಂದರ ಗೋಡೆ ಕುಸಿದಿದೆ. ಪರಿಣಾಮ ಮನೆಯಲ್ಲಿ ಮಲಗಿದ್ದ ಮೂರ್ತಿ(33) ಅವರು ಮೃತಪಟ್ಟಿದ್ದಾರೆ. ಮನೆಯ ಮುಂಭಾಗ ಮೂರ್ತಿ ಹಾಗೂ ಅವರ ತಾಯಿ ದೇವಜಮ್ಮ ಮಲಗಿದ್ದರು ಎನ್ನಲಾಗಿದೆ. ಜೋರು ಮಳೆ ಪರಿಣಾಮ ಇವರಿಬ್ಬರು ಮನೆಯ ಒಳಗೆ ತೆರಳಿ ಮಲಗಿದ್ದರು. ಈ ವೇಳೆ ಸತತ ಮಳೆಯಿಂದ ಮನೆಯ ಗೋಡೆ ಕುಸಿದು ಬಿದ್ದು ಮೂರ್ತಿ ಮೃತಪಟ್ಟಿದ್ದಾರೆ, ಅದೃಷ್ಟವಶಾತ್ ದೇವಜಮ್ಮ ಪ್ರಾಣಾಪಾಯದಿಂದ ಪಾರಾದರು.

ಬೈಕ್ ಸವಾರರ ರಕ್ಷಣೆ: ಜಲಾವೃತಗೊಂಡ ಸೇತುವೆ ಮೇಲೆ ತೆರಳುವಾಗ ನೆರೆ ನೀರಿನ ರಭಸಕ್ಕೆ ಕೊಚ್ಚಿ ಹೋಗುತ್ತಿದ್ದ ಇಬ್ಬರು ಬೈಕ್ ಸವಾರರನ್ನು ಹೊಂಗನೂರಿನಲ್ಲಿ ಯುವಕನೋರ್ವ ಜೀವದ ಹಂಗು ತೊರೆದು ರಕ್ಷಿಸಿದ್ದಾನೆ. ತಾಲೂಕಿನ ಸಿದ್ದಯ್ಯನಪುರದ ಇಬ್ಬರು ಬೈಕ್‌ನಲ್ಲಿ ಮಸಣಾಪುರದಿಂದ ಸ್ವಗ್ರಾಮಕ್ಕೆ ವಾಪಸ್ಸಾಗುತ್ತಿದ್ದರು. ಹೊಂಗನೂರು ಗ್ರಾಮದ ಸೇತುವೆ ಮೇಲೆ ಪ್ರವಾಹದ ನೀರು ಹರಿಯುತ್ತಿದ್ದರೂ ಬೈಕ್ ಚಲಾಯಿಸಿ ಸಾಗುತ್ತಿದ್ದರು. ಈ ವೇಳೆ ನೀರಿನ ರಭಸಕ್ಕೆ ಸಿಕ್ಕಿ ಕೊಚ್ಚಿ ಹೋಗಿದ್ದರು. ಗ್ರಾಮದ ಯುವಕ ಶಿವು ತಕ್ಷಣವೇ ನೀರಿಗೆ ಧುಮುಕಿ ಇಬ್ಬರನ್ನು ರಕ್ಷಿಸಿದ್ದಾರೆ.

ಮರ ಏರಿದ ರೈತ: ಭಾರೀ ಮಳೆಯಿಂದ ನೆರೆ ಉಂಟಾಗಿ ಚಾ.ನಗರ ತಾಲೂಕಿನ ಕಣ್ಣೇಗಾಲ ಗ್ರಾಮದಲ್ಲಿ ರೈತ ರಂಗಸ್ವಾಮಿ ನಾಯಕ(60) ಜೀವ ರಕ್ಷಣೆಗಾಗಿ ಮರವೇರಿ ಕುಳಿತಿದ್ದಾರೆ. ಸೋಮವಾರ ಬೆಳಗ್ಗೆ ಎಂದಿನಂತೆ ಜಮೀನಿಗೆ ತೆರಳಿದ್ದರು. ಸಂಜೆಯ ಹೊತ್ತಿಗೆ ನೆರೆ ಉಂಟಾಗಿದೆ. ಇದರಿಂದ ರಂಗಸ್ವಾಮಿ ಮನೆಗೆ ಹಿಂದಿರುಗಲು ಸಾಧ್ಯವಾಗದೇ ರಂಗಸ್ವಾಮಿ ತೆಂಗಿನ ಮರ ಏರಿ ಕುಳಿತಿದ್ದಾರೆ. ಅಗ್ನಿಶಾಮಕ ಠಾಣೆಗೆ ಸಂಜೆ ಕಾರ್ಯಾಚರಣೆ ನಡೆಸಿದರೂ ಅವರನ್ನು ಸುರಕ್ಷಿತ ಸ್ಥಳಕ್ಕೆ ಕರೆತರಲು ಸಾಧ್ಯವಾಗಿಲ್ಲ.

ಜಿಲ್ಲೆಯ ಚಿತ್ರಣವೇ ಬದಲು

ಕಳೆದ ಎರಡು–ಮೂರು ತಿಂಗಳಿಂದ ಜಿಲ್ಲೆಯಾದ್ಯಂತ ಸತತವಾಗಿ ಮಳೆ ಬೀಳುತ್ತಿದೆ. ಇತ್ತೀಚಿನ ಹಲವು ವರ್ಷಗಳಲ್ಲಿ ಇಷ್ಟು ಜೋರು ಮಳೆ ಇದೇ ಮೊದಲು. ಜಿಲ್ಲೆಯ ಎಲ್ಲಾ ಕೆರೆ–ಕಟ್ಟೆಗಳು ತುಂಬಿ ಕೋಡಿ ಬಿದ್ದಿವೆ. ಇಪ್ಪತ್ತು–ಮೂವತ್ತು ವರ್ಷಗಳಿಂದ ತುಂಬದೇ ಇದ್ದ ಕೆರೆಗಳೂ ತುಂಬಿವೆ. ಗ್ರಾಮ–ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳ ಮೇಲೆ ನೀರು ಹರಿಯುತ್ತಿದ್ದು, ಸಂಚಾರ ಸ್ಥಗಿತಗೊಂಡಿದ್ದು, ಜಿಲ್ಲೆಯ ಚಿತ್ರಣವೇ ಬದಲಾಗುವಂತೆ ಮಾಡಿದೆ.





ಹನೂರಿನ ದೇವಾಂಗಪೇಟೆಯ ಸೇತುವೆ ಮೇಲೆ ಹರಿದ ಮಳೆನೀರು. ಕೋಡಿ ಬಿದ್ದ ಚಾಮರಾಜನಗರ ತಾಲೂಕಿನ ಕೋಡಿಮೋಳೆ ಕೆರೆಯಿಂದ ಸೇತುವೆ ಜಲಾವೃತವಾಗಿರುವುದು.

ಹಲವು ಗ್ರಾಮಗಳು ಜಲಾವೃತ: ಚಾಮರಾಜನಗರ ತಾಲೂಕಿನ ಜ್ಯೋತಿಗೌಡನಪುರದ ಜನ ಭಾರೀ ಮಳೆಯಿಂದ ತತ್ತರಿಸಿ ಹೋಗಿದ್ದಾರೆ. ಗ್ರಾಮದ ಒಂದೆರಡು ಬಡಾವಣೆಗಳನ್ನು ಹೊರತುಪಡಿಸಿ ಉಳಿದೆಲ್ಲವೂ ಜಲಾವೃತವಾಗಿವೆ. ಅಲ್ಲದೆ ಕೋಡಿಮೋಳೆ, ಹೆಬ್ಬಸೂರು, ಹರದನಹಳ್ಳಿ, ನಲ್ಲೂರು, ನಾಗವಳ್ಳಿ, ಆಲೂರು, ಹೊಮ್ಮ, ಕಣ್ಣೇಗಾಲ ಸೇರಿದಂತೆ ಹಲವು ಗ್ರಾಮಗಳು ಭಾಗಶಃ ಮುಳುಗಿವೆ.

ಸಂಪರ್ಕ ಬಂದ್: ಕೋಡಿಮೋಳೆ, ಕಾಗಲವಾಡಿ ಮೋಳೆ, ಆಲೂರು ಹೊಮ್ಮ, ದೊಡ್ಡಮೋಳೆ, ಕಾಳನಹುಂಡಿ ಗ್ರಾಮಗಳ ರಸ್ತೆ ಮೇಲೆ ನೀರು ಹರಿದ ಪರಿಣಾಮ ಅಕ್ಕಪಕ್ಕದ ಗ್ರಾಮಗಳಿಗೆ ಸಂಪರ್ಕ ಸ್ಥಗಿತಗೊಂಡು ಜನರು ಪರದಾಡಿದರು.

ಅಪಾಯ ಮಟ್ಟದಲ್ಲಿ ಕೆರೆಗಳು: ಜಿಲ್ಲೆಯ ಅನೇಕ ಕೆರೆ–ಕಟ್ಟೆಗಳು ಅಪಾಯದ ಮಟ್ಟ ತಲುಪಿವೆ. ಹರದನಹಳ್ಳಿ ಸಮೀಪದ ಮರಗದ ಕೆರೆ ಉಕ್ಕಿ ಸೇತುವೆ ಮೇಲೆ ನೀರು ಹರಿಯುತ್ತಿದೆ. ಈ ನೀರು ಚಿಕ್ಕಕೆರೆ ಹಾಗೂ ದೊಡ್ಡ ಕೆರೆಗೆ ಬರುತ್ತಿದೆ. ಈಗಾಗಲೇ ಈ ಕೆರೆಗಳು ಸಹ ಭರ್ತಿಯಾಗಿರುವ ಕಾರಣ ನೀರು ಹೊರಬರುತ್ತಿದ್ದು, ಕೆರೆ ಅಪಾಯದ ಮಟ್ಟ ತಲುಪಿವೆ.

ಕಲ್ಯಾಣ ಮಂಟಪಕ್ಕೆ ನೀರು: ಚಾಮರಾಜನಗರದ ಶಿವಕುಮಾರಸ್ವಾಮಿ ಭವನಕ್ಕೆ ಅಪಾರ ಪ್ರಮಾಣ ಮಳೆ ನೀರು ನುಗ್ಗಿದ ಪರಿಣಾಮ ಮದುವೆಯ ಸಂಭ್ರಮ ಮಾಯವಾಯಿತು. ಅಲ್ಲದೆ ಹರದನಹಳ್ಳಿಯ ದಿವ್ಯಲಿಂಗೇಶ್ವರ, ರಾಮಸಮುದ್ರದ ಹರಳುಕೋಟೆ, ಆಂಜನೇಯಸ್ವಾಮಿ ದೇವಸ್ಥಾನ ಸೇರಿದಂತೆ ಅನೇಕ ದೇವಾಲಯಗಳು ಜಲಾವೃತಗೊಂಡಿದ್ದವು. ನಗರದ ಜೋಡಿ ರಸ್ತೆಯಲ್ಲಿನ ಇಂದಿರಾ ಕ್ಯಾಂಟೀನ್ ಮುಳುಗಡೆಯಾದ ಪರಿಣಾಮ ನೀರನ್ನು ಮೋಟಾರ್ ಮೂಲಕ ತೆರವುಗೊಳಿಸಲಾಯಿತು. ನಗರದ ರೈಲ್ವೆ ಬಡಾವಣೆ, ಉಪ್ಪಾರ ಬಡಾವಣೆ, ನಾಯಕರ ಬಡಾವಣೆ ಸೇರಿದಂತೆ ಅನೇಕ ತಗ್ಗುಪ್ರದೇಶಗಳಲ್ಲಿ ನೀರು ನುಗ್ಗಿ ಜನರು ಸಂಕಷ್ಟಕ್ಕೊಳಗಾದರು.

ಯಳಂದೂರಲ್ಲಿ ಆತಂಕ: ಯಳಂದೂರು ತಾಲೂಕಿನ ಅಂಬಳೆ, ಮದ್ದೂರು, ಯರಿಯೂರು, ಗಣಿಗನೂರು, ಅಗರ–ಮಾಂಬಳ್ಳಿ, ಮಲ್ಲಿಗೆಹಳ್ಳಿ ಸೇರಿದಂತೆ ಅನೇಕ ಗ್ರಾಮಗಳು ಜಲಾವೃತಗೊಂಡಿದ್ದು, ಅಲ್ಲಿನ ಜನರಲ್ಲಿ ಆತಂಕ ಮನೆ ಮಾಡಿದೆ.

ಹನೂರಲ್ಲಿ ಭರ್ಜರಿ ಮಳೆ: ತಾಲೂಕಿನಾದ್ಯಂತ ಸೋಮವಾರ ಮುಂಜಾನೆ ಭರ್ಜರಿ ಮಳೆಯಾಗಿದ್ದು ಪಟ್ಟಣ ಸೇರಿದಂತೆ ತಾಲೂಕಿನ ಲೊಕ್ಕನಹಳ್ಳಿ, ಪಿಜಿ ಪಾಳ್ಯ, ಒಡೆಯರ ಪಾಳ್ಯ, ಬಂಡಳ್ಳಿ, ರಾಮಾಪುರ, ಮಾರ್ಟಳ್ಳಿ ಗ್ರಾಮಗಳ ಹಳ್ಳಕೊಳ್ಳಗಳು ತುಂಬಿ ಹರಿಯುತ್ತಿವೆ. ಬಿಆರ್‌ಟಿ ಅರಣ್ಯ ವ್ಯಾಪ್ತಿಯ ಹುಬ್ಬೆ ಹುಣಸೆ ಜಲಾಶಯ ಕೋಡಿ ಬಿದ್ದಿದ್ದು, ಪಟ್ಟಣದ ತಟ್ಟೆಹಳ್ಳ ಮೈದುಂಬಿ ಹರಿಯುತ್ತಿರುವ ಪರಿಣಾಮ ಸಂಚಾರ ಅಸ್ತವ್ಯಸ್ತವಾಗಿದೆ. ಅಲ್ಲದೆ ಪಟ್ಟಣದ 3ನೇ ವಾರ್ಡ್‌ನ ದೇವಾಂಗಪೇಟೆಗೆ ಸಂಪರ್ಕ ಸೇತುವೆ ಮೇಲೆ ನೀರು ಹರಿಯುತ್ತಿರುವುದರಿಂದ ಪೊಲೀಸರು ಬ್ಯಾರಿಕೇಡ್ ಅಳವಡಿಸಿದ್ದಾರೆ. ಪಟ್ಟಣದ 2ನೇ ವಾರ್ಡ್‌ನ ಸಮೀಪ ಹನೂರು ಲೊಕ್ಕನಹಳ್ಳಿ ಮಾರ್ಗಕ್ಕೆ ಸಂಪರ್ಕ ಸೇತುವೆ ಕಾಮಗಾರಿ ನಡೆಯುತ್ತಿರುವುದರಿಂದ ತಾತ್ಕಾಲಿಕವಾಗಿ ನಿರ್ಮಾಣ ಮಾಡಿದ್ದ ಸೇತುವೆ ಕೊಚ್ಚಿ ಹೋಗಿದೆ. ವಾಹನಗಳು ಉದ್ದನೂರು ರಸ್ತೆಯ ಮೂಲಕ ಲೊಕ್ಕನಹಳ್ಳಿಗೆ ತೆರಳುತ್ತಿದೆ.



ಬೇಗೂರು ಬಳಿಯ ವಿದ್ಯುತ್ ಪ್ರಸರಣಾ ಕೇಂದ್ರದ ಸುತ್ತ ಮಳೆ ನೀರು ನಿಂತಿರುವುದು.

ಗುಂಡ್ಲುಪೇಟೆ/ಬೇಗೂರು: ಗುಂಡ್ಲುಪೇಟೆ ತಾಲೂಕಿನ ಬೇಗೂರು ಹೋಬಳಿ ಸುತ್ತಮುತ್ತ ಭಾನುವಾರ ರಾತ್ರಿ ಭಾರೀ ಮಳೆಯಾಗಿದೆ. ಇದರಿಂದ ಬೇಗೂರು ಗ್ರಾಮದ ತಗ್ಗುಪ್ರದೇಶಗಳಲ್ಲಿ ಭಾರೀ ಪ್ರಮಾಣದ ನೀರು ನಿಂತು ಕೆಲ ಮನೆಗಳು ಹಾಗೂ ಪೊಲೀಸ್ ವಸತಿಗೃಹಗಳು ಜಲಾವೃತವಾದವು. ತಾಲೂಕಿನ ಕೋಟೆಕೆರೆ ಹಾಗೂ ಬೆಳಚಲವಾಡಿ ಕೆರೆಗಳು ಕೋಡಿಬಿದ್ದು, ಜಮೀನುಗಳು, ಗ್ರಾಮದತ್ತ ನುಗ್ಗಿ ತಗ್ಗು ಪ್ರದೇಶಗಳು ಜಲಾವೃತವಾಗಿವೆ. ಬೆಳಚಲವಾಡಿ ರಸ್ತೆ ಬದಿಯ ಕಾಲುವೆಗಳು, ಚರಂಡಿಗಳು ಮುಚ್ಚಿ ಕೊಂಡಿರುವ ಪರಿಣಾಮ 6 ಮನೆಗಳು ಹಾಗೂ ಪೊಲೀಸ್ ವಸತಿ ಗೃಹಗಳು ಜಲದಿಗ್ಬಂಧನಕ್ಕೊಳಗಾದವು.

ಇನ್ನೂ ಕಮರಹಳ್ಳಿ ಕೆರೆ ದಂಡೆಯ ಬದಿಯಲ್ಲಿರುವ ವಿದ್ಯುತ್ ಪ್ರಸರಣಾ ಕೇಂದ್ರದ ಸುತ್ತಲೂ ನೀರು ನಿಂತು ಅಪಾಯದ ಭೀತಿಯುಂಟು ಮಾಡಿತ್ತು.

ಭಾರೀ ಪ್ರಮಾಣದ ನೀರು ಹೊರಕ್ಕೆ

ಚಾಮರಾಜನಗರ ತಾಲೂಕಿನ ಸುವರ್ಣಾವತಿ ಹಾಗೂ ಚಿಕ್ಕಹೊಳೆ ಜಲಾಶಯಗಳಲ್ಲಿ ಒಳ ಹರಿವು ಹೆಚ್ಚಾದ ಕಾರಣ ಅಪಾರ ಪ್ರಮಾಣದ ನೀರನ್ನು ಹೊರ ಬಿಡಲಾಗಿದೆ. ಸೋಮವಾರ ಬೆಳಗಿನ ಜಾವ 3 ಗಂಟೆ ಯಿಂದ ಬೆಳಗ್ಗೆ 10 ಗಂಟೆಯವರೆಗೆ 18 ಸಾವಿರ ಕ್ಯೂಸೆಕ್ ನೀರನ್ನು ಬಿಡಲಾಗಿತ್ತು. ನಂತರ ಒಳ ಹರಿವು ಕಡಿಮೆ ಆದ ಕಾರಣ 14,200 ಕ್ಯೂಸೆಕ್‌ಗೆ ಇಳಿಸಲಾಯಿತು.

ಪೊಲೀಸರು ಬ್ಯಾರಿಕೇಡ್ ಅಳವಡಿಸಿ ವಾಹನಗಳ ಸಂಚಾರ ನಿರ್ಬಂಧಿಸಿದರು.

ಕೂಡಲೇ ಕಾರ್ಯಾಚರಣೆ ಆರಂಭಿಸಿದ ಕಂದಾಯಾಧಿಕಾರಿಗಳು ಜೆಸಿಬಿಗಳ ಮೂಲಕ ಹೊಸದಾಗಿ ಕಾಲುವೆ ನಿರ್ಮಿಸಿ ನೀರು ಹಳ್ಳದತ್ತ ಹರಿಯುವಂತೆ ಮಾಡಿದರು. ಭಾರೀ ಮಳೆಯಿಂದ ಕಮರಹಳ್ಳಿ, ಹಾಲಹಳ್ಳಿ ಸೇರಿದಂತೆ ವಿವಿಧ ಗ್ರಾಮಗಳ ತಗ್ಗು ಪ್ರದೇಶದ ರಸ್ತೆಗಳ ಮೇಲೆ ದೊಡ್ಡ ಪ್ರಮಾಣದಲ್ಲಿ ಹರಿದು ಬರುತ್ತಿದೆ. ಬೇಗೂರು ಹಾಗೂ ಸೋಮಹಳ್ಳಿಯಲ್ಲಿ ತಲಾ 5 ಮನೆಗಳು ಸೇರಿದಂತೆ ಹೋಬಳಿಯಲ್ಲಿ ಸುಮಾರು 28ಕ್ಕೂ ಹೆಚ್ಚಿನ ಗೋಡೆಗಳು ನೆಲಕ್ಕುರುಳಿವೆ. ಶಾಸಕ ಸಿ.ಎಸ್. ನಿರಂಜನಕುಮಾರ್ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ತೆರಳಿ ಪರಿಶೀಲಿಸಿದರು.





ಹೊಮ್ಮ ಗ್ರಾಮದ ತಗ್ಗು ಪ್ರದೇಶದಲ್ಲಿ ನೀರು ಹರಿಯುತ್ತಿರುವುದು.





ಸಿಡಿಲು ಬಡಿದು ನಾಲ್ವರಿಗೆ ಗಾಯ...

ಗುಂಡ್ಲುಪೇಟೆ ತಾಲೂಕಿನ ತಗ್ಗಲೂರು ಗ್ರಾಮದಲ್ಲಿ ಸಿಡಿಲು ಬಡಿದು ಒಂದೇ ಕುಟುಂಬದ ನಾಲ್ವರು ಗಾಯಗೊಂಡಿದ್ದಾರೆ. ಗ್ರಾಮದ ವಾಸಿಗಳಾದ ಮಣಿಕಂಠ, ಕೌಶಿಕ್, ಚೇತನ್ ಹಾಗೂ ಮಹದೇವಮ್ಮ ಗಾಯಗೊಂಡವರಾಗಿದ್ದು, ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆಂದು ತಹಸೀಲ್ದಾರ್ ರವಿಶಂಕರ್ ತಿಳಿಸಿದ್ದಾರೆ.

ಭಾನುವಾರ ರಾತ್ರಿ ತಗ್ಗಲೂರಿನಲ್ಲಿರುವ ಮಹದೇವಮ್ಮ ಅವರ ವಾಸದ ಮನೆಯ ಮೊದಲನೇ ಮಹಡಿಗೆ ಸಿಡಿಲು ಬಡಿದಿದೆ. ಇದರಿಂದಾಗಿ ರೂಮಿನ ಗೋಡೆ ಮತ್ತು ಮಂಚಕ್ಕೆ ಹಾನಿಯಾಗಿದೆ. ಅಲ್ಲದೆ ಪಕ್ಕದಲ್ಲೇ ಮಲಗಿದ್ದ ನಾಲ್ವರಿಗೆ ಸಣ್ಣಪುಟ್ಟ ಗಾಯಗಳಾಗಿದೆ. ತಾತ್ಕಾಲಿಕ ಪರಿಹಾರ ನೀಡಲಾಗಿದೆ ಎಂದು ತಹಸೀಲ್ದಾರ್ 'ಮೈಸೂರು ಮಿತ್ರನಿ'ಗೆ ತಿಳಿಸಿದ್ದಾರೆ. ವಿಷಯ ತಿಳಿದು ಶಾಸಕ ಸಿ.ಎಸ್.ನಿರಂಜನಕುಮಾರ್ ಆಸ್ಪತ್ರೆಗೆ ತೆರಳಿ ಗಾಯಾಳುಗಳ ಆರೋಗ್ಯ ವಿಚಾರಿಸಿದರು.

ಒಂದನೇ ಪುಟದಿಂದ

ಜಾಲ ಬಯಲು: ಮೂವರ ಬಂಧನ

ವೇಳೆ ಬೆಳಕಿಗೆ ಬಂದಿದೆ. ಈ ವಂಚಕರಿಂದ ಯಾರದೋ ಆಸ್ತಿಯನ್ನು ಖರೀದಿ ಮಾಡಿರುವ ಅಮಾಯಕರು ಇನ್ನಷ್ಟು ಮಂದಿ ಇರಬಹುದು. ಅವರು ದಾಖಲೆಗಳನ್ನು ಪರಿಶೀಲಿಸದೆ ಇರುವುದರಿಂದ ಆ ಪ್ರಕರಣಗಳು ಬೆಳಕಿಗೆ ಬಂದಿಲ್ಲ ಎಂದು ಹೇಳಲಾಗುತ್ತಿದೆ.

ಲಕ್ಷ್ಮೀಪುರಂ ಮತ್ತು ಮೇಟಗಳ್ಳಿ ಠಾಣೆಗಳಲ್ಲಿ ದಾಖಲಾಗಿದ್ದ ಪ್ರಕರಣಗಳಲ್ಲಿ ಒಬ್ಬನೇ ಕಿಂಗ್‌ಪಿನ್ ಎಂಬುದನ್ನು ಪತ್ತೆ ಮಾಡಿದ್ದ ಮೈಸೂರು ನಗರ ಪೊಲೀಸರು ಆತನ ಬಂಧನಕ್ಕಾಗಿ ಬಲೆ ಬೀಸಿದ್ದರು. ಈ ವ್ಯಕ್ತಿ ಪದೇ ಪದೆ ಮೊಬೈಲ್‌ಗಳನ್ನು ಬದಲಾವಣೆ ಮಾಡುತ್ತಿದ್ದರಿಂದ ಆತನ ಸುಳಿವೇ ಸಿಗುತ್ತಿರಲಿಲ್ಲ ಎಂದು ಹೇಳಲಾಗಿದೆ. ಈ ಮಧ್ಯೆ ಮೈಸೂರಿನ ರಾಮಕೃಷ್ಣನಗರ ವಿಶ್ವಮಾನವ ಜೋಡಿರಸ್ತೆಯಲ್ಲಿರುವ ಗೋಲ್ಡನ್ ಬೆಲ್ ಸರ್ವೀಸ್ ಅಪಾರ್ಟ್‌ಮೆಂಟ್‌ನ ಕೊಠಡಿ ಸಂಖ್ಯೆ 301ರಲ್ಲಿ ಪ್ರಕರಣದ ಕಿಂಗ್‌ಪಿನ್ ಇದ್ದಾನೆ ಎಂಬ ಖಚಿತ ಮಾಹಿತಿ ಮೇರೆಗೆ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಡಿಸಿಪಿ ಪ್ರದೀಪ್‌ಗುಂಟಿ ನೇತೃತ್ವದಲ್ಲಿ ಎಸಿಪಿ ಗಂಗಾಧರಸ್ವಾಮಿ, ಕುವೆಂಪುನಗರ ಠಾಣೆ ಇನ್ಸ್‌ಪೆಕ್ಟರ್ ಗೋಪಾಲ್, ಎಎಸ್‌ಐ ಮಹಲಿಂಗೌಡ, ಸಿಬ್ಬಂದಿಗಳಾದ ಕೃಷ್ಣ, ಮಂಜುನಾಥ್, ರಾಜುಸ್ವಾಮಿ, ಪುರುಷೋತ್ತಮ್, ಚೇತನ್, ಶಿವಪ್ರಸಾದ್, ಪ್ರಸನ್ನ, ಹಜ್ರತ್ ಮತ್ತು ಮೌನೇಶ್ ಅವರನ್ನೊಳಗೊಂಡ ತಂಡ ಇಂದು ಮಧ್ಯಾಹ್ನ ದಾಳಿ ನಡೆಸಿತು.

ಪೊಲೀಸರು ದಾಳಿ ನಡೆಸಿದ ವೇಳೆ ಕೊಠಡಿಯಲ್ಲಿದ್ದ ಮೂವರು ವ್ಯಕ್ತಿಗಳು ನಕಲಿ ದಾಖಲೆಗಳನ್ನು ಸೃಷ್ಟಿಸುತ್ತಿದ್ದದ್ದು ಕಂಡುಬಂತು. ಮುಡಾ, ತಾಲೂಕು ಕಚೇರಿ ಹಾಗೂ ಅಧಿಕಾರಿಗಳ ಹೆಸರುಳ್ಳ ನಕಲಿ ಸೀಲ್‌ಗಳು, ವಿವಿಧ ಬ್ಯಾಂಕ್‌ಗಳ ನಕಲಿ ಸೀಲ್‌ಗಳು, ನಕಲಿ ಇ-ಸ್ಟ್ಯಾಂಪ್‌ಗಳು, ಖಾಲಿ ದಸ್ತಾವೇಜು ಪೇಪರ್‌ಗಳು, ಪ್ರಿಂಟರ್, ಲ್ಯಾಪ್‌ಟಾಪ್, ಇಂಕ್ ಮುಂತಾದವುಗಳು ಕಂಡುಬಂದಿದ್ದು, ಅವುಗಳನ್ನು ವಶಪಡಿಸಿ ಕೊಂಡ ಪೊಲೀಸರು, ಮೂವರನ್ನೂ ಬಂಧಿಸಿದ್ದಾರೆ. ಯಾರದೋ ಆಸ್ತಿಗಳಿಗೆ ನಕಲಿ ಮಾಲೀಕರನ್ನು ಸೃಷ್ಟಿಸುತ್ತಿದ್ದ ಈ ವಂಚಕರು ನಿವೃತ್ತರು, ವೃದ್ಧರು ಹಾಗೂ ಅನಕ್ಷರಸ್ಥರನ್ನೇ ಟಾರ್ಗೆಟ್ ಮಾಡಿಕೊಂಡು ಆಸ್ತಿಗಳನ್ನು ಮಾರಾಟ ಮಾಡುತ್ತಿದ್ದರು ಎಂಬುದು ವಿಚಾರಣೆ ವೇಳೆ ತಿಳಿದುಬಂದಿದೆ. ಇವರು ನೀಡಿದ ನಕಲಿ ದಾಖಲೆಗಳನ್ನು ಅಸಲಿ ಎಂದು ನಂಬಿ ಖರೀದಿಸಿದವರು ಹಣ ಕಳೆದುಕೊಳ್ಳುತ್ತಿದ್ದುದು ಮಾತ್ರವಲ್ಲದೆ, ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿ, ಅಲೆದಾಡುವುದೂ ಕೂಡ ಉಂಟು. ಇವರ ಬಳಿ ಪಡೆದ ನಕಲಿ ದಾಖಲೆಗಳನ್ನು ಸರ್ಕಾರಿ ಕಚೇರಿಗಳಿಗೆ ಸಲ್ಲಿಸಿದ ಕೆಲವು ಅಮಾಯಕರ ವಿರುದ್ಧ ಕ್ರಿಮಿನಲ್ ಕೇಸ್ ಕೂಡ ದಾಖಲಾಗಿದೆ ಎಂದು ಹೇಳಲಾಗಿದೆ.

ಶಾಸಕರ ತಂದೆಯ ಆಸ್ತಿ: ಶಿವಾಜಿನಗರದ ಶಾಸಕ ರಿಜ್ವಾನ್ ಅರ್ಷದ್ ಅವರ ತಂದೆ ಆರ್.ಕ್ಯೂ. ಅರ್ಷದ್ ಅವರು 1980ರ ಅಕ್ಟೋಬರ್ 22ರಂದು ಶ್ಯಾದನಹಳ್ಳಿ ಗ್ರಾಮದ ಸರ್ವೇ ನಂ.64ರಲ್ಲಿ 3 ಎಕರೆ ಜಮೀನನ್ನು ಜವರೇಗೌಡ ಎಂಬುವರ ಮಕ್ಕಳಾದ ತಿಮ್ಮೇಗೌಡ ಮತ್ತು ಚಿಕ್ಕಣ್ಣ ಎಂಬುವರಿಂದ ಖರೀದಿ ಮಾಡಿದ್ದರು. ಈ ಜಮೀನು ಡಿಯೋಡಿಯಾಗಿ ಸರ್ವೇ ನಂ.133 ಎಂದು ಆರ್‌ಟಿಸಿಯಲ್ಲಿ ನಮೂದಾಗಿತ್ತು. ಈ ಜಮೀನಿನ ಮೂಲ ಮಂಜೂರಾತಿದಾರರಾದ ಜವರೇಗೌಡ ಮೃತಪಟ್ಟಿದ್ದರಿಂದ ಅವರ ಮಕ್ಕಳು ಆರ್.ಕ್ಯೂ. ಅರ್ಷದ್ ಅವರಿಗೆ ಜಮೀನು ಮಾರಾಟ ಮಾಡಿದ್ದರು. 1981–82ನೇ ಸಾಲಿನಲ್ಲಿ ಈ ಜಮೀನನ್ನು ಅಂದಿನ ಜಿಲ್ಲಾಧಿಕಾರಿಗಳು ಕೈಗಾರಿಕಾ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿದ್ದರು. ಆದರೆ, ವಂಚಕರು ಜಮೀನಿನ ಮೂಲ ಮಂಜೂರಾತಿದಾರರಾದ ದಿವಂಗತ ಜವರೇಗೌಡರ ಹೆಸರಲ್ಲೇ ನಕಲಿ ದಾಖಲೆಯನ್ನು ಸೃಷ್ಟಿಸಿದ್ದಲ್ಲದೆ, ಜವರೇಗೌಡ ಎಂಬ ನಕಲಿ ವ್ಯಕ್ತಿಯನ್ನೂ ಕೂಡ ಬಳಸಿಕೊಂಡು ಜಮೀನನ್ನು ದುರ್ಗಾಪ್ರಸಾದ್ ಮತ್ತು ಕುಮಾರ್ ಎಂಬುವರಿಗೆ 2021ರ ಅಕ್ಟೋಬರ್ 31ರಂದು ಮಾರಾಟ ಮಾಡಿದ್ದರು. ಜಮೀನು ಖರೀದಿಸಿದವರು ಆರ್‌ಟಿಸಿಯಲ್ಲಿ ಹೆಸರು ಬದಲಾವಣೆ ಮಾಡಲು ತಹಸೀಲ್ದಾರ್ ಕಚೇರಿಗೆ ಅರ್ಜಿ ಸಲ್ಲಿಸಿದಾಗ ಪ್ರಕರಣ ಬೆಳಕಿಗೆ ಬಂದಿತ್ತು. ಈ ಸಂಬಂಧ 2022ರ ಜನವರಿ 21ರಂದು ತಹಸೀಲ್ದಾರ್ ಕೆ.ಆರ್. ರಕ್ಷಿತ್ ಅವರು ಮೇಟಗಳ್ಳಿ ಠಾಣೆಯಲ್ಲಿ ಜವರೇಗೌಡ, ಶಿವಮ್ಮ, ಸುನೀಲ, ಅನಿಲ್‌ಕುಮಾರ್, ದುರ್ಗಾಪ್ರಸಾದ್ ಮತ್ತು ಬಿ. ಕುಮಾರ್ ಎಂಬುವರ ವಿರುದ್ಧ ಪ್ರಕರಣ ದಾಖಲಿಸಿದ್ದರು. ಈ ಪ್ರಕರಣದಲ್ಲಿ ದುರ್ಗಾಪ್ರಸಾದ್ ಮತ್ತು ಬಿ. ಕುಮಾರ್ ಎಂಬುವರು ನಕಲಿ ದಾಖಲೆಗಳನ್ನು ನಂಬಿ ಜಮೀನು ಖರೀದಿಸಿದವರಾದರೆ ಉಳಿದವರು ಮಾರಾಟಗಾರರು ಎಂದು ಹೇಳಲಾಗಿದೆ.

ಯಾದವಗಿರಿ ನಿವೇಶನ: ಯಾದವಗಿರಿಯ 152ನೇ ಸಂಖ್ಯೆಯ 80X100 ನಿವೇಶನದ ಮೇಲೆ ಸಾಲ ಪಡೆಯಲು ಮೈಸೂರಿನ ಗೌಸಿಯಾನಗರದ ಮೊಹಮ್ಮದ್ ನಯೀಂ, ರಾಜೀವ್‌ನಗರದ ಸೈಡ್ ಮುಬಾರಕ್ ಫರೀಫ್ ಮತ್ತು ಉದಯಗಿರಿಯ ಶಹಜಹಾನ್ ಅವರುಗಳು ಸ್ಟೇಟ್ ಬ್ಯಾಂಕ್ ಇಂಡಿಯಾದ ನಕಲಿ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದ್ದರು. ಎಸ್‌ಬಿಐನ ಪ್ಯಾನಲ್ ವಕೀಲರಾದ ಶ್ರೀಮತಿ ಸೀತಾದೇವಮ್ಮ ಅವರ ಬಳಿ ಕಾನೂನು ಅಭಿಪ್ರಾಯಕ್ಕೆ ದಾಖಲೆಗಳನ್ನು ಬ್ಯಾಂಕ್ ಸಲ್ಲಿಸಿತ್ತು. ಅವರು ಪರಿಶೀಲನೆ ನಡೆಸಿದಾಗ ಈ ದಾಖಲೆಗಳು ಮುಡಾದಿಂದ ನೀಡಲ್ಪಟ್ಟ ದಾಖಲೆಗಳಾಗಿಲ್ಲದೆ, ನಕಲಿ ದಾಖಲೆಗಳು ಎಂಬುದು ಬೆಳಕಿಗೆ ಬಂದಿದೆ. ಈ ವ್ಯಕ್ತಿಗಳು ಬೆಂಗಳೂರಿನ ಅಕ್ಷರ ಮತ್ತು ಚಾರ್ಟೆಡ್ ಅಕೌಂಟೆಡ್ ಶ್ರೀನಿವಾಸಮೂರ್ತಿ ಅವರು ತಿಳಿಸಿದ ವಕೀಲರ ಕಚೇರಿಗೆ ಬಂದಿರುವುದಾಗಿ ತಿಳಿಸಿದ್ದರು. ನೈಜ ಸ್ಥಿತಿ ಎಂದರೆ ಸದರಿ ನಿವೇಶನವು ಮುಡಾಗೆ ಸೇರಿದ ನಿವೇಶನವಾಗಿತ್ತು. ಈ ಸಂಬಂಧ 2020ರ ಡಿಸೆಂಬರ್ 31ರಂದು ಅಂದಿನ ಮುಡಾ ಆಯುಕ್ತ ನಟೇಶ್ ಅವರು ಲಕ್ಷ್ಮೀಪುರಂ ಠಾಣೆಗೆ ದೂರು ಸಲ್ಲಿಸಿದ್ದರು.

> ಸಾರ್ವಜನಿಕರು ಯಾವುದೇ ಆಸ್ತಿ ಖರೀದಿಸುವ ಮುನ್ನ ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಬೇಕು. ಕೇವಲ ದಾಖಲೆ ಮಾತ್ರ ಅವರಲ್ಲಿರುವ ಸೀಲ್ ನೋಡಿ ಅಷ್ಟಕ್ಕೆ ದಾಖಲೆಗಳು ಸರಿಯಿದೆ ಎಂಬ ನಿರ್ಧಾರಕ್ಕೆ ಬಾರದೆ, ಉಪನೋಂದಣಾಧಿಕಾರಿಗಳ ಕಚೇರಿ ಹಾಗೂ ಜಮೀನು ಅಥವಾ ನಿವೇಶನ ಮಂಜೂರು ಮಾಡಿರುವ ಕಚೇರಿಗಳಲ್ಲಿ ದಾಖಲೆಗಳನ್ನು ಪರಿಶೀಲಿಸಿದ ನಂತರ ಖರೀದಿಸುವುದು ಒಳ್ಳೆಯದು. ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲನೆ ಮಾಡದೆ ಇಂತಹ ವಂಚಕರ ಬಲೆಗೆ ಬಿದ್ದರೆ ಹಣ ಕಳೆದುಕೊಳ್ಳುವುದು ಮಾತ್ರವಲ್ಲದೆ, ಕೆಲವೊಮ್ಮೆ ಕ್ರಿಮಿನಲ್ ಕೇಸ್ ಅನ್ನು ಕೂಡ ಎದುರಿಸಬೇಕಾದ ಅಪಾಯ ಬಂದೊದಗುತ್ತದೆ. ಅದ್ದರಿಂದ ಸಾರ್ವಜನಿಕರು ಆಸ್ತಿ ಖರೀದಿ ಮಾಡುವಾಗ ಬಹಳ ಎಚ್ಚರಿಕೆಯಿಂದಿರಬೇಕು. ವಂಚನೆಗೊಳಗಾದವರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲು ಹಿಂದೇಟು ಹಾಕಬಾರದು.
>
> – ಪ್ರದೀಪ್‌ಗುಂಟಿ, ಡಿಸಿಪಿ

ಕಾವೇರಿ ನೀರು ಬಂದ್

ಬೆಂಗಳೂರಿನ ಹಲವು ಭಾಗಗಳಲ್ಲಿ ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾದ ಹಿನ್ನೆಲೆಯಲ್ಲಿ ಎಚ್ಚೆತ್ತ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಬೆಂಗಳೂರಿನಲ್ಲಿ ಸಭೆ ನಡೆಸಿ ಬಳಿಕ ಮಳವಳ್ಳಿ ಟಿ.ಕೆ.ಹಳ್ಳಿಯತ್ತ ದೌಡಾಯಿಸಿದರು.

ನೀರಿನಿಂದ ಜಲಾವೃತಗೊಂಡಿದ್ದ ಪಂಪ್‌ಹೌಸ್‌ಗಳನ್ನು ಸಚಿವ ಆರ್.ಅಶೋಕ್, ಅಶ್ವತ್ಥ ನಾರಾಯಣ, ಭೈರತಿ ಬಸವರಾಜು, ಶಾಸಕ ಡಾ.ಕೆ.ಅನ್ನದಾನಿ, ಮಾಜಿ ಸಚಿವ ಬಿ.ಸೋಮಶೇಖರ್, ಜಿಲ್ಲಾಧಿಕಾರಿ ಎಸ್.ಅಶ್ವತಿ, ಎಸ್‌ಪಿ ಯತೀಶ್ ಅವರೊಂದಿಗೆ ಪರಿಶೀಲಿಸಿ, ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ನಂತರ ಮಾತನಾಡಿದ ಅವರು, ಭಾನುವಾರ ರಾತ್ರಿ ಸುರಿದ ಬಾರೀ ಮಳೆಯಿಂದ ಭೀಮೇಶ್ವರ ನದಿ ನೀರು ಪಂಪ್ ಸ್ಟೇಷನ್‌ಗೆ ನುಗ್ಗಿದ ಪರಿಣಾಮ ನೀರು ಪೂರೈಕೆಯನ್ನು ನಿಲ್ಲಿಸಲಾಗಿದೆ. ಮಂಗಳವಾರ (ಸೆ.6) ಮಧ್ಯಾಹ್ನದೊಳಗೆ ನೀರಿನ ಘಟಕಗಳನ್ನು ಸರಿಪಡಿಸಿ, ಬೆಂಗಳೂರಿಗೆ ಎಂದಿನಂತೆ ನೀರು ಸರಬರಾಜು ಮಾಡಲಾಗುವುದು ಎಂದರು.

ರಾಜ್ಯದಲ್ಲಿ ಜನವರಿಯಿಂದ ಪ್ರಾರಂಭವಾದ ಮಳೆ ನಿರಂತರವಾಗಿ ಸುರಿಯುತ್ತಿದೆ. ಪರಿಣಾಮ ರಾಜ್ಯದ ಎಲ್ಲಾ ಕೆರೆ, ಕಟ್ಟೆ ಭರ್ತಿಯಾಗಿದ್ದು, ಮಳೆ ನೀರು– ಕೆರೆ ನೀರಿನಿಂದ ಪ್ರವಾಹ ಪರಿಸ್ಥಿತಿ ಎದುರಾಗಿದೆ. ಈ ಬಗ್ಗೆ ಜಾಗೃತಿ ವಹಿಸಲು ಸ್ಥಳೀಯ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು. ನೀರಿನ ಕೊರತೆಯಾಗದಂತೆ ಕ್ರಮ ವಹಿಸಲಾಗುತ್ತಿದೆ. ಬೋರ್‌ವೆಲ್ ನೀರು ಪೂರೈಸಲು ವ್ಯವಸ್ಥೆ ಮಾಡಲಾಗಿದೆ. ಬೋರ್‌ವೆಲ್ ಇಲ್ಲದ ಕಡೆ ಟ್ಯಾಂಕರ್ ವ್ಯವಸ್ಥೆ ಮಾಡಲಾಗುವುದು ಎಂದರು.

ತಕ್ಷಣ ಪರಿಹಾರ ಕಲ್ಪಿಸಿ

ಸೈಬರ್ ಫೌಂಡೇಷನ್ ವತಿಯಿಂದ ಆಯೋಜಿಸಿರುವ ಸೈಬರ್ ವರ್ಸ್ ಲ್ಯಾಬ್, ಕಾಪ್ ಕನೆಕ್ಟ್ ಮತ್ತು ಸೈಬರ್ ಹೈಜೀನ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕಿತ್ತು. ಕಾರ್ಯಕ್ರಮಕ್ಕೆ ಆಗಮಿಸುವ ಸಂದರ್ಭದಲ್ಲಿ ಮಳೆಯಿಂದ ಆಗಿರುವ ಅನಾಹುತಗಳು ಮತ್ತು ಸಂತ್ರಸ್ತರಿಗೆ ಪರಿಹಾರದಲ್ಲಿ ಲೋಪವಾಗಬಾರದೆಂದು ಎಂಬ ಮಾತು ಕೇಳಿ ಬರುವಾಗಲೇ ಅದರ ಹಿನ್ನೆಲೆಯಲ್ಲಿ ಕಂದಾಯ ಇಲಾಖೆ ಮುನ್ನೆಚ್ಚರಿಕಾ ಕ್ರಮ ಕೈಗೊಂಡಿದೆ.

ಸೆ.14ರವರೆಗೆ ನ್ಯಾಯಾಂಗ ಬಂಧನ

ಸೆಪ್ಟೆಂಬರ್ 14ರವರೆಗೆ ನ್ಯಾಯಾಂಗ ಬಂಧನಕ್ಕೆ ನೀಡಿದೆ. ಪೋಕ್ಸೋ ಪ್ರಕರಣದಲ್ಲಿ ಬಂಧನಕ್ಕೆ ಒಳಗಾಗಿರುವ ಮುರುಘಾ ಶ್ರೀ ಅವರನ್ನು ಕೋರ್ಟ್ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದು, ಭಾನುವಾರ ಕಸ್ಟಡಿ ಅಂತ್ಯವಾದ ಹಿನ್ನೆಲೆಯಲ್ಲಿ ಇಂದು ಪೊಲೀಸರು ಶ್ರೀಗಳನ್ನು ಜೆಎಂಎಫ್‌ಸಿ ಕೋರ್ಟ್‌ಗೆ ಹಾಜರುಪಡಿಸಿದರು. ವಿಚಾರಣೆ ನಡೆಸಿದ ಕೋರ್ಟ್ ಸೆ. 14ರವರೆಗೆ ನ್ಯಾಯಾಂಗ ಬಂಧನ ವಿಧಿಸಿದೆ.

ಡಿವೈಎಸ್ಪಿ ಕಚೇರಿಯಲ್ಲಿ ವಿಚಾರಣೆ: ಇದಕ್ಕೂ ಮೊದಲು ತನಿಖಾಧಿಕಾರಿ ಡಿವೈಎಸ್ಪಿ ಅನಿಲ್ ಕುಮಾರ್ ನೇತೃತ್ವದಲ್ಲಿ ಶ್ರೀಗಳ ವಿಚಾರಣೆ ಮಾಡಿದರು. ಚಿತ್ರದುರ್ಗ ಜಿಲ್ಲಾ 2ನೇ ಅಪರ ಮತ್ತು ಸತ್ರ ನ್ಯಾಯಾಲಯದಲ್ಲಿ ಇಂದು ಪ್ರಕರಣ 3ನೇ ಆರೋಪಿ ಮುರುಘಾ ಮಠದ ಉತ್ತರಾಧಿಕಾರಿ (ಬಾಲಪರಾಧಿ) ನಿರೀಕ್ಷಣಾ ಜಾಮೀನು ಅರ್ಜಿ ವಿಚಾರಣೆ ನಡೆಸಿದ್ದು, ನಿರೀಕ್ಷಣಾ ಜಾಮೀನು ಅರ್ಜಿಗೆ ಆಕ್ಷೇಪಣೆ ಸಲ್ಲಿಕೆಗೆ ಅವಕಾಶ ನೀಡಲಾಗುತ್ತದೆ.

ಶಿಕ್ಷಕರು, ಶಿಕ್ಷಣ ಕ್ಷೇತ್ರದ ಸಮಸ್ಯೆ ನಿವಾರಣೆಗೆ

ಜಿಲ್ಲಾ ಮಟ್ಟದಲ್ಲಿ 'ಶಿಕ್ಷಣ ಅದಾಲತ್' ಆಯೋಜನೆ ಅವಶ್ಯ

● ಮಾಜಿ ಶಿಕ್ಷಣ ಸಚಿವರೂ ಆದ ಶಾಸಕ ತನ್ವೀರ್ ಸೇಠ್ ಅಭಿಮತ ● ಪಿಯುಸಿ ಮಕ್ಕಳಿಗೆ ಎಬಿಸಿಡಿ ಗೊತ್ತಿಲ್ಲ: ಎಂಎಲ್‌ಸಿ ಮರಿತಿಬ್ಬೇಗೌಡ ವಿಷಾದ ● ಶಿಕ್ಷಣ ವಾಣಿಜ್ಯೀಕರಣ ತಪ್ಪಿಸಬೇಕು: ಎಂಎಲ್‌ಸಿ ಮಂಜೇಗೌಡ ● ಶಿಕ್ಷಣದ ಗುಣಮಟ್ಟ ಸುಧಾರಣೆಗೆ ಪ್ರಧಾನಿ ಸಲಹೆಯಂತೆ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿ: ಶಾಸಕ ಎಲ್.ನಾಗೇಂದ್ರ





ಮೈಸೂರು,ಸೆ.5(ಎಂಟಿವೈ)– ಹಲವು ವರ್ಷಗಳಿಂದ ಶಿಕ್ಷಕರು ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ತಲೆದೋರಿರುವ ಸಮಸ್ಯೆಗಳ ಪರಿಹಾರಕ್ಕೆ ಜಿಲ್ಲಾಮಟ್ಟದಲ್ಲಿ ಶಿಕ್ಷಣ ಅದಾಲತ್ ಆಯೋಜಿಸಬೇಕು. ಆ ಮೂಲಕ ಸಮಸ್ಯೆಗಳ ಬಗೆಹರಿಸಲು ಕ್ರಮಕೈಗೊಳ್ಳಬೇಕು ಎಂದು ಶಾಸಕ ತನ್ವೀರ್ ಸೇಠ್ ಒತ್ತಾಯಿಸಿದ್ದಾರೆ.

ಮೈಸೂರಿನ ಕಲಾಮಂದಿರದಲ್ಲಿ ಜಿಲ್ಲಾಡಳಿತ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ಸೋಮವಾರ ಆಯೋಜಿಸಿದ್ದ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮದಿನದ ಅಂಗವಾಗಿ, ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಯಾವುದೇ ಸರ್ಕಾರವಾಗಲೀ ಶಿಕ್ಷಣ ಕ್ಷೇತ್ರ ಹಾಗೂ ಶಿಕ್ಷಕರ ಸಮಸ್ಯೆಗಳ ಇತ್ಯರ್ಥಕ್ಕೆ ಕ್ರಮ ಕೈಗೊಳ್ಳುವುದು ಆದ್ಯ ಕರ್ತವ್ಯವಾಗಿದೆ. ಶಿಕ್ಷಕರ ನ್ಯೂನತೆಗಳ ಪರಿಹಾರಕ್ಕಾಗಿ ಸ್ಪಷ್ಟ ಮಾರ್ಗಸೂಚಿ ಇಲ್ಲ. ಈ ಕುರಿತು ರಾಜ್ಯ ಸರ್ಕಾರ ಕೂಡಲೇ ನಿರ್ಧಾರ ಕೈಗೊಳ್ಳಬೇಕು. ಶಿಕ್ಷಕರ ವರ್ಗಾವಣೆ ಗೊಂದಲದ ಗೂಡಾಗಿ ಪರಿಣಮಿಸಿದೆ. ಇದನ್ನು ಸರಿಪಡಿಸಿ, ಶಿಕ್ಷಕರ ಸ್ನೇಹಿ ವರ್ಗಾವಣೆ ವ್ಯವಸ್ಥೆಯನ್ನು ಅನುಷ್ಠಾನಕ್ಕೆ ತರಬೇಕು. ಇದಕ್ಕಾಗಿ ಜಿಲ್ಲಾಮಟ್ಟದಲ್ಲಿ ಶಿಕ್ಷಣ ಅದಾಲತ್ ಆಯೋಜಿಸಿ, ಶಿಕ್ಷಕರ ಸಮಸ್ಯೆ ಆಲಿಸಬೇಕು. ಅದಾಲತ್ ನಡೆಸುವುದರಿಂದ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬರುತ್ತದೆ. ಯಾವ ಹಂತದಲ್ಲಿ ಅವುಗಳನ್ನು ಬಗೆಹರಿಸಬಹುದು ಎಂಬ ಸ್ಪಷ್ಟ ಚಿತ್ರಣ ಸಿಗುತ್ತದೆ. ನಂತರ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಪ್ರಸ್ತುತ ಖಾಸಗಿ ಹಾಗೂ ಸರ್ಕಾರಿ ಶಾಲೆಗಳ ನಡುವೆ ಪೈಪೋಟಿ ಇದೆ. ಸರ್ಕಾರಿ ಶಾಲೆಗಳನ್ನು ಉಳಿಸಿಕೊಳ್ಳಬೇಕಾದರೆ ಕೆಲವು ಸೌಲಭ್ಯ ಕಲ್ಪಿಸಬೇಕಾಗಿದೆ. ಪ್ರತಿಶಾಲೆಗೂ ಶೌಚಾಲಯ ನಿರ್ಮಾಣ, ಅದರ ನಿರ್ವಹಣೆಗೆ ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರು ಕಲ್ಪಿಸಬೇಕು. ಈ ಎರಡು ಪ್ರಮುಖ ಮೂಲಭೂತ ಸೌಲಭ್ಯ ಕಲ್ಪಿಸುವುದು ಆಯಾ ಸ್ಥಳೀಯ ಸಂಸ್ಥೆಗಳ ಜವಾಬ್ದಾರಿಯಾಗಿರುತ್ತದೆ. ಆದ್ದರಿಂದ ಗ್ರಾಪಂ, ತಾಪಂ ಮತ್ತು ಜಿಪಂಗೆ ರಾಜ್ಯ ಸರ್ಕಾರ ಸ್ಪಷ್ಟ ಸೂಚನೆ ನೀಡಬೇಕು. ಮಕ್ಕಳ ಮತ್ತು ಶಾಲಾ ಶುಚಿತ್ವ ಕಾಯ್ದುಕೊಳ್ಳಬೇಕು ಎಂದು ಸಲಹೆ ನೀಡಿದರು.

2018ರಲ್ಲಿ ರಾಜ್ಯಾದ್ಯಂತ 256 ಕರ್ನಾಟಕ ಪಬ್ಲಿಕ್ ಶಾಲೆ ತೆರೆಯುವ ಮೂಲಕ ಆಂಗ್ಲ ಮಾಧ್ಯಮ ಕಲಿಕೆಗೆ ಅವಕಾಶ ಕಲ್ಪಿಸಿಕೊಡಲಾಗಿದೆ. ಇದಕ್ಕೆ ಪ್ರತ್ಯೇಕ ಅನುದಾನ ನೀಡುವ ಕುರಿತು ತೀರ್ಮಾನವಾಗಿತ್ತು. ಆದರೆ, ಇದು ಇನ್ನೂ ಕಾರ್ಯರೂಪಕ್ಕೆ ಬಂದಿಲ್ಲ. ಜತೆಗೆ, ಹೊಸ ಶಾಲೆಗಳನ್ನೂ ಮಂಜೂರು ಮಾಡಿಲ್ಲ.

> ಶಿಕ್ಷಕರು ಎದುರಿಸುತ್ತಿರುವ ಸಮಸ್ಯೆ ಕುರಿತು ಸಲ್ಲಿಸಿರುವ ಮನವಿಯನ್ನು ಮುಖ್ಯಮಂತ್ರಿ ಹಾಗೂ ಶಿಕ್ಷಣ ಸಚಿವರಿಗೆ ತಲುಪಿಸುತ್ತೇವೆ. ನಾಳೆ ಮುಖ್ಯಮಂತ್ರಿಗಳು ಮೈಸೂರಿಗೆ ಬರುವ ಕಾರ್ಯಕ್ರಮವಿದ್ದು, ಆ ವೇಳೆ ಶಿಕ್ಷಕರ ಸಂಘದ ನಿಂಯೋಗ ಬಂದರೆ ನಿಮ್ಮಿಂದಲೇ ಮನವಿ ಪತ್ರ ಕೊಡಿಸುವುದಕ್ಕೆ ವ್ಯವಸ್ಥೆ ಮಾಡುತ್ತೇನೆ. ಶಿಕ್ಷಕರೆಲ್ಲರೂ ಉತ್ತಮರೇ ಆಗಿದ್ದಾರೆ. ಅವರಲ್ಲಿ ಕೆಲವರಿಗೆ ಉತ್ತಮ ಶಿಕ್ಷಕ ಪ್ರಶಸ್ತಿ ದೊರೆತಿದೆ. ಎಲ್ಲಾ ಶಿಕ್ಷಕರಿಗೂ ಪ್ರಶಸ್ತಿ ನೀಡಲು ಸಾಧ್ಯವಿಲ್ಲ. ಕೋವಿಡ್ ಸಂದರ್ಭದಲ್ಲೂ ಶಿಕ್ಷಕರು ಉತ್ತಮವಾಗಿ ಕಾರ್ಯನಿರ್ವಹಿಸುವ ಮೂಲಕ ಜಿಲ್ಲೆಗೆ ಉತ್ತಮ ಫಲಿತಾಂಶವನ್ನು ತಂದುಕೊಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ.ಮೈಸೂರು ಜಿಲ್ಲಾ ಉಸ್ತುವಾರಿ ಮಂತ್ರಿಯಾಗಿ ಎರಡು ವರ್ಷಗಳಲ್ಲಿ ಜಿಲ್ಲೆಯ ಶಿಕ್ಷಕರ ಮೇಲೆ ಇದುವರೆಗೂ ಯಾವುದೇ ದೂರು ಬಂದಿಲ್ಲ. ಜಿಲ್ಲೆಯ ಶಿಕ್ಷಕರು ಉತ್ತಮ ಫಲಿತಾಂಶಕ್ಕಾಗಿ ಕಾರ್ಯನಿರ್ವಹಿಸುವುದರ ಫಲವಾಗಿ ಜಿಲ್ಲೆಗೆ ಒಳ್ಳೆಯ ಫಲಿತಾಂಶ ಕೂಡ ಬಂದಿದೆ.
>
> -ಎಸ್.ಟಿ.ಸೋಮಶೇಖರ್, ಜಿಲ್ಲಾ ಉಸ್ತುವಾರಿ ಸಚಿವ

ಪಿಯುಸಿಗೆ ಬಂದರೂ ಎಬಿಸಿಡಿ ಗೊತ್ತಿಲ್ಲ: ವಿಧಾನಪರಿಷತ್ ಸದಸ್ಯ ಮರಿತಿಬ್ಬೇಗೌಡ ಮಾತನಾಡಿ, ಶಿಕ್ಷಕರು ಪ್ರಶಸ್ತಿ ಹಿಂದೆ ಬೆನ್ನ ಹತ್ತಬಾರದು. ಇದು ಸರಿಯಲ್ಲ. ಉತ್ತಮವಾಗಿ ಕರ್ತವ್ಯ ನಿರ್ವಹಣೆ ಮೂಲಕ ವಿದ್ಯಾರ್ಥಿಗಳ ನೆಚ್ಚಿನ ಶಿಕ್ಷಕರಾಗಬೇಕು. ಆಗ ಮಾತ್ರ ಸಾರ್ಥಕತೆ ದೊರೆಯಲಿದೆ. ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಪ್ರಕಾರ 11ನೇ ತರಗತಿಯವರೆಗೂ ಪರೀಕ್ಷೆ ನಡೆಸದೇ ಇರಲು ನಿರ್ಧರಿಸಲಾಗಿದೆ. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಬೇಕು. ಈಗ 9ನೇ ತರಗತಿವರೆಗೆ ಪರೀಕ್ಷೆ ಇಲ್ಲ. ಇಂತಹ ಸ್ಥಿತಿಯಲ್ಲೇ ಶಿಕ್ಷಕರಲ್ಲಿ ಸೋಮಾರಿತನ ಹೆಚ್ಚಾಗಿದೆ. ಪಾಠ ಮಾಡುವವರ ಸಂಖ್ಯೆ ಕಡಿಮೆಯಾಗಿದೆ. ಶಿಕ್ಷಣದ ಗುಣಮಟ್ಟವೂ ಕುಸಿಯುತ್ತಿದೆ. ಪಿಯುಸಿಗೆ ಹೋದ ವಿದ್ಯಾರ್ಥಿಗಳಿಗೆ ಸರಿಯಾಗಿ ಎಬಿಸಿಡಿ, ಕಾಗುಣಿತವೇ ಬರುತ್ತಿಲ್ಲ ಎಂದು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು ವಿಷಾದಿಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಎನ್‌ಇಪಿಯಿಂದಾಗಿ ಪರೀಕ್ಷೆ ನಡೆಸದೇ ಪಿಯುಸಿವರೆಗೂ ಎಲ್ಲರನ್ನು ಪಾಸ್ ಮಾಡಿದರೆ ಪರಿಸ್ಥಿತಿ ಇನ್ನಷ್ಟು ಬಿಗಡಾಯಿಸುತ್ತದೆ. ಪರೀಕ್ಷೆ ಇಲ್ಲದ ಕಾರಣಕ್ಕೆ ಶಿಕ್ಷಕರ ಲಕ್ಷ್ಯ ಕಡಿಮೆಯಾಗಿ, ಖಾಸಗಿ ಬದುಕಿನತ್ತ ಗಮನ ಹೆಚ್ಚಾಗಿದೆ. 2021–22ನೇ ಸಾಲಿನಲ್ಲಿ ಪಿಯುಸಿ ಪರೀಕ್ಷೆಯಲ್ಲಿ ಮೈಸೂರು ಜಿಲ್ಲೆ 27ನೇ ಸ್ಥಾನ ಪಡೆದಿರುವುದು ತಲೆತಗ್ಗಿಸುವ ಸಂಗತಿಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹಸ್ತಕ್ಷೇಪ ಸಲ್ಲದು: ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಮಾತನಾಡಿ, ಪ್ರಸ್ತುತ ಶಿಕ್ಷಣ ಸಂಪೂರ್ಣವಾಗಿ ವಾಣಿಜ್ಯೀಕರಣಗೊಂಡಿದೆ. ಇದಕ್ಕೆ ಕಡಿವಾಣ ಹಾಕಬೇಕು. ಶಿಕ್ಷಣ ಮತ್ತು ಪೊಲೀಸ್ ವ್ಯವಸ್ಥೆಯಲ್ಲಿ ರಾಜಕೀಯ ಹಸ್ತಕ್ಷೇಪ ಮಾಡುವುದು ಸರಿಯಲ್ಲ ಎಂದರು.

ಚಾಮರಾಜ ಕ್ಷೇತ್ರದ ಶಾಸಕರಾದ ಎಲ್. ನಾಗೇಂದ್ರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಸರ್ಕಾರಿ ಶಾಲಾ ಕಾಲೇಜುಗಳಿಗೆ 8000 ಕೊಠಡಿಗಳನ್ನು ಕೊಟ್ಟಿರುವಂತಹ ಒಂದು ದಾಖಲೆಯನ್ನು ಸರ್ಕಾರ ಮಾಡಿದೆ. ಅತಿಥಿ ಉಪನ್ಯಾಸಕರಿಗೆ ಹೆಚ್ಚಿನ ವೇತನವನ್ನು ರಾಜ್ಯ ಸರ್ಕಾರ ಕೊಟ್ಟಿದೆ. ಕಲಾ ಮತ್ತು ವಿಜ್ಞಾನ ಕಾಲೇಜುಗಳಿಗೆ ಸಾಕಷ್ಟು ಸಲಕರಣೆಗಳನ್ನು ನಾವು ನೀಡಿದ್ದೇವೆ ಎಂದರು.

ನಮ್ಮ ಮಕ್ಕಳ ಭವಿಷ್ಯ ರೂಪಿಸುವಂತಹ ಸರ್ಕಾರಿ ಶಾಲೆಗಳಿಗೆ ಸಲಕರಣೆ, ಸವಲತ್ತುಗಳು ಕೊಡುವಂತಹ ಕೆಲಸ ಸರ್ಕಾರ ಮಾಡಿರುವುದು ಖುಷಿ ವಿಷಯ. ಸ್ವಾತಂತ್ರ್ಯ ನಂತರದಲ್ಲಿ ದೇಶದ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ಪ್ರಧಾನಮಂತ್ರಿಗಳು ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೆ ತಂದಿದ್ದಾರೆ. ಕೇಂದ್ರ ಮತ್ತು ರಾಜ್ಯ ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಒತ್ತು ಕೊಡುವಂತಹ ಪ್ರಾಮಾಣಿಕ ಪ್ರಯತ್ನ ಮಾಡುತ್ತಿವೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಕಾರ್ಯಕ್ರಮದಲ್ಲಿ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಹಾಗೂ ಅಕ್ಷರ ಮಾತೆ ಸಾವಿತ್ರಿ ಬಾಯಿ ಫುಲೆ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು. ಕಾರ್ಯಕ್ರಮದ ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಕರಾಮುವಿಯ ಕನ್ನಡ ವಿಭಾಗದ ಪ್ರಾಧ್ಯಾಪಕಿ ಡಾ.ಜ್ಯೋತಿಶಂಕರ್ ಮಾತನಾಡಿ, ಭಾರತೀಯ ಸಮಾಜವು ಗುರುಕುಲಕ್ಕೆ ಹೆಚ್ಚು ಗೌರವ ನೀಡುತ್ತದೆ. ಪ್ರತಿಯೊಂದು ವಿದ್ಯಾರ್ಥಿಗೂ ಮನೆಯೇ ಮೊದಲ ಪಾಠ ಶಾಲೆ. ಪೋಷಕರೇ ಮೊದಲು ಶಿಕ್ಷಕರು. ಅಂದು ಶಿಕ್ಷಕರಿಗೆ ಅವರ ವೃತ್ತಿಗೆ ಅನುಸಾರ ಸಂಬಳವಿರಲಿಲ್ಲ. ಆದರೆ ಇಂದು ತಕ್ಕಮಟ್ಟಿಗೆ ಶಾಲಾ ಶಿಕ್ಷಕರು ಗೌರವಯುತವಾಗಿ ಬದುಕಲು ಸಹಾಯಕಾರಿಯಾಗಿದೆ ಎಂದು ಹೇಳಿದರು.

ಮಕ್ಕಳಿಗೆ ನೈತಿಕ ಶಿಕ್ಷಣ ಬೋಧಿಸುವುದು ಪ್ರತಿಯೊಬ್ಬ ಶಿಕ್ಷಕರ ಪ್ರಾಥಮಿಕ ಕರ್ತವ್ಯವಾಗಬೇಕು. ಇಂದು ಎಷ್ಟೇ ತಂತ್ರಜ್ಞಾನ ಮುಂದುವರಿದರೂ, ಗುರುವಿಲ್ಲದ ಶಿಕ್ಷಣ ಗುಣಮಟ್ಟದ ವಿದ್ಯಾರ್ಥಿಗಳನ್ನು ತಯಾರಿಸಲು ಸಾಧ್ಯವಿಲ್ಲ. ಸಮಾಜದ ಅಭಿವೃದ್ಧಿಗೆ ಶಿಕ್ಷಕರ ಕೊಡುಗೆ ಅಪಾರವಾದದ್ದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮೇಯರ್ ಸುನಂದಾ ಪಾಲನೇತ್ರ ಶಾಸಕ ಎಲ್.ನಾಗೇಂದ್ರ, ಶಾಸಕ ಎಸ್.ಎ.ರಾಮದಾಸ್, ಮೈಲ್ಯಾಕ್ ಅಧ್ಯಕ್ಷ ಆರ್.ರಘು, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಎಂ.ಶಿವಕುಮಾರ್, ಅಪರ ಜಿಲ್ಲಾಧಿಕಾರಿ ಡಾ.ಬಿ.ಎಸ್.ಮಂಜುನಾಥಸ್ವಾಮಿ, ಜಿಪಂ ಸಿಇಓ ಬಿ.ಆರ್.ಪೂರ್ಣಿಮಾ, ಶಿಕ್ಷಣ ಇಲಾಖೆಯ ವಿಭಾಗೀಯ ಕಾರ್ಯದರ್ಶಿ ಭಾರತಿ, ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಜಿ.ಗೋವಿಂದರಾಜು, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೆ.ಬಿ.ಸೋಮೇಗೌಡ, ರಾಜ್ಯ ಪರಿಷತ್ ಸದಸ್ಯ ರೇವಣ್ಣ, ಡಿಡಿಪಿಐ ರಾಮಚಂದ್ರರಾಜೇ ಅರಸ್, ಬಿಇಓಗಳಾದ ಆರ್.ರಾಮಾರಾಧ್ಯ, ಕೃಷ್ಣ, ಇನ್ನಿತರರು ಉಪಸ್ಥಿತರಿದ್ದರು.

ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ

2022–23ನೇ ಸಾಲಿನ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಯನ್ನು ಕಿರಿಯ, ಹಿರಿಯ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆಯ ತಲಾ 10 ಶಿಕ್ಷಕರು ಸೇರಿದಂತೆ 30 ಶಿಕ್ಷಕರಿಗೆ ಪ್ರದಾನ ಮಾಡಲಾಯಿತು. ಕಿರಿಯ ಪ್ರಾಥಮಿಕ ಶಾಲಾ ವಿಭಾಗದಲ್ಲಿ ಜೂಲಿಯಟ್ ವಿಲ್ಮಾ(ಚಾಕಹಳ್ಳಿ), ಎಂ.ರವಿಚಂದ್ರನ್(ಬೆಜ್ಜಲಪುರ), ಜಿ.ಎಸ್.ಲಲಿತ (ಗಂಧನಹಳ್ಳಿ), ತಾಸೀನ್ ತಾಜ್(ಶಾಂತಿನಗರ), ಎಸ್.ಇಂದಿರಾ(ಅಶೋಕಪುರಂ), ಎಸ್.ರತ್ನಮ್ಮ (ಹಳೇಕಾಮನಕೊಪ್ಪಲು), ಬಿ.ಎಸ್.ಮೋಹನ(ಕಂತೇಕೊಪ್ಪಲು), ಕೆ.ವಿ.ಮಂಜುಳ (ಕಾಹಳ್ಳಿ), ಕೆಂಪರಾಜು(ಕೋಣಗಹಳ್ಳಿ) ಅವರಿಗೆ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಹಿರಿಯ ಪ್ರಾಥಮಿಕ ಶಾಲಾ ವಿಭಾಗದಲ್ಲಿ ಎಂ.ಎ.ಸವಿತಾ(ಬೆಟ್ಟದಬೀಡು), ಹೆಚ್.ಎಂ. ಚಂದ್ರಶೇಖರ್(ಎಂ.ಸಿ.ತಳಲು), ಜೆ.ಎಂ. ಗುರುಮೂರ್ತಿ(ಬೆಂಕಿಪುರ), ಎನ್.ಎಲ್.ರಾಮಪ್ರಸಾದ್ (ಹರಂಬಳ್ಳಿ ಕೊಪ್ಪಲು), ಹೆಚ್.ಜೆ.ಲೋಕೇಶ್(ಗೌಸಿಯಾನಗರ), ಬಿ.ಮಂಜುಪ್ರಭಾ(ಕರ್ನಾಟಕ ಪಬ್ಲಿಕ್ ಸ್ಕೂಲ್, ಕುವೆಂಪುನಗರ), ಹೆಚ್.ಟಿ.ಜಲಜಾಕ್ಷಿ(ದುದ್ದಗೆರೆ), ಕೆ.ಎಸ್.ಪ್ರದೀಪ(ಕಿರನಲ್ಲಿ), ಎಂ.ಆರ್.ಶ್ರೀನಿವಾಸ ನಾಯಕ (ಶಿರಮಳ್ಳಿ), ಆರ್.ಭ್ರಮರಾಂಭ(ಮೂಗೂರು ಪಬ್ಲಿಕ್ ಸ್ಕೂಲ್) ಅವರಿಗೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಪ್ರೌಢಶಾಲಾ ವಿಭಾಗ : ಗೋಪಾಲ (ಸವ್ವೆ), ಸಣ್ಣಸೋಮಯ್ಯ (ಸರಗೂರು), ಗೀತಾ ಸಿ.ಎನ್., (ಮನುಗನಹಳ್ಳಿ), ಸತೀಶ ಬಿ.ಸಿ. (ಸಾಲಿಗ್ರಾಮ), ಎಸ್.ಆನಂದ (ವಿನಾಯಕನಗರ), ಮಹೇಶ ಕೆ.ಎಂ. (ರೈಲ್ವೆ ಕಾರ್ಯಾಗಾರ ಮೈಸೂರು ದಕ್ಷಿಣ), ಸಂಜಯ್ ಕುಮಾರ್ ಹೆಚ್.ಕೆ (ಉದ್ಬೂರು), ಪ್ರಭಾಕರಸಿಂಗ್ (ಮುತ್ತೂರು), ನಂಜುಂಡಸ್ವಾಮಿ (ತಲಕಾಡು), ಗೋವಿಂದ (ಕುಪ್ಪರವಳ್ಳಿ) ಅವರಿಗೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಿ, ಸನ್ಮಾನಿಸಲಾಯಿತು.

ಅನ್ಯ ಕರ್ತವ್ಯದಿಂದ ಬಿಡುಗಡೆ ಮಾಡಿ

ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಸಚಿವ ಎಸ್.ಟಿ.ಸೋಮಶೇಖರ್ ಅವರಿಗೆ ಶಿಕ್ಷಕರ ಸಂಘದ ವತಿಯಿಂದ ನಮ್ಮ ಬೇಡಿಕೆಗಳ ಮನವಿ ಸಲ್ಲಿಸಲಾಯಿತು. ಶಿಕ್ಷಕರನ್ನು ಶಿಕ್ಷಣ ಇಲಾಖೆಯ ಕಾರ್ಯಕ್ರಮಗಳಿಗಿಂತ ಬೇರೆ ಇಲಾಖೆಯ ಕಾರ್ಯಕ್ರಮಕ್ಕೇ ಹೆಚ್ಚಾಗಿ ಬಳಸಿಕೊಳ್ಳಲಾಗುತ್ತಿದೆ. ಇದರಿಂದ ಶಾಲೆಯಲ್ಲಿ ಪಾಠ ಮಾಡುವುದಕ್ಕೆ ಸಾಧ್ಯವಾಗದಂತಾಗಿದೆ. ಪರಿಸ್ಥಿತಿ ಹೀಗಿರುವಾಗ ಉತ್ತಮ ಫಲಿತಾಂಶ ನಿರೀಕ್ಷಿಸುವುದು ಸರಿಯೇ?. ಈಗಾಗಲೇ ಶಿಕ್ಷಕರನ್ನು ಬಿಎಲ್‌ಓಗಳಾಗಿ ನೇಮಕ ಮಾಡಲಾಗಿದೆ. ಪ್ರತಿದಿನ ಮನೆ ಬಾಗಿಲಿಗೆ ಶಿಕ್ಷಕರು ಅಲೆಯಬೇಕಾದ ಸ್ಥಿತಿ ಎದುರಾಗಿದೆ. ಆಧಾರ್ ಕಾರ್ಡ್, ವೋಟರ್ ಐಡಿಗೆ ಮೊಬೈಲ್ ನಂಬರ್ ಸೇರ್ಪಡೆ ಜವಾಬ್ದಾರಿಯನ್ನೂ ಶಿಕ್ಷಕರ ಹೆಗಲಿಗೆ ಹಾಕಲಾಗಿದೆ. ಈ ಎಲ್ಲಾ ಚಟುವಟಿಕೆಗೆ ಸಾಕಷ್ಟು ಸ್ವಯಂಸೇವಕ ಸಂಸ್ಥೆಗಳಿದ್ದು, ಅವುಗಳ ನೆರವು ಪಡೆದುಕೊಂಡು ಶಿಕ್ಷಕರನ್ನು ಶಿಕ್ಷಣ ಇಲಾಖೆಗಷ್ಟೇ ಸೀಮಿತಗೊಳಿಸುವಂತೆ ಕೋರಿದರು.

ಸ್ನೇಹಿತನ ಹೆಸರು ಹೇಳಿ ಉಡುಗೊರೆ ಕಳಿಸುವುದಾಗಿ ವಾಟ್ಸಾಪ್ ಕಾಲ್ ಮಾಡಿ ಮಹಿಳೆಗೆ 3.10 ಲಕ್ಷ ವಂಚನೆ

● ಆನ್‌ಲೈನ್‌ನಲ್ಲಿ ಹಣ ವರ್ಗಾವಣೆ ● ಮತ್ತೊಂದು ಪ್ರಕರಣದಲ್ಲಿ ಬ್ಯಾಂಕ್ ಅಕೌಂಟ್ ಆಕ್ಟಿವೇಟ್ ಮಾಡುವ ನೆಪದಲ್ಲಿ 26 ಸಾವಿರ ವಂಚನೆ

ಮೈಸೂರು, ಸೆ. 5– ಸ್ನೇಹಿತನ ಹೆಸರು ಹೇಳಿಕೊಂಡು ಉಡುಗೊರೆ ಕಳುಹಿಸುವುದಾಗಿ ವಾಟ್ಸಾಪ್ ಮೂಲಕ ಕರೆ ಮಾಡಿ ಮಹಿಳಾ ಇಂಜಿನಿಯರ್‌ಗೆ 3.10 ಲಕ್ಷ ರೂ. ವಂಚಿಸಿರುವ ಬಗ್ಗೆ ವರದಿಯಾಗಿದೆ.

ಮೈಸೂರಿನ ಟಿಕೆ ಲೇಔಟ್ ನಿವಾಸಿ ಸಿ. ಮೇಘನಾ(36) ವಂಚನೆಗೊಳಗಾದವರಾಗಿದ್ದು ಇವರ ಸ್ನೇಹಿತನ ಹೆಸರಿನಲ್ಲಿ ಕರೆ ಮಾಡಿದ್ದ ವ್ಯಕ್ತಿ ಉಡುಗೊರೆ ಕಳುಹಿಸುವುದಾಗಿ ನಂಬಿಸಿದ್ದಾನೆ. ನಂತರ ದೆಹಲಿಯ ಏರ್‌ಪೋರ್ಟ್ ಕಸ್ಟಮ್ಸ್ ಅಧಿಕಾರಿಗಳು ಎಂದು 9810896926 ಮತ್ತು 8929884551 ಸಂಖ್ಯೆಗಳಿಂದ ಕರೆ ಮಾಡಿದವರು, ಮೇಘನಾ ಅವರಿಂದ ಪಂಜಾಬ್ ನ್ಯಾಷನಲ್ ಬ್ಯಾಂಕ್ ಅಕೌಂಟ್‌ಗೆ 3.10 ಲಕ್ಷ ರೂ. ಆನ್‌ಲೈನ್ ಮೂಲಕ ವರ್ಗಾವಣೆ ಮಾಡಿಸಿಕೊಂಡು ವಂಚನೆ ಎಸಗಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ಕಡಿಮೆ ವೆಚ್ಚದಲ್ಲಿ ಹೆಲಿಕಾಪ್ಟರ್‌ನಲ್ಲಿ ವೈಷ್ಣೋದೇವಿ ದೇವಸ್ಥಾನಕ್ಕೆ ಕರೆದೊಯ್ಯುವುದಾಗಿ ನಕಲಿ ವೆಬ್‌ಸೈಟ್‌ನಲ್ಲಿ ಪ್ರಕಟವಾಗಿದ್ದ ಜಾಹೀರಾತು ನಂಬಿ ಶಿಕ್ಷಕರೊಬ್ಬರು 17,300 ರೂ. ಕಳೆದುಕೊಂಡಿದ್ದಾರೆ. ಗಾಯತ್ರಿಪುರಂ ನಿವಾಸಿ ಜಿ. ಬಸವಣ್ಣ(32) ಜಾಹೀರಾತು ನಂಬಿ ಹಿಮಾಲಯನ್ ಹೆಲಿಪ್ಯಾಡ್ ಎಂಬ ಸಂಸ್ಥೆಗೆ 17,300 ರೂ. ಆನ್‌ಲೈನ್ ಮೂಲಕ ಪಾವತಿಸಿ ಮೋಸ ಹೋಗಿದ್ದಾರೆ.

ಇನ್ನೊಂದು ಪ್ರಕರಣದಲ್ಲಿ ಎಸ್‌ಬಿಐ, ಯುನೊ ಬ್ಯಾಂಕ್ ಅಕೌಂಟ್ ಆಕ್ಟಿವೇಟ್ ಮಾಡಿಕೊಡುವುದಾಗಿ ಆನ್‌ಲೈನ್ ಮೂಲಕ ಗೃಹಿಣಿಯೋರ್ವರಿಗೆ 26,197ರೂ. ವಂಚಿಸಲಾಗಿದೆ. ವಿದ್ಯಾನಗರ ನಿವಾಸಿ ಇಂದಿರಾ(37) ಅವರಿಗೆ ಕರೆ ಮಾಡಿದ್ದ ವ್ಯಕ್ತಿ ಎಸ್‌ಬಿಐ ಯುನೋ ಅಕೌಂಟ್ ಆಕ್ಟಿವೇಟ್ ಮಾಡಿಕೊಡುವುದಾಗಿ ತಿಳಿಸಿ ಓಟಿಪಿ ಪಡೆದಿದ್ದಾನೆ. ಕೆಲವೇ ಕ್ಷಣಗಳಲ್ಲಿ ಅವರ ಬ್ಯಾಂಕ್ ಖಾತೆಯಿಂದ 26,197 ರೂ. ಕಡಿತಗೊಂಡಿದೆ. ಈ ಮೂರೂ ಪ್ರಕರಣಗಳನ್ನು ದಾಖಲಿಸಿಕೊಂಡಿರುವ ಮೈಸೂರು ನಗರದ ಸೆನ್ ಠಾಣೆ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ಪ್ರತ್ಯೇಕ ಅಪಘಾತ: ಮೂವರ ಸಾವು

ಮೈಸೂರು, ಸೆ. 5– ಮೈಸೂರು ನಗರದಲ್ಲಿ ಪ್ರತ್ಯೇಕ ಅಪಘಾತಗಳಲ್ಲಿ ಬಾಲಕ ಸೇರಿ ಮೂವರು ಸಾವನ್ನಪ್ಪಿರುವ ಬಗ್ಗೆ ವರದಿಯಾಗಿದೆ.

ಮೈಸೂರಿನ ಭಾರತ್‌ನಗರ ನಿವಾಸಿ ನಯೀಂ ಅಹಮದ್(49) ಅವರು ಉದಯಗಿರಿ ಪೊಲೀಸ್ ಠಾಣೆ ಬಳಿ ಸುಜುಕಿ ಸ್ಕೂಟರ್ (ಕೆಎ 55–ಇಬಿ 7167)ನಲ್ಲಿ ನಿಂತಿದ್ದಾಗ ವೇಗವಾಗಿ ಬಂದ ಯಜ್ಡಿ ಮೋಟಾರ್ ಬೈಕ್ (ಸಿಎನ್‌ವಿ 6843) ಅವರಿಗೆ ಡಿಕ್ಕಿ ಹೊಡೆದಿದೆ. ತೀವ್ರವಾಗಿ ಗಾಯಗೊಂಡ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಿದರೂ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ರಾಜೀವ್‌ನಗರ ನಿವಾಸಿ ಅಬ್ದುಲ್ ಹಾದಿ(18) ಎಂಬಾತ ಸ್ನೇಹಿತ ಮೊಹಮ್ಮದ್ ಇಬ್ರಾಹಿಂ(16)ನನ್ನು ಕೂರಿಸಿಕೊಂಡು ಬೈಕ್ (ಕೆಎ 55–ಇಬಿ 9894)ನಲ್ಲಿ ರಿಂಗ್ ರಸ್ತೆಯ ನಾರಾಯಣ ಹೃದಯಾಲಯ ಬಳಿ ತೆರಳುತ್ತಿದ್ದಾಗ ನಿಯಂತ್ರಣ ತಪ್ಪಿ ಬೈಕ್ ಬಿದ್ದಿದ್ದು, ಬಾಲಕ ಮೊಹಮದ್ ಇಬ್ರಾಹಿಂ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ.

ಇನ್ನೊಂದು ಪ್ರಕರಣದಲ್ಲಿ ಸುಜುಕಿ ಆಕ್ಸೆಸ್ ಸ್ಕೂಟರ್‌ಗೆ ಬೈಕ್ ಡಿಕ್ಕಿ ಹೊಡೆದು ಸವಾರ ಸಾವನ್ನಪ್ಪಿದ್ದಾನೆ. ಮೈಸೂರಿನ ಪ್ರಕೃತಿ ಲೇಔಟ್ ನಿವಾಸಿ ಬಿ.ಎನ್. ಶಿವಕುಮಾರ್(46) ಸೆ. 1ರಂದು ರಾತ್ರಿ ತಿ.ನರಸೀಪುರ ಮುಖ್ಯ ರಸ್ತೆಯ ಆಲನಹಳ್ಳಿ ಬಳಿ ತೆರಳುತ್ತಿದ್ದಾಗ ಬೈಕ್ ಇವರ ಸ್ಕೂಟರ್‌ಗೆ ಡಿಕ್ಕಿ ಹೊಡೆದ ಪರಿಣಾಮ ತೀವ್ರವಾಗಿ ಗಾಯಗೊಂಡಿದ್ದಾರೆ. ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೇ ಸೆ. 3ರಂದು ಸಾವನ್ನಪ್ಪಿದ್ದಾರೆ. ಈ ಮೂರು ಪ್ರಕರಣಗಳು ಸಿದ್ಧಾರ್ಥನಗರ ಸಂಚಾರ ಠಾಣೆಯಲ್ಲಿ ದಾಖಲಾಗಿವೆ.

ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಅಕ್ಷರ ದಾಸೋಹ ಕಾರ್ಯಕರ್ತೆಯರ ಪ್ರತಿಭಟನೆ



ಮೈಸೂರು, ಸೆ.5(ಆರ್‌ಕೆಬಿ)– ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಸಂಯುಕ್ತ ಅಕ್ಷರ ದಾಸೋಹ ಕಾರ್ಯಕರ್ತೆಯರ ಸಂಘದ ವತಿಯಿಂದ ಸೋಮವಾರ ಜಿಲ್ಲಾ ಪಂಚಾಯಿತಿ ಬಳಿ ಪ್ರತಿಭಟನೆ ನಡೆಸಲಾಯಿತು.

ಜಿಲ್ಲೆಯಾದ್ಯಂತ ಬಿಸಿಯೂಟ ಯೋಜನೆಯ ಅನುಷ್ಠಾನಕ್ಕೆ ಅಡುಗೆಯವರು–ಸಹಾಯಕರು ಪುಡಿಗಾಸಿನ ಗೌರವಧನದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರ ಈ ಸೇವೆಯನ್ನು ಗಮನಿಸಿಯೇ ರಾಜ್ಯ ಸರ್ಕಾರ ಇತ್ತೀಚೆಗೆ ಗೌರವ ಧನವನ್ನು ಹೆಚ್ಚಳ ಮಾಡಿದೆಯಾದರೂ, ಈಗ ಕೊಡುತ್ತಿರುವ 3600 ರೂ. ಗೌರವಧನ ಇಂದಿನ ಬೆಲೆ ಏರಿಕೆಯ ದಿನಗಳನ್ನು ಎದುರಿಸಲು ಸಾಧ್ಯವಾಗುತ್ತಿಲ್ಲ. ಮಾರ್ಚ್‌ನಲ್ಲಿ ಒಂದು ಸಾವಿರ ಗೌರವ ಧನ ಹೆಚ್ಚಳದ ಘೋಷಣೆ ಮಾಡಿದ್ದರೂ ಇಲ್ಲಿಯವರೆಗೂ ಗೌರವಧನ ಪಾವತಿಸದೆ ಇಲಾಖೆ ಅಕ್ಷರ ದಾಸೋಹ ಕಾರ್ಯಕರ್ತೆಯರನ್ನು ತೀವ್ರ ಸಂಕಷ್ಟಕ್ಕೆ ದೂಡಿದೆ. ಆ.6ರಂದು ಇದೇ ವಿಷಯವಾಗಿ ಪ್ರತಿಭಟನೆ ಮಾಡಿದ್ದಾಗ 20 ದಿನಗಳ ಕಾಲಾವಕಾಶ ಕೇಳಿದ್ದರು. ಆದರೆ ತಿಂಗಳಾದರೂ ಗೌರವ ಧನ ಪಾವತಿಸಿಲ್ಲ ಎಂದು ಪ್ರತಿಭಟನಾಕಾರರು ಕಿಡಿ ಕಾರಿದರು.

ಮೇ ತಿಂಗಳಿನಿಂದ ಇಲ್ಲಿಯವರೆಗಿನ ಬಾಕಿ ಗೌರವ ಧನವನ್ನು ಕೂಡಲೇ ಬಿಡುಗಡೆ ಮಾಡಬೇಕು. ನಿಯಮಿತವಾಗಿ ಪ್ರತೀ ತಿಂಗಳ ಮೊದಲ ವಾರದಲ್ಲಿಯೇ ಗೌರವ ಧನ ಪಾವತಿಸಲು ಕ್ರಮಕೈಗೊಳ್ಳಬೇಕು. ಎಂಡಿಎಂ ನಿರ್ದೇಶಾಲಯದ ಆದೇಶದಂತೆ ಬಿಸಿಯೂಟ ಕಾರ್ಮಿಕರಿಗೆ ಕೆಲಸದ ಜವಾಬ್ದಾರಿಗಳು ಹಾಗೂ ಸಮಯ ಪಾಲನೆಯ ಬಗ್ಗೆ ಸ್ಪಷ್ಟ ನಿರ್ದೇಶನ ನೀಡಬೇಕು. ಅಕ್ಷರ ದಾಸೋಹ ಕಾರ್ಮಿಕರಿಗೆ ಗ್ರಾಮ ಪಂಚಾಯಿತಿ, ಎಸ್‌ಡಿಎಂಸಿಯವರ ಅನಗತ್ಯ ಕಿರುಕುಳ ತಪ್ಪಿಸಿ ಕೆಲಸದ ಅಭದ್ರತೆ ನಿವಾರಿಸಲು ಕ್ರಮ ಕೈಗೊಳ್ಳಬೇಕು. ಹೆರಿಗೆ ರಜೆ ಸೇರಿದಂತೆ ನ್ಯಾಯಸಮ್ಮತ ರಜೆ ಸೌಲಭ್ಯ ಖಾತ್ರಿ ಪಡಿಸಬೇಕು. ಕೈಗವಸು, ತಲೆಯ ಸ್ಕಾರ್ಫ್ ಮತ್ತು ಎಪ್ರಾನ್‌ಗಳನ್ನು ಖಾತ್ರಿಪಡಿಸಿ, ಎಲ್ಲರಿಗೂ ಗುರುತಿನ ಚೀಟಿ, ಸಮವಸ್ತ್ರ ನೀಡಬೇಕು ಎಂದು ಆಗ್ರಹಿಸಿದರು. ಕೂಡಲೇ ಈ ಸಮಸ್ಯೆಗಳ ಪರಿಹಾರಕ್ಕೆ ಸಂಘದ ಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಸಭೆ ಕರೆಯಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಶಿಕ್ಷಣ ಅಧಿಕಾರಿ ರೇವಣ್ಣ ಮನವಿ ಸ್ವೀಕರಿಸಿ, ಎರಡು ಮೂರು ದಿನದಲ್ಲಿ ಗೌರವ ಧನ ಪಾವತಿಸುವ ಭರವಸೆ ನೀಡಿದರು. ಪ್ರತಿಭಟನೆಯಲ್ಲಿ ಸ್ಕೀಮ್ ವರ್ಕರ್ಸ್ ಫೆಡರೇಷನ್ ಆಫ್ ಇಂಡಿಯಾದ ರಾಜ್ಯ ಕಾರ್ಯದರ್ಶಿ ಪಿ.ಎಸ್.ಸಂಧ್ಯಾ, ಸಂಘದ ಜಿಲ್ಲಾ ಸಂಚಾಲಕ ಎಸ್.ಎಚ್.ಹರೀಶ್, ಪದಾಧಿಕಾರಿಗಳಾದ ಸೌಮ್ಯ, ಶಿವಮ್ಮ, ಹಸೀನಾ ಸುಲ್ತಾನ, ರಾಜೇಶ್ವರಿ, ಶಾಂತಮ್ಮ, ಕುಮಾರಿ, ಮಂಜುಳಾ, ರೇಣುಕಾ, ಚಿಕ್ಕರಂಗಮ್ಮ, ಸವಿತಾ, ಸಣ್ಣಮಲ್ಲಿಗೆ, ಪಾರ್ವತಮ್ಮ, ಉಮಾ ಇನ್ನಿತರರು ಭಾಗವಹಿಸಿದ್ದರು.



ಮರದ ಅಂಬಾರಿ ಹೊತ್ತು ಸರಾಗವಾಗಿ ಸಾಗಿದ 'ಅಭಿಮನ್ಯು'



ಮೈಸೂರು, ಸೆ. 5(ಎಂಟಿವೈ)– ನಾಡ ಹಬ್ಬ ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲಿರುವ ಅಂಬಾರಿ ಆನೆ 'ಅಭಿಮನ್ಯು'ವಿಗೆ ಸೋಮವಾರ ಮರದ ಅಂಬಾರಿ ಹೊರಿಸುವ ತಾಲೀಮನ್ನು ಯಶಸ್ವಿಯಾಗಿ ನಡೆಸಲಾಯಿತು.

ಅರಮನೆ ಆವರಣದಲ್ಲಿರುವ ರಾಜ ವಂಶಸ್ಥರ ನಿವಾಸದ ಬಳಿ ಅಳಡಿಸಿರುವ ಕ್ರೇನ್ ಬಳಿ ಮರದ ಅಂಬಾರಿಗೆ ಸಂಜೆ 4 ಗಂಟೆಗೆ ಪೂಜೆ ಸಲ್ಲಿಸಿ ಕ್ರೇನ್ ಸಹಾಯದಿಂದ ಅಭಿಮನ್ಯು ಮೇಲೆ 200 ಕೆಜಿ ತೂಕದ ಗಾದಿ, ನಮ್ದಾ, 50 ಕೆಜಿ ತೂಕದ ಹಗ್ಗ, 280 ಕೆಜಿ ತೂಕದ ಮರದ ಅಂಬಾರಿ ಬಿಗಿಯಲಾಯಿತು. ಬಳಿಕ 300 ಕೆಜಿ ತೂಕದ ಮರಳಿನ ಮೂಟೆ ಇರಿಸಿ, ಜಂಬೂಸವಾರಿ ದಿನ ನಡೆಯುವ ಮೆರವಣಿಗೆ ಮಾದರಿಯಲ್ಲಿಯೇ ಇಂದು ತಾಲೀಮು ನಡೆಸಲಾಯಿತು. ಮರದ ಅಂಬಾರಿ ಹೊತ್ತಿದ್ದ ಅಭಿಮನ್ಯುವಿನ ಬಲಭಾಗದಲ್ಲಿ ಕಾವೇರಿ ಹಾಗೂ ಎಡಭಾಗದಲ್ಲಿ ಚೈತ್ರ ಕುಮ್ಕಿ ಆನೆಗಳೊಂದಿಗೆ ಹೆಜ್ಜೆ ಹಾಕಿ ಗಮನ ಸೆಳೆಯಿತು. ರಾಜವಂಶಸ್ಥರ ನಿವಾಸದ ಬಳಿಯಿಂದ ಪುಷ್ಪಾರ್ಚನೆ ಮಾಡುವ ಸ್ಥಳಕ್ಕೆ ಕರೆತಂದು ರಾಷ್ಟ್ರಗೀತೆಗೆ ಸೆಲ್ಯೂಟ್ ಮಾಡಿಸಿದ ಬಳಿಕ ಬಲರಾಮ ದ್ವಾರದಿಂದ ತಾಲೀಮಿಗೆ ಕರೆದೊಯ್ಯಲಾಯಿತು. ಸಂಜೆ 5.30ಕ್ಕೆ ಅರಮನೆಯಿಂದ ಹೊರ ಬಂದ ಆನೆಗಳು ಜಂಬೂಸವಾರಿ ದಿನ ಚಾಮರಾಜರಾಜ ವೃತ್ತ ಹಾಗೂ ಕೆ.ಆರ್.ವೃತ್ತವನ್ನು ಬಳಸುವ ಮಾದರಿಯಲ್ಲೇ ಇಂದು

ಜಂಬೂಸವಾರಿ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಇಂದಿನಿಂದ ಮರದ ಅಂಬಾರಿ ತಾಲೀಮು ಆರಂಭಿಸಲಾಗಿದೆ. ದಸರಾ ಗಜಪಡೆಯನ್ನು ಸಜ್ಜುಗೊಳಿಸುವುದಕ್ಕಾಗಿ ಗಂಭೀರ ಸ್ವರೂಪದ ತಾಲೀಮು ನಡೆಸಲಾಗುತ್ತಿದೆ. ಜಂಬೂಸವಾರಿ ಮೆರವಣಿಗೆಯಲ್ಲಿ ಯಾವ ರೀತಿ ಸಾಗುತ್ತದೋ ಅದೇ, ಮಾದರಿಯಲ್ಲಿ ಇಂದು ಕುಮ್ಕಿ ಆನೆಗಳೊಂದಿಗೆ ಅಭಿಮನ್ಯು 900 ಕೆಜಿ ತೂಕದ ಭಾರ ಹೊತ್ತು ಸಾಗಿದ್ದಾನೆ. 5 ಕಿ.ಮಿ ಅಂತರವನ್ನು 1.15 ಗಂಟೆಯಲ್ಲೇ ತಲುಪಿದ್ದಾನೆ.
–ಡಾ.ವಿ.ಕರಿಕಾಳನ್, ಡಿಸಿಎಫ್

ತಾಲೀಮು ನಡೆಸಲಾಯಿತು. ಅಶ್ವರೋಹಿ ದಳದ 24 ಕುದುರೆಗಳು ಗಜಪಡೆಯ ಹಿಂದೆ ಹೆಜ್ಜೆ ಹಾಕಿದವು. ಅರಮನೆಯಿಂದ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದ 5 ಕಿಮೀ ಅಂತರವನ್ನು 1 ಗಂಟೆ 15 ನಿಮಿಷದಲ್ಲೇ ತಲುಪುವ ಮೂಲಕ ಅಭಿಮನ್ಯು ತನ್ನ ಸಾಮರ್ಥ್ಯವನ್ನು ಸಾಬೀತು ಮಾಡಿತು. ಇಂದು ಮೊದಲ ದಿನವಾಗಿದ್ದರಿಂದ 900 ಕೆಜಿ ತೂಕವನ್ನಷ್ಟೇ ಹೊರಿಸಲಾಗಿದ್ದು, ನಾಳೆಯಿಂದ ಹಂತ ಹಂತವಾಗಿ ಭಾರ ಹೆಚ್ಚಿಸಲಾಗುತ್ತದೆ. ಈ ಸಂದರ್ಭದಲ್ಲಿ ಎಪಿಸಿಸಿಎಫ್ ಜಗತ್‌ರಾಮ್, ಡಿಸಿಎಫ್‌ಗಳಾದ ಡಾ.ವಿ.ಕರಿಕಾಳನ್, ಕೆಕಮಲಾ ಕರಿಕಾಳನ್, ಆರ್‌ಎಫ್‌ಓ ಸಂತೋಷ್ ಹೂಗಾರ್, ಪಶುವೈದ್ಯ ಡಾ.ಮುಜೀಬ್ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ಪ್ರತಿ ವರ್ಷವೂ ನಿವೃತ್ತ ಶಿಕ್ಷಕರ ಸ್ಥಾನ ತುಂಬಲು ಸರ್ಕಾರ ನಿರ್ಧಾರ

- ಒಂದು ವರ್ಷ ಮೊದಲೇ ನೇಮಿಸಿ; ಅಗತ್ಯ ತರಬೇತಿ ನೀಡಿ, ಸ್ಥಳ ನಿಯೋಜನೆ
- ಒಂದೇ ವರ್ಷದಲ್ಲಿ 8101 ಶಾಲಾ ಕೊಠಡಿ ನಿರ್ಮಾಣ ದಾಖಲೆ
- ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ 'ಶಿಕ್ಷಕರ ದಿನಾಚರಣೆ'ಯಲ್ಲಿ ವಿವರಣೆ



ಬೆಂಗಳೂರು, ಸೆ. 5(ಕೆಎಂಶಿ)– ಮುಂಬರುವ ದಿನಗಳಲ್ಲಿ ಪ್ರತಿ ವರ್ಷ ನಿವೃತ್ತಿ ಹೊಂದುವ ಶಿಕ್ಷಕರ ಪ್ರಮಾಣದಷ್ಟೇ ಹೊಸ ಶಿಕ್ಷಕರನ್ನು ಹಿಂದಿನ ವರ್ಷವೇ ನೇಮಿಸಿ, ತರಬೇತಿ ನೀಡಿ, ನಿವೃತ್ತಿ ಹೊಂದಲಿರುವ ಶಿಕ್ಷಕರ ಸ್ಥಾನಕ್ಕೆ ಅವ ರನ್ನು ನೇಮಿಸುವ ವ್ಯವಸ್ಥೆಯನ್ನು ರೂಪಿ ಸಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಅವರು ಇಂದು ವಿಧಾನಸೌಧದ ಬಾಂಕ್ವೆಟ್ ಹಾಲ್‌ನಲ್ಲಿ ಮಾಜಿ ರಾಷ್ಟ್ರಪತಿ ರಾಧಾ ಕೃಷ್ಣನ್ ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ಶಿಕ್ಷಣ ಕ್ಷೇತ್ರಕ್ಕೆ ಬಜೆಟ್‌ನಲ್ಲಿ 25 ಸಾವಿರ ಕೋಟಿ ರೂ. ಅನುದಾನ ನೀಡಲಾಗಿದೆ. 19 ಸಾವಿರ ಕೋಟಿ ರೂ. ಶಿಕ್ಷಕರ ಸಂಬಳ, 5000 ಕೋಟಿ ರೂ. ಶಾಲೆಗಳ ಅಭಿವೃದ್ಧಿಗಾಗಿ ನೀಡಲಾಗಿದೆ. ಒಂದೇ ವರ್ಷದಲ್ಲಿ 8101 ಶಾಲಾ ಕೊಠಡಿಗಳನ್ನು ನಿರ್ಮಿಸುವ ಯೋಜನೆ ರಾಜ್ಯದ ಇತಿಹಾಸದಲ್ಲೇ ಮೊದಲು. 23 ಸಾವಿರ ಶಾಲಾ ಕೊಠಡಿಗಳನ್ನು ಪುನಃ ನಿರ್ಮಿಸ ಬೇಕಾಗಿದ್ದು, ಪ್ರಥಮ ಹಂತದಲ್ಲಿ 8101 ಕೊಠಡಿಗಳನ್ನು ನಿರ್ಮಿಸಲಾಗುತ್ತಿದೆ. ಉತ್ತಮ ಶಾಲೆಗಳಿದ್ದರೂ, ಉತ್ತಮ ಶಾಲಾ ಕೊಠಡಿಗಳು ಇಲ್ಲದಿದ್ದ ಕಾರಣ, ಈ ದಾಖಲೆಯ ಕಾರ್ಯಕ್ರಮವನ್ನು ಮಾಡಲಾಗಿದೆ ಎಂದರು. ಶೌಚಾಲಯ ವ್ಯವಸ್ಥೆಯಿಲ್ಲದ ಕಾರಣ ಮಕ್ಕಳು ಶಾಲೆಗೆ ಬರುವುದನ್ನು ನಿಲ್ಲಿಸಿರುವುದನ್ನು ಗಮನಿಸಿ, ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಿಗೆ ಹೆಣ್ಣು ಮಕ್ಕಳಿಗೆ ಹಾಗೂ ಗಂಡು ಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳನ್ನು ಒಂದೇ ವರ್ಷದಲ್ಲಿ ನಿರ್ಮಿಸುವ ಯೋಜನೆಯನ್ನು ರೂಪಿಸಲಾಗಿದೆ. ಆಗಸ್ಟ್ 15 ರಂದು ಈ ಯೋಜನೆಯನ್ನು ಘೋಷಿಸಲಾಗಿದ್ದು, ಮುಂದಿನ ಆಗಸ್ಟ್ 15 ರೊಳಗೆ ಈ ಯೋಜನೆಯನ್ನು ಪೂರ್ಣಗೊಳಿಸಲಾಗುವುದು. 4000 ಅಂಗನವಾಡಿ ಕೇಂದ್ರಗಳನ್ನು ಮುಂದಿನ ಆಗಸ್ಟ್ 15 ರೊಳಗೆ ನಿರ್ಮಿಸಲಾಗುವುದು. 15000 ಶಿಕ್ಷಕರ ನೇಮಕಾತಿ ಮಾಡುವ ಮೂಲಕ ಶಿಕ್ಷಣ ಕಾರ್ಯದೊತ್ತಡ ಕಡಿಮೆಗೊಳಿಸಲಾಗುವುದು ಎಂದರು.

ಶಿಕ್ಷಣದ ಗುಣಮಟ್ಟ ಹಾಗೂ ವ್ಯವಸ್ಥಿತ ಶಾಲೆಗಳಿಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಹಲವು ನಿಯಮಗಳನ್ನು ರೂಪಿಸಿದ್ದು, ಶಾಲಾಮಂಡಳಿ ಹಾಗೂ ಶಿಕ್ಷಕರು ಇವುಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಶಿಕ್ಷಕರಿಗೆ ಕಿರುಕುಳ ತಪ್ಪಿಸಲು ನಿಯಮಗಳ ಸರಳೀಕರಣ ಹಾಗೂ ಶಿಸ್ತನ್ನು ಅಳವಡಿಸಲು ಶಿಕ್ಷಣ ಇಲಾಖೆಗೆ ಸೂಚನೆ ನೀಡಲಾಗಿದೆ. ಯಾವುದೇ ಪರಿಶೀಲನೆಯಿಲ್ಲದೆ ಹೊಸ ಶಾಲೆಗಳ ಸ್ಥಾಪನೆಗೆ ಎನ್‌ಓಸಿ ನೀಡುತ್ತಿರುವ ಪ್ರಕರಣಗಳನ್ನು ಗಮನಿಸಲಾಗಿದೆ. ಇದು ಮಕ್ಕಳ ಶಿಕ್ಷಣ ಹಾಗೂ ಗುಣಮಟ್ಟದ ಮೇಲೆ ಪ್ರಭಾವ ಬೀರುತ್ತವೆ. ಸರ್ಕಾರದ ನಿಯಮಗಳನ್ನು ಪಾಲಿಸದವರ ವಿರುದ್ಧ ಹಾಗೂ ಇದಕ್ಕೆ ಪ್ರೋತ್ಸಾಹ ನೀಡಿದವರ ವಿರುದ್ಧವೂ ನಿರ್ದಾಕ್ಷಿಣ್ಯ ಕ್ರಮವನ್ನು ತೆಗೆದುಕೊಳ್ಳಲಾಗುವುದು. ಅಭಿವೃದ್ಧಿ ಆಕಾಂಕ್ಷಿ ತಾಲೂಕುಗಳಿಗೆ ಹೆಚ್ಚಿನ ಅನುದಾನವನ್ನು ನೀಡಿ, ಅಲ್ಲಿನ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಶಿಕ್ಷಕರ ಕರ್ತವ್ಯ ನಿರ್ವಹಿಸಲು ಉತ್ತಮ ವಾತಾವರಣ, ಕರ್ತವ್ಯ ಪರಿಸರವನ್ನೂ ಸುಧಾರಿಸುವ ನಿಟ್ಟಿನಲ್ಲಿ ಸರ್ಕಾರ ಗಮನಹರಿಸಲಿದ್ದು, ಮಾನವೀಯತೆ ಹಾಗೂ ವಾಸ್ತವಾಂಶದ ಆಧಾರದ ಮೇಲೆ ನಿರ್ಣಯಗಳನ್ನು ತೆಗೆದುಕೊಳ್ಳಲಾಗುವುದು. ಚಾರಿತ್ರ್ಯವನ್ನು ಕಟ್ಟುವ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಯಲ್ಲಿ ಯಾವುದೇ ರಾಜೀ ಇಲ್ಲ ಎಂದು ತಿಳಿಸಿದರು.

ಶಿಕ್ಷಣದ ಜೀವಾಳ ಶಿಕ್ಷಕರು. ಶಿಕ್ಷಕರಿಲ್ಲದೆ ಶಿಕ್ಷಣವನ್ನು ಊಹಿಸಲೂ ಸಾಧ್ಯವಿಲ್ಲ. ಮಾನವ ಸಂಕುಲದ ಸಮಗ್ರ ಅಭಿವೃದ್ಧಿಯಲ್ಲಿ ಅತ್ಯಂತ ಪ್ರಮುಖ ಪಾತ್ರವನ್ನು ಗುರುಗಳು ವಹಿಸಿದ್ದಾರೆ. ಜ್ಞಾನದ ಗುರುಗಳು, ಗುರುಕುಲದ ಗುರುಗಳು, ಹಲವಾರು ರಂಗದಲ್ಲಿ ವಿವಿಧ ಗುರುಗಳಿದ್ದಾರೆ. ಆಧುನಿಕ ವ್ಯವಸ್ಥೆಯಲ್ಲಿ ಗುರುವಿನ ಪಾತ್ರ ನಿರ್ವಹಿಸುತ್ತಾರೆ ಎಂದರು. ಬದುಕಿನಲ್ಲಿ ಕಲಿಯುವ ಪ್ರತಿಯೊಂದನ್ನೂ ಮನದಾಳದಲ್ಲಿ ಇಟ್ಟುಕೊಂಡರೆ, ಪ್ರತಿದಿನ, ಪ್ರತಿ ಹಂತದಲ್ಲಿ ನಾವು ಕಲಿಯಲು ಸಾಧ್ಯವಿದೆ. ಬದುಕು ಮೊದಲು ಪರೀಕ್ಷೆ ನೀಡುತ್ತದೆ ನಂತರ ಫಲಿತಾಂಶ ಹಾಗೂ ಪಾಠ.

ಬದುಕಿನಲ್ಲಿ ಅನುಭವದಿಂದ ಪಾಠವನ್ನು ಕಲಿಯುತ್ತೇವೆ. ಆದರೆ ಈ ಬದುಕಿನಿಂದ ಪಾಠ ಕಲಿಯಲು ಸಿದ್ಧ ಮಾಡುವ ಕೆಲಸವನ್ನು ಶಿಕ್ಷಕರು ಮಾಡುತ್ತಿದ್ದಾರೆ. ಒಬ್ಬ ವ್ಯಕ್ತಿಗೆ ಜ್ಞಾನ, ಸರಿ ತಪ್ಪು ಎಂಬ ಪ್ರಜ್ಞೆ, ಪಾಪ ಪುಣ್ಯ ಎಂಬ ವಿಚಾರ ಬರುವುದು ಶಿಕ್ಷಕರು ನೀಡುವ ಜ್ಞಾನದಿಂದ. ಶಿಕ್ಷಕರ ಕೆಲಸ ಅತ್ಯಂತ ಕಠಿಣ ಎಂದರು. ಶಿಕ್ಷಕರ ಕರ್ತವ್ಯ ಪ್ರಜ್ಞೆ ಮೆಚ್ಚುವಂಥದ್ದು. ಮಗುವಿನ ಹಂತಕ್ಕೆ ಇಳಿದು ಅವರಿಗೆ ಅರ್ಥವಾಗುವ ಹಾಗೆ ಪಾಠ ಮಾಡಿ, ಜ್ಞಾನ, ತತ್ವಜ್ಞಾನ, ತಂತ್ರಜ್ಞಾನ, ತಂತ್ರಾಂಶ ಜ್ಞಾನವನ್ನು ತುಂಬಿರುವ ಗುರುಗಳಿಗೆ ಮೊದಲನೇ ನಮನಗಳನ್ನು ಸಲ್ಲಿಸುತ್ತೇನೆ ಎಂದರು. ನಮ್ಮ ದೇಶಕ್ಕೆ ಬಹಳ ದೊಡ್ಡ ಚರಿತ್ರೆ ಇದೆ. ಆದರೆ ಬೇಕಾಗಿರುವುದು ಚಾರಿತ್ರ್ಯ. ಚಾರಿತ್ರ್ಯ ಆತ್ಮಸಾಕ್ಷಿಯ ಬೋಧನೆಯಿಂದ ಬರುತ್ತದೆ. ಸರಿ ತಪ್ಪು ಎನ್ನುವ ಭಾವ ಪ್ರತಿಯೊಬ್ಬರಲ್ಲೂ ಬಂದಾಗ ಖಂಡಿತವಾಗಿಯೂ ಉತ್ತಮ ಚಾರಿತ್ರ್ಯ ಮೂಡುತ್ತದೆ. ಆ ಕೆಲಸವನ್ನು ಶಿಕ್ಷಕರು ಮಾಡುತ್ತಿದ್ದಾರೆ. ಚಾರಿತ್ರ್ಯವನ್ನು ಕಟ್ಟುವ ಕೆಲಸ ಗುರುಗಳು ಮಾಡುತ್ತಿದ್ದಾರೆ ಎಂದರು.

ದಸರಾ ಗಜಪಡೆಯ ಮಾವುತರು, ಕಾವಾಡಿಗಳ ಪರಿವಾರದ ಆರೋಗ್ಯ ನಿಗಾ

- ಪಂಚಕರ್ಮ ಆಸ್ಪತ್ರೆಯ ಘಟಕ ಆರಂಭ; ಮಕ್ಕಳಿಗೆ ನಾನಾ ಸಾಂಸ್ಕೃತಿಕ ಕಾರ್ಯಕ್ರಮ
- ಮಕ್ಕಳೊಂದಿಗೆ ನೃತ್ಯ ಮಾಡಿದ ಉಸುವಾರಿ ಸಚಿವ ಸೋಮಶೇಖರ್
- ಈ ಬಾರಿಯ ದಸರಾ ಪ್ರಾಯೋಜಕತ್ವ ಸಂಬಂಧ ಇಂದು ಮಾಹಿತಿ ಪಡೆಯುವೆ



ಮೈಸೂರು,ಸೆ.5(ಎಂಟಿವೈ)– ದಸರಾ ಗಜಪಡೆಯೊಂದಿಗೆ ಬಂದಿರುವ ಮಾವುತರು, ಕಾವಾಡಿಗಳ ಮಕ್ಕಳಿಗೆ ಸಂಪ್ರದಾಯದಂತೆ ಈ ಬಾರಿಯೂ ತಾತ್ಕಾಲಿಕ ಶಾಲೆ ಹಾಗೂ ಅವರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಪಂಚಕರ್ಮ ಚಿಕಿತ್ಸಾ ಕೇಂದ್ರ ಆರಂಭಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ತಿಳಿಸಿದ್ದಾರೆ.

ಅರಮನೆ ಆವರಣದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮೊದಲ ತಂಡದ ಗಜಪಡೆಯೊಂದಿಗೆ ಮೈಸೂರು ಅರಮನೆಗೆ ಮಾವುತರು, ಕಾವಾಡಿಗಳೊಂದಿಗೆ 14 ಮಕ್ಕಳು ಆಗಮಿಸಿದ್ದು, ಎರಡನೇ ತಂಡದ ಆನೆಗಳೊಂದಿಗೆ ಇನ್ನು ಕೆಲ ಮಕ್ಕಳು ಆಗಮಿಸುವ ನಿರೀಕ್ಷೆಯಿದೆ. ಈ ಶಾಲೆಯಲ್ಲಿ ಪಾಠ ಕಲಿಸುವುದರೊಂದಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಮಕ್ಕಳಿಗೆ ನೃತ್ಯ ಸೇರಿದಂತೆ ಇನ್ನಿತರ ಚಟುವಟಿಕೆ ನಡೆಸಲಾಗುತ್ತಿದೆ ಎಂದರು.

ಇಂದು ಶಾಲೆ ಉದ್ಘಾಟನೆ ವೇಳೆ ಎಲ್ಲಾ ಮಕ್ಕಳು ಸೊಗಸಾಗಿ ನೃತ್ಯ ಮಾಡಿದ್ದಾರೆ. ಅದನ್ನು ಕಂಡು ನನಗೂ ಖುಷಿಯಾಗಿದೆ. ಆ ಮಕ್ಕಳಿಗೆ ಉತ್ತೇಜನ ನೀಡುವುದಕ್ಕಾಗಿ ನಾನೂ ಅವರೊಂದಿಗೆ ನೃತ್ಯ ಮಾಡಿದ್ದೇನೆ. ಆ ಮಕ್ಕಳಿಗೆ ಸರಿಸಮನಾಗಿ ನನ್ನ ಕೈಯ್ಯಲ್ಲಿ ಡ್ಯಾನ್ಸ್ ಮಾಡಲು ಸಾಧ್ಯವಾಗದೇ ಇದ್ದರೂ ತಕ್ಕ ಮಟ್ಟಿಗೆ ಹೆಜ್ಜೆ ಹಾಕಿದ್ದೇನೆ. ಇದರಿಂದ ಮಕ್ಕಳಿಗೆ ಖುಷಿಯಾಗಿದೆ. ಹೊರಗಿನಿಂದ ಬಂದವರು ನಮ್ಮೊಂದಿಗೆ ನೃತ್ಯ ಮಾಡಿದರು ಎಂಬ ಖುಷಿ ಮಕ್ಕಳಿಗೆ ಇರುತ್ತದೆ. ನನ್ನೊಂದಿಗೆ ಡ್ಯಾನ್ಸ್ ಮಾಡಿದ್ದನ್ನು ಮಕ್ಕಳು ನೆನಪಿನಲ್ಲಿಟ್ಟುಕೊಳ್ಳುತ್ತಾರೆ. ಹಾಗಾಗಿ ನಾನೂ ನೃತ್ಯ ಮಾಡಿದ್ದೇನೆ. ಶಾಲೆಗೆ ಅಗತ್ಯ ಸೌಕರ್ಯ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆ ದಸರಾ ಗಜಪಡೆಯನ್ನು ನೋಡಿಕೊಳ್ಳುವ

ದಸರಾ ಕೇಂದ್ರ ಬಿಂದು ಆನೆಗಳು. ಗಜಪಡೆಯ ಆರೋಗ್ಯ ಕಾಪಾಡಲು ಮಾವುತರು, ಕಾವಾಡಿಗಳು ಶ್ರಮಿಸುತ್ತಾರೆ. ಅವರ ಕುಟುಂಬದ ಆರೋಗ್ಯ ಕಾಪಾಡುವುದು ನಮ್ಮ ಜವಾಬ್ದಾರಿ. ಪ್ರತಿ ವರ್ಷದಂತೆ ಈ ವರ್ಷವೂ ಪಂಚಕರ್ಮ ಆಸ್ಪತ್ರೆ ಹೊರರೋಗಿ ವಿಭಾಗ ಆರಂಭಿಸಲಾಗಿದೆ. ಎಲ್ಲ ರೋಗಗಳಿಗೂ ಚಿಕಿತ್ಸೆ ದೊರೆಯಲಿದೆ. ಮಸಾಜ್ ಮಾಡುತ್ತೇವೆ. ರೋಗ ನಿರೋಧಕ ಔಷಧ ಕೊಡುತ್ತೇವೆ. ಅಮೃತಬಳ್ಳಿ ಮಾತ್ರೆ ಉಚಿತವಾಗಿ ನೀಡುತ್ತೇವೆ. ನಾಲ್ವರು ವೈದ್ಯರೊಂದಿಗೆ ಸಿಬ್ಬಂದಿ ಕರ್ತವ್ಯ ನಿರ್ವಹಿಸಲಿದ್ದಾರೆ.
– ಡಾ.ಪುಷ್ಪಾ, ಜಿಲ್ಲಾ ಆಯುಷ್ ಅಧಿಕಾರಿ

ವಿವಿಧ ಆನೆ ಶಿಬಿರಗಳಿಂದ ಆಗಮಿಸಿರುವ ಆನೆಗಳ ಮಾವುತರು, ಕಾವಾಡಿಗಳ 18 ಮಕ್ಕಳಿದ್ದಾರೆ. ಇವರ ವಿದ್ಯಾಭ್ಯಾಸಕ್ಕೆ ತೊಡಕಾಗಬಾರದೆಂದು ಶಾಲೆ ಆರಂಭಿಸಿದ್ದೇವೆ. ಐವರು ಶಿಕ್ಷಕರನ್ನು ನಿಯೋಜಿಸಲಾಗಿದೆ. ಪುಸ್ತಕ, ಸಮವಸ್ತ್ರ, ಶೈಕ್ಷಣಿಕ ಪರಿಕರ ನೀಡಿದ್ದೇವೆ. ಪ್ರತಿ ವರ್ಷ ಟೆಂಟ್ ಶಾಲೆ ಆರಂಭಿಸಲಾಗುತ್ತಿತ್ತು. ಈ ವರ್ಷ ಅರಮನೆ ಮಂಡಳಿ ಸಹಕಾರದೊಂದಿಗೆ ಆನೆ ಶಿಬಿರದ ಪಕ್ಕದಲ್ಲಿರುವ ಕಟ್ಟಡದಲ್ಲಿ ಶಾಲೆ ಆರಂಭಿಸಿದ್ದೇವೆ. ಪಠ್ಯದ ಜತೆಗೆ ಆಟೋಟಗಳು, ಪಠ್ಯೇತರ ಚಟುವಟಿಕೆಗಳಲ್ಲಿ ಮಕ್ಕಳು ಪಾಲ್ಗೊಳ್ಳಲಿದ್ದಾರೆ. ಇಸ್ಕಾನ್‌ನಿಂದ ಮಧ್ಯಾಹ್ನದ ಬಿಸಿಯೂಟ ಕೊಡಲಾಗುವುದು. –ರಾಮಾರಾಧ್ಯ, ಬಿಇಓ, ದಕ್ಷಿಣ ವಲಯ, ಪಂಚಕರ್ಮ ಆಸ್ಪತ್ರೆ

ಮಾವುತ, ಕಾವಾಡಿಗಳ ಕುಟುಂಬದ ಆರೋಗ್ಯ ಕಾಪಾಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಅದಕ್ಕಾಗಿ ಆಯುಷ್ ಇಲಾಖೆ ವತಿಯಿಂದ ಪಂಚಕರ್ಮ ಚಿಕಿತ್ಸಾ ಕೇಂದ್ರ ಆರಂಭಿಸಲಾಗಿದ್ದು, ಆಯುರ್ವೇದ ಔಷಧಿಯೊಂದಿಗೆ ಮಸಾಜ್ ಮಾಡುವುದಕ್ಕೂ ಪಂಚಕರ್ಮ ಚಿಕಿತ್ಸಾ ಕೇಂದ್ರದಲ್ಲಿ ವ್ಯವಸ್ಥೆ ಮಾಡಲಾಗಿದೆ ಎಂದರು.

ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಉತ್ತಮ ಸ್ಪಂದನೆ ಬಂದಿದೆ. ನೆರೆಯ ಜಿಲ್ಲೆಗಳಿಂದಲೂ ಅವಕಾಶಕ್ಕಾಗಿ ಕಲಾವಿದರು ಕೋರಿಕೆ ಸಲ್ಲಿಸಿದ್ದಾರೆ. ದಸರಾ ಪ್ರಾಯೋಜಕತ್ವದ ಬಗ್ಗೆ ಸೆ. 6ರಂದು ಸಭೆ ನಡೆಸಿ ಮಾಹಿತಿ ಪಡೆಯುವೆ. ದಸರಾ ಉದ್ಘಾಟಕರು ಅಂತಿಮಗೊಂಡಿಲ್ಲ ಎಂದು ತಿಳಿಸಿದರು. ಇದೇ ವೇಳೆ ದಸರಾ ಗಜಪಡೆಗೆ ಕಬ್ಬು ಮತ್ತು ಬೆಲ್ಲ ನೀಡಿದರು.

ಮಕ್ಕಳೊಂದಿಗೆ ನೃತ್ಯ ಮಾಡಿದ ಸಚಿವರು: ತಾತ್ಕಾಲಿಕ ಟೆಂಟ್ ಶಾಲೆ ಉದ್ಘಾಟನೆಗೊಂಡ ನಂತರ ಶಾಲೆಯಲ್ಲಿ ಕಳೆದ ಒಂದು ವಾರದಿಂದ ನೃತ್ಯಾಭ್ಯಾಸ ಮಾಡಿದ್ದ ಮಾವುತ, ಕಾವಾಡಿಗಳ ಮಕ್ಕಳು ಎರಡು ಗೀತೆಗೆ ನೃತ್ಯ ಪ್ರದರ್ಶಿಸಿದರು. ಈ ವೇಳೆ ಸಚಿವ ಎಸ್.ಟಿ.ಸೋಮಶೇಖರ್ ಮಕ್ಕಳೊಂದಿಗೆ ತಾವು ಹೆಜ್ಜೆ ಹಾಕುವ ಮೂಲಕ ಮಕ್ಕಳಿಗೆ ಉತ್ತೇಜನ ನೀಡಿದರು. ಸಚಿವರೊಂದಿಗೆ ಮಕ್ಕಳು ಕುಣಿದು ಸಂಭ್ರಮಿಸಿದರೆ, ಶಿಕ್ಷಕರು, ಬಿಜೆಪಿ ಮುಖಂಡರು ಚಪ್ಪಾಳೆ ತಟ್ಟಿ ಸಚಿವರ ಕುಣಿತಕ್ಕೆ ಖುಷಿಪಟ್ಟರು. ಜಿಪಂ ಸಿಇಓ ಪೂರ್ಣಿಮಾ, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಶಿವಕುಮಾರ್, ಡಿಸಿಎಫ್ ಡಾ.ವಿ.ಕರಿಕಾಳನ್, ಅರಮನೆ ಮಂಡಲಿ ಉಪ ನಿರ್ದೇಶಕ ಸುಬ್ರಹ್ಮಣ್ಯ, ಆರ್‌ಎಫ್‌ಓ ಸಂತೋಷ್ ಹೂಗಾರ್, ಪಾಲಿಕೆ ಸದಸ್ಯ ಬಿ.ವಿ.ಮಂಜುನಾಥ್, ಬಿಜೆಪಿ ಮುಖಂಡ ಅನಿಲ್ ಥಾಮಸ್, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಡಾ.ವಸಂತಕುಮಾರ್, ಪ್ರಭಾಕರ್ ಸಿಂಧ್ಯಾ ಮುಂತಾದವರು ಭಾಗವಹಿಸಿದ್ದರು.

ಟೆಂಟ್ ಗ್ರಂಥಾಲಯಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಚಾಲನೆ



ಮೈಸೂರು, ಸೆ.5– ನಾಡಹಬ್ಬ ಮೈಸೂರು ದಸರಾ–2022ರ ಸಂಬಂಧ ಮೈಸೂರಿನ ಅರಮನೆ ಆವರಣದಲ್ಲಿ, ಮಾವುತರು, ಕಾವಾಡಿಗರ ಮಕ್ಕಳ ಜ್ಞಾನಾರ್ಜನೆಗಾಗಿ ನಗರ ಕೇಂದ್ರಗ್ರಂಥಾಲಯ, ಮೈಸೂರು ಹಾಗೂ ಮಾವುತರು, ಕಾವಾಡಿಗರ ಮಕ್ಕಳ ಶಾಲೆ ಮೈಸೂರು ಸಂಯುಕ್ತಾಶ್ರಯದಲ್ಲಿ ಪ್ರಾರಂಭಿಸಲಾಗುತ್ತಿರುವ ಟೆಂಟ್ ಗ್ರಂಥಾಲಯವನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಟಿ.ಸೋಮಶೇಖರ್ ಉದ್ಘಾಟಿಸಿದರು.

ಟೆಂಟ್ ಗ್ರಂಥಾಲಯದಲ್ಲಿ ಮಕ್ಕಳಿಗೆ ಕಥೆ ಹೇಳುವುದು, ಚಿತ್ರಕಲೆ, ಬಣ್ಣ ಹಚ್ಚುವುದು, ಪರಿಸರದ ಬಗ್ಗೆ ಅರಿವು ಮೂಡಿಸುವುದು, ಓದುವ ಹವ್ಯಾಸವನ್ನು ಬೆಳೆಸುವುದು, ಪುಸ್ತಕಗಳ ಪರಿಚಯ/ಬಳಕೆ/ಸಂಗ್ರಹಣೆ/ಗುರುತಿಸುವಿಕೆ, ಕಥೆ ಪುಸ್ತಕವನ್ನು ಎರವಲು ನೀಡುವುದು, ಯೋಗಾಸನಾ ಮುಂತಾದ ಹಲವಾರು ವಿಷಯಗಳಲ್ಲಿ ಮಾಹಿತಿ ನೀಡಲಾಗುವುದು. ಟೆಂಟ್ ಗ್ರಂಥಾಲಯದಲ್ಲಿ ಅಂದಾಜು 200 ಪುಸ್ತಕಗಳು 05 ದಿನಪತ್ರಿಕೆ, 05 ನಿಯತಕಾಲಿಕೆಗಳನ್ನು ಒದಗಿಸಲಾಗುತ್ತಿದ್ದು, ಬೆಳಿಗ್ಗೆ 9.30 ರಿಂದ ಮಧ್ಯಾಹ್ನ 1.30 ಗಂಟೆವರೆಗೆ ನಿರಂತರವಾಗಿ ಕಾರ್ಯನಿರ್ವಹಿಸುತ್ತದೆ. ಸದರಿ ಕಾರ್ಯಕ್ರಮದಲ್ಲಿ ಕ್ಷೇತ್ರಶಿಕ್ಷಣಾಧಿಕಾರಿಗಳು, ಗ್ರಂಥಾಲಯ ಇಲಾಖೆಯ ಗ್ರಂಥಪಾಲಕರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಮಳೆ ಹಾನಿಯಿಂದ ನೊಂದವರ ಪರ ಸರ್ಕಾರ ನಿಲ್ಲಲಿ; ಈ ಬಾರಿ ಸಾಂಪ್ರದಾಯಿಕ ದಸರಾ ಆಚರಿಸಲಿ

ಮೈಸೂರು, ಸೆ.5(ಆರ್‌ಕೆಬಿ)–ರಾಜ್ಯದಲ್ಲಿ ಮಳೆ ಹಾನಿಯಿಂದ ನೂರಾರು ಜನರು ಸಾವಿಗೀಡಾಗಿ, ಸಹಸ್ರಾರು ಜನ ಮನೆ ಮಠ ಕಳೆದುಕೊಂಡಿದ್ದಾರೆ. ಲಕ್ಷಾಂತರ ಎಕರೆ ಬೆಳೆ ಹಾನಿಯಾಗಿದೆ. ಇಂತಹ ವೇಳೆಯಲ್ಲಿ ನೊಂದ ಜನರ ರಕ್ಷಣೆಗೆ ಸರ್ಕಾರ ಸಮರೋಪಾದಿಯಲ್ಲಿ ಪರಿಹಾರ ಕಾರ್ಯ ಕೈಗೊಳ್ಳಲಿ. ಭಾರೀ ಮಳೆ ಹಾನಿಯಿಂದ ನೊಂದಿರುವ ಜನರ ನೋವಿಗೆ ಸ್ಪಂದಿಸುವುದು ನಮ್ಮೆಲ್ಲರ ಕರ್ತವ್ಯವೂ ಆಗಿದೆ. ಹಾಗಾಗಿ ಈ ಬಾರಿ ದಸರಾವನ್ನು ಸರ್ಕಾರವೇ ಸಾಂಪ್ರದಾಯಿವಾಗಿ ಆಚರಿಸಬೇಕು ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ತಿಳಿಸಿದ್ದಾರೆ.



ಖಾಸಗಿ ಪ್ರಾಯೋಜಕತ್ವದಲ್ಲಿ ದಸರಾ ಆಚರಿಸಿದರೆ ಎಲ್ಲಾ ಕಡೆಗಳಲ್ಲಿ ದಸರಾ ಮಹೋತ್ಸವಕ್ಕಿಂತ ಖಾಸಗಿ ಪ್ರಾಯೋಜಕತ್ವದ ಜಾಹಿರಾತುಗಳೇ ರಾರಾಜಿಸುತ್ತವೆ. ಇದು ಜನ ಜನಸಾಮಾನ್ಯರ ದಸರಾ ಮಹೋತ್ಸವವಾಗಿ ಉಳಿಯುವುದಿಲ್ಲ. ಹಾಗಾಗಿ ಸರ್ಕಾರ ಅದ್ದೂರಿ ದಸರಾ ಹೆಸರಿನಲ್ಲಿ ಹಣ ಪೋಲಾಗುವುದನ್ನು ತಡೆಯಬೇಕು. ಸರ್ಕಾರವೇ ಪೂರ್ಣ ಪ್ರಮಾಣದಲ್ಲಿ ಸಾಂಪ್ರದಾಯಿಕವಾಗಿ ದಸರಾ ಮಹೋತ್ಸವ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

ಎರಡು ವರ್ಷಗಳಿಂದ ಕೋವಿಡ್ ಹಿನ್ನೆಲೆಯಲ್ಲಿ ಸರಳ ಹಾಗೂ ಸಾಂಪ್ರದಾಯಿಕವಾಗಿ ನಡೆದ ದಸರಾದಂತೆಯೇ ಈ ಬಾರಿಯೂ ಸಾಂಪ್ರದಾಯಿಕವಾಗಿ ಆಚರಿಸಿ, ಇಲ್ಲಿನ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವಂತಾಗಲಿ. ಇದರಿಂದ ಇಲ್ಲಿನ ವ್ಯಾಪಾರಿಗಳಿಗೆ, ಉದ್ಯಮಿಗಳಿಗೆ, ಹೋಟೆಲ್‌ನವರಿಗೆ ಹಾಗೂ ರಸ್ತೆ ಬದಿ ವ್ಯಾಪಾರಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ. ಯುವ ದಸರಾ ಹೆಸರಿನಲ್ಲಿ ಉತ್ತರ ಭಾರತದ ಕಲಾವಿದರಿಗೆ ಹೆಚ್ಚಿನ ಹಣ ನೀಡುವ ಬದಲು ನಮ್ಮ ನಾಡಿನ ಕಲಾವಿದರಿಗೆ ಅವಕಾಶ ನೀಡಬೇಕು. ಅವರಿಗೆ ಹೆಚ್ಚಿನ ಗೌರವಧನ ನೀಡಬೇಕು. ಕರ್ನಾಟಕದ ಗ್ರಾಮೀಣ ಭಾಗದ ರೈತಾಪಿ ವರ್ಗದ ಕಲಾವಿದರಿಗೆ ಹೆಚ್ಚಿನ ಅವಕಾಶ ನೀಡಬೇಕು ಎಂದು ಶಾಂತಕುಮಾರ್ ಒತ್ತಾಯಿಸಿದ್ದಾರೆ.

ಉತ್ತಮ ಶಿಕ್ಷಕರಿಂದ ಭವಿಷ್ಯದ ಸಮಾಜ ನಿರ್ಮಾಣ: ಸಾರಾ



“ಪ್ರಸ್ತುತ ರಾಜಕೀಯ ವ್ಯವಸ್ಥೆ ಬದಲಾಗಿದೆ. ಭ್ರಷ್ಟರಿಗೆ, ದ್ವೇಷ ರಾಜಕಾರಣ ಮಾಡುವವರಿಗೆ ಬೆಂಬಲ ಹೆಚ್ಚಾಗಿದೆ. ನನ್ನ 14 ವರ್ಷಗಳ ಅಧಿಕಾರವಧಿಯಲ್ಲಿ ಯಾವುದೇ ನೌಕರನಿಗೂ ತೊಂದರೆ ಕೊಟ್ಟಿಲ್ಲ. ಯಾರಿಂದಲೂ ನಯಾಪೈಸೆ ಹಣ ಪಡೆದಿಲ್ಲ. ಮುಂದಿನ ಚುನಾವಣೆಯಲ್ಲಿ ನೀವು ನನಗೆ ಮತ ನೀಡಿದರೇ ನಿಮ್ಮ ಜೊತೆ ರಾಜಕಾರಣ ಮಾಡುತ್ತೇನೆ. ನನಗಿಂತ ಉತ್ತಮ ವ್ಯಕ್ತಿ ಆಯ್ಕೆ ಮಾಡಿಕೊಂಡರೇ ರಾಜಕೀಯದಿಂದ ದೂರವಾಗುತ್ತೇನೆ. ನನ್ನ 3 ಚುನಾವಣೆಯಲ್ಲಿ ನನ್ನ ಎದುರಾಳಿಗಿಂತ ನನಗೆ ದುಪ್ಪಟ್ಟು ಮತ ನೀಡಿದ್ದೀರಿ. ಆದ್ದರಿಂದ ಪ್ರತಿವರ್ಷ ಶಿಕ್ಷಕರ ದಿನಾಚರಣೆಯಂದು ನನ್ನ ವೈಯಕ್ತಿಕ ಹಣದಿಂದ ತಾಲೂಕಿನ ಎಲ್ಲಾ ಶಿಕ್ಷಕರಿಗೂ ಉಡುಗೊರೆ ನೀಡುತ್ತಿದ್ದೇನೆ. ಈ ಬಾರಿಯೂ ಪ್ರತಿಯೊಬ್ಬರಿಗೂ 2 ಉಡುಗೊರೆ ನೀಡುತ್ತಿದ್ದೇನೆ. –ಸಾ.ರಾ.ಮಹೇಶ್, ಶಾಸಕ.

ಕೆ.ಆರ್.ನಗರ, ಸೆ.5– ರಾಜಕಾರಣಿ ಕೆಟ್ಟರೆ ರಾಜ್ಯ ಕೆಡುವುದಿಲ್ಲ. ಆದರೆ ಶಿಕ್ಷಕ ಕೆಟ್ಟರೆ ಭವಿಷ್ಯದ ಸಮಾಜವೇ ಕೆಡುತ್ತದೆ. ಹಾಗಾಗಿ ಶಿಕ್ಷಕರು ಕರ್ತವ್ಯ ಲೋಪ ಎಸಗದೆ ಭವಿಷ್ಯದ ಸಮಾಜ ನಿರ್ಮಾಣಕ್ಕೆ ಶ್ರಮಿಸಬೇಕು ಎಂದು ಶಾಸಕ ಸಾ.ರಾ. ಮಹೇಶ್ ಸಲಹೆ ನೀಡಿದರು.

ಪಟ್ಟಣದ ಡಾ.ರಾಜ್‌ಕುಮಾರ್ ಬಾನಂಗಣದಲ್ಲಿ ತಾಲೂಕು ಆಡಳಿತ, ತಾಪಂ, ಶಿಕ್ಷಣ ಇಲಾಖೆ ಸಂಯುಕ್ತಾಶ್ರಯದಲ್ಲಿ ನಡೆದ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣ ಕ್ಷೇತ್ರ ಉತ್ತಮ ಕ್ಷೇತ್ರವಾಗಿದ್ದು ಇಲ್ಲಿ ಕೆಲಸ ನಿರ್ವಹಿಸುವ ನೀವೇ ಪುಣ್ಯವಂತರು. ನಾನು ಒಬ್ಬ ಶಿಕ್ಷಕನ ಮಗ ಶಾಸಕ ಎಂದು ಸ್ಮರಿಸಿದರು.

ರಾಜಕೀಯ, ಉದ್ಯಮದಲ್ಲಿ ಎತ್ತರಕ್ಕೆ ಬೆಳೆದಷ್ಟು ಅಸೂಯೆ, ವಿರೋಧಿಸುವವರು ಹೆಚ್ಚು. ಆದರೆ ಎತ್ತರಕ್ಕೆ ಬೆಳೆಯುವವರನ್ನು ಪ್ರೋತ್ಸಾಹಿಸುತ್ತಾ, ಸನ್ಮಾನಿಸುತ್ತಾ ಇನ್ನೂ ಹೆಚ್ಚು ಬೆಳೆಯುವಂತೆ ಆಶೀರ್ವದಿಸುವ ಕ್ಷೇತ್ರವಿದ್ದರೇ ಅದು ಶಿಕ್ಷಣ ಕ್ಷೇತ್ರ ಎಂದರು.

ಶಾಸಕನಾಗಿ ಕ್ಷೇತ್ರದಲ್ಲಿ ಶಿಕ್ಷಣ, ಆರೋಗ್ಯ, ಸಾರಿಗೆ ಸೇರಿದಂತೆ ನೀರಾವರಿ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದೇನೆ. ಪಟ್ಟಣದಲ್ಲಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಸೇರಿದಂತೆ ಪ್ರಾಥಮಿಕ, ಪ್ರೌಢಶಾಲೆ, ಕಾಲೇಜು ಮತ್ತು ವಸತಿ ಶಾಲೆಗಳಿಗೆ ಒಟ್ಟು 100 ಕೋಟಿಗೂ ಹೆಚ್ಚು ಅನುದಾನ ನೀಡಿದ್ದೇನೆ. ಏತ ನೀರಾವರಿ, ರಸ್ತೆಗಳ ಅಭಿವೃದ್ಧಿ, ಆಸ್ಪತ್ರೆಗಳ ಆಧುನೀಕರಣಕ್ಕೂ ಹೆಚ್ಚು ಆದ್ಯತೆ ನೀಡಲಾಗಿದೆ ಎಂದರು.

ಸರ್ಕಾರ ಶಿಕ್ಷಣಕ್ಕೆ ಸಾಕಷ್ಟು ಅನುದಾನ ನೀಡುತ್ತಿದೆ. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಒಂದೆರಡು ಶಾಲಾ ಕಾಲೇಜುಗಳನ್ನು ಹೊರತುಪಡಿಸಿದರೆ, ಎಲ್ಲೆಡೆ ಫಲಿತಾಂಶ ಉತ್ತಮವಾಗಿದೆ. ಪೋಷಕರು ಖಾಸಗಿ ಶಾಲೆಗಳ ವ್ಯಾಮೋಹ ಬಿಟ್ಟು ಸರ್ಕಾರಿ ಶಾಲೆಗೆ ಮಕ್ಕಳನ್ನು ದಾಖಲಿಸಿ. ಸರ್ಕಾರಿ ಶಾಲಾ ಶಿಕ್ಷಕರು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಎಂದರು.

ಕಾರ್ಯಕ್ರಮಕ್ಕೂ ಮುನ್ನಾ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಭಾವಚಿತ್ರವನ್ನು ಪಟ್ಟಣದ ಸರ್ಕಾರಿ ಕೃಷ್ಣರಾಜೇಂದ್ರ ಪದವಿ ಪೂರ್ವ ಕಾಲೇಜಿನಿಂದ ಡಾ.ರಾಜ್‌ಕುಮಾರ್ ಬಾನಂಗಳದ ವೇದಿಕೆವರೆಗೆ ಮೆರವಣಿಗೆ ಮಾಡಲಾಯಿತು. ಇದೇ ವೇಳೆ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ನೌಕರರು ಹಾಗೂ ಸೇವಾವಧಿಯಲ್ಲಿ ನಿಧನರಾದ ನೌಕರರ ಕುಟುಂಬದ ಸದಸ್ಯರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಪುರಸಭಾಧ್ಯಕ್ಷ ಪ್ರಕಾಶ್, ಮಾಜಿ ಎಂಎಲ್‌ಸಿ ಪುಟ್ಟಸಿದ್ದಶೆಟ್ಟಿ, ಬಿಇಓ ಟಿ.ಎನ್.ಗಾಯಿತ್ರಿ, ತಹಸೀಲ್ದಾರ್ ಎಸ್.ಸಂತೋಷ್, ಇಓ ಹೆಚ್.ಕೆ.ಸತೀಶ್, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಜೆ.ಅರುಣ್ ಕುಮಾರ್, ನಿವೃತ್ತ ಉಪಾನ್ಯಾಸಕರಾದ ಕೆ.ಆರ್.ಲಕ್ಕೇಗೌಡ, ಎಸ್.ಆರ್.ರಾಮೇಗೌಡ, ಪುರಸಭಾ ಮುಖ್ಯಾಧಿಕಾರಿ ಡಾ.ಜಯಣ್ಣ, ಬಿಆರ್‌ಸಿ ವೆಂಕಟೇಶ್, ಕೃಷ್ಣನಾಯಕ್, ಕೆ.ವೈ. ನಾರಾಯಣ್ ಪ್ರಸಾದ್, ಕೆ.ಎಸ್.ಅರವಿಂದ, ರಾಮಸ್ವಾಮಿಗೌಡ, ಲಕ್ಷ್ಮಿಕಾಂತ್, ಮಧುಕುಮಾರ್, ಸಿ.ಎನ್.ಸ್ವಾಮಿ, ಶಂಕರೇಗೌಡ, ದೇವೇಂದ್ರ, ಪ್ರಸನ್ನ, ಎಂ.ಕೆ.ಸತೀಶ, ರಾಜಶೇಖರ, ಈಶ್ವರ ಸೇರಿದಂತೆ ಇನ್ನಿತರರಿದ್ದರು.

ಭಾರೀ ಮಳೆ: ಬೆಳೆಗಳಿಗೆ ಹಾನಿ

ಹನಗೋಡು, ಸೆ.5– ಭಾನುವಾರ ರಾತ್ರಿ ಸುರಿದ ಭಾರೀ ಮಳೆಗೆ ಹನಗೋಡು ಭಾಗದಲ್ಲಿ ಶುಂಠಿ, ಜೋಳ, ಅಡಿಕೆ ಮತ್ತಿತರ ಬೆಳೆಗಳಿಗೆ ಸಾಕಷ್ಟು ಹಾನಿಯುಂಟಾಗಿದೆ.

ಹೈರಿಗೆ ರಸ್ತೆಯಲ್ಲಿರುವ ತಟ್ಟೆಕೆರೆ ಕೆರೆ ಕೋಡಿ ಬಿದ್ದ ಹಿನ್ನೆಲೆಯಲ್ಲಿ ಗ್ರಾಮದ ನಂಜುಂಡಸ್ವಾಮಿ ಎಂಬುವರಿಗೆ ಸೇರಿದ ಅಡಿಕೆ, ಬಾಳೆ, ತೆಂಗಿನ ತೋಟದಲ್ಲಿ 5 ಅಡಿ ನೀರು ನಿಂತಿದೆ. ಹುಣಸೂರು ತಾಲೂಕಿನ ಅತಿದೊಡ್ಡ ಕೆರೆಗಳಲ್ಲೊಂದಾದ ಹೈರಿಗೆ ಕೆರೆ ಕೋಡಿ ಬಿದ್ದು ಪ್ರವಾಹದ ರೀತಿ ನೀರು ಹರಿಯುತ್ತಿದೆ. ಕೆರೆ ಅಚ್ಚುಕಟ್ಟು ಪ್ರದೇಶ ಹಾಗೂ ಅಕ್ಕಪಕ್ಕದ ಜಮೀನುಗಳಿಗೆ ನೀರು ನುಗ್ಗಿ ಸಾಕಷ್ಟು ಹಾನಿ ಸಂಭವಿಸಿದೆ.

ಸಂಚಾರ ಸ್ಥಗಿತ: ಕೆರೆ ಕೋಡಿ ಬಿದ್ದ ಹಿನ್ನೆಲೆಯಲ್ಲಿ ತಟ್ಟೆಕೆರೆ–ಹೈರಿಗೆ ಮಾರ್ಗದಲ್ಲಿ ವಾಹನ ಸಂಚಾರ ಸ್ಥಗಿತಗೊಂಡಿದೆ. ಅಲ್ಲದೇ ಕೆರೆ ನೀರು ಉಕ್ಕಿ ಹರಿದು ರಸ್ತೆ ಹಾಳಾಗಿದೆ. ಹುಣಸೂರು–ಹನಗೋಡು ಮುಖ್ಯ ರಸ್ತೆಯ ಹೊನ್ನೇನಹಳ್ಳಿ ಬಳಿ ಕಿರು ಸೇತುವೆ ಮೇಲೆ ಮಳೆ ನೀರು ಹರಿಯುತ್ತಿದ್ದು ವಾಹನ ಸಂಚಾರಕ್ಕೆ ಅಡ್ಡಿಯುಂಟಾಗಿದೆ. ಕಿರು ಸೇತುವೆ ಮೇಲೆ ನೀರು ಹರಿಯುತ್ತಿರುವ ಸ್ಥಳಕ್ಕೆ ಲೋಕೋಪಯೋಗಿ ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಶಿಕ್ಷಕರು ಕಾಲಕ್ಕೆ ತಕ್ಕಂತೆ ಸೃಜನಶೀಲತೆ ಮೈಗೂಡಿಸಿಕೊಳ್ಳಿ

ಶಿಕ್ಷಕರ ದಿನಾಚರಣೆಯಲ್ಲಿ ಶಾಸಕ ಬಿ.ಹರ್ಷವರ್ಧನ್



ನಂಜನಗೂಡು, ಸೆ.5– ಇತ್ತೀಚಿನ ದಿನಗಳಲ್ಲಿ ಇತಿಹಾಸ ತಿರುಚುವಂತಹ ಶಿಕ್ಷಣ ವ್ಯವಸ್ಥೆಯಿಂದ ವಿದ್ಯಾರ್ಥಿಗಳಿಗೆ ಗೊಂದಲ ಮೂಡುತ್ತಿದೆ. ಶಿಕ್ಷಕರು ನಮ್ಮ ಸಂಸ್ಕೃತಿ, ಪರಂಪರೆ ಬಗ್ಗೆ ಮಾರ್ಗದರ್ಶನ ನೀಡಬೇಕಿದೆ ಎಂದು ಶಾಸಕ ಬಿ.ಹರ್ಷವರ್ಧನ್ ಹೇಳಿದರು.

ತಾಲೂಕಿನ ಸಿಂಧುವಳ್ಳಿ ಗ್ರಾಮದ ಬಳಿಯ ಸಂತಾನ ಗಣಪತಿ ಕಲ್ಯಾಣ ಮಂಟಪದಲ್ಲಿ ಶಿಕ್ಷಣ ಇಲಾಖೆಯಿಂದ ಏರ್ಪಡಿಸಿದ್ದ ಶಿಕ್ಷಕರ ದಿನಾಚರಣೆಯಲ್ಲಿ ಗುರುವಂದನೆ ಮತ್ತು ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು. ಭಾರತ ಉತ್ತಮ ಸಂಸ್ಕೃತಿ, ಗುರು ಪರಂಪರೆ ಹೊಂದಿರುವ ದೇಶ. ವಿಜ್ಞಾನ, ಗಣಿತದ ಸೂತ್ರಗಳನ್ನು ಬದಲಿಸಲು ಸಾಧ್ಯವಿಲ್ಲ. ಆದರೆ ಇತಿಹಾಸದಲ್ಲಿ ಸತ್ಯ ಘಟನೆ ಮರೆ ಮಾಚುವ ಜೊತೆಗೆ ಎಡಪಂಥೀಯ, ಬಲಪಂಥೀಯ ಎಂಬ ನೈಜ ಇತಿಹಾಸ ತಿರುಚುವಂತಹ ಕೆಲಸದಿಂದಾಗಿ ವಿದ್ಯಾರ್ಥಿಗಳಿಗೆ ತಪ್ಪು ಸಂದೇಶ ಮೂಡುತ್ತಿದೆ. ಈ ಗೊಂದಲ ನಿವಾರಿಸಿ ಸರಿಯಾದ ಮಾರ್ಗದರ್ಶನ ನೀಡಿ ಮುನ್ನಡೆಸಿ ಎಂದ ಅವರು ಶಿಕ್ಷಕರು ಕಾಲಕ್ಕೆ ತಕ್ಕಂತೆ ಸೃಜನಶೀಲತೆ ಮೈಗೂಡಿಸಿಕೊಳ್ಳಬೇಕು. ಆಗ ಮಾತ್ರ ಮಕ್ಕಳಿಗೆ ಉತ್ತಮ ಶಿಕ್ಷಣ ದೊರಕಲು ಸಾಧ್ಯ ಎಂದರು.

ತಾಲೂಕಿನಲ್ಲಿ ಕಳೆದ 4 ವರ್ಷಗಳ ಹಿಂದೆ ಗುಣಮಟ್ಟದ ಶಿಕ್ಷಣ ಕೊರತೆ, ಕಳಪೆ ಫಲಿತಾಂಶದಿಂದಾಗಿ ಸರ್ಕಾರಿ ಶಾಲೆಗಳು ಮುಚ್ಚುವ ಹಂತ ತಲುಪಿತ್ತು. ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎನ್.ರಾಜು ತಾಲೂಕಿಗೆ ಬಂದಾಗಿನಿಂದ, ಎಲ್ಲಾ ಶಿಕ್ಷಕರ ಪರಿಶ್ರಮದಿಂದಾಗಿ ಉತ್ತಮ ಫಲಿತಾಂಶ ಬರುತ್ತಿದ್ದು ಗುಣಮಟ್ಟದ ಶಿಕ್ಷಣ ದೊರಕುತ್ತಿದೆ. ತಾಲೂಕಿನಲ್ಲಿ ಶಾಲೆಗಳ ಉನ್ನತೀಕರಣಕ್ಕಾಗಿ 11 ಕೋಟಿ ಕೆಲಸವಾಗಿದೆ ಎಂದ ಅವರು ಮುಂದಿನ ವರ್ಷದಿಂದ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ಬರಲಿದೆ. ಇದರಿಂದ ಶಿಕ್ಷಣದಲ್ಲಿ ಸುಧಾರಣೆಯಾಗುವುದಲ್ಲದೆ ಗುಣಮಟ್ಟದ ಶಿಕ್ಷಣ ದೊರಕಲಿದೆ. ಈ ಬಗ್ಗೆ ಹೆಚ್ಚಿನ ಚರ್ಚೆ ನಡೆಯಬೇಕು ಎಂದರು.

ಕಳೆದ 4 ವರ್ಷದಲ್ಲಿ ನಾಲ್ವರು ಶಿಕ್ಷಣ ಸಚಿವರು ಬದಲಾದರು. ಅವರೆಲ್ಲರ ಮನವೊಲಿಸಿ ತಾಲೂಕಿನಲ್ಲಿ ಸುಸಜ್ಜಿತ ಗುರುಭವನ ನಿರ್ಮಾಣಕ್ಕಾಗಿ 1.18 ಎಕರೆ ಜಾಗ ಮಂಜೂರಾಗಿದೆ ಇದಕ್ಕಾಗಿ ಈಗಾಗಲೇ 25 ಲಕ್ಷ ಅನುದಾನ ಮೀಸಲಿಟ್ಟಿದ್ದೇನೆ. ಭವನ ಪೂರ್ಣಗೊಳಿಸಲು 5 ಕೋಟಿ ಬೇಕಾಗಿದ್ದು ಹಂತ ಹಂತವಾಗಿ ಅನುದಾನ ಬಿಡುಗಡೆಗೊಳಿಸಿ ಪೂರ್ಣಗೊಳಿಸಲಿದ್ದೇನೆ ಎಂದರು.

ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಮಾತನಾಡಿದರು. ಸಮಾರಂಭದಲ್ಲಿ ನಿವೃತ್ತಿ ಹೊಂದಿದ ಶಿಕ್ಷಕರನ್ನು ಮತ್ತು ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾದ ಶಿಕ್ಷಕರನ್ನು ಅಭಿನಂದಿಸಲಾಯಿತು. ಸಮಾರಂಭದಲ್ಲಿ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್.ಮಹದೇವಯ್ಯ, ಜಿಪಂ ಮಾಜಿ ಸದಸ್ಯ ಎಸ್.ಎಂ.ಕೆಂಪಣ್ಣ, ತಾಪಂ ಮಾಜಿ ಅಧ್ಯಕ್ಷ ಬಿ.ಎಸ್.ಮಹದೇವಪ್ಪ, ಮಾಜಿ ಸದಸ್ಯರಾದ ಬಿ.ಎಸ್.ರಾಮು, ಶಿವಣ್ಣ, ಮುಖಂಡರಾದ ಕುಂಬ್ರಳ್ಳಿ ಸುಬ್ಬಣ್ಣ, ತಾಪಂ ಇಓ ಶ್ರೀನಿವಾಸ್, ಬಿಇಓ ಸಿ.ಎನ್. ರಾಜು, ಬಿ.ಆರ್.ಸಿ. ಕೆ.ಜಿ.ಮಹೇಶ್ ಸೇರಿದಂತೆ ಹಲವು ಶಿಕ್ಷಕ ವೃಂದದವರು ಹಾಜರಿದ್ದರು.

ಪ್ರತಿಯೊಬ್ಬರಿಗೂ ಗುರುಗಳ ಮಾರ್ಗದರ್ಶನ ಅಗತ್ಯ

ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ವೈ.ಡಿ.ರಾಜಣ್ಣ



ಸರಗೂರು, ಸೆ.5– ಪ್ರತಿಯೊಬ್ಬರಿಗೂ ಗುರುಗಳ ಮಾರ್ಗದರ್ಶನ ಅಗತ್ಯ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ವೈ.ಡಿ.ರಾಜಣ್ಣ ತಿಳಿಸಿದರು.

ಪಟ್ಟಣದ ಪ್ರಗತಿ ವಿದ್ಯಾಸಂಸ್ಥೆಯಲ್ಲಿ ನಡೆದ ಶಿಕ್ಷಕರ ದಿನಾಚರಣೆಯಲ್ಲಿ ಮಾತನಾಡಿದ ಅವರು, ಹಿಂದಿನ ಕಾಲದಲ್ಲಿ ಗುರುಕುಲಗಳಿದ್ದವು. ಅಲ್ಲಿ ಗುರುಗಳೇ ಸಕಲ ವಿದ್ಯೆಗಳನ್ನು ತನ್ನ ಶಿಷ್ಯಂದಿರಿಗೆ ಧಾರೆ ಎರೆಯುತ್ತಾ ಶಿಷ್ಯರನ್ನು ಸಕಲ ರೀತಿಯಲ್ಲಿ ವಿದ್ಯಾ ಪಾರಂಗತರನ್ನಾಗಿ ಮಾಡುತ್ತಿದ್ದರು. ಶಿಷ್ಯರು ಗುರುಗಳ ಸೇವೆ ಮಾಡುತ್ತಾ ವಿದ್ಯೆಗಳನ್ನು ಕಲಿಯುತ್ತಿದ್ದರು. ಬಹುಪಾಲು ಜನರಿಗೆ ಅನ್ಯರ ಸಹಾಯ ಅತ್ಯವಶ್ಯಕ. ಆ ಸಹಾಯ ಒದಗಿದಾಗ ಜೀವನದ ಉತ್ತಮ ಶಕ್ತಿಗಳು, ಸಾಧ್ಯತೆಗಳು ಬಹುಬೇಗ ವೃದ್ಧಿಯಾಗುತ್ತವೆ. ಅಷ್ಟೇ ಅಲ್ಲ. ಆಧ್ಯಾತ್ಮಿಕ ಜೀವನ ಜಾಗೃತವಾಗುವುದು. ಬೆಳವಣಿಗೆ ಚುರುಕಾಗುತ್ತದೆ. ಪರಿಪೂರ್ಣ ಜೀವನ ಪ್ರಾಪ್ತಿಯಾಗುತ್ತದೆ. ಯಾರಿಂದ ಇಂತಹ ಅದ್ಭುತ ಉತ್ತೇಜನ ಬರುವುದೋ ಅವನೇ ಗುರು. ಯಾರಿಗೆ ಇದು ನೀಡಲ್ಪಡುವುದೋ ಅವನೇ ಶಿಷ್ಯ ಎಂದರು.

ಸರಗೂರು ತಾಲೂಕು ಕಸಪಾ ಅಧ್ಯಕ್ಷ ಎಂ. ಕೆಂಡಗಣ್ಣಸ್ವಾಮಿ ಮಾತನಾಡಿ, ಸೆ.5 ಅನ್ನು ಶಿಕ್ಷಕರ ದಿನಾಚರಣೆಯಾಗಿ ಆಚರಿಸಲಾಗುತ್ತದೆ. ಅಕ್ಷರ ಕಲಿಸಿ ಬದುಕಿಗೆ ದಾರಿ ತೋರಿಸುವ ಶಿಕ್ಷಕರೇ ನಮ್ಮ ಗುರುಗಳು. ಅಷ್ಟೇ ಅಲ್ಲ, ನಿಸ್ವಾರ್ಥದಿಂದ ತನ್ನ ಶಿಷ್ಯ ಉನ್ನತಿ ಕಾಣುವುದನ್ನು ನೋಡಿ ಸಂತಸ ಪಡುವ ಏಕೈಕ ಜೀವ ಅದು ಶಿಕ್ಷಕರು ಮಾತ್ರ ಎಂದರು.

ಇದೇ ವೇಳೆ ಮಕ್ಕಳು ಸೇರಿದಂತೆ ಎಲ್ಲರೂ ಸರ್ವಪಲ್ಲಿ ಡಾ.ರಾಧಾಕೃಷ್ಣನ್ ಭಾವಚಿತ್ರಕ್ಕೆ ನಮನ ಸಲ್ಲಿಸಿದರು. ಮಕ್ಕಳು ಪ್ರಾರ್ಥನೆ ಮಾಡಿ ಶಿಕ್ಷಕರ ಆಶೀರ್ವಾದ ಪಡೆದರು. ಕಾರ್ಯಕ್ರಮದಲ್ಲಿ ಪ್ರಗತಿ ವಿದ್ಯಾಸಂಸ್ಥೆ ಕಾರ್ಯದರ್ಶಿ ಪಳನಿಸ್ವಾಮಿ, ಡಾ.ಸುರೇಶ್, ಪ್ರೌಢಶಾಲಾ ಮುಖ್ಯ ಶಿಕ್ಷಕರಾದ ಹೆಚ್.ಎಸ್.ಸತೀಶ್, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕಿ ಸುಲೋಚನ, ಮೇಲ್ವಿಚಾರಕರಾದ ಪುಷ್ಪಲತಾ, ಶಿಕ್ಷಕರಾದ ವಿ.ನಂದಿನಿ, ಅಮೃತ, ಶುಭ, ದಿವ್ಯಾ, ಮೀನಾ, ಅಶ್ವಿನಿ, ಮಣಿ, ಸಿದ್ರಾತ್ ಉನ್ನಿಸ್, ಮಹೇಶ್, ದಿವ್ಯಶ್ರೀ, ಕಾವ್ಯಶ್ರೀ, ಮಂಜುಳ, ಮಹದೇವಮ್ಮ, ಯಶೋಧ, ಚೈತ್ರಕುಮಾರಿ, ನಂದಿನಿ ಎಸ್.ಎನ್. ವಿದ್ಯಾ, ಶಾಲಾ ಸಿಬ್ಬಂದಿಗಳಾದ ಚಂದ್ರಿಕಾ, ಮಾಲಾ, ಲಕ್ಷ್ಮಿ, ಚಿನ್ನಮ್ಮ, ಕಾವೇರಮ್ಮ, ಸ್ವಾಮಿ ಉಪಸ್ಥಿತರಿದ್ದರು.

ತಿ.ನರಸೀಪುರ ಪುರಸಭೆ ನಾಮ ನಿರ್ದೇಶಿತ ಸದಸ್ಯರಿಂದ ಅಧಿಕಾರ ಸ್ವೀಕಾರ



ತಿ.ನರಸೀಪುರ, ಸೆ.5– ಪಟ್ಟಣದ ಪುರಸಭೆಗೆ ಸರ್ಕಾರದಿಂದ ನಾಮ ನಿರ್ದೇಶನಗೊಂಡಿರುವ ವರುಣಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚಿಕ್ಕಮಹದೇವ, ಕೆ.ಗಣೇಶ್ ಹಾಗೂ ಸರ್ವಮಂಗಳ ಅವರು ಸೋಮವಾರ ಪಟ್ಟಣದ ಪುರಸಭೆಯಲ್ಲಿ ಅಧಿಕಾರ ಸ್ವೀಕರಿಸಿದರು.

ಪುರಸಭೆಯಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಮುಖ್ಯಾಧಿಕಾರಿ ಹೆಚ್.ಆರ್.ಬಸವರಾಜು, ಮೂವರು ಸದಸ್ಯರಿಗೆ ನೇಮಕಾತಿ ಆದೇಶದ ಪ್ರತಿ ನೀಡಿ ಶುಭ ಕೋರಿದರು. ಎಂಸಿಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ, ಜಿಪಂ ಮಾಜಿ ಸದಸ್ಯ ಸದಾನಂದ ಮಾತನಾಡಿ, ಬಿಜೆಪಿ ಸಾಮಾಜಿಕ ನ್ಯಾಯದ ಪರಿಕಲ್ಪನೆಯಡಿ ಪ್ರಾಮಾಣಿಕ, ನಿಷ್ಠಾವಂತ ಕಾರ್ಯಕರ್ತರನ್ನು ಪುರಸಭಾ ಸದಸ್ಯರಾಗಿ ನಾಮ ನಿರ್ದೇಶನ ಮಾಡಿದೆ. ಪಟ್ಟಣದ ಅಭಿವೃದ್ಧಿ ದೃಷ್ಟಿಯಿಂದ ನೂತನ ಸದಸ್ಯರ ಸಲಹೆ–ಸೂಚನೆಗಳನ್ನು ಪುರಸಭೆ ಪರಿಗಣಿಸಬೇಕಾಗುತ್ತದೆ. ಮೂವರು ಸದಸ್ಯರು ಚುನಾಯಿತ ಸದಸ್ಯರಿಗಿಂತಲೂ ಹೆಚ್ಚು ಕ್ರಿಯಾಶೀಲರಾಗಿ ಕೆಲಸ ಮಾಡುವಂತೆ ಕಿವಿಮಾತು ಹೇಳಿದರು. ರಾಜ್ಯ ಮತ್ತು ಕೇಂದ್ರದಲ್ಲಿ ನಮ್ಮದೇ ಸರ್ಕಾರವಿದ್ದು, ಪುರಸಭಾ ವ್ಯಾಪ್ತಿಯ ಸಮಸ್ಯೆಗಳನ್ನು ಪಟ್ಟಿ ಮಾಡಿ ಸರ್ಕಾರದ ಗಮನಕ್ಕೆ ತಂದು ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುವಂತೆ ಸದಸ್ಯರಿಗೆ ಸಲಹೆ ನೀಡಿದರು.

ನೂತನ ಸದಸ್ಯ ಕೆ.ಗಣೇಶ್ ಮಾತನಾಡಿದರು. ಈ ವೇಳೆ ಪುರಸಭಾ ಸದಸ್ಯ ಕಿರಣ್, ಎಸ್‌ಸಿ ಮೋರ್ಚಾ ಜಿಲ್ಲಾಧ್ಯಕ್ಷ ಸಿ.ಎಂ.ಮಹದೇವಯ್ಯ, ಕಾರ್ಯದರ್ಶಿ ಕೃಷ್ಣಮೂರ್ತಿ, ಜಿಲ್ಲಾ ಕಾರ್ಯದರ್ಶಿ ವೆಂಕಟರಮಣಶೆಟ್ಟಿ, ಜಿಲ್ಲಾ ಎಸ್‌ಟಿ ಮೋರ್ಚಾ ಮಾಜಿ ಕಾರ್ಯದರ್ಶಿ ರಂಗೂ ನಾಯಕ್, ಗ್ರಾಪಂ ಮಾಜಿ ಅಧ್ಯಕ್ಷ ಶ್ರೀಧರ್, ತಾಪಂ ಕೆಡಿಪಿ ಸದಸ್ಯ ಎಂ.ಮಿಥುನ್, ಡಿ.ಎಲ್.ಮಹದೇವಪ್ಪ, ಕಾರ್ಯಕಾರಿ ಸದಸ್ಯ ಕರೋಹಟ್ಟಿ ಮಹದೇವಯ್ಯ, ಗ್ರಾಪಂ ಸದಸ್ಯರಾದ ಮಹದೇವಸ್ವಾಮಿ, ಶಿವರಾಜ್, ಆಶ್ರಯ ಸಮಿತಿ ಸದಸ್ಯ ಸ್ಟಾರ್ ಮಲ್ಲೇಶ್, ಬಿ.ರಾಜೇಂದ್ರ ಪ್ರಸಾದ್, ಯುವ ಮೋರ್ಚಾ ಅಧ್ಯಕ್ಷ ಮೋಹನ್, ಮುಖಂಡರಾದ ಕರೋಹಟ್ಟಿ ಬಸವರಾಜು ಮತ್ತಿತರರಿದ್ದರು.

ದೇಶದ ಏಳ್ಗೆಗಾಗಿ ದುಡಿದ ಮಹಾಪುರುಷ ಡಾ.ರಾಧಾಕೃಷ್ಣನ್

ವಿಧಾನಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ಬಣ್ಣನೆ



ಹುಣಸೂರು, ಸೆ.5– ತಮ್ಮ ಜನ್ಮದಿನವನ್ನು ಶಿಕ್ಷಕರ ದಿನಾಚರಣೆಯಾಗಿ ಆಚರಿಸಿಕೊಂಡ ಸರ್ವಪಲ್ಲಿ ಡಾ.ರಾಧಾಕೃಷ್ಣನ್ ಅವರು ದೇಶದ ಏಳ್ಗೆಗಾಗಿ ದುಡಿದ ಮಹಾಪುರುಷ ಎಂದು ವಿಧಾನ ಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ಬಣ್ಣಿಸಿದರು.

ನಗರದ ಗುರು ಭವನದಲ್ಲಿ ಶಿಕ್ಷಣ ಮತ್ತು ಸಾಕ್ಷರ ಇಲಾಖೆಯಿಂದ ಏರ್ಪಡಿಸಿದ್ದ ಶಿಕ್ಷಕರ ದಿನಾಚರಣೆ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶ್ರೀಕೃಷ್ಣ ಪರಮಾತ್ಮ ವಚನಗಳು, ತತ್ವಗಳು ಹಾಗೂ ಆಡುವ ಮಾತಿನ ಮೂಲಕ ಜೀವನಸಾರ ಹೇಳಿಕೊಟ್ಟ ಮಹಾನ್ ವ್ಯಕ್ತಿ. ಅದೇ ರೀತಿ ಗುರುಗಳು ಜೀವನದ ನೀತಿಗಳನ್ನು ಹೇಳಿ ವಿದ್ಯಾರ್ಥಿಗಳನ್ನು ತಿದ್ದಿತೀಡಿ ಯಾವ ಮಟ್ಟಕ್ಕೆ ಬೇಕಾದರೂ ಕೊಂಡೊಯ್ಯಬಹುದು. ಇದಕ್ಕೆ ಸಾಕ್ರಟೀಸ್ ಸಾಧನೆಯೇ ಸಾಕ್ಷಿ ಎಂದರು.

ಪ್ರಧಾನಿ ಮೋದಿ ಅವರು ತಮ್ಮ ಭಾಷಣಗಳಲ್ಲಿ ಎನ್‌ಇಪಿ ಜಾರಿಗೊಳಿಸುವಂತೆ ಹೇಳುತ್ತಿದ್ದು, ಸರ್ಕಾರಗಳು ಅದನ್ನು ಜಾರಿಗೆ ತರಲು ಮುಂದಾಗಬೇಕು. ಈ ವಿಚಾರದಲ್ಲಿ ಶಿಕ್ಷಕರನ್ನು ಮೊದಲು ಸಿದ್ಧಗೊಳಿಸಬೇಕಿದ್ದು, ನಂತರ ಯೋಜನೆಯನ್ನು ಜಾರಿಗೆ ತರಬೇಕು. ಆಗ ಶೈಕ್ಷಣಿಕ ಮಟ್ಟ ಹೆಚ್ಚಾಗುವ ಜೊತೆಗೆ ಸುಧಾರಿಸಲಿದೆ ಎಂದರು. ಎಸ್.ಎಂ.ಕೃಷ್ಣ ಅವರ ಆಡಳಿತದಲ್ಲಿ ನಾನು ಶಿಕ್ಷಣ ಮಂತ್ರಿಯಾಗಿದ್ದಾಗ ಯುನೆಸ್ಕೋದಿಂದ ಹಣ ತಂದು ಶಾಲೆಗಳಿಗೆ ಕಾಂಪೌಂಡ್, ಕುಡಿಯುವ ನೀರು ಹಾಗೂ ಶೌಚಾಲಯ ಸೇರಿದಂತೆ ಮೂಲ ಸೌಕರ್ಯ ಕಲ್ಪಿಸಿ ಶಾಲೆಯೇ ದೇವಾಲಯ, ಶಿಕ್ಷಕರೇ ಅರ್ಚಕರು ದೇವರು, ಮಕ್ಕಳೇ ದೇವರು ಎಂಬ ಪರಿಕಲ್ಪನೆಯಲ್ಲಿ ದೇವರಿಗೆ ಎಡೆಇಡುವ ರೀತಿ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ನೀಡಿ ಶಾಲೆ ಬಿಟ್ಟ ಮಕ್ಕಳನ್ನು ಶಾಲೆಗೆ ಕರೆತಂದು ಶೈಕ್ಷಣಿಕ ಕ್ಷೇತ್ರದಲ್ಲಿ ಕ್ರಾಂತಿ ನಡೆಸಲಾಯಿತು ಎಂದರು. 1933 ರವರೆಗೆ ಪ್ರೌಢಶಾಲೆಗೆ ದಲಿತರ ಮಕ್ಕಳಿಗೆ ಪ್ರವೇಶವಿರಲಿಲ್ಲ. ಇದನ್ನರಿತ ಅಂದಿನ ಮಹಾರಾಜರು ರಾಜಸಭೆಯಲ್ಲಿ ಚರ್ಚಿಸಿ ನಿರ್ಬಂಧ ತೆಗೆದು ಹಾಕಿ ಎಲ್ಲರಿಗೂ ಶಿಕ್ಷಣ ಪಡೆಯುವ ಅವಕಾಶ ಮಾಡಿ ಕೊಟ್ಟರು ಎಂದರು. ವಿಶ್ರಾಂತ ಕುಲಪತಿ ಡಾ.ಪದ್ಮಾಶೇಖರ್ ಮಾತನಾಡಿ, ಒಬ್ಬ ಶಿಕ್ಷಕ ಚಾಣ(ಉಳಿ) ಇದ್ದಂತೆ. ಇದರಿಂದ ಹಲವು ಶಿಲ್ಪಗಳನ್ನು ಮಾಡಿ, ವಿವಿಧ ರೂಪ ನೀಡಬಹುದು ಎಂದರು.

ಶಿಕ್ಷಕರಾದ ನೀವು ವಿದ್ಯಾರ್ಥಿಗಳನ್ನು ಉತ್ತಮವಾಗಿ ರೂಪಿಸುವ ಮೂಲಕ ಸತ್ಪ್ರಜೆಯನ್ನಾಗಿ ಮಾಡಬೇಕು. ಇಂದಿನ ರಾಜಕಾರಣಿಗಳ ಕಿವಿಹಿಂಡಿ ಬುದ್ಧಿಹೇಳಲು ಶಿಕ್ಷಕರು ತಂಡೋಪತಂಡವಾಗಿ ಮುಂದೆ ಬರಬೇಕು. ಆದರೆ ಯಾರೂ ಮುಂದೆ ಬರುತ್ತಿಲ್ಲ. ಜಗತ್ತನ್ನೇ ಬದಲಾಯಿಸುವ ಶಕ್ತಿ ಇದೆ ಎಂದರೆ ಅದು ಶಿಕ್ಷಕರಿಗೆ ಮಾತ್ರ ಎಂದರು.

ಶಾಸಕ ಹೆಚ್.ಪಿ.ಮಂಜುನಾಥ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬಿಇಓ ಎಸ್.ರೇವಣ್ಣ ಮಾತನಾಡಿದರು. ಇದಕ್ಕೂ ಮುನ್ನ ನಗರದ ಮುನೇಶ್ವರ ಕಾವಲ್ ಮೈದಾನದಿಂದ ವಿವಿಧ ಕಲಾ ಪ್ರಕಾರಗಳೊಂದಿಗೆ ಬೆಳ್ಳಿ ರಥದಲ್ಲಿ ಸರ್ವಪಲ್ಲಿ ಡಾ.ರಾಧಾಕೃಷ್ಣನ್ ಅವರ ಭಾವಚಿತ್ರವನ್ನು ಗುರುಭವನದವರೆಗೆ ಮೆರವಣಿಗೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಮಾಧುಪ್ರಸಾದ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ನರಸಿಂಹ, ತಹಸೀಲ್ದಾರ್ ಡಾ.ಎಸ್.ಯು. ಅಶೋಕ್, ಇಓ ಮನು, ನಗರಸಭಾಧ್ಯಕ್ಷೆ ಗೀತಾ, ಉಪಾಧ್ಯಕ್ಷೆ ಆಶಾ, ಸಾಮಾಜಿಕ ನ್ಯಾಯ ಸಮಿತಿ ಅಧ್ಯಕ್ಷೆ ಶ್ವೇತಾ, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಸಂತೋಷ್ ಕುಮಾರ್, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಕೆ.ಎಲ್.ರಾಜೇಂದ್ರ, ಖಾಸಗಿ ಶಾಲೆಗಳ ಒಕ್ಕೂಟದ ಅಧ್ಯಕ್ಷ ನವೀನ್‌ರೈ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಸ್. ಗೋವಿಂದೇಗೌಡ ಸೇರಿದಂತೆ ಇತರರಿದ್ದರು.

ಡಿಆರ್‌ಸಿ ಸಿನಿಮಾಸ್

DRC CINEMAS

ದೂ : 4240422/4241800

ಸ್ಕ್ರೀನ್ 1	ಕೋಬ್ರಾ (ತ): ಬೆ.10.15ಕ್ಕೆ, ಮ.1.45ಕ್ಕೆ, ಬೀಸ್ಟ್ (ಇಂ): ಸಂ.5.35ಕ್ಕೆ, ರಾ.7.50ಕ್ಕೆ, ಗಾಳಿಪಟ –2 (ಕ): ರಾ.10ಕ್ಕೆ.
ಸ್ಕ್ರೀನ್ 2	ಬೀಸ್ಟ್ (ಇಂ): ಬೆ.11ಕ್ಕೆ, ತಿರುಚಿಟ್ರಂಬಲಂ (ತ): ಮ.1.15ಕ್ಕೆ, ನಚ್ಚತಿರಂ ನಗರಗಿರಧು (ತ): ಸಂ.4ಕ್ಕೆ, ಕಾರ್ತಿಕೇಯ 2(ತೆ): ರಾ.7.20ಕ್ಕೆ, ಲವ್ 360 (ಕ): ರಾ.10ಕ್ಕೆ.
ಸ್ಕ್ರೀನ್ 3	ಸೀತಾರಾಮಂ (ತೆ): ಬೆ.9.55ಕ್ಕೆ, ಗಾಳಿಪಟ 2(ಕ): ಮ.1ಕ್ಕೆ, ಮ.3.55ಕ್ಕೆ, ಕೋಬ್ರಾ (ತ): ಸಂ.6.40ಕ್ಕೆ, ಪಲ್ತು ಜನ್ವರ್ (ಮ): ರಾ.10.05ಕ್ಕೆ.
ಸ್ಕ್ರೀನ್ 4	ಗಾಳಿಪಟ 2 (ಕ): ಬೆ.11.35ಕ್ಕೆ, ರಾ.7.15ಕ್ಕೆ, ಸ್ಪೈಡರ್ ಮ್ಯಾನ್ ನೋ ವೇ ಹೋಮ್ (ಇಂ): ಮ.1.30ಕ್ಕೆ, ಸಂ.4.20ಕ್ಕೆ, ರಂಗ ರಂಗ ವೈಭವಂಗ (ತೆ): ರಾ.10.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಕೋಬ್ರಾ (ಇಂ): ಬೆ.10ಕ್ಕೆ, ಮ.1.40ಕ್ಕೆ, ಸಂ.5.20ಕ್ಕೆ, ರಾ.9ಕ್ಕೆ.
ಸ್ಕ್ರೀನ್ 2	ಲವ್ 360 (ಕ): ಬೆ.11.20ಕ್ಕೆ, ಬೀಸ್ಟ್ (ಇಂ): ಮ.2.10ಕ್ಕೆ, ರಾ.7.40ಕ್ಕೆ, ಸ್ಪೈಡರ್ ಮ್ಯಾನ್ ನೋ ವೇ ಹೋಂ (ಇಂ): ಸಂ.4.30ಕ್ಕೆ, ಕೋಬ್ರಾ (ಇಂ): ರಾ.10ಕ್ಕೆ
ಸ್ಕ್ರೀನ್ 3	ಗಾಳಿಪಟ 2(ಕ): ಬೆ.10.45ಕ್ಕೆ, ಮ.1.45ಕ್ಕೆ, ಫ್ಯಾಂಟಸಿ (ಕ): ಸಂ.4.50ಕ್ಕೆ, ಪಲ್ತು ಜನ್ವರ್ (ಮ): ರಾ.7.40ಕ್ಕೆ, ಸ್ಪೈಡರ್ ಮ್ಯಾನ್ ನೋ ವೇ ಹೋಂ (ಇಂ): ರಾ.10.10ಕ್ಕೆ.
ಸ್ಕ್ರೀನ್ 4	ಬೀಸ್ಟ್ (ಇಂ): ಬೆ.10.50ಕ್ಕೆ, ಲವ್ 360 (ಕ): ಮ.1.10ಕ್ಕೆ, ಗಾಳಿಪಟ 2(ಕ): ಸಂ.4ಕ್ಕೆ, ರಾ.7.05ಕ್ಕೆ, ಸೀತಾರಾಮಂ (ತೆ): ರಾ.10.10ಕ್ಕೆ

ಮೈಸೂರು ವಿಷನ್ ಸಿನಿಮಾ

MVC

ದೂ : 0821–2973519

ಸ್ಕ್ರೀನ್ 1	ಲೈಗರ್ (ತೆ): ಬೆ.10.45ಕ್ಕೆ, ಲವ್ 360 (ಕ): ಮ.1.30ಕ್ಕೆ, ಲೈಗರ್ (ಕ): ಸಂ.4.05ಕ್ಕೆ, ಧಮಾಕ (ಕ): ಸಂ.6.50ಕ್ಕೆ
ಸ್ಕ್ರೀನ್ 2	ಗಾಳಿಪಟ 2(ಕ): ಬೆ.10.30ಕ್ಕೆ, ಸೀತಾರಾಮಂ (ತೆ): ಮ.1.30ಕ್ಕೆ, ರಂಗ ರಂಗ ವೈಭವಂಗ (ತೆ): ಸಂ.4.45ಕ್ಕೆ, ಕೋಬ್ರಾ (ತ): ರಾ.9.15ಕ್ಕೆ
ಸ್ಕ್ರೀನ್ 3	ಕೋಬ್ರಾ (ತ): ಮ.1.30ಕ್ಕೆ, ಸಂ.6.50ಕ್ಕೆ.
ಸ್ಕ್ರೀನ್ 4	ರಂಗ ರಂಗ ವೈಭವಂಗ (ತೆ): ಬೆ.10.30ಕ್ಕೆ, ಗಾಳಿಪಟ–2 (ಕ): ಮ.1.20ಕ್ಕೆ, ರಾ.7.15ಕ್ಕೆ, ಕೋಬ್ರಾ (ತ): ಸಂ.4.15ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಗಾಳಿಪಟ–2 (ಕ): ಮ.2.55ಕ್ಕೆ, ಸಂ.6.20ಕ್ಕೆ, ರಾ.9.30ಕ್ಕೆ, ಫ್ಯಾಂಟಸಿ(ಕ): ಬೆ.11ಕ್ಕೆ, ಸರ್ವಸ್ಯ ನಾಟ್ಯಂ (ಕ): ಬೆ.10.10ಕ್ಕೆ, ತಾಜ್‌ಮಹಲ್ 2 (ಕ): ಮ.1.20ಕ್ಕೆ, ಕೋಬ್ರಾ (ತ): ಬೆ.11ಕ್ಕೆ, ಮ.2.40ಕ್ಕೆ, ಸಂ.6.20ಕ್ಕೆ, ರಾ.10ಕ್ಕೆ, ಕೋಬ್ರಾ (ತೆ): ಬೆ.11.15ಕ್ಕೆ, ಸಂ.6.05ಕ್ಕೆ, ಬೀಸ್ಟ್ (ಇಂ): ಬೆ.10.10ಕ್ಕೆ, ಮ.2.15ಕ್ಕೆ, ರಾ.8ಕ್ಕೆ, ರಾ.10.15ಕ್ಕೆ, ಸ್ಪೈಡರ್ ಮ್ಯಾನ್ ನೋ ವೇ ಹೋಂ (ಇಂ): ಬೆ.10.45ಕ್ಕೆ, ಸಂ.4.30ಕ್ಕೆ, ಸೊಲೊಮಂಟೆ ತೇನೀಚಕಲ್ (ಮ): ರಾ.7.15ಕ್ಕೆ, ಸೀತಾರಾಮಂ (ಹಿಂ): ಮ.3.50ಕ್ಕೆ, ರಂಗ ರಂಗ ವೈಭವಂಗ (ತೆ): ಮ.3.15ಕ್ಕೆ, ರಾ.9.15ಕ್ಕೆ, ಪಲ್ತು ಜನ್ವರ್ (ಮ): ರಾ.9.45ಕ್ಕೆ, ಕಾರ್ತಿಕೇಯ–2 (ತೆ): ಬೆ.9.05ಕ್ಕೆ, ಮ.12.10ಕ್ಕೆ, ಲೈಗರ್ (ಹಿಂ): ಮ.3.20ಕ್ಕೆ, ತಿರುಚಿಟ್ರಂಬಲಂ (ತ): ಮ.12.25ಕ್ಕೆ, ಸಂ.6.20ಕ್ಕೆ.


ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ತಿರುಚಿಟ್ರಂಬಲಂ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ತಾಜ್ ಮಹಲ್–2 (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಮಿಸ್ ಮಲ್ಲಿಗೆ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಲೈಗರ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕೋಬ್ರಾ (ತ)	4 ಪ್ರದರ್ಶನಗಳು
ಗಾಯಿತ್ರಿ	
ಗಾಳಿಪಟ–2 (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ಕೋಬ್ರಾ (ತ)	4 ಪ್ರದರ್ಶನಗಳು
ಸಂಗಂ	
ರಂಗ ರಂಗ ವೈಭವಂಗ (ತೆ)	4 ಪ್ರದರ್ಶನಗಳು
ಲಿಡೋ	
ಧಮಾಕ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ತಿರುಚಿಟ್ರಂಬಲಂ (ತ)	4 ಪ್ರದರ್ಶನಗಳು
ಸ್ಟರ್ಲಿಂಗ್	
ಓ ಮೈ ಲವ್ (ಕ)	4 ಪ್ರದರ್ಶನಗಳು
ಸ್ಕೈಲೈನ್	
ಅಂಜನ (ಕ)	4 ಪ್ರದರ್ಶನಗಳು
ಪ್ರಭಾ	
ಕೋಬ್ರಾ (ತ)	4 ಪ್ರದರ್ಶನಗಳು

ನಾಗವಾಲ ಕೆರೆಗೆ ಶಾಸಕ ಜಿಟಿಡಿ ಬಾಗಿನ



ಭಾರೀ ಮಳೆಯಿಂದ 50 ವರ್ಷಗಳ ನಂತರ ತುಂಬಿ ಕೋಡಿ ಬಿದ್ದಿರುವ ಮೈಸೂರು ತಾಲೂಕಿನ ನಾಗವಾಲ ಗ್ರಾಮದ ಕೆರೆಗೆ ಸೋಮವಾರ ಶಾಸಕ ಜಿ.ಟಿ.ದೇವೇಗೌಡ, ನಾಗವಾಲ ಗ್ರಾಪಂ ಅಧ್ಯಕ್ಷ ಸಿ.ನರೇಂದ್ರ ಬಾಗಿನ ಅರ್ಪಿಸಿದರು. ಈ ವೇಳೆ ಹಿರಿಯ ಮುಖಂಡರಾದ ಹೆಚ್.ಕೆ.ಚಂದ್ರಶೇಖರ್, ಪಿಡಿಓ ಡಾ.ಶೋಭರಾಣಿ, ಗ್ರಾಪಂ ಸದಸ್ಯರಾದ ಕುಮಾರ್, ಬಸವನಾಯ್ಕ ಮಹೇಶ್, ಬಿ.ಕೆ.ಈಶ್ವರ್, ಗೀತ, ಲಕ್ಷ್ಮಿ, ಮಮತ, ಯಶೋಧಮ್ಮ, ಭಾಗ್ಯ, ಗ್ರಾಪಂ ಕಾರ್ಯದರ್ಶಿ ಯಶ್ವಂತ್, ಬಿಲ್ ಕಲೆಕ್ಟರ್ ಉದಯ್, ಯಜಮಾನ್ ಕುಮಾರ್, ವಿಷಕಂಠನಾಯ್ಕ, ಸಿದ್ದನಾಯ್ಕ, ಶಿವರಾಜು, ಶ್ರೀಧರ್, ಸದಾಶಿವ, ಮಾಲೇಗೌಡ, ಕುಮಾರ್, ಪ್ರಕಾಶ್, ಇಲವಾಲ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಸಂತೋಷ್, ಮಂಜುನಾಥ್, ರುದ್ರಪ್ಪ ಇದ್ದರು.



ಭಾನುವಾರ ರಾತ್ರಿ ಸುರಿದ ಭಾರೀ ಮಳೆಗೆ ನಂಜನಗೂಡು ತಾಲೂಕಿನ ಹುಸ್ಕೂರು, ಹರತಲೆ, ವಳಗೆರೆ ಭಾಗದಲ್ಲಿ ನುಗು ನಾಲೆ ಉಕ್ಕಿ ಹರಿದ ಪರಿಣಾಮ ನೂರಾರು ಎಕರೆಯಲ್ಲಿ ಬೆಳೆದಿದ್ದ ಕಬ್ಬು, ಬಾಳೆ, ಭತ್ತ ಸೇರಿದಂತೆ ವಿವಿಧ ಬೆಳೆಗಳು ಸಂಪೂರ್ಣ ಕೊಚ್ಚಿ ಹೋಗಿ ಭಾರೀ ನಷ್ಟ ಸಂಭವಿಸಿದೆ. ವಳಗೆರೆ ಗ್ರಾಮದ ಇಟ್ಟಿಗೆ ಕಾರ್ಖಾನೆಗೂ ನೀರು ನುಗ್ಗಿ ಲಕ್ಷಾಂತರ ರೂ. ನಷ್ಟವಾಗಿದೆ. ನಾಲೆ ನೀರು ರಸ್ತೆ ಮೇಲೆ ಹರಿದಿದ್ದು, ಹರತಲೆ–ಹುಸ್ಕೂರು ರಸ್ತೆ ಸಂಪರ್ಕ ಸಹ ಕಡಿತಗೊಂಡು ಸಂಚಾರ ಅಸ್ತವ್ಯಸ್ತವಾಗಿತ್ತು. ಹೀಗಾಗಿ ತಹಸೀಲ್ದಾರ್ ಅವರು ಸ್ಥಳಕ್ಕೆ ಬಂದು ಪರಿಶೀಲಿಸಿ ಸರ್ಕಾರದಿಂದ ಸೂಕ್ತ ಪರಿಹಾರ ಕೊಡಿಸುವಂತೆ ರೈತರು ಮನವಿ ಮಾಡಿದ್ದಾರೆ.

ರಾಹುಲ್ ಗಾಂಧಿಯವರ ಜೋಡೋ ಯಾತ್ರೆ ಯಶಸ್ಸಿಗೆ ವಿಪಕ್ಷ ನಾಯಕ ಸಿದ್ದರಾಮಯ್ಯ ಖಡಕ್ ಸೂಚನೆ

● ಪ್ರತಿಯೊಬ್ಬರೂ ಜವಾಬ್ದಾರಿ ವಹಿಸಲು ಸೂಚನೆ ● ಸೆ.30ರಿಂದ 21 ದಿನ ರಾಜ್ಯದ 8 ಜಿಲ್ಲೆಯಲ್ಲಿ ಯಾತ್ರೆ



ಮೈಸೂರು, ಸೆ.5(ಎಂಕೆ)– ರಾಹುಲ್ ಗಾಂಧಿಯವರ ಭಾರತ್ ಜೋಡೋ ಯಾತ್ರೆ ಯಶಸ್ವಿಗೊಳಿಸಲು ಪ್ರತಿಯೊಬ್ಬರೂ ಜವಾಬ್ದಾರಿ ತೆಗೆದುಕೊಳ್ಳಬೇಕು ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಖಡಕ್ ಸೂಚನೆ ನೀಡಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಮೈಸೂರು, ಚಾಮರಾಜನಗರ ಜಿಲ್ಲೆ ವ್ಯಾಪ್ತಿಯ ಹಾಲಿ ಹಾಗೂ ಮಾಜಿ ಶಾಸಕರು, ಸಂಸದರು ಹಾಗೂ ವಿಧಾನಸಭಾ ಚುನಾವಣೆಗೆ ಸ್ಪರ್ಧಿಸಿ, ಸೋತಂತಹ ಅಭ್ಯರ್ಥಿಗಳೊಂದಿಗೆ ಸಭೆ ನಡೆಸಿದ ಅವರು, ಭಾರತದ ಏಕತೆ ಹಾಗೂ ಭಾವೈಕ್ಯತೆಯ ದೃಷ್ಟಿಯಿಂದ ಹಮ್ಮಿಕೊಂಡಿರುವ ಜೋಡೋ ಯಾತ್ರೆ ಸೆ.30ಕ್ಕೆ ಕೇರಳ ಮುಗಿಸಿ ಗುಂಡ್ಲುಪೇಟೆ ಮೂಲಕ ರಾಜ್ಯ ಪ್ರವೇಶಿಸಲಿದೆ. ಕರ್ನಾಟಕದಲ್ಲಿ ಸುಮಾರು 21 ದಿನಗಳ ಕಾಲ ಅಂದರೆ ಸುಮಾರು 8 ಜಿಲ್ಲೆಗಳಲ್ಲಿ ಯಾತ್ರೆ ನಡೆಯಲಿದೆ. ದಿನಕ್ಕೆ 25 ಕಿಲೋ ಮೀಟರ್‌ನಂತೆ ನಡೆಯಲಿದೆ ಎಂದರು.

ಇದೇ ವೇಳೆ ರಾಹುಲ್ ಗಾಂಧಿಯವರು, ಸಾರ್ವಜನಿಕರು, ರೈತರು, ಮಹಿಳೆಯರು ಯುವಕರು ಹಾಗೂ ಸಮಾಜದ ಇತರೇ ಸಮುದಾಯಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಸಂವಾದದಲ್ಲಿ ದೇಶದ ಆರ್ಥಿಕ ವ್ಯವಸ್ಥೆ ಮತ್ತು ಬೆಲೆ ಏರಿಕೆ, ಪ್ರಸ್ತುತ ವಿಚಾರಗಳು ಹಾಗೂ ಸಮಸ್ಯೆಗಳ ಬಗ್ಗೆ ಜನಸಾಮಾನ್ಯರೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಬೆಂಗಳೂರಿನಲ್ಲಿ ಹಿರಿಯ ಕಾಂಗ್ರೆಸ್ ಮುಖಂಡರೊಂದಿಗೆ ಹಾಗೂ ಸಂಬಂಧಿಸಿದ ಉಸ್ತುವಾರಿಗಳೊಂದಿಗೆ ಚರ್ಚಿಸಿ, ಜೋಡೋ ಯಾತ್ರೆಯ ಅಂತಿಮ ನೀಲಿ ನಕ್ಷೆಯನ್ನು ಬಿಡುಗಡೆಗೊಳಿಸಲಾಗಿದೆ. ಪಾದಯಾತ್ರೆಯಲ್ಲಿ ರಾಹುಲ್ ಗಾಂಧಿ ಅವರೊಂದಿಗೆ 25 ಸಾವಿರ ಕಾರ್ಯಕರ್ತರು ಭಾಗವಹಿಸುವ ಮೂಲಕ ಯಶಸ್ವಿಗೊಳಿಸಲು ಪ್ರತಿಯೊಬ್ಬರು ಜವಾಬ್ದಾರಿ ತೆಗೆದುಕೊಳ್ಳಬೇಕು ಎಂದು ಸೂಚಿಸಿದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್. ಧ್ರುವನಾರಾಯಣ್ ಮಾತನಾಡಿ, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಜೋಡೊ ಪಾದಯಾತ್ರೆ ಸಾಗುವ ಮಾರ್ಗದ ಕುರಿತು ಮಾಹಿತಿ ನೀಡಿದರಲ್ಲದೆ ಅಂತಿಮ ಹಂತದ ಮಾಹಿತಿಯನ್ನು ಇನ್ನು ಮೂರು ದಿನಗಳಲ್ಲಿ ಪೂರ್ಣಗೊಳಿಸಲಾಗುವುದು ಎಂದರು.

ಎಐಸಿಸಿ ಕಾರ್ಯದರ್ಶಿ ರೋಸಿ ಝಾನ್ ಮಾತನಾಡಿ, ಜೋಡೋ ಪಾದಯಾತ್ರೆ ಅತ್ಯಂತ ಪ್ರಮುಖವಾದುದಾಗಿದ್ದು, ಬೇರೆ ಯಾವುದೇ ರಾಜಕೀಯ ಪಕ್ಷಗಳು ಇಂತಹ ಮಹತ್ವದ ನಿರ್ಧಾರವನ್ನು ಮಾಡಿಲ್ಲ. ಭಾರತದ ಉದ್ದಗಲಕ್ಕೂ ಯಾತ್ರೆಯಲ್ಲಿ ಭಾಗವಹಿಸುವುದು ಕಾಂಗ್ರೆಸ್ಸಿನ ಪ್ರತಿಯೊಬ್ಬ ಕಾರ್ಯಕರ್ತನ ನೈತಿಕ ಕರ್ತವ್ಯವೆಂದು ವಿನಂತಿಸಿದರು.

ಶಾಸಕರಾದ ತನ್ವೀರ್ ಸೇಠ್, ಹೆಚ್.ಬಿ.ಮಂಜುನಾಥ್, ಡಾ. ಯತೀಂದ್ರ ಸಿದ್ದರಾಮಯ್ಯ, ಪುಟ್ಟರಂಗಶೆಟ್ಟಿ, ನರೇಂದ್ರ, ಅನಿಲ್ ಚಿಕ್ಕಮಾದು, ಡಾ.ತಿಮ್ಮಯ್ಯ, ಮಧು ಜಿ. ಮಾದೇಗೌಡ, ಮಾಜಿ ಶಾಸಕರಾದ ವಾಸು, ಎಂ.ಕೆ.ಸೋಮಶೇಖರ್, ಬಾಲರಾಜ್, ಕಳಲೆ ಕೇಶವಮೂರ್ತಿ, ಬನ್ನೂರು ಕೃಷ್ಣಪ್ಪ, ಕೆ.ಸಿ.ಪುಟ್ಟಸಿದ್ದಶೆಟ್ಟಿ, ಜಯಣ್ಣ, ಕೆ.ವೆಂಕಟೇಶ್, ಮಾಜಿ ಸಂಸದರಾದ ಕಾಗಲವಾಡಿ ಶಿವಣ್ಣ, ಸಿದ್ದರಾಜು, ನಗರಾಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ವಿಜಯ್‌ಕುಮಾರ್, ಮುಖಂಡರಾದ ಕೆ.ಮರೀಗೌಡ, ಕೆ.ಹರೀಶ್‌ಗೌಡ, ಸುನೀಲ್ ಬೋಸ್, ಗಣೇಶ್‌ಪ್ರಸಾದ್, ರವಿಶಂಕರ್, ಡಾ. ರವೀಂದ್ರ ಮಂಜುಳಾರಾಜ್ ಇದ್ದರು.

ಬೆಂಗಳೂರು ಮಳೆ ಅವಾಂತರಕ್ಕೆ ಬಿಜೆಪಿ ಸರ್ಕಾರವೇ ಹೊಣೆ

ಮೈಸೂರು,ಸೆ.5–ಮಳೆಯಿಂದಾಗಿ ಬೆಂಗಳೂರಿನಲ್ಲಾಗಿರುವ ಅವಾಂತರಕ್ಕೆ ಬಿಜೆಪಿ ಸರ್ಕಾರದ ವೈಫಲ್ಯತೆಯೇ ಕಾರಣ. ಕಾಂಗ್ರೆಸ್ ಸರ್ಕಾರವಿದ್ದಾಗ ರಾಜಕಾಲುವೆ ಒತ್ತುವರಿ ತೆರವಿಗೆ ಚಾಲನೆ ನೀಡಲಾಗಿತ್ತು. ಬಿಜೆಪಿಯವರು ಅಧಿಕಾರಕ್ಕೆ ಬಂದು ಮೂರೂವರೆ ವರ್ಷವಾದರೂ ಏನೂ ಮಾಡಿಲ್ಲ ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಆರೋಪಿಸಿದರು. ಮೈಸೂರಿನಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ಬೆಂಗಳೂರು ಐಟಿ–ಬಿಟಿ ನಗರವಾಗಿದ್ದು, ಐಟಿ–ಬಿಟಿ ಉದ್ಯಮಿಗಳಿಗೆ ಸರಿಯಾದ ಮೂಲ ಸೌಕರ್ಯ ನೀಡುವುದು ಸರ್ಕಾರದ ಜವಾಬ್ದಾರಿಯಾಗಿದೆ. ಸಿಎಂ ಹಾಗೂ ಐಟಿ–ಬಿಟಿ ಮಂತ್ರಿಗಳನ್ನು ಸಂಪರ್ಕಿಸಿ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಉದ್ಯಮಿಗಳೇ ಹೇಳುತ್ತಿದ್ದಾರೆ. ಇದರಿಂದಾಗಿಯೇ ಅವರು ಬೇರೆ ಕಡೆಗೆ ಹೋಗಲು ಮುಂದಾಗುತ್ತಿದ್ದಾರೆ ಎಂದು ಹೇಳಿದರು.

ಮಹಾರಾಷ್ಟ್ರ–ಕರ್ನಾಟಕ ಗಡಿ ವಿವಾದ ಕುರಿತು ಪ್ರತಿಕ್ರಿಯಿಸಿದ ಅವರು, ಸುಪ್ರೀಂಕೋರ್ಟ್‌ನಲ್ಲಿ ವಿಚಾರಣೆ ನಡೆಯುತ್ತಿದ್ದು, ಸರ್ಕಾರವೂ ಅಗತ್ಯ ಸಿದ್ಧತೆ ಮಾಡಿಕೊಂಡಿದೆ. ಗಡಿ ಸಂಬಂಧ ಮಹಾಜನ್ ವರದಿಯೇ ಅಂತಿಮ ಎಂದರು.

ವಿದ್ಯಾರ್ಥಿನಿಲಯಕ್ಕೆ ಬಾಡಿಗೆ ಕಟ್ಟಡಕ್ಕಾಗಿ ಅರ್ಜಿ ಆಹ್ವಾನ

ಮೈಸೂರು, ಸೆ.5– ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಿ.ದೇವರಾಜ ಅರಸು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ರಂಗಸಮುದ್ರ, ಟಿ.ನರಸೀಪುರ ತಾಲೂಕಿನಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಪ್ರಸ್ತುತ ವಿದ್ಯಾರ್ಥಿನಿಲಯದಲ್ಲಿ 35 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ವಿದ್ಯಾರ್ಥಿಗಳಿಗೆ ಅವಶ್ಯಕ ಮೂಲಭೂತ ಸೌಕರ್ಯ ಒದಗಿಸುವ ಹಿನ್ನೆಲೆಯಲ್ಲಿ ಖಾಸಗಿ ಕಟ್ಟಡದ ಮಾಲೀಕರು, ವಿದ್ಯಾರ್ಥಿನಿಲಯವನ್ನು ನಡೆಸಲು ಬಾಡಿಗೆ ಮೇರೆಗೆ ಕಟ್ಟಡ ನೀಡಲು ಬಯಸುವುದಾದಲ್ಲಿ/ಮುಂದೆ ಬಂದಲ್ಲಿ ಟಿ.ನರಸೀಪುರ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವರನ್ನು ಅಥವಾ ರಂಗಸಮುದ್ರ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದ ಮೇಲ್ವಿಚಾರಕರನ್ನು ಸಂಪರ್ಕಿಸಬಹುದು ಎಂದು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪಕ್ರಟಣೆಯಲ್ಲಿ ತಿಳಿಸಿದ್ದಾರೆ.

ಸೆ.8, ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು,ಸೆ.5–ಮೈಸೂರಿನ ಲಕ್ಷ್ಮೀಪುರಂನಲ್ಲಿರುವ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಸೆ.8ರಂದು ಬೆಳಗ್ಗೆ 10ರಿಂದ ರಾತ್ರಿ 8ರವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ಮೈಸೂರು ಮಿತ್ರ 43
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಗೌರವಾನ್ವಿತ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥ.ನ್ಯಾ.ಧಂ. ರವರ ನ್ಯಾಯಾಲಯ, ತಿ.ನರಸೀಪುರ

ಅಸಲು ದಾವಾ ಸಂಖ್ಯೆ : 170/2020

ವಾದಿ: ಮಹದೇವಸ್ವಾಮಿ ಬಿನ್.ಲೇಟ್.ರಾಜಶೆಟ್ಟಿ @ ಮಾದಶೆಟ್ಟಿ ವಯಸ್ಸು 56 ವರ್ಷ, ವಾಸ ಗಾಣಿಗರ ಬೀದಿ, ಮೂಗೂರು ಗ್ರಾಮ ಮತ್ತು ಹೋಬಳಿ, ತಿ.ನರಸೀಪುರ ತಾಲ್ಲೂಕು ಮೈಸೂರು ಜಿಲ್ಲೆ.

ವಿರುದ್ಧ

ಪ್ರತಿವಾದಿಗಳು: 1. ಮಹದೇವಮ್ಮ @ ಲಕ್ಕಿ ಕೋಂ. ನಾಗರಾಜು, ಬಿನ್ ರಾಜಶೆಟ್ಟಿ @ ಮಾದಶೆಟ್ಟಿ
2. ಯೋಗೇಶ @ ಮಾಹೇಶ ಬಿನ್ ರಾಜಶೆಟ್ಟಿ @ ಮಾದಶೆಟ್ಟಿ 1 ಮತ್ತು 2 ರವರ ವಾಸ : #54, 2ನೇ ಹಂತ, 3ನೇ ಅಡ್ಡ ರಸ್ತೆ, ಗಾಯತ್ರಿ ಪುರಂ, ಮೈಸೂರು.

ಸಾರ್ವಜನಿಕ ಪ್ರಕಟಣೆ

ಸದರಿ ಮೇಲ್ಕಂಡ ಪ್ರಕರಣವನ್ನು ವಾದಿಗಳು ಪ್ರತಿವಾದಿಗಳ ವಿರುದ್ಧ ಮೇಲ್ಕಂಡ ಘನ ನ್ಯಾಯಾಲಯದಲ್ಲಿ ದಾಖಲಿಸಿದ್ದು, ಸದರಿ ಪ್ರತಿವಾದಿಗಳ ವಿರುದ್ಧ ಒಪ್ಪಂದದ ಅನುಸಾರ ನಿರ್ದಿಷ್ಟ ಪರಿಹಾರ ಮತ್ತು ಇತರೆ ಪರಿಹಾರಕ್ಕಾಗಿ ದಾವೆಯನ್ನು, ನಿರ್ದೇಶನ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಮೇಲ್ಕಂಡ ವಿಚಾರದ ಬಗ್ಗೆ ಪ್ರತಿವಾದಿಗಳಲ್ಲಿ ಮತ್ತು ಸದರಿ ದಾವೆಗೆ ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ಏನಾದರೂ ತಕರಾರು ಇದ್ದಲ್ಲಿ ದಿನಾಂಕ 12.10.2022 ರಂದು ಬೆಳಿಗ್ಗೆ 11.00 ಗಂಟೆಗೆ ಮೇಲ್ಕಂಡ ನ್ಯಾಯಾಲಯದಲ್ಲಿ ಹಾಜರಾಗಿ ತಕರಾರು ಸಲ್ಲಿಸಬಹುದು. ತಪ್ಪಿದ್ದಲ್ಲಿ ಏಕ ಪಕ್ಷೀಯವಾಗಿ ಮೇಲ್ಕಂಡ ಪ್ರಕರಣವನ್ನು ಇತ್ಯರ್ಥ ಪಡಿಸಲಾಗುವುದು.

ಷೆಡ್ಯೂಲ್ ಸ್ವತ್ತು: ಮೈಸೂರು ಜಿಲ್ಲೆ, ತಿ. ನರಸೀಪುರ ತಾಲ್ಲೂಕು, ಮೂಗೂರು ಹೋಬಳಿ, ಮೂಗೂರು ಗ್ರಾಮದ ಸರ್ವೆ ನಂ 520/4, ಒಟ್ಟು ವಿಸ್ತೀರ್ಣ 2.00 ಎಕರೆಯಲ್ಲಿ 1.30 ಗುಂಟೆ ಜಮೀನಿಗೆ ಚಕ್ಕುಬಂದಿ. ಪೂರ್ವಕ್ಕೆ: ಜಯಮ್ಮರವರ ಜಮೀನು, ಪಶ್ಚಿಮಕ್ಕೆ: ಮಂಚನಾಯಕರವರ ಜಮೀನು, ಉತ್ತರಕ್ಕೆ: ಕೆ.ಶೇಷಣ್ಣರವರ ಜಮೀನು, ದಕ್ಷಿಣಕ್ಕೆ : ಜಯಮ್ಮರವರ ಜಮೀನು

ನ್ಯಾಯಾಲಯದ ಆದೇಶದ ಮೇರೆಗೆ
ಸಹಿ/– ಮಾನ್ಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ತಿ ನರಸೀಪುರ

ಸತೀಶ್ ಪಿ, ಬಿ.ಎ.ಎಲ್.ಎಲ್.ಬಿ, ವಕೀಲರು, #2, 1ನೇ ಮಹಡಿ , ಶ್ರೀ ಸಿದ್ದರಾಮೇಶ್ವರ ಕಟ್ಟಡ, ಆರ್.ಎಂ.ಸಿ ಎದುರು, ನಂಜನಗೂಡು ರಸ್ತೆ, ತಿ.ನರಸೀಪುರ ಟೌನ್, ಮೈಸೂರು ಜಿಲ್ಲೆ

ಮೂಲ ದಾಖಲಾತಿಗಳು ಕಳೆದುಹೋಗಿರುವ ಬಗ್ಗೆ

ಈ ಕೆಳಗೆ ಸಹಿ ಮಾಡಿರುವ ನಾನು ದಿನಾಂಕ 30–08–2022ರಂದು ನನಗೆ ಸೇರಿದ ಸರ್ವೆ ನಂ. 87/2, ಹುರಳಿಕ್ಯಾತನಹಳ್ಳಿ, ಕಸಬಾ ಹೋಬಳಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ, ಈ ಕೆಳಕಂಡ ಮೂಲ ದಾಖಲಾತಿಗಳನ್ನು ಕಳೆದುಕೊಂಡಿರುತ್ತೇನೆ.

1) ಶ್ರೀ ನಿಂಗೇಗೌಡ ಬಿನ್ ಲೇಟ್ ನಂಜೇಗೌಡ, ಸುಜಾತಾ ಕೋಂ ಎಸ್. ನಿಂಗೇಗೌಡರವರು, ಶ್ರೀ ಕರೀಂ ಷರೀಫ್ ಬಿನ್ ಖಾದರ್ ಷರೀಫ್ ರವರ ಹೆಸರಿಗೆ ಬರೆದುಕೊಟ್ಟಿರುವ ಕ್ರಯ ಪತ್ರದ ಸಂಖ್ಯೆ: 13/1997–98, ದಿನಾಂಕ: 31–03–1997 ಇದರ ಮೂಲ ಪ್ರತಿ.

2) ಉಪ ನೋಂದಣಾಧಿಕಾರಿಗಳ ಕಛೇರಿ, ಶ್ರೀರಂಗಪಟ್ಟಣ ಇಲ್ಲಿ ಎಸ್.ಆರ್.ಪಿ.–1–01959/2003–04, ಸಿ.ಡಿ.ನಂ.ಎಸ್.ಆರ್.ಪಿ.ಡಿ.3 ರಂತೆ ದಿನಾಂಕ: 14–01–2004 ರಂದು ನೋಂದಣಿಯಾಗಿರುವ ಶ್ರೀ ಕರೀಂ ಷರೀಫ್ ಬಿನ್ ಖಾದರ್ ಷರೀಫ್ ರವರು ಶ್ರೀ ಬಿ.ಸಿ. ಲೋಕೇಶ್ ಬಿನ್ ಚನ್ನೇಗೌಡರವರ ಹೆಸರಿಗೆ ಬರೆದುಕೊಟ್ಟಿರುವ ಕ್ರಯದ ಕರಾರು ಪತ್ರ ಇದರ ಮೂಲ ಪ್ರತಿ.

3) ಉಪ ನೋಂದಣಾಧಿಕಾರಿಗಳ ಕಛೇರಿ, ಶ್ರೀರಂಗಪಟ್ಟಣ ಇಲ್ಲಿ ಎಸ್.ಆರ್.ಪಿ.–1–00549/2004–05, ಸಿ.ಡಿ.ನಂ.ಎಸ್.ಆರ್.ಪಿ.ಡಿ.4 ರಂತೆ ದಿನಾಂಕ: 03–07–2004 ರಂದು ನೋಂದಣಿಯಾಗಿರುವ ಶ್ರೀ ಬಿ.ಸಿ. ಲೋಕೇಶ್ ಬಿನ್ ಚನ್ನೇಗೌಡರವರು ಶ್ರೀ ಕರೀಂ ಷರೀಫ್ ಬಿನ್ ಖಾದರ್ ಷರೀಫ್ ರವರ ಹೆಸರಿಗೆ ಬರೆದುಕೊಟ್ಟಿರುವ ಕ್ರಯದ ಕರಾರು ರದ್ಧತಿ ಪತ್ರ.

4) ಶ್ರೀ ಕರೀಂ ಷರೀಫ್ ಬಿನ್ ಖಾದರ್ ಷರೀಫ್ ರವರು ಶ್ರೀ ಎಂ. ಮಂಜುನಾಥಸ್ವಾಮಿ ಬಿನ್ ಮಲ್ಲಿಕಾರ್ಜುನಯ್ಯ ರವರ ಹೆಸರಿಗೆ ಬರೆದುಕೊಟ್ಟಿರುವ ಕ್ರಯ ಪತ್ರದ ಸಂಖ್ಯೆ: ಎಸ್.ಆರ್.ಪಿ.–1–00550–2004–05, ದಿನಾಂಕ: 02–07–2004 ಇದರ ಮೂಲ ಪ್ರತಿ.

5) ಗ್ರಾಮ ನಕ್ಷೆ ಮ್ಯುಟೇಷನ್ ನಕಲು, ಐ.ಎಲ್.ಆರ್ (ಇಂಡೆಕ್ಸ್ ಆಫ್ ಲ್ಯಾಂಡ್ ರೆಕಾರ್ಡ್ಸ್) ಮತ್ತು ಇತರೆ ಕಂದಾಯ ದಾಖಲಾತಿಗಳು.

ಯಾರಿಗಾದರೂ ಈ ಮೇಲ್ಕಂಡ ದಾಖಲಾತಿಗಳು ದೊರೆತಲ್ಲಿ, ದಯಮಾಡಿ ಈ ಕೆಳಕಂಡ ವಿಳಾಸವನ್ನಾಗಲಿ ಅಥವಾ ಈ ಕೆಳಕಂಡ ಮೊಬೈಲ್ ಸಂಖ್ಯೆಯನ್ನು ಸಂಪರ್ಕಿಸಿ.

ಶ್ರೀ ಚಿಕ್ಕೀರಯ್ಯ ಬಿನ್ ಮಣಿಯಯ್ಯ @ ಚಿಕ್ಕ ಈರಯ್ಯ, ವಾಸ: ನಂ. 300, ಭುಗತಗಳ್ಳಿ ಗ್ರಾಮ, ವರುಣ ಹೋಬಳಿ, ವಾಜಮಂಗಲ ಪೋಸ್ಟ್, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ.
ಮೊಬೈಲ್ ಸಂಖ್ಯೆ: 8792815177

ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು.

ಝಾನ್ಸಿಲಕ್ಷ್ಮೀಬಾಯಿ ರಸ್ತೆ, ಮೈಸೂರು–570005


ಸಂಖ್ಯೆ:ಮೈನಪ್ರಾ:ನಯೋಶಾ:ನಯೋ–05:ಭೂಉಬ:403:2022–23 ದಿನಾಂಕ: 01–09–2022

ಸಾರ್ವಜನಿಕ ಪ್ರಕಟಣೆ

ಕರ್ನಾಟಕ ನಗರ ಮತ್ತು ಗ್ರಾಮ ಯೋಜನಾ ಕಾಯ್ದೆ 1961ರ ಪ್ರಕರಣ 14(ಎ) ರನ್ವಯ

ಮೈಸೂರು ತಾಲ್ಲೋಕು, ಕಸಬಾ ಹೋಬಳಿ, ಮೈಸೂರು ಗ್ರಾಮದ ಸರ್ವೆ ನಂ. 88/1ರ 04 ಎಕರೆ 17 ಗುಂಟೆ, 108/3ರ 03 ಎಕರೆ 04 ಗುಂಟೆ ಒಟ್ಟು 07 ಎಕರೆ 21 ಗುಂಟೆ ವಿಸ್ತೀರ್ಣದ ಜಮೀನಿನ ಭೂ ಉಪಯೋಗವನ್ನು ಕೆ.ಟಿ.ಸಿ.ಪಿ. ಕಾಯ್ದೆ 1961ರ ಪ್ರಕರಣ 14(ಎ) ರಡಿ ಕೈಗಾರಿಕಾ ವಲಯದಿಂದ ವಾಣಿಜ್ಯ ವಲಯಕ್ಕೆ ಭೂ ಉಪಯೋಗ ಬದಲಾವಣೆ ಮಾಡುವಂತೆ ಕೋರಿ ಶ್ರೀ ಪವನ್ ಜಿ. ರಂಗ, ಶ್ರೀ ಅರ್ಜುನ್ ರಂಗ, ಶ್ರೀ ಕಿರಣ್ ರಂಗ, ಶ್ರೀ ಅನಿರುದ್ಧ ರಂಗ, ವಿಷ್ಣುದಾಸ್ ರಂಗ ಇವರುಗಳು ಅರ್ಜಿ ಸಲ್ಲಿಸಿರುತ್ತಾರೆ. ಭೂ ಉಪಯೋಗ ಬದಲಾವಣೆಯಿಂದ "ವಿನ್ಯಾಸ ಅಭಿವೃದ್ಧಿ ಕಾಮಗಾರಿಗಳು ನಡೆಯುವ ಸಂಧರ್ಭದಲ್ಲಿ ಕೂಲಿ ಕಾರ್ಮಿಕರಿಗೆ ಉದ್ಯೋಗ ದೊರಕುತ್ತದೆ ಮತ್ತು ಈ ವಿನ್ಯಾಸ ಅಭಿವೃದ್ಧಿಯಿಂದ ಸುತ್ತಲಿನ ಪ್ರದೇಶದ ಅಭಿವೃದ್ಧಿಗೆ ಸಹಾಯವಾಗುತ್ತದೆ" ಎಂದು ಸಾರ್ವಜನಿಕ ಹಿತಾಸಕ್ತಿ ಕುರಿತು ಮನವಿಯಲ್ಲಿ ತಿಳಿಸಿರುತ್ತಾರೆ. ಸದರಿ ಜಮೀನಿನ ಭೂ ಉಪಯೋಗದ ಬದಲಾವಣೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಸಾರ್ವಜನಿಕರು ಈ ಪ್ರಕಟಣೆಯು ಪತ್ರಿಕೆಯಲ್ಲಿ ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗಾಗಿ ನಗರ ಯೋಜಕ ಸದಸ್ಯರು, ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು–570005 ಇವರಿಗೆ ಮುದಾಂ ಅಥವಾ ನೋಂದಾಯಿತ ಅಂಚೆ ಮೂಲಕ ತಲುಪಿಸಬಹುದಾಗಿದೆ.

KEY PLAN



ಸಹಿ/– ನಗರ ಯೋಜಕ ಸದಸ್ಯರು, ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು